ಸಂಪುಟ: 04 ಸಂಚಿಕೆ: 294 ಪುಟಗಳು: 08 ಸೋಮವಾರ 06 ಜನವರಿ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833

₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ದೊಡ್ಡ ಗುರಿಯನ್ನು ಹೊಂದುವುದು, ನಿರಂತರವಾಗಿ ಜ್ಞಾನವನ್ನು ಪಡೆದುಕೊಳ್ಳುವುದು, ಪರಿಶ್ರಮ ಪಡುವುದು, ತಾಳ್ಮೆಯಿಂದಿರುವುದು ಈ ನಾಲ್ಕು ವಿಷಯಗಳನ್ನು ಅನುಸರಿಸಿದರೆ ನೀವು ಏನನ್ನಾದರೂ ಸಾಧಿಸಬಹುದು


# ಸಾರಿಗೆ ಬಸ್ ಟಿಕೆಟ್ ದರ ಹೆಚ್ಚಳದ ಬಗ್ಗೆ ಸ್ಪಷ್ಟನೆ ಕೊಟ್ಟ ಸಿಎಂ

• ಉದಯವಾಹಿನಿ, ಬೆಂಗಳೂರು



ರಾಜ್ಯದಲ್ಲಿ ಸಾರಿಗೆ ಬಸ್ ಪ್ರಯಾಣದ ದರ ಶೇ.15ರಷ್ಟು ಹೆಚ್ಚಾಗಿದೆ. ಸಾರ್ವಜನಿಕರು ಸರ್ಕಾರದ ವಿರುದ್ಧ ಆಕ್ರೋಶವನ್ನು ಹೊರ ಹಾಕುತ್ತಿದ್ದಾರೆ. ಇದರ ನಡುವೆ ಸಾರಿಗೆ ಬಸ್ ಟಿಕೆಟ್ ದರ ಹೆಚ್ಚಳದ ಬಗ್ಗೆ ಸಿಎಂ ಸಿದ್ಧರಾಮಯ್ಯ ಈ ಕೆಳಗಿನಂತೆ ಸ್ಪಷ್ಟನೆ ನೀಡಿದ್ದಾರೆ. ಈ ಕುರಿತಂತೆ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವಂತ ಅವರು, 60% ಕಮಿಷನ್ ನಡೆಯುತ್ತಿದೆ ಎಂಬ ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಆರೋಪ ಆಧಾರ ರಹಿತ ಮತ್ತು ಗಾಳಿಯಲ್ಲಿ ಗುಂಡು ಹಾರಿಸಿದಂತಿದೆ. ವಿರೋಧ ಪಕ್ಷಗಳನ್ನು ಕೇವಲ ಆರೋಪ ಮಾಡುವುದೇ ಕೆಲಸವಲ್ಲ. ದಾಖಲಾತಿಗಳ ಸಮೇತ ಆರೋಪ ಮಾಡಬೇಕು ಹಾಗೂ ಆರೋಪಗಳನ್ನು ಸಾಬೀತು ಪಡಿಸಬೇಕು. ಆಧಾರವಿಲ್ಲದೆ ಆರೋಪಗಳನ್ನು ಮಾಡಬಾರದು ಎಂದಿದ್ದಾರೆ.

ರಸ್ತೆ ಸಾರಿಗೆ ಸಂಸ್ಥೆಗಳ ಬಸ್ ದರ ಹೆಚ್ಚಿಸಿರುವುದು ಇದು ಮೊದಲಲ್ಲ. ಎಲ್ಲಾ ಕಾಲದಲ್ಲಿಯೂ ಬಸ್ ದರಗಳು ಏರಿಕೆ ಯಾಗಿದೆ. ನೌಕರರ ವೇತನ, ಡೀಸಲ್ ಬೆಲೆ ಏರಿಕೆ, ಬಸ್ಸು ಗಳನ್ನು ಕೊಳ್ಳುವುದು, ಹಣದುಬ್ಬರವೂ ಆಗಿದೆ. ವರ್ಷಗಳ ಹಿಂದೆ ಬೆಲೆ ಹೆಚ್ಚಿಸಲಾಗಿದ್ದು, ಸಾರಿಗೆ ನಿಗಮ ಗಳು ತೊಂದರೆ ಯಲ್ಲಿವೆ ಎನ್ನುವ ಕಾರಣ, ಬೇಡಿಕೆಯೂ ಇದ್ದುದ್ದರಿಂದ ಬೆಲೆಯೇರಿಸಲಾಗಿದೆ. ಬಿಜೆಪಿ, ಕುಮಾರಸ್ವಾಮಿಯವರ ಕಾಲದಲ್ಲಿಯೂ ಬೆಲೆ ಹೆಚ್ಚಿಸಲಿಲ್ಲವೇ? ಕೇಂದ್ರ ಸರ್ಕಾರ ರೈಲ್ವೆ ದರ ಏರಿಕೆ ಮಾಡಿಲ್ಲವೇ? ಎಂದು ಪ್ರಶ್ನಿಸಿದ್ದಾರೆ.ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಚುನಾವಣೆಗಳು ನಡೆದು ಐದು ವರ್ಷ ಕಳೆದಿರುವುದು ವಾಸ್ತವ ಸಂಗತಿ. ಆದೆ ಈ ವಿಷಯ ನ್ಯಾಯಾಲಯದ ಮುಂದೆ ಹೋಗಿದೆ. ಪ್ರಕರಣ ಅಲ್ಲಿಯೇ ಇತ್ಯರ್ಥವಾಗಬೇಕು. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆ ನಡೆಸಲು ನಾವು ತಯಾರಾಗಿದ್ದೇವೆ. ನ್ಯಾಯಾಲಯದ ತೀರ್ಪಿಗಾಗಿ ಕಾಯುತ್ತಿದ್ದೇವೆ ಎಂದಿದ್ದಾರೆ. ಸಚಿವರಾದ ಸತೀಶ್ ಜಾರಕಿಹೊಳಿ ಅವರ ಮನೆಯಲ್ಲಿ ಇತರ ಸಚಿವರು ಊಟಕ್ಕೆ ಸೇರುವುದೇ ತಪ್ಪೇ? ರಾಜಕಾರಣಿಗಳು ಊಟಕ್ಕೆ ಸೇರಿದರೆ ಬಣ್ಣ ಕಟ್ಟಲಾಗುತ್ತದೆ. ಈಗಾಗಲೇ ಹೇಳಿದಂತೆ ಅಲ್ಲಿ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ ಎಂಬುದಾಗಿ ತಿಳಿಸಿದ್ದಾರೆ.



> ಒಳಮೀಸಲಾತಿ ನೀಡಬೇಕೆಂದು ಸರ್ವೋಚ್ಚ ನ್ಯಾಯಾಲಯ ಹೇಳಿದ್ದು ಪ್ರಾಯೋಗಿಕ ಮಾಹಿತಿ ಇಲ್ಲದಿರುವುದರಿಂದ ನಾಗಮೋಹನ್ ದಾಸ್ ಅವರ ನೇತೃತ್ವದ ಸಮಿತಿ ರಚಿಸಲಾಗಿದೆ. ಒಳಮೀಸಲಾತಿ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ
> -ಸಿದ್ದರಾಮಯ್ಯ, ಮುಖ್ಯಮಂತ್ರಿ


## ಡಿ.ಕೆ.ಶಿವಕುಮಾರ್ ಇನ್ನೂ ಆರೇ ತಿಂಗಳಲ್ಲಿ ಸಿಎಂ ಆಗುವ ಪರಿಸ್ಥಿತಿ ಇದೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಇನ್ನೂ 6 ತಿಂಗಳಲ್ಲಿ ಡಿಸಿಎಂ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆಗುವ ಪರಿಸ್ಥಿತಿ ಇದೆ ಎಂದು ಸಂಸದ ಡಾ.ಕೆ ಸುಧಾಕರ್ ಭವಿಷ್ಯ ನುಡಿದಿದ್ದಾರೆ. ಸತೀಶ್ ಜಾರಕಿಹೊಳಿ ನಿವಾಸದಲ್ಲಿ ಸಿಎಂ ಡಿನ್ನರ್ ಮೀಟಿಂಗ್ ವಿಚಾರಕ್ಕೆ ಸಂಬಂಧಿಸಿದಂತೆ ಚಿಕ್ಕಬಳ್ಳಾಪುರದಲ್ಲಿ ಮಾಧ್ಯಮಗಳೊಂದಿಗೆ ಅವರು ಮಾತನಾಡಿದ್ದಾರೆ.

ಬಿಜೆಪಿಯಲ್ಲಿ ಗುಂಪುಗಾರಿಕೆ ಇದೆ ಅನ್ನುವವರು ಕಾಂಗ್ರೆಸ್‌ನಲ್ಲಿ ಗುಂಪುಗಾರಿಕೆ ಇಲ್ಲವಾ 35 ಮಂದಿ ನ್ಯೂ ಇಯರ್ ಪಾರ್ಟಿ ಡಿನ್ನರ್ ಮೀಟಿಂಗ್ ಮಾಡಿದ್ದಾರೆ. ಅದ್ರಲ್ಲೂ ಡಿಸಿಎಂ ಫಾರಿನ್ ಟೂರಲ್ಲಿ ಇರಬೇಕಾದ್ರೆ ಮಾಡಿದ್ರಲ್ಲ, ಇದು ಗುಂಪುಗಾರಿಕೆ ಅಲ್ಲವಾ..? ಎಂದು ಪ್ರಶ್ನಿಸಿದ್ದಾರೆ. ಇನ್ನೂ ಡಿಸಿಎಂ ಡಿಕೆ ಶಿವಕುಮಾರ್ 6 ತಿಂಗಳಲ್ಲಿ ಸಿಎಂ ಆಗುವ ಪರಿಸ್ಥಿತಿ ಇದೆ. ಹಾಗಾಗಿ ಸಿಎಂ ಡಿನ್ನರ್ ಮೀಟಿಂಗ್ ಮಾಡಿದ್ದಾರೆ ಎಂದು ಕುಟುಕಿದ್ದಾರೆ.

## ಆಂಧ್ರ, ತಮಿಳುನಾಡಿನಲ್ಲಿ ನಮಗಿಂತಲೂ ಹೆಚ್ಚಿನ ದರ ಇದೆ: ಸಚಿವ



• ಉದಯವಾಹಿನಿ, ಹಾವೇರಿ

ಪಕ್ಕದ ಆಂಧ್ರ, ತಮಿಳುನಾಡಿನಲ್ಲೂ ನಮಗಿಂತ ದರ ಹೆಚ್ಚಿದೆ. ನಮ್ಮದೇ ಕಡಿಮೆ ಇದೆ ಎಂದು ಬಸ್ ಟಿಕೆಟ್ ದರ ಏರಿಕೆಯನ್ನು ಸಚಿವ ಶಿವಾನಂದ ಪಾಟೀಲ್ ಸಮರ್ಥಿಸಿಕೊಂಡಿದ್ದಾರೆ.

ಈ ಕುರಿತು ಹಾವೇರಿಯಲ್ಲಿ ಮಾತನಾಡಿದ ಅವರು, ಬಿಜೆಪಿ ಅವರಿಗೆ ಹೋರಾಟ ಮಾಡೋದು ಬಿಟ್ಟರೆ ಏನು ಕೆಲಸ ಇದೆ ಹೇಳಿ? ಒಂದು ಸಲವಾದರೂ ಅಭಿವೃದ್ಧಿ ಬಗ್ಗೆ ಮಾತಾನಾಡುತ್ತಾರಾ? ಶಕ್ತಿ ಯೋಜನೆಯಲ್ಲಿ ಜನರನ್ನು ಓಡಾಡಿಸುತ್ತಿದ್ದೇವೆ ಅಂದರೆ ಅಟ್ ಲೀಸ್ಟ್ ನೋ ಪ್ರಾಫಿಟ್ ನೋ ಲಾಸ್‌ನಲ್ಲಿ ಆದರೂ ಉಳಿಸಬೇಕು ಎಂಬ ಉದ್ದೇಶ ಅಷ್ಟೇ. ಹೆಣ್ಣು ಮಕ್ಕಳಿಗೆ, ಬಡವರಿಗೆ ಏನು ಕೊಡಬೇಕೋ ಅದನ್ನು ಆದಷ್ಟು ಕೊಟ್ಟಿದ್ದೇವೆ ಎಂದರು. ದುಡಿಯುವ ಗಂಡ ಮಕ್ಕಳಿಗೆ 15% ಭಾರ ಆಗಬಹುದು. ನಾನು ಇಲ್ಲ ಅಂತ ಹೇಳಲ್ಲ. ಪ್ರತಿ ನಿತ್ಯ ಓಡಾಡುತ್ತಿರೋದು ಹೆಣ್ಣ ಮಕ್ಕಳೇ ಇದ್ದಾರೆ. ಗಂಡುಮಕ್ಕಳು ಓಡಾಡಲ್ಲ, ನೀವು ಉಲ್ಟಾ ಹೇಳುತ್ತಿದ್ದೀರಿ ಎಂದರು. ಕಾಂಗ್ರೆಸ್‌ನಲ್ಲಿ ಪುನಃ ಅಧಿಕಾರ ಹಂಚಿಕೆ ವಿಚಾರದ ಬಗ್ಗೆ ಪ್ರತಿಕ್ರಿಯಿಸಿ, ನಮ್ಮಲ್ಲಿ ಯಾವುದೇ ಭಿನ್ನಾಭಿಪ್ರಾಯ ಇಲ್ಲ. ಯಾರು ಸಿಎಂ ಇರಬೇಕು, ಡಿಸಿಎಂ ಇರಬೇಕು ಎಂಬುದನ್ನು ವರಿಷ್ಟರು ತೀರ್ಮಾನ ಮಾಡಬೇಕು. ಈ ಬಗ್ಗೆ ಸಿಎಲ್‌ಪಿನಲ್ಲಿ ನಿರ್ಣಯ ಆಗುತ್ತದೆ ಎಂದು ತಿಳಿಸಿದರು.

## ಟಿಕೆಟ್ ತೆಗೆದುಕೊಳ್ಳದೇ ಬಸ್‌ನಲ್ಲಿ ಪ್ರಯಾಣಿಸಿ ವಾಟಾಳ್ ಪ್ರತಿಭಟನೆ



• ಉದಯವಾಹಿನಿ, ರಾಮನಗರ


ಸಾರಿಗೆ ಬಸ್ ಪ್ರಯಾಣ ದರ ಹೆಚ್ಚಳ ಹಿನ್ನೆಲೆ ದರ ಹೆಚ್ಚಳ ಖಂಡಿಸಿ ರಾಮನಗರದಲ್ಲಿ ಕನ್ನಡ ಪರ ಹೋರಾಟಗಾರ ವಾಟಾಳ್ ನಾಗರಾಜ್ ಪ್ರತಿಭಟನೆ ನಡೆಸಿದ್ದಾರೆ.

ರಾಮನಗರ ಕೆಎಸ್‌ಆರ್‌ಟಿಸಿ ಬಸ್ ನಿಲ್ದಾಣದಲ್ಲಿ ಬಸ್ ಏರಿ ಕುಳಿತು ಪ್ರತಿಭಟನೆ ನಡೆಸಿ ಸರ್ಕಾರದ ವಿರುದ್ಧ ಆಕ್ರೋಶ ಹೊರಹಾಕಿದ್ದಾರೆ. ಪುರಷರಿಗೂ ಬಸ್ ಪ್ರಯಾಣ ಉಚಿತ ಮಾಡುವಂತೆ ಸರ್ಕಾರಕ್ಕೆ ಆಗ್ರಹಿಸಿದ್ದಾರೆ. ಪುರುಷರ ಬಳಿ ದುಪ್ಪಟ್ಟು ಹಣ ವಸೂಲಿ ಮಾಡಿ ಮಹಿಳೆಯರಿಗೆ ಉಚಿತ ಕೊಡುತ್ತಿದೆ. ಪುರುಷರಿಗೆ ಬಸ್ ಪ್ರಯಾಣ ದರ ಹೆಚ್ಚಳ ಮಾಡಿರುವುದು ಸರಿಯಲ್ಲ. ಕೂಡಲೇ ಸರ್ಕಾರ ದರ ಏರಿಕೆಯನ್ನು ಕೈಬಿಡಬೇಕು. ಇಲ್ಲ ಪುರುಷರಿಗೂ ಉಚಿತ ಬಸ್ ಪಯಣ ಎಂದು ಬಜೆಟ್‌ನಲ್ಲಿ ಘೋಷಣೆ ಮಾಡುವಂತೆ ವಾಟಾಳ್ ನಾಗರಾಜ್ ಒತ್ತಾಯ ಮಾಡಿದರು. ಅಲ್ಲದೇ ಟಿಕೆಟ್ ಖರೀದಿಸದೇ ಬಸ್‌ನಲ್ಲಿ ಪ್ರಯಾಣ ಮಾಡಿ ಸರ್ಕಾರದ ವಿರುದ್ಧ ಕಿಡಿಕಾರಿದರು.

**12,200 ಕೋಟಿ ರೂ. ಯೋಜನೆಗಳಿಗೆ ಚಾಲನೆ**

# ದೆಹಲಿ ಗದ್ದುಗೆ ಏರಲು ಪಣ ನಮೋ ಭಾರತ್ ರೈಲಿನಲ್ಲಿ ಪ್ರಯಾಣ





• ಉದಯವಾಹಿನಿ, ನವದೆಹಲಿ

ಉತ್ತರಪ್ರದೇಶದ ಸಾಹಿಬಾಬಾದ್‌ನಿಂದ ನ್ಯೂ ಅಶೋಕ್ ನಗರಕ್ಕೆ ದೆಹಲಿ-ಮೀರತ್ ಪ್ರಾದೇಶಿಕ ಕ್ಷಿಪ್ರ ಸಾರಿಗೆ ವ್ಯವಸ್ಥೆ ಕಾರಿಡಾರ್‌ನ 13 ಕಿಮೀ ವಿಭಾಗವನ್ನು ಮೋದಿ ಭಾನುವಾರ ಉದ್ಘಾಟಿಸಿದ್ದಾರೆ. ಸಾಹಿಬಾಬಾದ್ ನಿಲ್ದಾಣದಿಂದ ನ್ಯೂ ಅಶೋಕ್ ನಗರ ನಿಲ್ದಾಣದವರೆಗೆ ನಮೋ ಭಾರತ್ ರೈಲಿನಲ್ಲಿ ಮೋದಿ ಪ್ರಯಾಣಿಸಿದರು. ತಮ್ಮ ಪ್ರಯಾಣದ ವೇಳೆ ಪ್ರಧಾನಿಯವರು ಮಕ್ಕಳು ಸೇರಿ ಸಾರ್ವಜನಿಕರೊಂದಿಗೆ ಸಂವಾದ ನಡೆಸಿದರು.ಆರ್‌ಆರ್‌ಟಿಎಸ್‌ನ ದೆಹಲಿ ವಿಭಾಗದ ಉದ್ಘಾಟನೆಯೊಂದಿಗೆ ನಮೋ ಭಾರತ್ ರೈಲುಗಳು ಈಗ ರಾಷ್ಟ್ರ ರಾಜಧಾನಿಗೆ ಆಗಮಿಸಿವೆ. ನ್ಯೂ ಅಶೋಕ್ ನಗರ ಮತ್ತು ಮೀರತ್ ಸೌತ್ ನಡುವಿನ 55-ಕಿಮೀ ಆರ್ ಆರ್ ಟಿಎಸ್ ಕಾರಿಡಾರ್ 11 ನಿಲ್ದಾಣಗಳೊಂದಿಗೆ ಕಾರ್ಯನಿರ್ವಹಿಸುತ್ತಿದೆ.

- ದೆಹಲಿ ಅಭಿವೃದ್ಧಿ ಬಿಜೆಪಿಯಿಂದ ಮಾತ್ರ ಸಾಧ್ಯ
- ಆಪ್ ವಿರುದ್ಧ ಪ್ರಧಾನಿ ಮೋದಿ ವಾಗ್ದಾಳಿ
- ನಮೋ ಭಾರತ್ ರೈಲಿನಲ್ಲಿ ಸಂಚರಿಸುವ ಮೂಲಕ ಎಲ್ಲರ ಗಮನಸೆಳೆದರು.

ಪ್ರಯಾಣಿಕರ ಕಾರ್ಯಾಚರಣೆಗಳು ಪ್ರಾರಂಭ ವಾಗುತ್ತವೆ, ರೈಲುಗಳು ಪ್ರತಿ 15 ನಿಮಿಷಗಳಿಗೊಮ್ಮೆ ಲಭ್ಯವಿರು ತ್ತವೆ. ನ್ಯೂ ಅಶೋಕ್ ನಗರ ನಿಲ್ದಾಣದಿಂದ ಮೀರತ್ ಸೌತ್ ನಿಲ್ದಾಣಕ್ಕೆ ಸ್ಟ್ಯಾಂಡರ್ಡ್ ಕೋಚ್‌ಗೆ 150 ರೂಪಾಯಿ ಮತ್ತು ಪ್ರೀಮಿಯಂ ಕೋಚ್‌ಗೆ 225 ರೂಪಾಯಿಗಳಿದೆ.

ಪ್ರಧಾನಿಯವರು ಕಳೆದ ವರ್ಷ ಅಕ್ಟೋಬರ್ 20ರಂದು ಸಾಹಿ ಬಾಬಾದ್, ದುಹೈ ಡಿಪೋ ನಡುವಿನ 17-ಕಿಮೀ ಆದ್ಯತೆಯ ವಿಭಾಗವನ್ನು ಉದ್ಘಾಟಿಸಿದ್ದರು. ರಾಷ್ಟ್ರ ರಾಜಧಾನಿ ದೆಹಲಿಗೆ ಸಂಪರ್ಕ ಕಲ್ಪಿಸುವ ವೆಚ್ಚದ ದೆಹಲಿ-ಘಾಜಿಯಾಬಾದ್ ಮೀರತ್ ನಮೋ ಭಾರತ್ ಕಾರಿಡಾರ್ 4,600 ಕೋಟಿ ರೂ. ಮೌಲ್ಯದ ಯೋಜನೆಗೆ ಪ್ರಧಾನಿ ಮೋದಿ ಅವರು ಭಾನುವಾರ ಚಾಲನೆ ನೀಡಿದರು. ಇದೇ ವೇಳೆ ರಿಥಿಲ-ಕುಂಡ್ಲಿ ನಡುವಿನ ಮೆಟ್ರೋ ರೈಲು ಸಂಚಾರಕ್ಕೆ ಶಂಕುಸ್ಥಾಪನೆ ನೆರವೇರಿಸಿದ್ದರು.

ಈ ಮೂಲಕ ಭಾರತ ಚೀನಾ ಮತ್ತು ಅಮೆರಿಕಾ ನಂತರ 1000 ಕಿ.ಮೀ ಮೆಟ್ರೋ ರೈಲು ಮಾರ್ಗ ಹೊಂದಿದ ವಿಶ್ವದ ಮೂರನೇ ರಾಷ್ಟ್ರ ಎಂಬ ಹೆಗ್ಗಳಿಕೆಗೂ ಖ್ಯಾತಿಯಾಗಿದೆ.

### ಆಪ್ ವಿರುದ್ಧ ಮೋದಿ ಕಿಡಿ

ನಾನು ದೇಶದ ಜನರಿಗೆ ಮನೆಗಳನ್ನು ನಿರ್ಮಿಸಿಕೊಟ್ಟಿದ್ದೇನೆ. ನನ್ನ ಸ್ವಂತಕ್ಕಾಗಿ ಒಂದೇ ಒಂದು ಮನೆಯನ್ನೂ ನಿರ್ಮಾಣ ಮಾಡಿಲ್ಲ. ಆದರೆ ಕೆಲವರು ಶೀಶಮಹಲ್ ನಿರ್ಮಿಸಿಕೊಂಡಿದ್ದಾರೆ ಎಂದು ಪರೋಕ್ಷವಾಗಿ ಮಾಜಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಹೆಸರು ಉಲ್ಲೇಖ ಮಾಡದೆ ವಾಗ್ದಾಳಿ ಮಾಡಿದ್ದರು.ದೆಹಲಿಯ ಜನತೆ ಸರ್ವತೋಮುಖ ಅಭಿವೃದ್ಧಿ ಹಾಗೂ ಕಲ್ಯಾಣಕ್ಕಾಗಿ ಬದಲಾವಣೆ ಬಯಸುತ್ತಿದ್ದಾರೆ. ಅಭಿವೃದ್ಧಿಯ ವಿರೋಧಿಯಾಗಿರುವ ಆಪ್ದಾ(ವಿನಾಶ) ಪಕ್ಷವನ್ನು ಅಧಿಕಾರದಿಂದ ಕಿತ್ತೆಸೆಯುವಂತೆ ಆಪ್ ವಿರುದ್ಧ ಮೋದಿ ಕಿಡಿ ಕಾರಿದರು.

ಇದು ಒಟ್ಟು 4ನೇ ಹಂತದ 26.5 ಕಿ.ಮೀ ಮಾರ್ಗವಾಗಿದೆ. ಅಂದಾಜು 62 30 ಕೋಟಿ ವೆಚ್ಚವಾಗಲಿದ್ದು, ದೆಹಲಿಯ ರಿಥಿಲವನ್ನು ಹರಿಯಾಣದ ನಾಥ್‌ಪುರಗೆ ಸಂಪರ್ಕ ಕಲ್ಪಿಸಲಿದೆ.

- ಕೇಜ್ರಿವಾಲ್ ಹೆಸರು ಉಲ್ಲೇಖ ಮಾಡದೆ ವಾಗ್ದಾಳಿ
- ದೆಹಲಿ-ಘಾಜಿಯಾಬಾದ್ ನಮೋ ಭಾರತ್ ಕಾರಿಡಾರ್ ಯೋಜನೆಗೆ ಮೋದಿ ಚಾಲನೆ
- ಶತಾಯಗತಾಯ ರಾಷ್ಟ್ರ ರಾಜಧಾನಿಯಲ್ಲಿ ಗದ್ದುಗೆ ಹಿಡಿಯಲು ಬಿಜೆಪಿ ಪಣ

**ಜನರಿಗೆ ಮೋದಿ ಮನವಿ**

ದೆಹಲಿಯ ಉಜ್ವಲ ಭವಿಷ್ಯಕ್ಕಾಗಿ ಬಿಜೆಪಿಗೆ ಅವಕಾಶ ನೀಡುವಂತೆ ನಾನು ದೆಹಲಿಯ ಜನರಿಗೆ ಮನವಿ ಮಾಡಲು ಬಯಸುತ್ತೇನೆ. ಈಗ, ನಾವು ಆಪ್ ಸರ್ಕಾರವನ್ನು ಸಹಿಸಿಕೊಳ್ಳುವುದಿಲ್ಲ, ಬದಲಿಗೆ ನಾವು ಬದಲಾವಣೆಯನ್ನು ತರುತ್ತೇವೆ. ('ಆಪ್ದಾ ನಹಿ ಸಹೆಂಗೆ, ಬದಲ್ ಕೆ ರಹೆಂಗೆ') ದೆಹಲಿ ಅಭಿವೃದ್ಧಿಯನ್ನು ಬಯಸಿದರೆ, ದೆಹಲಿಯ ಜನರು ಬಿಜೆಪಿಯನ್ನು ನಂಬುತ್ತಾರೆ ಎಂದರು.

ಸಾಹೀಬಾಬಾದ್ , ನ್ಯೂ ಅಶೋಕನಗರ ನಡುವೆ ಸಂಪರ್ಕ ಕಲ್ಪಿಸುವ 13 ಕಿಮೀ ಸಂಚರಿಸುವ ನೂತನ ಮೆಟ್ರೋ ರೈಲು ಸಂಪರ್ಕಕ್ಕೂ ಪ್ರಧಾನಿಯವರು ಚಾಲನೆ ಕೊಟ್ಟರು. ಮುಂದಿನ ತಿಂಗಳು ದೆಹಲಿ ವಿಧಾನಸಭೆ ಚುನಾವಣೆ ನಡೆಯಲಿದ್ದು, ಆಡಳಿತಾರೂಢ ಆಮ್ ಆದಿ, ಪ್ರತಿಪಕ್ಷ ಬಿಜೆಪಿ, ಕಾಂಗ್ರೆಸ್ ನಡುವೆ ತ್ರಿಕೋನ ಸ್ಪರ್ಧೆ ಏರ್ಪಟ್ಟಿದೆ. ಶತಾಯಗತಾಯ ರಾಷ್ಟ್ರ ರಾಜಧಾನಿಯಲ್ಲಿ ಅಧಿಕಾರದ ಗದ್ದುಗೆ ಹಿಡಿಯಲು ಪಣ ತೊಟ್ಟಿರುವ ಬಿಜೆಪಿ, ಮತದಾರರನ್ನು ಒಲೈಕೆ ಮಾಡಲು ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದೆ. ರಾಜಧಾನಿಯಲ್ಲಿಮೂಲಸೌಕರ್ಯ ಮತ್ತು ಸಂಪರ್ಕವನ್ನು ಸುಧಾರಿಸುವ ಹೆಗ್ಗುರಿಯೊಂದಿಗೆ ಒಟ್ಟು 12,200 ಕೋಟಿ ರೂ. ಮೌಲ್ಯದ ವಿವಿಧ ಯೋಜನೆಗಳಿಗೆ ಚಾಲನೆ ಕೊಟ್ಟಿದ್ದಾರೆ. ಇದರಲ್ಲಿ ಕೆಲವು ಶಂಕುಸ್ಥಾಪನೆ ಮತ್ತು ಉದ್ಘಾಟನೆಯೂ ಸೇರಿದೆ.

**ವಸತಿ ನಿರ್ಮಾಣಕ್ಕೆ ಬಿಜೆಪಿ ಕಂಕಣ ಬದ್ಧ**

ಮೆಟ್ರೋ ರೈಲು ಹಸಿರು ನಿಶಾನೆ ತೋರುವ ಮೊದಲು ಮೋದಿಯವರು ನವಭಾರತ ನಿರ್ಮಾಣವನ್ನು ಪ್ರದರ್ಶಿಸುವ ಕೈಗಳಿಂದ ತಯಾರಿಸಿದ ಭಾವಚಿತ್ರಗಳನ್ನು ಶಾಲಾ ಮಕ್ಕಳಿಗೆ ನೀಡಿದರು. ನಂತರ ಸಾಹೀಬಾಬಾದ್ ಆರ್‌ಆರ್‌ಟಿಎಸ್ ನಿಲ್ದಾಣದಿಂದ ಅಶೋಕನಗರ ಆರ್‌ಆರ್‌ಟಿಎಸ್ ರೈಲ್ವೆ ನಿಲ್ದಾಣಕ್ಕೆ ಮೋದಿಯವರು ನಮೋ ಭಾರತ್ ರೈಲಿನಲ್ಲಿ ಸಂಚರಿಸುವ ಮೂಲಕ ಎಲ್ಲರ ಗಮನಸೆಳೆದರು. ಈ ಮೊದಲು ಕೆಲವು ಯೋಜನೆಗಳಿಗೆ ಚಾಲನೆ ಕೊಟ್ಟದ್ದ ಮೋದಿಯವರು ರಾಷ್ಟ್ರ ರಾಜಧಾನಿಯಲ್ಲಿ ಮೂಲಭೂತ ಸೌಕರ್ಯಗಳು, ವಸತಿ ನಿರ್ಮಾಣಕ್ಕೆ ಬಿಜೆಪಿ ಕಂಕಣಬದ್ದವಾಗಿದೆ. ಆದರೆ ಆಡಳಿತಾರೂಢ ಆಮ್ ಆದಿ ಕೇಂದ್ರದ ಕೆಲವು ಯೋಜನೆಗಳಿಗೆ ಅಡ್ಡಿಪಡಿಸುತ್ತಿದೆ ಎಂದು ಆರೋಪಿಸಿದ್ದರು.

## ಅಶ್ಲೀಲ ಪದ ಬಳಕೆ ಪ್ರಕರಣ : ಮೆಲ್ಮನೆಯಲ್ಲಿ 'ಸಿಐಡಿ'ಗೆ ಮಹಜರು ಮಾಡಲು ಅನುಮತಿ ನೀಡಲ್ಲ : ಸಭಾಪತಿ

• ಉದಯವಾಹಿನಿ, ಹುಬ್ಬಳ್ಳಿ



ಕಳೆದ ಡಿಸೆಂಬರ್‌ನಲ್ಲಿ ಬೆಳಗಾವಿಯ ಸುವರ್ಣ ಸೌಧದಲ್ಲಿ ಸದನದ ವೇಳೆ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರಿಗೆ ಬಿಜೆಪಿ ಎಂಎಲ್ಸಿ ಸಿ.ಟಿ. ರವಿ ಅಶ್ಲೀಲ ಪದ ಬಳಸಿದ ಪ್ರಕರಣಕ್ಕೆ ಸಂಬಂಧಪಟ್ಟಂತೆ ಸಭಾಪತಿ ಬಸವರಾಜ ಹೊರಟ್ಟಿ ಅವರು, ಮೇಲ್ಮನೆಯಲ್ಲಿ ಸಿಐಡಿ ಅಧಿಕಾರಿಗಳಿಗೆ ಮಹಾ ಜರು ನಡೆಸಲು ಅನುಮತಿ ನೀಡಲ್ಲ ಎಂದು ಸ್ಪಷ್ಟಪಡಿಸಿದರು. ಭಾನುವಾರ ಹುಬ್ಬಳ್ಳಿಯಲ್ಲಿ ಸಭಾಪತಿ ಬಸವರಾಜ್ ಹೊರಟ್ಟಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸಿಐಡಿಯವರು ಯಾವ ರೀತಿ ಸ್ಥಳ ಮಹಜರು ಮಾಡ್ತಾರೆ ಎಂದು ಹೇಳ ಬೇಕಾಗುತ್ತದೆ.

ಅಲ್ಲೇನು ಕುರ್ಚಿ ಅಥವಾ ಟೇಬಲ್ ಸ್ಥಳ ಮಹಜರು ಮಾಡುತ್ತಾರೋ, ಸದನಕ್ಕೆ ಕರೆದು ಕೊಂಡು ಬಂದು ಮಾಡುತ್ತಾರೆ ಎನ್ನುವುದನ್ನು ಹೇಳಬೇಕು. ಯಾವ ರೀತಿ ಪಂಚನಾಮೆ ಮಾಡುತ್ತಾರೆ ಅನೋದನ್ನ ಸಿಐಡಿ ಹೇಳಲಿ ಪಂಚನಾಮೆ ಮಾಡ್ತಾರೆ ಅಂದರೆ ಹೇಗೆ ಮಾಡ್ತಾರೆ ಎಂದು ಅವರು ಪ್ರಶ್ನಿಸಿದರು. ಸೂಕ್ತವಾದ ಕಾರಣವನ್ನು ಸಿಐಡಿ ನಮಗೆ ಕೊಡಲಿ. ಸದನ ಅಡ್ಜನ್ ಆಗಿದೆ.

ಹೀಗಾಗಿ ನಮ್ಮ ಕ್ಯಾಮೆರಾ, ಆಡಿಯೋ, ವಿಡಿಯೋ ಆಟೋ ಮ್ಯಾಟಿಕ್ ಆಗಿ ಬಂದ್ ಆಗುತ್ತವೆ. ಸದನ ಮುಂದೂಡಲಾಗಿದೆ ಎಂದು ಹೇಳಿ ನಾನು ಒಂದು ಹೆಜ್ಜೆ ಮುಂದಿಟ್ಟರೂ ವಿಡಿಯೋ ಆಡಿಯೋ ಬಂದ್ ಆಗುತ್ತದೆ. ನಮಗೆ ಆ ವಿಡಿಯೋ, ಆಡಿಯೋ ಸಿಕ್ಕಿಲ್ಲ. ಮಾಧ್ಯಮಗಳು ಆಡಿಯೋ, ವಿಡಿಯೋ ಕೊಟ್ಟರೂ ಅದನ್ನು ಎಫ್‌ಎಸ್‌ಎಲ್‌ಗೆ ಕಳುಹಿಸುತ್ತೇನೆ ಎಂದರು.

ಸದನ ಲಾಕ್ ಆಗಿದೆ, ಸದನದ ಒಳಗಡೆ ಬಡಿದಾಟ ಹೊಡೆದಾಟವಾಗಿಲ್ಲ. ಪಂಚನಾಮೆ ಮಾಡಬೇಕು ಅಂದರೆ ಯಾವರೀತಿ ಮಾಡಬೇಕು ಎನ್ನುವುದನ್ನು ಸಿಐಡಿ ಹೇಳಲಿ.

ಅನುಮತಿ ಕೊಡಬೇಕೋ ಕೊಡಬಾರದೋ ಅನೋದನ್ನ ಹೇಳೋಕೆ ಆಗೋದಿಲ್ಲ ಪರಿಶೀಲನೆ ಮಾಡುತ್ತೇನೆ. ಸದ್ಯಕ್ಕೆ ಸಿಐಡಿ ಅಧಿಕಾರಿಗಳಿಗೆ ಸದನದಲ್ಲಿ ಸ್ಥಳ ಮಹಜರಿಗೆ ಅನುಮತಿ ಕೊಡುವುದಿಲ್ಲ ಎಂದು ಸ್ಪಷ್ಟಪಡಿಸಿದರು.

## ಒಬ್ಬ ವ್ಯಕ್ತಿ, ಒಂದು ಹುದ್ದೆ ನೀತಿ ಎಂದ ಸಚಿವ ರಾಜಣ್ಣ, ಡಿಕೆಎಸ್ ವಿರುದ್ಧ ವಾಗ್ದಾಳಿ

• ಉದಯವಾಹಿನಿ, ಬೆಂಗಳೂರು

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಕೆಪಿಸಿಸಿ ಅಧ್ಯಕ್ಷ ಸ್ಥಾನದಿಂದ ಕೆಳಗಿಳಿಸಬೇಕು ಎಂಬ ಕೂಗು ಹೆಚ್ಚುತ್ತಿರುವ ನಡುವೆಯೇ ಸಹಕಾರ ಸಚಿವ ಕೆ.ಎನ್.ರಾಜಣ್ಣ ಅವರು ಕಾಂಗ್ರೆಸ್‌ನ ಒಬ್ಬ ವ್ಯಕ್ತಿ, ಒಂದು ಹುದ್ದೆ' ನೀತಿಯನ್ನು ನೆನಪಿಸಿದ್ದಾರೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಿಷ್ಠಾವಂತ ರಾಜಣ್ಣ ಅವರು ಡಿ.ದೇವರಾಜ ಅರಸು ಅವರನ್ನು ಕಾಂಗ್ರೆಸ್ ಏಕೆ ವಜಾಗೊಳಿಸಿತು ಎಂಬುದನ್ನು ನೆನಪಿಸಿಕೊಂಡರು. 1979ರಲ್ಲಿ ಅರಸ್ ಅವರು ಪಕ್ಷದ ಅಧ್ಯಕ್ಷ ಮತ್ತು ಮುಖ್ಯಮಂತ್ರಿಯಾಗಿದ್ದರು. ಯಾವುದಾದರೂ ಒಂದು ಸ್ಥಾನವನ್ನು ಉಳಿಸಿಕೊಳ್ಳುವಂತೆ ಹೈಕಮಾಂಡ್ ಸೂಚಿಸಿದೆ. ಆದರೆ ಅವರ ಎರಡನ್ನೂ ಉಳಿಸಿಕೊಳ್ಳಲು ಬಯಸಿದರ.

ಒಬ್ಬ ವ್ಯಕ್ತಿ, ಒಂದು ಹುದ್ದೆ' ನೀತಿಯನ್ನು ಅನುಸರಿಸಲು ನಿರಾಕರಿಸಿದ್ದರಿಂದ ಹೈಕಮಾಂಡ್ ಅವರನ್ನು ಪಕ್ಷದಿಂದ ತೆಗೆದುಹಾಕಿತು. ಹೀಗಾಗಿ ಹೈಕಮಾಂಡ್ ನಿರ್ಧಾರದಂತೆ ನಡೆದುಕೊಳ್ಳದಿದ್ದರೆ ಕ್ರಮ ಎದುರಿಸಬೇಕಾಗುತ್ತದೆ ಎಂದು ರಾಜಣ್ಣ ಎಚ್ಚರಿಕೆ ನೀಡಿದರು. ಈ ನೀತಿಯನ್ನು ಜಾರಿಗೊಳಿಸಲು ಕಾಂಗ್ರೆಸ್ ಹೈಕಮಾಂಡ್ ಸಾಕಷ್ಟು ಪ್ರಬಲವಾಗಿದೆಯೇ ಅಥವಾ ಇಲ್ಲವೇ ಎಂಬ ಪ್ರಶ್ನೆಗೆ ಉತ್ತರಿಸಿದ ರಾಜಣ್ಣ, ಕಾಂಗ್ರೆಸ್ ಹೈಕಮಾಂಡ್ ಹಿಂದೆಂದಿಗಿಂತಲೂ ಹೆಚ್ಚು ಶಕ್ತಿಶಾಲಿಯಾಗಿದೆ ಎಂದು ಹೇಳಿದರು.ಆದರೆ ಪಕ್ಷದ ಹೈಕಮಾಂಡ್ ಬಯಸಿದರೆ ಶಿವಕುಮಾರ್ ಅಧ್ಯಕ್ಷರಾಗಿ ಮುಂದುವರಿಯುವುದಕ್ಕೆ ಯಾವುದೇ ಅಭ್ಯಂತರವಿಲ್ಲ ಎಂದು ರಾಜಣ್ಣ ಸ್ಪಷ್ಟಪಡಿಸಿದರು.

ಅಂತಿಮವಾಗಿ, ಪಕ್ಷದ ಅಧ್ಯಕ್ಷ ಅಥವಾ ಕ್ಯಾಬಿನೆಟ್ ಪುನರ್‌ರಚನೆಯ ಬಗ್ಗೆ ಹೈಕಮಾಂಡ್ ನಿರ್ಧರಿಸುತ್ತದೆ ಎಂದು ಅವರು ಹೇಳಿದರು.

## ಫೆ.4ರಂದು ಬಸವನ ಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆ

• ಉದಯವಾಹಿನಿ, ವಿಜಯಪುರ



> ಹಿಂದೂ ಸಮಾಜದ ಪರವಾಗಿ ಬ್ರಿಗೇಡ್ ಹೋರಾಟ ಮಾಡಲಿದೆ. ಹಿಂದುಳಿದ ವರ್ಗದ ಸ್ವಾಮೀಜಿಗಳ ಪರ ಬ್ರಿಗೇಡ್ ಕೆಲಸ ಮಾಡಲಿದೆ. ನನ್ನ ಜೀವನದಲ್ಲಿ ನಾನು ರಾಜಕಾರಣದ ಜೊತೆ ಜೊತೆಗೆ ಸಾಧು ಸಂತರ ಸೇವೆ ಮಾಡಿದ್ದೇನೆ.

ಫೆಬ್ರವರಿ 4 ರಂದು ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿಯಲ್ಲಿ ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆ ನಡೆಯಲಿದೆ. 1,008 ಸಾದು ಸಂತರ ಪಾದ ಪೂಜೆ ಮೂಲಕ ಬ್ರಿಗೇಡ್ ಉದ್ಘಾಟನೆ ನಡೆಯಲಿದೆ ಎಂದು ಮಾಜಿ ಡಿಸಿಎಂ ಕೆಎಸ್ ಈಶ್ವರಪ್ಪ ಹೇಳಿದ್ದಾರೆ.

ಈ ಕುರಿತು ವಿಜಯಪುರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, 1 ಲಕ್ಷ ಜನ ಸೇರಿಸಿ ಕಾರ್ಯಕ್ರಮ ಮಾಡುತ್ತೇವೆ. ಇದಕ್ಕಾಗಿ ಜನವರಿ 12ರಿಂದ ರಾಜ್ಯಾದ್ಯಂತ ಪ್ರವಾಸ ಮಾಡುತ್ತೇವೆ. ಪ್ರವಾಸ ಮಾಡಿ ಬ್ರಿಗೇಡ್ ಬಗ್ಗೆ ಜಾಗೃತಿ ಮೂಡಿಸುತ್ತೇವೆ. ಬ್ರಿಗೇಡ್ ಅನ್ನು ಕನ್ಹೇರಿ ಮಠದ ಶ್ರೀಗಳು ಹಾಗೂ ಕಾಗಿನೆಲೆ ಮಹಾ ಸಂಸ್ಥಾನದ ಕನಕ ಗುರುಪೀಠದ ತಿಂಥಣಿ ಶಾಖಾ ಮಠದ ಸಿದ್ದ ರಾಮಾನಂದಪುರಿ ಸ್ವಾಮೀಜಿ ಉದ್ಘಾಟನೆ ಮಾಡುತ್ತಾರೆ. ರಾಜ್ಯದ ವಿವಿಧ ಭಾಗಗಳಿಂದ ಒಂದು ಲಕ್ಷ ಜನ ಸೇರುವ ಸಾಧ್ಯತೆ ಇದೆ ಎಂದರು. ಬ್ರಿಗೇಡ್ ಸ್ಥಾಪನೆ ಮಾಡೋದಕ್ಕೆ ಮುಖ್ಯ ಉದ್ದೇಶ ಹಿಂದುಳಿದ ಮಠಗಳ ಅಭಿವೃದ್ಧಿ. ಹಿಂದೂಗಳಿಗೆ ಆಗುತ್ತಿರುವ ಅನ್ಯಾಯದ ವಿರುದ್ಧ ನಮ್ಮ ಹೋರಾಟ ಇರಲಿದೆ ಎಂದು ಹೇಳಿದರು.ರಾಜಕಾರಣದ ಜೊತೆಗೆ ಧಾರ್ಮಿಕ ಕಾರ್ಯದಲ್ಲೂ ನಾನು ಭಾಗಿಯಾಗುತ್ತಿದ್ದೇನೆ. ಈ ಹಿಂದೆ ಮಠ, ಮಂದಿರಗಳಿಗೆ ಹಣ ನೀಡುವಂತೆ ಮಾಡಿದ್ದು ನಾನೇ. ಹೀಗಾಗಿ ನಾನು ಧಾರ್ಮಿಕ ಕೆಲಸ ಮಾಡುತ್ತಿದ್ದೇನೆ ಎಂದರು.


# ರಾಜ್ಯದಲ್ಲಿ ಮನೆ ಹಂಚಿಯಲ್ಲೂ ಲಂಚ; ಕೈ ಸರಕಾರದ ವಿರುದ್ಧ ಎಚ್‌ಡಿಕೆ ಕಿಡಿ

▶▶ ಶೇ.60 ರಷ್ಟು ಲಂಚ, ಕಮೀಶನ್ ವಸೂಲಿ ಮಾಡುತ್ತಿರುವುದನ್ನು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರೇ ಒಪ್ಪಿಕೊಂಡಿದ್ದಾರೆ: ಕೇಂದ್ರ ಸಚಿವ

• ಉದಯವಾಹಿನಿ, ಮೈಸೂರು

**ಸತ್ಯಮೇವ ಜಯತೇ ಎಂದರೆ ಇದೇನಾ?**

ಕಾಂಗ್ರೆಸ್ ಸರಕಾರದಲ್ಲಿ ಮನೆ ಹಂಚಿಕೆಯಲ್ಲಿಯೂ ಲಂಚ ಪಡೆಯ ಲಾಗುತ್ತಿದೆ ಎಂದು ಗಂಭೀರ ಆರೋಪ ಮಾಡಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು; ಲಂಚದ ಪ್ರಮಾಣ ಶೇ.60 ತಲುಪಿದೆ ಎಂದು ಆರೋಪಿಸಿದ್ದಾರೆ. ಮೈಸೂರಿನಲ್ಲಿ ಭಾನುವಾರ ಬೆಳಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಕಾಂಗ್ರೆಸ್ ಸರಕಾರದಲ್ಲಿ ಶೇ.60 ರಷ್ಟು ಲಂಚ, ಕಮೀಶನ್ ವಸೂಲಿ ಮಾಡುತ್ತಿರುವುದನ್ನು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರೇ ಒಪ್ಪಿಕೊಂಡಿದ್ದಾರೆ ಎಂದರು. ಬಡವರಿಗೆ ಮನೆ ಹಂಚಿಕೆಯಲ್ಲೂ ಲಂಚ ಹೊಡೆಯಲಾಗುತ್ತಿದೆ. ಮೊದಲು ಪಿಡಿಓ ಲಂಚ ಪಡೆಯುತ್ತಿದ್ದರು. ಈಗ ವಿಧಾನಸೌಧದಲ್ಲಿ ಸಚಿವರೇ ರಾಜಾರೋಷವಾಗಿ ಲಂಚ ಪಡೆಯುತ್ತಿದ್ದಾರೆ, ಸತ್ಯಮೇವ ಜಯತೇ ಎಂದರೆ ಇದೇನಾ? ಇವರ ಸತ್ಯಮೇವ ಜಯತೆ ಬರೀ ಜಾಹೀರಾತಿಗೆ ಸೀಮಿತವಾಗಿದೆ ಎಂದು ಕೇಂದ್ರ ಸಚಿವರು ವ್ಯಂಗ್ಯ ವಾಡಿದರು. ಗಾಂಧೀಜಿ ಅವರ ಸತ್ಯಮೇವ ಜಯತೆ ಮಾತಿನಂತೆ ಸಿದ್ದರಾಮಯ್ಯ ಅವರು ನಡೆದುಕೊಳ್ಳುತ್ತಿದ್ದಾರಾ? ಅವರ ಆತ್ಮಕ್ಕೆ ಅವರೇ ಉತ್ತರ ಕೊಟ್ಟುಕೊಳ್ಳಲಿ. ಹಣ ಲೂಟಿ ಮಾಡುವುದಕ್ಕೆ ಇತಿಮಿತಿ ಇಲ್ಲವಾ? ಎಂದು ಸಿಎಂ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರಕಾರದ ವಿರುದ್ಧ ಕುಮಾರಸ್ವಾಮಿ ಅವರು ವಾಗ್ದಾಳಿ ರಾಜ್ಯದ ಗುತ್ತಿಗೆದಾರ ಪರಿಸ್ಥಿತಿ ಶೋಚನೀಯವಾಗಿದೆ.



ಇವತ್ತಿನ ಪರಿಸ್ಥಿತಿ ನೋಡಿದರೆ ಹಿಂದಿನ ಬಿಜೆಪಿ ಸರಕಾರವೇ ಚೆನ್ನಾಗಿತ್ತು ಎನ್ನುತ್ತಿದ್ದಾರೆ ಕಾಂಗ್ರೆಸ್ ಪರವಾಗಿರುವ ಗುತ್ತಿಗೆದಾರರು. ಇದಕ್ಕೆಲ್ಲಾ ಮುಂದಿನ ದಿನಗಳಲ್ಲಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷ ಬೆಲೆ ತರಬೇಕಾಗುತ್ತದೆ ಎಂದು ಕೇಂದ್ರ ಸಚಿವರು ಎಚ್ಚರಿಕೆ ನೀಡಿದರು.

ಗ್ಯಾರಂಟಿಗಳನ್ನು ನಿಲ್ಲಿಸಲು ಸರಕಾರ ನೆಪ ಹುಡುಕುತ್ತಿದೆ! ಸರಕಾರಿ ಬಸ್ ಪ್ರಯಾಣ ದರವನ್ನು ಒಮ್ಮೆಲೇ ಶೇ.15ರಷ್ಟು ಏರಿಕೆ ಮಾಡಿರುವ ಬಗ್ಗೆಯೂ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ ಕುಮಾರಸ್ವಾಮಿ ಅವರು, ಕಾಂಗ್ರೆಸ್ ಸರಕಾರ ಗ್ಯಾರಂಟಿಗಳನ್ನು ನಿಲ್ಲಿಸಲು ಕಾರಣವನ್ನು ಹುಡುಕುತ್ತಿದೆ. ಹೇಗಾದರೂ ಮಾಡಿ ಗ್ಯಾರಂಟಿ ನಿಲ್ಲಿಸಲು ನೆಪ ಹುಡುಕುತ್ತಿದೆ ಎಂದು ದೂರಿದರು.

ಯಾವುದೇ ಕಾರಣಕ್ಕೂ 5 ಗ್ಯಾರಂಟಿಗಳನ್ನು ನಿಲ್ಲಿಸಬೇಡಿ. ಸಾಕಷ್ಟು ಜನರಿಗೆ ಇದರಿಂದ ಅನುಕೂಲ ಆಗಿದೆ ಎಂದು ನೀವೇ ಹೇಳುತ್ತಿದ್ದೀರಿ. ಹಾಗಿದ್ದ ಮೇಲೆ ಮತ ಕೊಟ್ಟು ಅಧಿಕಾರ ನೀಡಿದ ಜನರಿಂದ ಅವುಗಳನ್ನು ಕಿತ್ತುಕೊಳ್ಳುವ ಕೆಲಸವನ್ನು ಸರಕಾರ ಮಾಡಬಾರದು. ಮಧ್ಯಮ ವರ್ಗದ ಜನರ ಬದುಕಿನ ಜತೆ ರಾಜ್ಯ ಸರಕಾರ ಚೆಲ್ಲಾಟವಾಡುತ್ತಿದೆ ಎಂದು ಕೇಂದ್ರ ಸಚಿವರು ಆಕ್ರೋಶ ವ್ಯಕ್ತಪಡಿಸಿದರು.

ಅತ್ತೆಯದನ್ನು ಅಳಿಯ ದಾನ ಮಾಡಿದ ಎನ್ನುವ ಮಾತಿನಂತೆ ಅವರಿಂದ ಕಿತ್ತು ಅವರಿಗೆ ಕೊಡುವುದಕ್ಕೆ ಇವರೇ ಆಗಬೇಕಾ? ಬಸ್ ಪ್ರಯಾಣ ದರ ಏರಿಕೆಯಿಂದ ಜನ ಸಾಮನ್ಯರಿಗೆ ಹೊರೆಯಾಗಲಿದೆ. ಯಾವುದೇ ಮಂತ್ರಿಯ ಮಕ್ಕಳು, ಶಾಸಕರ ಮಕ್ಕಳು ಸರಕಾರಿ ಬಸ್‌ನಲ್ಲಿ ಓಡಾಡುವುದಿಲ್ಲ. ಓಡಾಡುವವರೆಲ್ಲಾ ಜನ ಸಾಮಾನ್ಯರು. ದಿನಕ್ಕೆ 10 ರೂಪಾಯಿ ಹೆಚ್ಚಿಗೆಯಾದರೂ ಅದು ಅವರಿಗೆ ಹೊರೆಯಾಗಲಿದೆ ಎಂದು ಕುಮಾರಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು.

### ಅಷ್ಟು ಪರಿಜ್ಞಾನ ಬೇಡವೇ

ಬಸ್ ದರ ಪ್ರಶ್ನಿಸಿದರೆ ಮಾಂಸ ತಿನ್ನುವುದಿಲ್ಲವಾ ಎಂದು ಹಾರಿಕೆಯ ಮಾತನಾಡುತ್ತಾರೆ ಸಚಿವರು. ಬಡವರು ಮಾಂಸ ತಿನ್ನುವುದರ ಮೇಲೆ ಇವರಿಗೇಕೆ ಕಣ್ಣು? ಬಡ ಮಧ್ಯಮ ವರ್ಗದವರು ವಾರಕ್ಕೆ ಒಮ್ಮೆ ಮಾಂಸ ಖರೀದಿ ಮಾಡಲು ಎಷ್ಟು ಕಷ್ಟಪಡುತ್ತಾರೆ ಗೊತ್ತಾ ಇವರಿಗೆ? ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ಅದಕ್ಕೆ ಜನರ ಕಾರ್ಯಕ್ರಮ ಏನು? ಅಷ್ಟು ಪರಿಜ್ಞಾನ ಬೇಡವೇ ಇವರಿಗೆ ಎಂದು ಅವರು ಖಾರವಾಗಿ ಪ್ರಶ್ನಿಸಿದರು.

**ಈ ದಿನದ ದರ** | ಪೆಟ್ರೋಲ್: 103.20 ₹/L | ಡೀಸೆಲ್ : 90.03 ₹/L | ಬಂಗಾರ: ₹7,871/Gram24ct ₹7,215/Gram22ct | ಬೆಳ್ಳಿ: ₹92.50/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಶಾಸ್ತ್ರೇಸ್ಮಿನ್ನುಕ್ತವಾನ್ಮನುಃ

ಮನುಸ್ಮೃತಿಯ ಪ್ರಥಮಾಧ್ಯಾಯದ ಶ್ಲೋಕಭಾಗ. ಮನುವು ಈ ಮನುಸ್ಮೃತಿಯಲ್ಲಿ ಜಗದ ಸೃಷ್ಟಿ, ಹದಿನಾರು ಸಂಸ್ಕಾರ, ಅನುಸರಿಸಬೇಕಾದ ವ್ರತ, ವಿವಾಹದ ಮೂಲಕವೇ ಗಂಡು ಹೆಣ್ಣು ಸಂಬಂಧ ಹೊಂದಬೇಕೆನ್ನುವುದು, ಯಜ್ಞ, ಜೀವನ ವೃತ್ತಿ, ಶಿಕ್ಷಿತನ ವ್ರತ, ತಿನ್ನಬಾರದ್ದು – ತಿನ್ನಬೇಕಾದದ್ದು, ಸ್ವಚ್ಛತೆ ಪದಾರ್ಥ ಶುದ್ಧಿ, ಸ್ತ್ರೀಧರ್ಮ, ತಪಸ್ಸು, ಸಂನ್ಯಾಸ, ಮೋಕ್ಷ, ರಾಜಧರ್ಮ, ಸಾಕ್ಷಿ ವಿಚಾರಣೆ, ದಾಂಪತ್ಯ ಧರ್ಮ, ವಿಭಾಗ ಧರ್ಮ, ಪಗಡೆ ಮುಂತಾದವುಗಳ ತ್ಯಾಗ, ವೈಶ್ಯ ಶೂದ್ರರ ಉಪಚಾರ, ಆಪದ್ಧರ್ಮ, ಪ್ರಾಯಶ್ಚಿತ್ತ ವಿಧಿ,ಸಂಚಿತ ಆಗಾಮಿ ಪ್ರಾರಬ್ಧ ಎಂಬ ಮೂರು ವಿಧ ಕರ್ಮಕ್ಕನುಗುಣವಾದ ಸಂಸಾರಧರ್ಮ, ಕರ್ತವ್ಯಗಳ ಗುಣದೋಷ ವಿಚಾರ, ದೇಶಧರ್ಮ ಕುಲಜಾತಿಧರ್ಮ ಭ್ರಷ್ಟಧರ್ಮ ಮುಂತಾದವುಗಳನ್ನು ಪ್ರತಿಪಾದಿಸಿದ್ದಾನೆ.

## ಚಲಿಸುತ್ತಿದ್ದ ಕಾರಿನಲ್ಲಿ ಏಕಾಏಕಿ ಕಾಣಿಸಿಕೊಂಡ ಬೆಂಕಿ : ನಾಲ್ವರು ಪ್ರಾಣಪಾಯದಿಂದ ಪಾರು!

• ಉದಯವಾಹಿನಿ, ಬೆಂಗಳೂರು

ಚಲಿಸುತ್ತಿದ್ದ ಕಾರಿನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡು ಅವಗಡ ಸಂಭವಿಸಿರುವ ಘಟನೆ ಬೆಂಗಳೂರಿನ ಬನ್ನೇರುಘಟ್ಟ ರಸ್ತೆಯ ಗೊಟ್ಟಿಗೆರೆ ಬಳಿ ಒಂದು ಘಟನೆ ನಡೆದಿದೆ. ಚಲಿಸುತ್ತಿದ್ದ ಕಾರಿನಲ್ಲಿ ಏಕಾಏಕಿ ಬೆಂಕಿ ಕಾಣಿಸಿಕೊಂಡು ಈ ಅಗ್ನಿ ದುರಂತ ಸಂಭವಿಸಿದೆ. ಬೆಂಕಿ ಕಾಣಿಸಿಕೊಳ್ಳುತ್ತಿದ್ದಂತೆ ಕಾರಿನಲ್ಲಿ ಚಲಿಸುತ್ತಿದ್ದ ನಾಲ್ವರು ತಕ್ಷಣ ಹೊರಗಡೆ ಬಂದಿದ್ದಾರೆ. ಕಾರಿನಲ್ಲಿ ತೆರಳುತ್ತಿದ್ದ ನಾಲ್ವರು ಸದ್ಯ ಯಾವುದೇ ಅಪಾಯವಿಲ್ಲದೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಕೂಡಲೇ ಸ್ಥಳೀಯ ನಿವಾಸಿಗಳು ಬೆಂಕಿ ಹೊತ್ತಿಕೊಂಡಿದ್ದ ಕಾರನ್ನು ನಂದಿಸಿದ್ದಾರೆ. ಹುಳಿಮಾವು ಸಂಚಾರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಒಂದು ಘಟನೆ ನಡೆದಿದೆ.

## ಒಳಮೀಸಲಾತಿ ನೀಡಲು ನಮ್ಮ ಸರ್ಕಾರ ಬದ್ಧ: ಸಿಎಂ ಸಿದ್ದರಾಮಯ್ಯ ಘೋಷಣೆ

• ಉದಯವಾಹಿನಿ, ಬೆಂಗಳೂರು

ಒಳಮೀಸಲಾತಿ ನೀಡಬೇಕೆಂದು ಸರ್ವೋಚ್ಚ ನ್ಯಾಯಾಲಯ ಹೇಳಿದ್ದು ಪ್ರಾಯೋಗಿಕ ಮಾಹಿತಿ ಇಲ್ಲದಿರುವುದರಿಂದ ನಾಗಮೋಹನ್‌ದಾಸ್ ಅವರ ನೇತೃತ್ವದ ಸಮಿತಿ ರಚಿಸಲಾಗಿದೆ. ಒಳಮೀಸಲಾತಿ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ ಎಂಬುದಾಗಿ ಸಿಎಂ ಸಿದ್ದರಾಮಯ್ಯ ಘೋಷಣೆ ಮಾಡಿದ್ದಾರೆ.

ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವಂತ ಅವರು, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಚುನಾವಣೆಗಳು ನಡೆದು ಐದು ವರ್ಷ ಕಳೆದಿರುವುದು ವಾಸ್ತವ ಸಂಗತಿ. ಆದೆ ಈ ವಿಷಯ ನ್ಯಾಯಾಲಯದ ಮುಂದೆ ಹೋಗಿದೆ. ಪ್ರಕರಣ ಅಲ್ಲಿಯೇ ಇತ್ಯರ್ಥವಾಗಬೇಕು. ತಾಲ್ಲೂಕು ಮತ್ತು ಜಿಲ್ಲಾ ಪಂಚಾಯತಿ ಚುನಾವಣೆ ನಡೆಸಲು ನಾವು ತಯಾರಾಗಿದ್ದೇವೆ. ನ್ಯಾಯಾಲಯದ ತೀರ್ಪಿಗಾಗಿ ಕಾಯುತ್ತಿದ್ದೇವೆ ಎಂದಿದ್ದಾರೆ. ಒಳಮೀಸಲಾತಿ ನೀಡಬೇಕೆಂದು ಸರ್ವೋಚ್ಚ ನ್ಯಾಯಾಲಯ ಹೇಳಿದ್ದು ಪ್ರಾಯೋಗಿಕ ಮಾಹಿತಿ ಇಲ್ಲದಿರುವುದರಿಂದ ನಾಗಮೋಹನ್ ದಾಸ್ ಅವರ ನೇತೃತ್ವದ ಸಮಿತಿ ರಚಿಸಲಾಗಿದೆ. ಒಳಮೀಸಲಾತಿ ನೀಡಲು ನಮ್ಮ ಸರ್ಕಾರ ಬದ್ಧವಾಗಿದೆ. ಸಚಿವರಾದ ಸತೀಶ್ ಜಾರಕಿಹೊಳಿ ಅವರ ಮನೆಯಲ್ಲಿ ಇತರೆ ಸಚಿವರು ಊಟಕ್ಕೆ ಸೇರುವುದೇ ತಪ್ಪೇ ರಾಜಕಾರಣಿಗಳು ಊಟಕ್ಕೆ ಸೇರಿದರೆ ಬಣ್ಣ ಕಟ್ಟಲಾಗುತ್ತದೆ. ಈಗಾಗಲೇ ಹೇಳಿದಂತೆ ಅಲ್ಲಿ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ ಎಂದು ತಿಳಿಸಿದ್ದಾರೆ.

## ಪಟ್ಟಿ ರಿಲೀಸ್ ಮಾಡಿ ಆರ್.ಅಶೋಕ್‌ಗೆ ರಾಮಲಿಂಗಾರೆಡ್ಡಿ ತಿರುಗೇಟು

• ಉದಯವಾಹಿನಿ, ಬೆಂಗಳೂರು

ಸಾರಿಗೆ ಬಸ್ಗಳಲ್ಲಿ ಟಿಕೆಟ್ 15 ರಷ್ಟು ಹೆಚ್ಚಿಗೆ ಮಾಡಿ ರಾಜ್ಯ ಸರ್ಕಾರ ನಿನ್ನೆ ಅಧಿಕೃತ ಆದೇಶ ಹೊರಡಿಸಿದೆ. ಈ ವಿಚಾರವಾಗಿ ವಿಪಕ್ಷ ಬಿಜೆಪಿ ನಾಯಕರು ಬೆಂಗಳೂರಿನ ಮೆಜೆಸ್ಟಿಕ್‌ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿ ಪ್ರಯಾಣಿಕರಿಗೆ ಹೂ ನೀಡಿ ಪ್ರತಿಭಟನೆ ನಡೆಸಿದರು. ಈ ವಿಚಾರವಾಗಿ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಬಿಜೆಪಿ ಅವಧಿಯಲ್ಲಿ ಕೂಡ ಸಾರಿಗೆ ಬಸ್ ಗಳ ಟಿಕೆಟ್ ದರದಲ್ಲಿ ಏರಿಕೆ ಮಾಡಿರುವ ಪಟ್ಟಿ ರಿಲೀಸ್ ಮಾಡಿದ್ದಾರೆ. ಹೌದು ಬಿಜೆಪಿ ಅವಧಿಯಲ್ಲಿ ಸಾರಿಗೆ ಸಚಿವರಾಗಿದ್ದ ವಿಪಕ್ಷ ನಾಯಕ ಆರ್. ಅಶೋಕ್ ಅವಧಿಯಲ್ಲಿ ಟಿಕೆಟ್ ದರ ಏರಿಕೆ ಪಟ್ಟಿಯನ್ನು ಬಿಡುಗಡೆ ಮಾಡುವ ಮೂಲಕ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಟಾಂಗ್ ಕೊಟ್ಟಿದ್ದಾರೆ.ಬಿಜೆಪಿ ಸರ್ಕಾರ ಇದ್ದಾಗ ವಿಪಕ್ಷ ನಾಯಕ ಆರ್. ಅಶೋಕ್ ಅವಧಿಯಲ್ಲಿ ಯಾವ್ಯಾವ ವರ್ಷದಲ್ಲಿ ಎಷ್ಟೆಷ್ಟು ದರ ಏರಿಕೆ ಎಂದು ಪಟ್ಟಿ ರಿಲೀಸ್ ಮಾಡಿದೆ.

## ನಕ್ಷೆ ಮಂಜೂರಾತಿ ಉಲ್ಲಂಘಿಸಿರುವ ಕಟ್ಟಡಗಳಿಗೆ ಬೀಗ ಹಾಕಿದ ಅಧಿಕಾರಿಗಳು

• ಉದಯವಾಹಿನಿ, ಬೆಂಗಳೂರು

ಬಿಬಿಎಂಪಿ ಪೂರ್ವ ವಲಯ ವ್ಯಾಪ್ತಿಯಲ್ಲಿ ನಕ್ಷೆ ಮಂಜೂರಾತಿಗೆ ವ್ಯತಿರಿಕ್ತವಾಗಿ ನಿರ್ಮಿಸಿರುವ ಕಟ್ಟಡಗಳಿಗೆ ಬೀಗ ಮುದ್ರೆ ಹಾಕಲಾಗಿದೆ.ವಲಯ ಆಯುಕ್ತೆ ಆರ್. ಸ್ನೇಹಲ್ ಅವರ ನಿರ್ದೇಶನದಂತೆ ಎಸ್.ಕೆ.ಗಾರ್ಡನ್‌ನ ವಿಲಿಯಮ್ಸ್ ಟೌನ್, ಫ್ರೇಜರ್ ಟೌನ್ ಸಮೀಪದ ವೀಲರ್ಸ್ ರಸ್ತೆಯ 2ನೇ ಅಡ್ಡರಸ್ತೆಯಲ್ಲಿ ನಕ್ಷೆ ಮಂಜೂರಾತಿ ಉಲ್ಲಂಘಿಸಿ ನಿರ್ಮಿಸಲಾಗುತ್ತಿದ್ದ ಕಟ್ಟಡಗಳಿಗೆ ಪಾಲಿಕೆ ಅಧಿಕಾರಿಗಳು ಬೀಗ ಹಾಕಿದರು. ಕಟ್ಟಡ ಮಾಲೀಕರಿಗೆ ಹಲವು ಬಾರಿ ಮೌಖಿಕವಾಗಿ ಮತ್ತು ನೋಟಿಸ್ ಜಾರಿ ಮಾಡಿ ಎಚ್ಚರಿಕೆ ನೀಡಿದ್ದರೂ, ಕಾಮಗಾರಿ ಸ್ಥಗಿತಗೊಳಿಸಿರಲಿಲ್ಲ. ಎಸ್.ಕೆ.ಗಾರ್ಡನ್ ಕಟ್ಟಡ ಮಾಲೀಕರು ನ್ಯಾಯಾಲಯದಲ್ಲಿದಾವೆ ಹೂಡಿದ್ದರು. ಇದನ್ನು ನ್ಯಾಯಾಲಯ ವಜಾ ಮಾಡಿದೆ. ಹೀಗಾಗಿ, ಅನಧಿಕೃತ ಕಟ್ಟಡಗಳಿಗೆ ಬೀಗ ಹಾಕಲಾಗುತ್ತಿದೆ. ನಕ್ಷೆ ಮಂಜೂರಾತಿಗೆ ವ್ಯತಿರಿಕ್ತವಾಗಿ ಎಸ್.ಕೆ ಗಾರ್ಡನ್‌ನಲ್ಲಿ ನಿರ್ಮಿಸಿದ್ದ 5ನೇ ಮಹಡಿಗೆ ಜೆ.ಸಿ.ನಗರ ಪೊಲೀಸ್ ಠಾಣೆ ಸಿಬ್ಬಂದಿಗಳ ಭದ್ರತೆಯಲ್ಲಿಬೀಗಮುದ್ರೆ ಹಾಕಲಾಯಿತು. ಹಾಗೆಯೇ, ವಿಲಿಯಮ್ಸ್ ಟೌನ್‌ನಲ್ಲಿ ನಿರ್ಮಿಸಲಾಗುತ್ತಿದ್ದ 3, 4ನೇ ಮಹಡಿಗೆ ಬೀಗ ಹಾಕಲಾಯಿತು. ಈ ವೇಳೆ ಪಾಲಿಕೆಯ ಸಹಾಯಕ ಕಾರ್ಯ ನಿರ್ವಾಹಕ ಎಂಜಿನಿಯರ್ ರವಿ ವಡ್ಡರ್, ಸಹಾಯಕ ಎಂಜಿನಿಯರ್ ವಿ.ಆರ್.ಕೃಷ್ಣಪ್ಪ ಹಾಗೂ ಕಂದಾಯ ವಿಭಾಗದ ಅಧಿಕಾರಿಗಳು ಇದ್ದರು.

## 2 ದಿನ ಜಿಲ್ಲೆಗಳಲ್ಲಿ ಶೀತ ಮಾರುತ ಎಚ್ಚರಿಕೆ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಚಳಿ ಹೆಚ್ಚಳವಾಗುತ್ತಿದ್ದು, ನಡುವೆ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮುಂದಿನ 2 ದಿನ ಶೀತ ಅಲೆ ಬೀಸುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

ಹವಾಮಾನ ಇಲಾಖೆ ಮಾಹಿತಿ ಪ್ರಕಾರ, ಮಳೆ ಮೋಡ ಇಲ್ಲದ ಕಾರಣ ಶುಭಾಕಾಶ ನಿರ್ಮಾಣ, ಕನಿಷ್ಠ ಉಷ್ಣಾಂಶದಲ್ಲಿ ಸುಮಾರು 5 ಡಿಗ್ರಿ ಸೆಲ್ಸಿಯಸ್ ನಷ್ಟು ಇಳಿಕೆ ಹಾಗೂ ಉತ್ತರ ದಿಕ್ಕಿನಿಂದ ದಕ್ಷಿಣಕ್ಕೆ ಗಾಳಿ ಬೀಸುತ್ತಿರುವುದರಿಂದ ಉತ್ತರ ಒಳನಾಡಿನ ಬೀದರ್, ರಾಯಚೂರು, ವಿಜಯಪುರ ಜಿಲ್ಲೆಗಳಲ್ಲಿ 2 ದಿನ ಶೀತ ಅಲೆ ಕಾಣಿಸಿಕೊಳ್ಳುವ ಸಾಧ್ಯತೆ ಇದೆ ಎಂದು ತಿಳಿಸಿದೆ. ಬೆಂಗಳೂರಿನಲ್ಲಿ ಚಳಿ ಪ್ರಮಾಣ ದಿನದಿಂದ ದಿನಕ್ಕೆ ಹೆಚ್ಚಳವಾಗುತ್ತಿದ್ದು, ವಾಡಿಕೆಗಿಂತ 2 ರಿಂದ 3 ಡಿ.ಸೆ.ನಷ್ಟು ಕಡಿಮೆಯಾಗಿದೆ. ಬೆಂಗಳೂರು ನಗರದಲ್ಲಿ ಕನಿಷ್ಠ ಉಷ್ಣಾಂಶ 14 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಮುಂದಿನ ದಿನಗಳಲ್ಲಿ 11 ಡಿ.ಸೆ. ವರೆಗೆ ಇಳಿಕೆಯಾಗುವ ಸಾಧ್ಯತೆ ಇದೆ.

# ಕಾಂಗ್ರೆಸ್ ಸರ್ಕಾರದಲ್ಲಿ 60% ಕಮಿಷನ್ ನಿಗದಿಪಡಿಸಲಾಗಿದೆ

## ವಿಧಾನಸೌಧದಿಂದಲೇ ಪರ್ಸೆಂಟೇಜ್ ಪ್ರಾರಂಭ, ಮನೆ ಹಂಚಿಕೆಗೆ ಸಂಬಂಧಿಸಿದಂತೆ ಕೆಲವೊಂದು ಪಿಡಿಓ ಹಣ ಪಡೆಯುತ್ತಿದ್ದರು

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರದಲ್ಲಿ ಪ್ರತಿ ಇಲಾಖೆಯಲ್ಲಿ ಪರ್ಸೆಂಟೇಜ್ ನಿಗದಿಪಡಿಸಲಾಗಿದೆ ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ. ಮೈಸೂರಿನ ಚಾಮುಂಡಿ ಬೆಟ್ಟದಲ್ಲಿ ತಾಯಿ ಚಾಮುಂಡೇಶ್ವರಿಯ ದರ್ಶನ ಪಡೆದ ನಂತರ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಲೋಕೋಪಯೋಗಿ, ನೀರಾವರಿ ಇಲಾಖೆ ಮಾತ್ರವಲ್ಲ ಎಲ್ಲಾ ಇಲಾಖೆಗ ಳಲ್ಲೂ ಪರ್ಸೆಂಟೇಜ್ ನಿಗದಿಪಡಿಸಲಾಗಿದೆ ಎಂದರು.ಮನೆಗಳ ಹಂಚಿಕೆಗೂ ಮಂತ್ರಿಗಳಿಗೆ ಹಣ ಕೊಡಬೇಕಾದ ಪರಿಸ್ಥಿತಿ ಶುರುವಾಗಿದೆ.

**ಎಚ್ಚಿಕೆ ಗಂಭೀರ ಆರೋಪ**

ವಿಧಾನಸೌಧದಿಂದಲೇ ಪರ್ಸೆಂಟೇಜ್ ಪ್ರಾರಂಭವಾಗಿದೆ. ಮನೆ ಹಂಚಿಕೆಗೆ ಸಂಬಂಧಿಸಿದಂತೆ ಕೆಲವೊಂದು ಪಿಡಿಓ ಹಣ ಪಡೆಯುತ್ತಿದ್ದರು. ಈಗ ಸಚಿವರಿಗೇ ಹಣ ಕೊಟ್ಟು ಮನೆ ಹಂಚಿಕೆ ಮಾಡಿಸಿಕೊಳ್ಳಬೇಕಾದ ಪರಿಸ್ಥಿತಿ ಇದೆ ಎಂದು ಗಂಭೀರ ಆರೋಪ ಮಾಡಿದ್ದಾರೆ. ಬಿಜೆಪಿ ಸರ್ಕಾರದ ವಿರುದ್ಧ ಮಾಡಿದ್ದ ಪರ್ಸೆಂಟೇಜ್ ಆರೋಪವನ್ನು ಈ ತನಕ ಸಾಬೀತು ಪಡಿಸಿಲ್ಲ.

ಸರ್ಕಾರದ ಪರ್ಸೆಂಟೇಜ್ ವಿರುದ್ಧ ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡಿರುವ ಗುತ್ತಿಗೆದಾರರೇ ಆರೋಪಿಸಿದ್ದಾರೆ. ತುಮಕೂರಿನಲ್ಲಿ ಗುತ್ತಿಗೆದಾರರೊಬ್ಬರು ಶೇ.60ರಷ್ಟು ದಾಟಿದೆ ಎಂದು ಹೇಳಿದ್ದಾರೆ. ದುಡ್ಡು ತಿನ್ನಲು ಇತಿ–ಮಿತಿ ಬೇಡವೆ ಎಂದು ಪ್ರಶ್ನಿಸಿದರು. ಕಾಂಗ್ರೆಸ್ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ನಂತರ ಸರ್ಕಾರಿ ನೌಕರರು, ಗುತ್ತಿಗೆದಾರರು ಆತಹತ್ಯೆ ಮಾಡಿಕೊಳ್ಳುವ ಸ್ಥಿತಿಗೆ ತಂದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ನಿಮ ಆತಸಾಕ್ಷಿಗೆ ಉತ್ತರ ಕೊಡಿ. ನಿಮ ಪಟಾಲಂ ಬೆಂಗಳೂರಿನಲ್ಲಿ ಜನತೆಯ ಸಂಪತ್ತು ಲೂಟಿ ಮಾಡುತ್ತಿದೆ. ಮುಂದೆ ಇದಕ್ಕೆ ತಕ್ಕ ಬೆಲೆ ತೆರಬೇಕಾಗುತ್ತದೆ ಎಂದರು.

ಸಾರಿಗೆ ಸಂಸ್ಥೆಗಳ ಬಸ್ ಪ್ರಯಾಣ ದರ ಹೆಚ್ಚಳ ಮಾಡಿರುವುದಕ್ಕೆ ತೀವ್ರ ಆಕ್ರೋಶ ವ್ಯಕ್ತಪಡಿಸಿದ ಕುಮಾರಸ್ವಾಮಿ ಅವರು, ವಿಧಾನಸಭಾ ಚುನಾವಣಾ ಪೂರ್ವದಲ್ಲಿ ಕೆಪಿಸಿಸಿ ಅಧ್ಯಕ್ಷರು ಹಾಗೂ ಸಿದ್ದರಾಮಯ್ಯ ಸಹಿ ಮಾಡಿ ಮನೆ ಮನೆಗೆ ಗ್ಯಾರಂಟಿ ಪತ್ರ ಹಂಚಿದ್ದರು.



ರಾಜ್ಯದಲ್ಲಿ ಹೆಚ್ಚಿನ ಬಜೆಟ್ ಮಂಡನೆ ಮಾಡಿರುವ ಮುಖ್ಯಮಂತ್ರಿ ಸಹಮತಿ ಮೇರೆಗೆ ಗ್ಯಾರಂಟಿ ಯೋಜನೆ ಜಾರಿ ಮಾಡಲಾಗಿದೆ ಎಂದು ಹೇಳಿದರು. ನುಡಿದಂತೆ ನಡೆದಿದ್ದೇವೆ, ಸತ್ಯಮೇವ ಜಯತೆ ಎಂದು ಪದೇ ಪದೇ ಹೇಳುವ

> ಗ್ಯಾರಂಟಿ ಹೆಸರಿನಲ್ಲಿ ಐದಾರು ಪಟ್ಟು ಹೆಚ್ಚಳ ಮಾಡಲಾಗಿದೆ. ಮುದ್ರಾಂಕ ಶುಲ್ಕ, ಆಸ್ತಿ ಮೌಲ್ಯ ಹೆಚ್ಚಳ, ಡೀಸೆಲ್, ಪೆಟ್ರೋಲ್ ಮೇಲಿನ ಸೆಸ್ ಏರಿಕೆ ಮಾಡಲಾಗಿದೆ. ಈಗ ಹಾಲು ಮತ್ತು ನೀರಿನ ದರವನ್ನು ಹೆಚ್ಚಿಸಲಾಗುತ್ತದೆ ಎಂಬ ಮಾಹಿತಿ ಇದೆ. ಇಂತಹ ಕೆಟ್ಟ ರೀತಿಯ ನಿರ್ಧಾರ ಮಾಡಿದ ಸರ್ಕಾರ ದೇಶದ ಇತಿಹಾಸದಲ್ಲಿ ಕಂಡಿರಲಿಲ್ಲ. ಮುಂದಿನ ದಿನಗಳಲ್ಲಿ ಸಬೂಬು ಕೊಟ್ಟು ಗ್ಯಾರಂಟಿ ಯೋಜನೆ ನಿಲ್ಲಿಸುವ ಹುನ್ನಾರ ನಡೆದಿದೆ ಎಂದು ಅವರು ಆರೋಪಿಸಿದರು.

> ಗ್ಯಾರಂಟಿ ಯೋಜನೆ ನಿಲ್ಲಿಸದೇ ಮುಂದುವರಿಸಿ. ಇದರಿಂದ ಕೆಲವು ವರ್ಗದವರಿಗೆ ಅನುಕೂಲವಾಗಿದೆ. ಆದರೆ, ಮಾಂಸದ ಬೆಲೆ ದುಬಾರಿಯಾಗಿದ್ದರೂ ಖರೀದಿಸುತ್ತಾರೆ. ಬಸ್ ದರ ಏರಿಕೆಗೆ ಆಕ್ಷೇಪಿಸುತ್ತಾರೆಂಬ ಸಚಿವರೊಬ್ಬರ ಹೇಳಿಕೆಗೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಕುಮಾರಸ್ವಾಮಿ, ತಿಂಗಳಲ್ಲಿ ಒಮೆ ಮಕ್ಕಳ ಆಸೆ ಈಡೇರಿಸಲಾಗದ ಪರಿಸ್ಥಿತಿ ಕೆಲವು ಕುಟುಂಬಗಳಲ್ಲಿದೆ. ಮಕ್ಕಳ, ತಾಯಂದಿರ ಅಪೌಷ್ಠಿಕತೆ ನಿವಾರಣೆಗೆ ಎಷ್ಟು ಶ್ರಮ ಹಾಕುತ್ತಿದ್ದಾರೆ ಎಂಬುದನ್ನು ಸಚಿವರು ಗಮನಿಸಿದ್ದರೆ ಅಂತಹ ಹೇಳಿಕೆ ನೀಡುತ್ತಿರಲಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ನೀವು ಬೆಲೆ ಏರಿಕೆ ಮಾಡಿ ಜನ ಸಾಮಾನ್ಯರ ಬದುಕಿನೊಂದಿಗೆ ಚೆಲ್ಲಾಟ ಆಡುತ್ತಿದ್ದಾರೆ. ಬಸ್ ಪ್ರಯಾಣ ದರ ಶೇ.15ರಷ್ಟು ಹೆಚ್ಚಳ ಮಾಡಿ ಯಾವ ಸಾಧನೆ ಮಾಡಲು ಹೊರಟ್ಟೀದ್ದೀರಿ. ಬಸ್ಸಿನಲ್ಲಿ ಪ್ರಯಾಣಿಸುವವರು ಕೂಲಿ ಕಾರ್ಮಿಕರು, ರೈತರು, ಶ್ರಮಜೀವಿಗಳೇ ಹೊರತು ಸಚಿವರ ಮಕ್ಕಳಲ್ಲ ಎಂದು ಅವರು ವಾಗ್ದಾಳಿ ನಡೆಸಿದರು.

## ಕುಡಿದ ನಶೆಯಲ್ಲಿ ತಾಯಿಯ ಕತ್ತು ಹಿಸುಕಿ ಕೊಂದ ಮಗ

• ಉದಯವಾಹಿನಿ, ಬೆಂಗಳೂರು




ಬೆಂಗಳೂರಿನಲ್ಲಿ ಬೆಚ್ಚಿ ಬೀಳಿಸುವಂತಹ ಘಟನೆ ನಡೆದಿದ್ದು ಕುಡಿದ ನಶೆಯಲ್ಲಿ ತಾಯೊಂದಿಗೆ ಜಗಳ ಮಾಡಿದ ಮಗ ತಾಯಿಯ ಕತ್ತು ಹಿಸುಕಿ ಕೊಂದ ಬಳಿಕ ತಾನು ಕೂಡ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಬೆಂಗಳೂರಿನ ಸೂರ್ಯ ಸಿಟಿ ಬಳಿಯ ಹಳ ಚಂದಾಪುರದಲ್ಲಿ ನಡೆದಿದೆ.

**ಪೊಲೀಸರು ಭೇಟಿ ನೀಡಿ ಪರಿಶೀಲನೆ**

ಕತ್ತು ಹಿಸುಕಿ ತಾಯಿಯನ್ನು ಕೊಂದು ಪುತ್ರನೊಬ್ಬ ನೇಣಿಗೆ ಶರಣಾಗಿ ರುವ ಘಟನೆ ಬೆಂಗಳೂರಿನ ಸೂರ್ಯ ಸಿಟಿ ಬಳಿಯ ಹಳೆ ಚಂದಾಪುರದಲ್ಲಿ ಈ ಒಂದು ಘಟನೆ ನಡೆದಿದೆ. ತಾಯಿ ಲಕ್ಷ್ಮಿ ದೇವಿ (41) ಕೊಂದು ಪುತ್ರ ರಮೇಶ್ (21) ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಮೃತರು ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಚಿಕ್ಕ ಹಳ್ಳಿಯ ನಿವಾಸಿಗಳು ಎಂದು ತಿಳಿದು ಬಂದಿದೆ.

ಕೆಲವು ವರ್ಷಗಳ ಹಿಂದೆ ಕೂಲಿ ಅರಸಿಕೊಂಡು ತಾಯಿ ಮತ್ತು ಪುತ್ರ ಬೆಂಗಳೂರಿಗೆ ಬಂದಿದ್ದರು. ಕೂಲಿ ಕೆಲಸ ಮಾಡಿಕೊಂಡು ತಾಯಿ ಮತ್ತು ಮಗ ಜೀವನ ಸಾಗಿಸುತ್ತಿದ್ದರು. ಆದರೆ ಮಗನಿಗೆ ಕುಡಿತದ ಚಟ ಇತ್ತು. ಆಗಾಗ ತಾಯಿಯ ಜೊತೆಗೆ ಕುಡಿದು ಬಂದು ನಶೆಯಲ್ಲಿ ಗಲಾಟೆ ಮಾಡುತ್ತಿದ್ದ ನೆನ್ನೆ ರಾತ್ರಿಯು ಕೂಡ ಕುಡಿದು ಬಂದು ತಾಯಿ ಲಕ್ಷ್ಮಿ ಜೊತೆಗೆ ಗಲಾಟೆ ಮಾಡಿದ್ದಾನೆ.

ಈ ವೇಳೆ ಗಲಾಟೆ ವಿಕೋಪಕ್ಕೆ ತಿರುಗಿ ತಾಯಿಯ ಕತ್ತು ಹಿಸುಕಿ ರಮೇಶ್ ಕೊಂದಿದ್ದಾನೆ. ಬಳಿಕ ತಾನು ಕೂಡ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಘಟನಾ ಸ್ಥಳಕ್ಕೆ ಸೂರ್ಯನಗರ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ. ಸದ್ಯ ತಾಯಿ ಮತ್ತು ಮಗನ ಮೃತ ದೇಹವನ್ನು ಅತ್ತಿಬೆಲೆಯ ಆಲ್ಬರ್ಟ್ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗೆ ರವಾನಿಸಲಾಗಿದೆ.

## ಲೋಕಾಯುಕ್ತದಲ್ಲಿ ಇತ್ಯರ್ಥವಾಗದೆ ಬಾಕಿ ಉಳಿದಿವೆ 1,228 ಪ್ರಕರಣಗಳು

• ಉದಯವಾಹಿನಿ, ಬೆಂಗಳೂರು

ಚುನಾಯಿತ ಪ್ರತಿನಿಧಿಗಳು ಮತ್ತು ಸರ್ಕಾರಿ ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ ತಡೆ ಕಾಯ್ದೆಯಡಿ ಕರ್ನಾಟಕ ಲೋಕಾಯುಕ್ತದಲ್ಲಿ 1,228 ಪ್ರಕರಣಗಳು ಇತ್ಯರ್ಥವಾಗದೆ ಬಾಕಿ ಉಳಿದಿವೆ. ಇದರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಮಾಜಿ ಸಿಎಂಗಳಾದ ಬಿಎಸ್ ಯಡಿಯೂರಪ್ಪ ಮತ್ತು ಎಚ್‌ಡಿ ಕುಮಾರಸ್ವಾಮಿ ಮತ್ತು ಸಚಿವ ಜಮೀರ್ ಅಹಮದ್ ಖಾನ್ ವಿರುದ್ಧ ಭ್ರಷ್ಟಾಚಾರ ಪ್ರಕರಣಗಳು ಸೇರಿವೆ. ಕೆಲವು ಪ್ರಕರಣಗಳು 10 ವರ್ಷಕ್ಕೂ ಹೆಚ್ಚು ಕಾಲದಿಂದ ಬಾಕಿ ಉಳಿದಿವೆ. 1,228 ಪ್ರಕರಣಗಳಲ್ಲಿ 337 ಪ್ರಕರಣಗಳನ್ನು ಪ್ರಾಸಿಕ್ಯೂಷನ್‌ಗೆ ಮಂಜೂರಾತಿಗಾಗಿ ಕಳುಹಿಸಲಾಗಿದೆ. ಆದರೆ ಅಧಿಕಾರಿಗಳು 142 ಪ್ರಕರಣಗಳಲ್ಲಿ ಪ್ರಾಸಿಕ್ಯೂಷನ್‌ಗೆ ಮಾತ್ರ ಮಂಜೂರಾತಿ ನೀಡಿದ್ದಾರೆ.

ಬೆಳಗಾವಿಯಲ್ಲಿ ಇತ್ತೀಚೆಗೆ ನಡೆದ ಚಳಿಗಾಲದ ಅಧಿವೇಶನದಲ್ಲಿ ಬಿಜೆಪಿಯ ಡಿಎಸ್ ಅರುಣ್‌ಗೆ ಪರಿಷತ್‌ನಲ್ಲಿ ನೀಡಿದ ಉತ್ತರದಲ್ಲಿ ಸಿದ್ದರಾಮಯ್ಯ ಅವರು, ಹಲವು ಪ್ರಕರಣಗಳಿಗೆ ಕಾನೂನು ಅಭಿಪ್ರಾಯ ಬೇಕು, ಕೆಲವು ಆರೋಪಿಗಳು ತಡೆಯಾಜ್ಞೆ ಪಡೆದಿದ್ದಾರೆ, ಕೆಲವು ಪ್ರಕರಣಗಳಲ್ಲಿ ವಿವಿಧ ಇಲಾಖೆಗಳ ಮುಖ್ಯಸ್ಥರ ಅಭಿಪ್ರಾಯ ಪಡೆಯಬೇಕು ಎಂದು ಹೇಳಿದ್ದರು.ಬಿ.ವೈ. ವಿಜಯೇಂದ್ರ, ಎಸ್.ಟಿ.ಸೋಮಶೇಖರ್, ಗಾಲಿ ಜನಾರ್ದನರೆಡ್ಡಿ ಸೇರಿದಂತೆ ಹಲವು ಶಾಸಕರು, ಮಾಡಾಳ್ ವಿರೂಪಾಕ್ಷ, ಚೌಡರೆಡ್ಡಿ ಸೇರಿದಂತೆ ಹಲವು ಮಾಜಿ ಶಾಸಕರ ವಿರುದ್ಧವೂ ಭ್ರಷ್ಟಾಚಾರ ಪ್ರಕರಣಗಳು ದಾಖಲಾಗಿವೆ. ಲೋಕಾಯುಕ್ತವನ್ನು ಬಲಪಡಿಸುವ ಅಗತ್ಯವಿದೆ. ಸದ್ಯ ಲೋಕಾಯುಕ್ತ ಪೊಲೀಸರು ನೇರವಾಗಿ ಲೋಕಾಯುಕ್ತ ವ್ಯಾಪ್ತಿಗೆ ಬರುತ್ತಿಲ್ಲ. ಅವರು ರಾಜ್ಯ ಸರ್ಕಾರದ ಅಡಿಯಲ್ಲಿ ಬರುತ್ತಾರೆ. ಆಅಲೋಕಾಯುಕ್ತಕ್ಕೆ ಅಧಿಕಾರವಿದೆ ಎಂದು ಎಲ್ಲರೂ ಭಾವಿಸುತ್ತಾರೆ. ಆದರೆ ಲೋಕಾಯುಕ್ತರು ಕೇವಲ ತನಿಖೆ ನಡೆಸಿ ಕ್ರಮಕ್ಕಾಗಿ ರಾಜ್ಯ ಸರ್ಕಾರಕ್ಕೆ ಶಿಫಾರಸು ಮಾಡುತ್ತಾರೆ. ಮತ್ತೆ ಶಿಫಾರಸುಗಳು ಕ್ಯಾಬಿನೆಟ್ ಅನುಮೋದನೆಗೆ ಹೋಗುತ್ತವೆ.

ಶಿಫಾರಸುಗಳನ್ನು ಸ್ವೀಕರಿಸುವ ಅಥವಾ ತಿರಸ್ಕರಿಸುವ ವಿವೇಚನಾ ಅಧಿಕಾರವನ್ನು ಸಂಪುಟ ಹೊಂದಿದೆ. ಭ್ರಷ್ಟಾಚಾರ ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿಗಳನ್ನು ವಜಾಗೊಳಿಸಲು ಅಥವಾ ಅಮಾನತುಗೊಳಿಸಲು ಲೋಕಾಯುಕ್ತಕ್ಕೆ ಅಧಿಕಾರ ನೀಡುವ ಅವಶ್ಯಕತೆಯಿದೆ ಎಂದು ಲೋಕಾಯುಕ್ತ ನಿವೃತ್ತ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.




ಉದಯವಾಹಿನಿ ಚಿತ್ರ

> ಕೆಲವು ಪ್ರಭಾವಿ ಚುನಾಯಿತ ಪ್ರತಿನಿಧಿಗಳು ಮತ್ತು ಅಧಿಕಾರಿಗಳ ಹಿತಾಸಕ್ತಿ ಕಾಪಾಡಲು ಲೋಕಾಯುಕ್ತ ಸಂಸ್ಥೆಯನ್ನು ಬಲಪಡಿಸುತ್ತಿಲ್ಲ . ಇದು ಅಧಿಕಾರಕ್ಕೆ ಬರುವ ಎಲ್ಲಾ ರಾಜಕೀಯ ಪಕ್ಷಗಳಿಗೆ ಒಳ್ಳೆಯದು ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ.

## ಬಸ್ ಪ್ರಯಾಣ ದರ ಏರಿಸಿದ ಗ್ಯಾರಂಟಿ ಸರ್ಕಾರದ ವಿರುದ್ಧ ಜನರ ಆಕ್ರೋಶ

• ಉದಯವಾಹಿನಿ, ಬೆಂಗಳೂರು

ಆರ್ಥಿಕ ನಷ್ಟದ ಸುಳಿಗೆ ಸಿಲುಕಿರುವ ಸಾರಿಗೆ ನಿಗಮಗಳನ್ನು ಸರಿದಾರಿಗೆ ತರುವ ನಿಟ್ಟಿನಲ್ಲಿ ಏಕಾಏಕಿ ಶೇ.15ರಷ್ಟು ಬಸ್ ಪ್ರಯಾಣ ದರವನ್ನು ಪರಿಷ್ಕರಣೆ ಮಾಡಿರುವ ಸರ್ಕಾರದ ಕ್ರಮಕ್ಕೆ ಸಾರ್ವಜನಿಕ ವಲಯದಲ್ಲಿ ಆಕ್ರೋಶ ವ್ಯಕ್ತವಾಗಿದೆ.ಒಂದು ಕಡೆ ಉಚಿತವಾಗಿ ಗ್ಯಾರಂಟಿ ಕೊಡುವ ಸರ್ಕಾರ ಮತ್ತೊಂದು ಕಡೆ ಅದೇ ಜನರ ಜೇಬಿಗೆ ಕತ್ತರಿ ಹಾಕುತ್ತಿದೆ.

ಹಾವು ಸಾಯಬಾರದು, ಕೋಲು ಮುರಿಯಬಾರದು ಎಂಬಂತಾಗಿದೆ ಸರ್ಕಾರದ ಧೋರಣೆ ಎಂದು ಸಾರ್ವಜನಿಕರು ಹಿಡಿಶಾಪ ಹಾಕುತ್ತಿದ್ದಾರೆ. ನಾವೇನು ಉಚಿತ ಗ್ಯಾರಂಟಿಗಳನ್ನು ಕೊಡಿ ಎಂದು ಅಂಗಲಾಚಿದ್ದೆವಾ ಚುನಾವಣೆಯಲ್ಲಿ ಗೆಲ್ಲಲು ಇವರಿಗೆ ಭಾಗ್ಯಗಳು ಬೇಕಾಗಿತ್ತು. ಈಗ ಅವುಗಳನ್ನು ಮುಂದುವರೆಸಲು ಮೀನಾಮೇಷ ಎಣಿಸುತ್ತಿದೆ. ಹೀಗಾಗಿ ಸಂಕಷ್ಟಕ್ಕೆ ಸಿಲುಕಿರುವ ನಮಗೆ ದರ ಏರಿಕೆ ಭಾಗ್ಯ ನೀಡುತ್ತಿದೆ ಎಂದು ಪುರುಷ ಪ್ರಯಾಣಿಕರು ಎಲ್ಲೆಡೆ ಆಕ್ರೋಶ ಹೊರ ಹಾಕುತ್ತಿದ್ದಾರೆ. ಈ ಪುರುಷಾರ್ಥಕ್ಕೆ ಸರ್ಕಾರ ಗ್ಯಾರಂಟಿ ಭಾಗ್ಯಗಳನ್ನು ನಿಲ್ಲಿಸುವುದೇ ಲೇಸು. ಈಗಾಗಲೇ ಕಳೆದ ಬಜೆಟ್‌ನಲ್ಲಿ ಡೀಸೆಲ್,ಪೆಟ್ರೋಲ್ ಮೇಲಿನ ಮಾರಾಟ ತೆರಿಗೆಯನ್ನು ಹೆಚ್ಚಳ ಮಾಡಲಾಗಿತ್ತು. ಜೊತೆಗೆ ಹಾಲಿನ ದರ, ವಿದ್ಯುತ್ ದರ ಪರಿಷ್ಕರಣೆ ಮಾಡಲಾಗಿದೆ.




ಉದಯವಾಹಿನಿ ಚಿತ್ರ

ಒಂದು ಕಡೆ ಸರ್ಕಾರ ಎಲ್ಲವನ್ನೂ ಉಚಿತವಾಗಿ ಕೊಟ್ಟಿದ್ದೇವೆ. ಜನರ ಆರ್ಥಿಕ ಪರಿಸ್ಥಿತಿ ಸುಧಾರಿಸಿದೆ ಎಂದು ಹೇಳುತ್ತಿದೆ. ಮತ್ತೊಂದು ಕಡೆ ಅದೇ ಜನರ ಜೇಬಿನಿಂದಲೇ ಬೆಲೆ ಏರಿಸುವ ಮೂಲಕ ಕಿತ್ತುಕೊಳ್ಳುತ್ತದೆ. ಇದನ್ನು ಕೊಟ್ಟರೂ ಸರಿಯೇ ಬಿಟ್ಟರೂ ಸರಿಯೇ ಎಂದು ಪ್ರಯಾಣಿಕರು ಶಾಪ ಹಾಕುತ್ತಿದ್ದಾರೆ. ಕೇವಲ ಸಾರ್ವಜನಿಕರಿಂದ ಮಾತ್ರವಲ್ಲದೆ ಸರ್ಕಾರದ ಕ್ರಮವನ್ನು ವಿವಿಧ ರಾಜಕೀಯ ಮುಖಂಡರು ಕೂಡ ಖಂಡಿಸಿದ್ದಾರೆ. ಬಿಜೆಪಿ, ಜೆಡಿಎಸ್, ಆಮ್ ಆದಿ, ಕೆಆರ್‌ಎಸ್ ರೈತ ಸಂಘಟನೆಗಳು, ಎಡಪಕ್ಷಗಳು ಸೇರಿದಂತೆ ವಿವಿಧ ಸಂಘಟನೆಗಳು ಕೂಡ ಸರ್ಕಾರದ ಬೆಲೆ ಪರಿಷ್ಕರಣೆಗೆ ಕಿಡಿಕಾರಿದ್ದಾರೆ. ಅಧಿಕೃತ ವಿರೋಧ ಪಕ್ಷವಾದ ಬಿಜೆಪಿ ರಾಜ್ಯದೆಲ್ಲೆಡೆ ಬಸ್ ಪ್ರಯಾಣ ದರ ಏರಿಕೆ ವಿರೋಧಿಸಿ ಪ್ರತಿಭಟನೆಗೆ ಕರೆ ಕೊಟ್ಟಿದೆ. ಇನ್ನು ಕೇಂದ್ರ ಸಚಿವ ಕುಮಾರಸ್ವಾಮಿ ಕೂಡ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ನಿರಂತರವಾಗಿ ಬೆಲೆ ಹೆಚ್ಚಳ ಮಾಡುವುದಾದರೆ ನೀವು ಭಾಗ್ಯಗಳನ್ನು ನಿಲ್ಲಿಸುವುದೇ ಸರಿಯಾದ ಕ್ರಮ ಎಂದು ಸಿಡಿಮಿಡಿಗೊಂಡರು.

ಕಾಂಗ್ರೆಸ್ ಸರ್ಕಾರದಿಂದ ಎತ್ತಿನಬಂಡಿ ಗ್ಯಾರಂಟಿ, ಸರ್ಕಾರ ಜಾಲಿ ಜಾಲಿ–ಜನರ ಜೇಬು ಖಾಲಿ ಖಾಲಿ ಎಂದು ಆಮ್ ಆದಿ ಪಾರ್ಟಿ ವಿಶೇಷವಾಗಿ ಪ್ರತಿಭಟನೆ ನಡೆಸುವ ಮೂಲಕ ಸರ್ಕಾರದ ವಿರುದ್ಧ ಆಕ್ಷೇಪ ಎತ್ತಿದೆ. ಭ್ರಷ್ಟಾಚಾರವನ್ನು ನಿಲ್ಲಿಸದೆ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡದೆ ವಿಫಲವಾಗಿದೆ. ಹೀಗಾಗಿ ಪದೇ ಪದೇ ದರ ಏರಿಕೆ ಮಾಡುತ್ತಿದೆ ಎಂದು ಕಿಡಿಕಾರಿದೆ.

## ಕಾಲೇಜುಗಳಲ್ಲಿ ಯುವನಿಧಿ ವಿಶೇಷ ನೋಂದಣಿ ಅಭಿಯಾನ

• ಉದಯವಾಹಿನಿ, ಬೆಂಗಳೂರು

ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು 2:06.01.2025 00 20.01.2025 ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯ ಕಾಲೇಜುಗಳಲ್ಲಿ ಆಯೋಜಿಸುವ ಕುರಿತು ರಾಜ್ಯ ಸರ್ಕಾರ ಮಹತ್ವದ ಆದೇಶ ಹೊರಡಿಸಿದೆ.

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಸರ್ಕಾರದ ಖಾತರಿ ಯೋಜನೆಗಳಲ್ಲಿ ಒಂದಾದ ಯುವನಿಧಿ ಯೋಜನ ರಾಜ್ಯದ ನಿರುದ್ಯೋಗಿ ಯುವಕ / ಯುವತಿಯರಿಗೆ ನಿರುದ್ಯೋಗಿ ಭತ್ಯೆಯನ್ನು ನೀಡಿ ಸಬಲೀಕರಣಗೊಳಿಸಲು ಜಾರಿಗೊಳಿಸಿದ ಮಹತ್ತರ ಯೋಜನೆಯಾಗಿರುತ್ತದೆ.ಈ ಯೋಜನೆಯಡಿ ನೋಂದಣಿ ಆಗುವ ಪದವೀಧರರಿಗೆ/ಸ್ನಾತಕೋತ್ತರ ಪದವೀಧರರಿಗೆ ಮಾಹೆಯಾನ ರೂ.3000/– ಡಿಪ್ಲೋಮಾ(6 ಬೋರ್ಡ್‌ಗಳಿಂದ ತೇರ್ಗಡೆಯಾದವರಿಗೆ ಮಾಹೆಯಾನ ರೂ.1500/– ನಿರುದ್ಯೋಗ ಭತ್ಯೆಯನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸ ಲಾಗುತ್ತಿದೆ. 2023–24 ನೇ ಸಾಲಿನಲ್ಲಿ ತೇರ್ಗಡೆಯಾದ 527273 ಅಭ್ಯರ್ಥಿಗಳ ದತ್ತಾಂಶವು ನ್ಯಾಡ್ ಪೋರ್ಟಲ್‌ನಲ್ಲಿ ಅಪ್ ಲೋಡ್ ಆಗಿದ್ದರೂ ಸಹ ನಿರೀಕ್ಷಿತ ಮಟ್ಟದಲ್ಲಿ ಯುವನಿಧಿ ಯೋಜನೆಗೆ ಅಭ್ಯರ್ಥಿಗಳು ನೋಂದಣಿಯಾಗಿರುವುದಿಲ್ಲ.

ಈ ಹಿನ್ನಲೆಯಲ್ಲಿ ಯುವನಿಧಿ ಯೋಜನೆಗೆ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅರ್ಹ ಅಭ್ಯರ್ಥಿಗಳನ್ನು ನೋಂದಾಯಿಸಲು ಯುವನಿಧಿ ವಿಶೇಷ ನೋಂದಣಿ ಅಭಿಯಾನವನ್ನು ದಿನಾಂಕ:06.01.2025 ರಿಂದ 20.01.2025ರ ವರೆಗೆ ಹಮ್ಮಿಕೊಳ್ಳಲಾಗಿದ್ದು ಅಭ್ಯರ್ಥಿಗಳು ಈ ಕೆಳಕಂಡ ಅರ್ಹತೆಗಳನ್ನು ಹೊಂದಿರಬೇಕಾಗಿದೆ. ಕರ್ನಾಟಕದಲ್ಲಿ ವಾಸವಿರುವವರು (ಕನಿಷ್ಠ 06 ವರ್ಷಗಳ ವರೆಗೆ ಪದವಿ/ ಸ್ನಾತಕೋತ್ತರ ಪದವಿ ಮತ್ತು ಡಿಪ್ಲೊಮದವರೆಗೆ ಅಧ್ಯಯನ ಮಾಡಿದವರು) ತೇರ್ಗಡೆ ಹೊಂದಿರುವ 180 ದಿನಗಳ ನಂತರವೂ ಉದ್ಯೋಗ ದೊರಕದೆ, ಉನ್ನತ ವ್ಯಾಸಂಗಕ್ಕೆ ದಾಖಲಾಗದೆ ಇರುವ ಅಭ್ಯರ್ಥಿಗಳು ಈ ಯೋಜನೆಗೆ ಅರ್ಹರಿರುತ್ತಾರೆ. ಸ್ವಯಂ ಉದ್ಯೋಗ ಹೊಂದಿಲ್ಲದ ಅಭ್ಯರ್ಥಿಗಳು.



> ಉನ್ನತ ವಿದ್ಯಾಭ್ಯಾಸ ಮುಂದುವರಿಸದೇ ಇರುವ ಅಭ್ಯರ್ಥಿಗಳು, ಈ ಹಿನ್ನೆಲೆಯಲ್ಲಿ ಇಲಾಖಾ ವ್ಯಾಪ್ತಿಯ ಎಲ್ಲಾ ಪದವಿ/ ಸ್ನಾತಕೋತ್ತರ ಪದವಿ, ಇಂಜಿನಿಯರಿಂಗ್, ಡಿಪ್ಲೋಮ ಕಾಲೇಜುಗಳ ಪ್ರಾಂಶು ಪಾಲರುಗಳು 2023, 2024ನೇ ಸಾಲಿನಲ್ಲಿ ತಮ್ಮ ಕಾಲೇಜುಗಳಲ್ಲಿ ತೇರ್ಗಡೆ ಹೊಂದಿದ ವಿದ್ಯಾರ್ಥಿಗಳ ನೋಂದಣಿಗಾಗಿ ತಮ್ಮ ಕಾಲೇಜುಗಳಲ್ಲಿ ಯುವನಿಧಿ ವಿಶೇಷ ನೋಂದಣಿ ಸಹಾಯ ಕೇಂದ್ರಗಳನ್ನು ತೆರೆದು, ಕೇಂದ್ರಕ್ಕೆ ಅತ್ಯವಶ್ಯಕವಾಗಿ ಬೇಕಾದ ಗಣಕ ಯಂತ್ರ ವ್ಯವಸ್ಥೆ ಹಾಗೂ ಸಿಬ್ಬಂದಿ ನಿಯೋಜನೆ ಮಾಡಿಕೊಳ್ಳಲು ಸೂಚಿಸಲಾಗಿದೆ.

## ಮರುವಿನ್ಯಾಸ ಪ್ರಶ್ನಿಸಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಜಾಗೊಳಿಸಿದ ಕರ್ನಾಟಕ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ನಗರದ ಗಾಂಧಿ ಬಜಾರ್ ಪ್ರದೇಶದ ಮರುವಿನ್ಯಾಸವನ್ನು ಪ್ರಶ್ನಿಸಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿದೆ ಮುಖ್ಯ ನ್ಯಾಯಮೂರ್ತಿ ಎನ್.ವಿ.ಅಂಜಾರಿಯಾ ಮತ್ತು ನ್ಯಾಯಮೂರ್ತಿ ಕೆ.ವಿ.ಅರವಿಂದ್ ಅವರನ್ನೊಳಗೊಂಡ ವಿಭಾಗೀಯ ಪೀಠವು ಇಡೀ ಮರು–ಮಾಡೆಲಿಂಗ್ ಯೋಜನೆಯು ಸಾರ್ವಜನಿಕ ಅನುಕೂಲತೆ, ಸಾರ್ವಜನಿಕ ಹಿತಾಸಕ್ತಿಯನ್ನು ಗುರಿಯಾಗಿಸಿಕೊಂಡಿದೆ ಎಂದು ಅಭಿಪ್ರಾಯಪಟ್ಟಿದೆ.

ಹೆರಿಟೇಜ್ ಬಸವನಗುಡಿ ವೆರ್ ಫೋರಂ ಈ ಪಿಐಎಲ್ ಸಲ್ಲಿಸಿತ್ತು. ಗಾಂಧಿ ಬಜಾರ್ ಪ್ರದೇಶವು ಬೆಂಗಳೂರಿನ ಅತ್ಯಂತ ಹಳೆಯ ಪ್ರದೇಶಗಳಲ್ಲಿ ಒಂದಾಗಿದೆ ಮತ್ತು ನಗರದ ವೈಭವ ಮತ್ತು ಇತಿಹಾಸವನ್ನು ಪೂರೈಸುತ್ತದೆ ಎಂದು ಅರ್ಜಿದಾರರು ಹೇಳಿದ್ದಾರೆ.

ಅರ್ಜಿದಾರರ ಪ್ರಕಾರ, ಮರುವಿನ್ಯಾಸ ಯೋಜನೆಯು ಅವೈಜ್ಞಾನಿಕವಾಗಿದೆ ಮತ್ತು 90 ಅಡಿ ಮೋಟಾರು ರಸ್ತೆಯನ್ನು 23 ಅಡಿಗೆ ಇಳಿಸಲು ಯೋಜನೆ ಪ್ರಯತ್ನಿಸುತ್ತಿರುವುದರಿಂದ ಗಾಂಧಿ ಬಜಾರ್ ಪಾದಚಾರಿಗಳ ರಸ್ತೆಯನ್ನು ಮಾರ್ಪಡಿಸಲು ಅಥವಾ ಮರು ಮಾಡಲು ಅಧಿಕಾರಿಗಳಿಗೆ ನಿರ್ದೇಶನ ನೀಡುವ ಅವಶ್ಯಕತೆಯಿದೆ.ಯೋಜನೆಯನ್ನು ಸಮರ್ಥಿಸಿಕೊಂಡ ಅಧಿಕಾರಿಗಳು, ಗಾಂಧಿ ಬಜಾರ್ ರಸ್ತೆಯ ಮರುವಿನ್ಯಾಸವು ಉತ್ತಮ ಸಂಚಾರ ನಿರ್ವಹಣೆಗಾಗಿ ಎಂದು ಸಲ್ಲಿಸಿದರು.

# ಯಶವಂತಪುರ – ಚಿಕ್ಕಮಗಳೂರು ರೈಲಿಗೆ ಹೆಚ್ಚುವರಿ ನಿಲುಗಡೆ

## ಸಚಿವ ಸೋಮಣ್ಣ ಹಸಿರು ನಿಶಾನೆ ತೋರಲಿದ್ದಾರೆ ಎಂದು ನೈಋತ್ಯ ಇಲಾಖೆ ತನ್ನ ಪತ್ರಿಕಾ ಪ್ರಕಟಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಜನತೆಗೆ ಉತ್ತಮ ರೈಲು ಸಂಪರ್ಕ ಹಾಗೂ ವರ್ಧಿತ ಪ್ರಯಾಣಿಕರ ಸೌಕರ್ಯ ಕೊಡುವ ನಿಟ್ಟಿನಲ್ಲಿ ಇಂದಿನಿಂದ ಚಿಕ್ಕಮಗಳೂರು – ಯಶವಂತಪುರ ರೈಲಿಗೆ ಹೆಚ್ಚುವರಿ ನಿಲುಗಡೆ ಸಿಗಲಿದೆ. ಇದಕ್ಕೆ, ಕೇಂದ್ರ ರೈಲು ಮತ್ತು ಜಲಶಕ್ತಿ ರಾಜ್ಯ ಸಚಿವರಾದ ವಿ.ಸೋಮಣ್ಣ ಹಸಿರು ನಿಶಾನೆ ತೋರಲಿದ್ದಾರೆ.

ಕೇಂದ್ರದಲ್ಲಿ ಸಚಿವರಾದ ನಂತರ ವಹಿಸಿರುವ ಕೆಲಸವನ್ನು ಚುರುಕಿನಿಂದ ಮಾಡುತ್ತಿರುವ ಸಚಿವರು ಎನ್ನುವ ಹೆಗ್ಗಳಿಕೆಗೆ ಪಾತ್ರರಾಗಿರುವ ವಿ.ಸೋಮಣ್ಣ, ಯಶವಂತಪುರ – ಚಿಕ್ಕಮಗಳೂರು ರೈಲಿಗೆ ಹಸಿರು ನಿಶಾನೆ ತೋರಲಿದ್ದಾರೆ. ಅರಳಗುಪ್ಪೆಯಲ್ಲಿ ಹೆಚ್ಚುವರಿ ನಿಲುಗಡೆಯ ಮೂಲಕ ಇದು ಕಾರ್ಯಾರಂಭ ಮಾಡಲಿದೆ. ಟ್ರೈನ್ ನಂ 16240 ಮೇಲ್ ಎಕ್ಸಪ್ರೆಸ್ ಯಶವಂತಪುರ – ಚಿಕ್ಕಮಗಳೂರು ನಡುವೆ ಪ್ರತೀದಿನ ಸಂಚರಿಸಲಿದೆ

ಅರಳಗುಪ್ಪೆಯಲ್ಲಿರುವ ಚನ್ನಕೇಶವ ದೇವಾಲಯವು ಪ್ರಾಚೀನ ಧಾರ್ಮಿಕ ತಾಣ, ಪ್ರವಾಸೋದ್ಯಮಕ್ಕೆ ಉತ್ತೇಜನ

ಜನವರಿ 4ರಂದು ಮಧ್ಯಾಹ್ನ 4. 45ಕ್ಕೆ ಅರಳಗುಪ್ಪೆಯಲ್ಲಿ



ಉದಯವಾಹಿನಿ ಚಿತ್ರ

**ರೈಲ್ವೇ ಇಲಾಖೆ ಹೇಳಿದೆ**

ಹಸಿರು ನಿಶಾನೆ ತೋರಲಿರುವ ವಿ.ಸೋಮಣ್ಣ ಬೆಂಗಳೂರು ಯಶವಂತಪುರದಿಂದ ಚಿಕ್ಕಮಗಳೂರಿಗೆ ಎಕ್ಸಪ್ರೆಸ್ ರೈಲು, ಅರಳಗುಪ್ಪೆ ಯಲ್ಲಿ ಹೆಚ್ಚುವರಿ ನಿಲುಗಡೆಯೊಂದಿಗೆ ಇಂದಿನಿಂದ ಕಾರ್ಯಾರಂಭ ಮಾಡಲಿದೆ. ಜನವರಿ 4ರ ಸಂಜೆ 4.45ಕ್ಕೆ ಅರಳಗುಪ್ಪೆ ನಿಲ್ದಾಣದಲ್ಲಿ, ಸಚಿವ ಸೋಮಣ್ಣ ಹಸಿರು ನಿಶಾನೆ ತೋರಲಿದ್ದಾರೆ ಎಂದು ನೈಋತ್ಯ ಇಲಾಖೆ ತನ್ನ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದೆ. ಮಲೆನಾಡು ಮತ್ತು ದಕ್ಷಿಣ ಕರ್ನಾಟಕ ಪ್ರದೇಶದ ಸಾಮಾಜಿಕ, ಆರ್ಥಿಕ ವಹಿವಾಟನ್ನು ಹೆಚ್ಚಿಸಲು ಇದರಿಂದ ಸಹಕಾರಿಯಾಗಲಿದೆ.

### ನಿಲುಗಡೆ ಇರುವ ನಿಲ್ದಾಣಗಳು

ಚಿಕ್ಕಬಾಣಾವರ ಜಂಕ್ಷನ್, ಗೊಲ್ಲಹಳ್ಳಿ, ದೊಡ್ಡಬೆಲೆ, ನಿಡ್ವಾಂಡ, ಹಿರೇಹಳ್ಳಿ, ಕ್ಯಾತ್ಸಂದ್ರ, ತುಮಕೂರು, ಗುಬ್ಬಿ, ಅಮ್ಮಸಂದ್ರ, ಕರ್ಡಿ, ತಿಪಟೂರು, ಹೊನ್ನವಳ್ಳಿ ರಸ್ತೆ, ಅರಸೀಕೆರೆ (ಜಂ), ಬಾಣಾವರ, ದೇವನೂರು, ಕಡೂರು (ಜಂ), ಬಿಸಲೇಹಳ್ಳಿ, ಅರಳಗುಪ್ಪೆ, ಸಖರಾಯಪಟ್ಟಣ, ಕನಿವೇಹಳ್ಳಿ, ಚಿಕ್ಕಮಗಳೂರು.

ಪ್ರಯಾಣಿಕರಿಗೆ ವಿಶೇಷವಾಗಿ ಉದ್ಯಮಿಗಳು, ಸಾಫ್ಟ್‌ವೇರ್ ವೃತ್ತಿಪರರು, ವಿದ್ಯಾರ್ಥಿಗಳು ಮತ್ತು ರೈತರಿಗೆ ಅರಳಗುಪ್ಪೆ ಪ್ರದೇಶದಿಂದ ಬೆಂಗಳೂರು ಮತ್ತು ಚಿಕ್ಕಮಗಳೂರು ನಗರಗಳಿಗೆ ಪ್ರಯಾಣಿಸಲು ಇದರಿಂದ ಸಹಕಾರಿಯಾಗಲಿದೆ. ಟ್ರೈನ್ ನಂ 16240 ಮೇಲ್ ಎಕ್ಸಪ್ರೆಸ್ ಪ್ರತೀದಿನ ಸಂಚರಿಸಲಿದ್ದು ಬೆಂಗಳೂರಿನ ಯಶವಂತಪುರ ಜಂಕ್ಷನ್ ನಿಂದ ಮಧ್ಯಾಹ್ನ 3.30ಕ್ಕೆ ಪ್ಲ್ಯಾಟಫಾರಂ ಒಂದು ಅಥವಾ ಮೂರನೇ ನಂಬರಿನಿಂದ ಹೊರಡಲಿದೆ. ರಾತ್ರಿ 8.45ಕ್ಕೆ ಚಿಕ್ಕಮಗಳೂರು ನಿಲ್ದಾಣಕ್ಕೆ ತಲುಪಲಿದ್ದು ಒಟ್ಟಾರೆಯಾಗಿ 5.15 ತಾಸಿನ ಪ್ರಯಾಣವಾಗಿದೆ.

> ಅರಳಗುಪ್ಪೆಯಲ್ಲಿರುವ ಚನ್ನಕೇಶವ ದೇವಾಲಯವು ಪ್ರಾಚೀನ ಧಾರ್ಮಿಕ ತಾಣವಾಗಿದ್ದು, ಪ್ರವಾಸಿಗರಿಗೆ ಆಕರ್ಷಣೀಯ ಅನುಭವವನ್ನು ನೀಡುತ್ತದೆ. ಇದರಿಂದ ಅರಳಗುಪ್ಪೆ ಪಟ್ಟಣವು ಸಾಂಸ್ಕೃತಿಕ ಪ್ರವಾಸೋದ್ಯಮದ ಮಹತ್ವಪೂರ್ಣ ತಾಣವಾಗಿ ಹೊರಹೊಮ್ಮಲಿದೆ ಎಂದು ರೈಲ್ವೇ ಇಲಾಖೆ ಹೇಳಿದೆ.

ಚಿಕ್ಕಬಾಣಾವರದಲ್ಲಿ ಮೊದಲ ಸ್ಟಾಪ್ ಇರಲಿದ್ದು ಒಟ್ಟಿಗೆ 23 ನಿಲ್ದಾಣಗಳಲ್ಲಿ 1 ಅಥವಾ 2 ನಿಮಿಷ ನಿಲುಗಡೆ ಇರಲಿದೆ. ಕಡೂರು ನಿಲ್ದಾಣದಲ್ಲಿ 15 ನಿಮಿಷ ಮತ್ತು ಅರಸೀಕೆರೆ ಜಂಕ್ಷನ್ ನಲ್ಲಿ 5 ನಿಮಿಷ ನಿಲುಗಡೆ ಇರಲಿದೆ. 244 ಕಿಲೋಮೀಟರ್ ಪ್ರಯಾಣ ಇದಾಗಿದೆ.

ಚಿಕ್ಕಮಗಳೂರಿನಿಂದ (ಟ್ರೈನ್ ಸಂಖ್ಯೆ 16239) ಬೆಳಗ್ಗೆ 8ಗಂಟೆಗೆ ಹೊರಡುವ ರೈಲು, ಯಶವಂತಪುರಕ್ಕೆ ಮಧ್ಯಾಹ್ನ 2.30ಕೆ ಬರಲಿದೆ. ಇದು ಕೂಡಾ, ಕಡೂರು ಜಂಕ್ಷನ್ ನಲ್ಲಿ 15 ಮತ್ತು ಅರಸೀಕೆರೆಯಲ್ಲಿ 5 ನಿಮಿಷ ನಿಲ್ಲಲಿದೆ.

# 5 ದಶಕಗಳ ಬಳಿಕ ರಾಮನಗರದಲ್ಲಿ ಮತ್ತೆ ಸೊಂಪಾದ 'ಸಿರಿ'

## ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 60 ವರ್ಷಗಳ ಹಿಂದೆ ಸಿರಿಧಾನ್ಯದ ಕೃಷಿ ಇತ್ತು ಈಗ ಮತ್ತೆ ಚಿಗುರಿಸುವ ಪ್ರಯತ್ನ

• **ಉದಯವಾಹಿನಿ ಮಾಗಡಿ**

ಇತ್ತೀಚೆಗೆ ಎಲ್ಲಿ ನೋಡಿದರೂ ಸಿರಿಧಾನ್ಯಗಳದ್ದೇ ಮಾತು. ಆರೋಗ್ಯದ ನಿಟ್ಟಿನಿಂದ ಪ್ರಾಮುಖ್ಯ ಪಡೆಯುತ್ತಿರುವ ಕಿರುಧಾನ್ಯಗಳು ಈ ಹಿಂದೆ ವ್ಯಾಪಕವಾಗಿ ಬೆಳೆಯುತ್ತಿದ್ದ ಬೆಳೆಗಳೇ ಆಗಿವೆ. ಈಗ ರೇಷ್ಮೆ ಬೆಳೆಗೆ ಹೆಸರಾಗಿರುವ ರಾಮನಗರ ಜಿಲ್ಲೆಯಲ್ಲಿ ಕಿರುಧಾನ್ಯ ಬೆಳೆ ಮತ್ತೆ ತಲೆ ಎತ್ತುತ್ತಿದೆ. ಐವತ್ತು ವರ್ಷಗಳ ಹಿಂದೆ ರೇಷ್ಮೆ ಜಿಲ್ಲೆಯ ಮಣ್ಣಿನಲ್ಲಿ ಪಾರಮ್ಯ ಮೆರೆದು ಭತ್ತ, ಮಾವು, ಅಡಕೆ ಬೆಳೆಗಳ ಪ್ರಭಾವದಿಂದ ಮೂಲೆಗುಂಪಾಗಿದ್ದ ಸಿರಿಧಾನ್ಯ ಕೃಷಿ ಈಗ ರೇಷ್ಮೆ ನಾಡಿನ ಮಣ್ಣಿನಲ್ಲಿ ಹಂತ ಹಂತವಾಗಿ ಬೇರು ಬಿಡುತ್ತಿದೆ.

ಆಹಾರ ಪದಾರ್ಥಗಳಲ್ಲಿ ಈ ಧಾನ್ಯಗಳೇ ಅತ್ಯಂತ ಹಳೆಯ ಆಹಾರ. ರಾಗಿ, ಜೋಳ, ಸಜ್ಜೆ, ನವಣೆ, ಸಾಮೆ, ಹಾರಕ, ಬರಗು, ಕೊರಲೆ ಇವು ಕೆಲವು ಧಾನ್ಯಗಳು. ಈ ಧಾನ್ಯಗಳ ಕಾಳುಗಳು ಗಾತ್ರದಲ್ಲಿ ಚಿಕ್ಕದಾಗಿರುವುದರಿಂದ ಇವುಗಳನ್ನು ಕಿರುಧಾನ್ಯಗಳು ಎನ್ನುತ್ತಾರೆ. ಅಕ್ಕಿ, ಗೋಧಿ ಮತ್ತು ಜೋಳದ ಹೊರತಾಗಿ ದೊರೆಯುವ ಧಾನ್ಯಗಳೇ ಕಿರುಧಾನ್ಯಗಳು. ಇವುಗಳು

> **ರಾಮನಗರ, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 60 ವರ್ಷಗಳ ಹಿಂದೆ ಸಿರಿಧಾನ್ಯದ ಕೃಷಿ ಇತ್ತು, ಈಗ ಮತ್ತೆ ಚಿಗುರಿಸುವ ಪ್ರಯತ್ನಮಾಡಿದ್ದೇವೆ. ಜಿಲ್ಲೆಯ ರೈತರಿಗೆ ಅಗತ್ಯ ಸಿರಿಧಾನ್ಯ ಬಿತ್ತನೆ ಬೀಜಗಳನ್ನು ಒದಗಿಸಿ ಮಾರ್ಗದರ್ಶನ ಮಾಡುವ ಕೆಲಸ ಕೆವಿಕೆ ಮಾಡಲಿದೆ -ಡಾ.ದಿನೇಶ್, ಬೇಸಾಯ ಶಾಸ್ತ್ರ ವಿಜ್ಞಾನಿಗಳು**

ದುಂಡಗೆ ಹಲವು ಬಣ್ಣಗಳಲ್ಲಿವೆ. ಈ ಒಂದೊಂದು ಕಿರುಧಾನ್ಯಕ್ಕೂ ಅದರದ್ದೇ ಆದ ಸ್ವಂತ ರುಚಿಯಿದೆ. ಕೆಲವು ಕಿರುಧಾನ್ಯಗಳು ಸ್ವಲ್ಪ ಸಿಹಿಯಾಗಿದ್ದರೆ ಕೆಲವು ಸ್ವಲ್ಪ ಸಪ್ಪೆಯಾಗಿವೆ. ಇತ್ತೀಚೆಗೆ ಕಿರುಧಾನ್ಯಗಳಿಗೆ ಸಿರಿಧಾನ್ಯಗಳು ಎಂಬ ಹೆಸರೂ ಬಂದಿದೆ. ಸಿರಿ ಎಂದರೆ ಸಂಪತ್ತು. ಧಾನ್ಯ ಎಂದರೆ ಕಾಳುಗಳು. ಒಟ್ಟಾರೆ ಸಿರಿಧಾನ್ಯಗಳೆಂದರೆ ಪೌಷ್ಟಿಕಾಂಶಗಳೆಂಬ ಸಂಪತ್ತು ತುಂಬಿರುವ ಕಾಳುಗಳು. 1940ರ ಕಾಲದಲ್ಲಿ ಶೇ.40 ರಿಂದ 60 ರಷ್ಟು ಕೃಷಿ ಅಚ್ಚುಕಟ್ಟು ಪ್ರದೇಶ ಆವರಿಸಿದ್ದ


ಉದಯವಾಹಿನಿ ಚಿತ್ರ

### ಉತ್ಪಾದಕ ಸಂಸ್ಥೆಗಳ ಬೇಡಿಕೆ

**ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಮಿಲ್ಲೆಟ್, ಹೈದರಾಬಾದ್‌ನಿಂದ ಹೆಚ್ಚಾಗಿ ಜಿಲ್ಲೆಗೆ ಸಿರಿಧಾನ್ಯ ಬೀಜಗಳನ್ನು ತರಿಸಿಕೊಳ್ಳುವ ಕೆಲಸವಾಗುತ್ತಿದೆ. ಜತೆಗೆ ತಮಿಳುನಾಡಿನ ಕೊಯಮತ್ತೂರಿನಿಂದಲೂ ಸಿರಿಧಾನ್ಯ ಬಿತ್ತನೆ ಬೀಜಗಳು ಜಿಲ್ಲೆಯ ಕೆವಿಕೆ ಮತ್ತು ರೈತ ಉತ್ಪಾದಕ ಸಂಸ್ಥೆಗಳ ಬೇಡಿಕೆ ಮೇರೆಗೆ ಆಮದಾಗುತ್ತಿವೆ.**

ಸಿರಿಧಾನ್ಯಗಳ ಪೈಕಿ, ರಾಗಿಯನ್ನು ಹೊರತು ಪಡಿಸಿ ಮಿಕ್ಕುಳಿದ ಸಿರಿಧಾನ್ಯಗಳು ಕೃಷಿ ಭೂಮಿಯಿಂದ ಹಂತಹಂತವಾಗಿ ಮಾಯವಾಗಿದ್ದವು. ಬದಲಾದ ಜೀವನಶೈಲಿಯಿಂದ ಮಧುಮೇಹಿಗಳ ಸಂಖ್ಯೆ ಹೆಚ್ಚಿ, ಸಿರಿಧಾನ್ಯಗಳನ್ನು ಬಳಸಿ ಎಂಬ ವೈದ್ಯರ ಕೂಗು. ಮಾಲ್‌ಗಳು, ಅಂಗಡಿ ಮುಂಗಟ್ಟುಗಳಲ್ಲಿ ಸಿರಿಧಾನ್ಯ ಮಾರಾಟ, ಜತೆಗೆ ಸಿರಿಧಾನ್ಯ ಮೇಳಗಳ ಆಯೋಜನೆ, ಈ ಎಲ್ಲಾ ಕಾರಣಗಳಿಂದ ಜಿಲ್ಲೆಯ ರೈತರಲ್ಲಿ ಸಿರಿಧಾನ್ಯದ ಕುರಿತು ಅರಿವು ಮೂಡಿದ್ದು, ಜಿಲ್ಲೆಯ ರೈತರು ಸಿರಿಧಾನ್ಯ ಬೆಳೆಯುತ್ತಿದ್ದಾರೆ. ಹೀಗಾಗಿ ಮಣ್ಣಿನಲ್ಲಿ ಸಿರಿಧಾನ್ಯ ಬೇರೂರಲು ಕಾರಣವಾಗಿದೆ.

**ಜಿಲ್ಲೆಯಲ್ಲಿ ರೇಷ್ಮೆ ಮಣ್ಣಿನಲ್ಲಿ ಸಿರಿಧಾನ್ಯ**

ಜಿಲ್ಲೆಯ ಕೃಷಿ ಅಚ್ಚುಕಟ್ಟು ಪ್ರದೇಶದಲ್ಲಿ ರಾಗಿ 70 ಸಾವಿರ ಹೆಕ್ಟೇರ್ ಪ್ರದೇಶದಲ್ಲಿದ್ದರೆ, ಸಿರಿಧಾನ್ಯಗಳಾದ ನವಣೆ, ಸಾಮೆ, ಕೊರಲೆ, ಹಾರಕ 1500 ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಇದೆ. ಕಳೆದ ವರ್ಷಕ್ಕೆ ಹೋಲಿಸಿದರೆ 250 ಹೆಕ್ಟೇರ್ ಪ್ರದೇಶ ಹೆಚ್ಚಾಗಿ ಸಿರಿಧಾನ್ಯ ಬಿತ್ತನೆಯಾಗಿದೆ. ಸಿರಿಧಾನ್ಯ ಜಾಗೃತಿಗೆ ಜಿಲ್ಲೆಯಲ್ಲಿ ಕೃಷಿ ಇಲಾಖೆ ಜತೆಗೆ ಕೃಷಿ ವಿಜ್ಞಾನ ಕೇಂದ್ರಗಳು ಶ್ರಮಿಸುತ್ತಿವೆ. ಪ್ರತಿ ವರ್ಷವೂ ಒಂದೊಂದು ಸಿರಿ ಧಾನ್ಯಗಳನ್ನು ಪರಿಚಯಿಸಿ ಬೀಜೋತ್ಪಾದನೆ ಗುರಿಯಿಟ್ಟಿರುವ ಜಿಲ್ಲೆಯ ಕೃಷಿ ಇಲಾಖೆ ಮತ್ತು ಕೆವಿಕೆ ಈ ವರ್ಷ ಕೃಷಿ ವಿಜ್ಞಾನ ಕೇಂದ್ರದಿಂದ ಸಿಒವಿ-1 ಹಾರಕ ಎಂಬ ಧಾನ್ಯದ ತಳಿಯನ್ನು ತಂದು ಜಿಲ್ಲೆಯ ಮಾಗಡಿಯ ಚಕ್ರಬಾವಿ ಗ್ರಾಮದಲ್ಲಿ ರೈತರಿಂದ ಬೆಳೆಸಿ ಬೀಜೋತ್ಪಾದನೆ ಮತ್ತು ಸಿರಿಧಾನ್ಯ ಬೆಳೆಯುವ ಬಗ್ಗೆ ಪಾಠ ಮಾಡುತ್ತಿದ್ದಾರೆ.

ಕಳೆದ ವರ್ಷ ನವಣೆ ಧಾನ್ಯವನ್ನು ಮಾಗಡಿಯ ಸೋಲೂರಿನಲ್ಲಿ, ಕೊರಲೆಯನ್ನು ಕನಕಪುರ ತಾಲ್ಲೂಕಿನಲ್ಲಿ ಬೆಳೆಸಿ ಸಿರಿಧಾನ್ಯ ಭೂಮಿಯನ್ನು ವಿಸ್ತಾರ ಮಾಡುವ ಪ್ರಯತ್ನ ನಡೆದಿತ್ತು.

ಜಿಲ್ಲೆಯ ಮಾಗಡಿ ತಾಲ್ಲೂಕಿನ ಚಕ್ರಬಾವಿ, ಕುದೂರು, ಸೋಲೂರಿನ ಪೆಮ್ಮನಹಳ್ಳಿ, ಮರಳಗೊಂಡಳ, ತಿಪ್ಪಸಂದ್ರ ಹೋಬಳಿ ರಸ್ತೆಪಾಳ್ಯ, ತಿಗಳರಪಾಳ್ಯ ಚನ್ನಪಟ್ಟಣ ತಾಲ್ಲೂಕಿನ ವಿರೂಪಾಕ್ಷಿ ಪುರ ಹೋಬಳಿ, ಕನಕಪುರ ತಾಲ್ಲೂಕಿನ ಕೋಡಿಹಳ್ಳಿ ಭಾಗದಲ್ಲಿ ಹೆಚ್ಚಾಗಿ ಸಿರಿಧಾನ್ಯ ಕೃಷಿ ಚಿಗುರೊಡೆಯುತ್ತಿದೆ.

# ಡಿವೈಎಸ್ಪಿ ರಾಮಚಂದ್ರಪ್ಪನ ಮತ್ತೊಂದು 'ಕಾಮಪುರಾಣ' ಬಯಲಿಗೆಳೆದ ಮಹಿಳೆ

• **ಉದಯವಾಹಿನಿ ತುಮಕೂರು**

ಠಾಣೆಗೆ ದೂರು ನೀಡಲು ಬಂದಿದ್ದ ಮಹಿಳೆಯೊಂದಿಗೆ ರಾಸಲೀಲೆ ನಡೆಸಿದ್ದ ತುಮಕೂರು ಜಿಲ್ಲೆಯ ಮಧುಗಿರಿ ಠಾಣೆಯ ಡಿವೈಎಸ್ಪಿ ರಾಮಚಂದ್ರಪ್ಪನನ್ನು ಮಧುಗಿರಿಯ ಜೆಎಂಎಫ್‌ಸಿ ಕೋರ್ಟ್ 14 ದಿನಗಳ ಕಾಲ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ ಆದೇಶ ನೀಡಿದೆ.

ಇದರ ಬೆನ್ನಲ್ಲೇ ಇದೀಗ ಮತ್ತೊಂದು ಮಹಿಳೆ ಡಿವೈಎಸ್ಪಿ ರಾಮಚಂದ್ರಪ್ಪನ ವಿರುದ್ಧ ಗಂಭೀರವಾದ ಆರೋಪ ಮಾಡಿದ್ದಾರೆ.

ಹೌದು ಮಹಿಳೆಯೊಬ್ಬರು ವಿಡಿಯೋ ಮೂಲಕ ಡಿವೈಎಸ್ಪಿ ರಾಮಚಂದ್ರಪ್ಪನ ಕಾಮಪುರಾಣವನ್ನು ಬಯಲಿಗೆ ಎಳೆದಿದ್ದಾರೆ. ಅಜ್ಞಾತ ಸ್ಥಳದಲ್ಲಿ ವಿಡಿಯೋ ಮಾಡಿ ಹರಿಬಿಟ್ಟಿರುವ ಮಹಿಳೆ ಫೇಸ್ ಬುಕ್ ನಲ್ಲಿ ಪರಿಚಯವಾದಂತಹ ಗೆಳೆಯನಿಗೆ 12 ಲಕ್ಷಕ್ಕೂ ಅಧಿಕ ಹಣ ನೀಡಿ ವಂಚನೆಗೆ ಒಳಗಾಗಿದ್ದರು. ಈ ಕುರಿತು ಠಾಣೆಗೆ ದೂರು ನೀಡಲು ಮಹಿಳೆ ತನ್ನ ಗಂಡನ ಜೊತೆಗೆ ಆಗಮಿಸಿದ್ದಾರೆ. ತನ್ನ ಹಣವನ್ನು ವಾಪಸ್ ಕೊಡಿಸುವಂತೆ ದೂರು ನೀಡಿದ್ದರು.

ಬಳಿಕ ಆಕೆ ಹೆದರಿಕೊಂಡು ಕೊಠಡಿಯಲ್ಲಿಯೇ


ಉದಯವಾಹಿನಿ ಚಿತ್ರ

ಮೂತ್ರ ಮಾಡಿಕೊಂಡ ಮಹಿಳೆ, ಅಲ್ಲಿಂದ ತನ್ನ ಗಂಡನ ಹತ್ತಿರ ಬಂದು ಕುಳಿತಿದ್ದಾಳೆ. ಬಳಿಕ ಆತನಿಗೆ ಎಲ್ಲಾ ವಿಷಯವನ್ನು ತಿಳಿಸಿದಾಗ ಕಳೆದುಕೊಂಡ ಹಣವು ಬೇಡ ನಮಗೆ ಯಾವ ನ್ಯಾಯವೂ ಬೇಡ ಎಂದು ದಂಪತಿ ತೆರಳಿದ್ದಾರೆ.

ಆದರೆ ಕಳೆದ ಕೆಲವು ದಿನಗಳ ಹಿಂದೆ ಮತ್ತೊಬ್ಬ ಮಹಿಳೆ ಜೊತೆಗೆ ಡಿವೈಎಸ್ಪಿ ರಾಮಚಂದ್ರಪ್ಪ ರಾಸಲೀಲೆ ನಡೆಸಿದ್ದ ಪ್ರಕರಣ ಹೊರ ಬೀಳುತ್ತಿದ್ದಂತೆ ಈ ಮಹಿಳೆ ವಿಡಿಯೋ ಮೂಲಕ ರಾಮಚಂದ್ರಪ್ಪನ ಮತ್ತೊಂದು ಕಾಮಪುರಾಣ ಬಯಲಿಗೆ ಎಳೆದಿದ್ದಾಳೆ. ಹಾಗಾಗಿ ರಾಮಚಂದ್ರಪ್ಪ ವಿರುದ್ಧ ಮತ್ತೊಂದು ದೂರು ದಾಖಲಾಗುವ ಸಾಧ್ಯತೆ ಇದೆ ಎನ್ನಲಾಗಿದೆ.

### ತಂದೆಯ ಸಮಾನ ಎಂದರು ಬಿಡ್ಲಿಲ್ಲ

**ಈ ದೂರನ್ನು ಆಲಿಸಿ ಡಿವೈಎಸ್‌ಪಿ ರಾಮಚಂದ್ರಪ್ಪ ತನ್ನ ಕಚೇರಿಗೆ ಕರೆಸಿಕೊಂಡಿದ್ದ. ಈ ವೇಳೆ ಮಹಿಳೆ ಮಹಿಳಾ ಆಯೋಗಕ್ಕೆ ಕೂಡ ದೂರು ನೀಡಿದ್ದ ಮಹಿಳೆ, ಇದರ ಹಿನ್ನೆಲೆಯಲ್ಲಿ ಡಿವೈಎಸ್ಪಿ ರಾಮಚಂದ್ರಪ್ಪ ಆಕೆ ಗಂಡನನ್ನು ಮಾತ್ರ ಹೊರಗೆ ಕೂಡಿಸಿ ಆಕೆಯನ್ನು ಕೊಠಡಿಯ ಒಳಗೆ ಕರೆದಿದ್ದ. ಈ ವೇಳೆ ಮಹಿಳೆಯ ಜೊತೆಗೆ ಅಸಭ್ಯವಾಗಿ ವರ್ತಿಸಿದ ರಾಮಚಂದ್ರಪ್ಪ ಆಕೆಯ ದೇಹದ ಭಾಗಗಳಿಗೆ ಮುಟ್ಟಿ ಲೈಂಗಿಕ ದೌರ್ಜನ್ಯ ಎಸಗಿದ್ದಾನೆ. ನೀವು ನನ್ನ ತಂದೆಯ ಸಮಾನ ಎಂದು ಕಾಲಿಗೆ ಬಿದ್ದು ಬೇಡಿಕೊಂಡರು ಕೂಡ ಇದೆಲ್ಲ ಸಹಜ ಸಹಕರಿಸು ನಿನಗೆ 500 ರೂಪಾಯಿ ಕೊಡುತ್ತೇನೆ ಎಂದು ಹಣ ನೀಡಲು ಕೂಡ ಮುಂದಾಗಿದ್ದ ಎಂದು ಮಹಿಳ ಆರೋಪಿಸಿದ್ದಾಳೆ.**

# ಪ್ರೇಯಸಿಯನ್ನು ಭೇಟಿಯಾಗಿ ಹಿಂದಿರುಗುವಾಗ ಯುವಕನನ್ನು ಅಟ್ಟಾಡಿಸಿ ಕೊಂದ ಕುಟುಂಬಸ್ಥರು

• **ಉದಯವಾಹಿನಿ ಕೋಲಾರ**

ಕೋಲಾರದಲ್ಲಿ ಭೀಕರವಾದಂತಹ ಕೊಲೆ ನಡೆದಿದ್ದು, ಯುವಕನ ಅಟ್ಟಾಡಿಸಿ ಬರ್ಬರವಾಗಿ ಹತ್ಯೆ ಮಾಡಲಾಗಿದೆ. ಪ್ರೇಯಸಿಯ ಮನೆಗೆ ಹೋಗಿ ಹಿಂದಿರುಗುವಾಗ ಯುವಕನ ಮೇಲೆ ದಾಳಿ ನಡೆಸಲಾಗಿದೆ. ದಾಳಿಯಿಂದ ಗಂಭೀರವಾಗಿ ಗಾಯಗೊಂಡಿದ್ದ ಉಸ್ಮಾನ್ (28) ಎನ್ನುವ ಯುವಕ ಇದೀಗ ಸಾವನ್ನಪ್ಪಿದ್ದಾನೆ.

**ಯುವಕನ ಅಟ್ಟಾಡಿಸಿ ಬರ್ಬರ ಹತ್ಯೆ**

ಪ್ರೇಯಸಿಯ ಮನೆಗೆ ಹೋಗಿ ಹಿಂತಿರುಗುತ್ತಿದ್ದಾಗ ಆಕೆಯ ಕುಟುಂಬಸ್ಥರು ಹಾಗೂ ಸ್ಥಳೀಯರು ಅಟ್ಟಾಡಿಸಿ ಹೊಡೆದು ಹತ್ಯೆಗೈದ ಘಟನೆ ಕೋಲಾರದ ನೂರ್ ನಗರದಲ್ಲಿ ಮಧ್ಯರಾತ್ರಿ ನಡೆದಿದೆ. ಉಸ್ಮಾನ್ ತನ್ನ ಪ್ರೇಯಸಿ ಮನೆಗೆ ಹೋಗಿ ಬರುವಾಗ ಆಕೆಯ ಕುಟುಂಬಸ್ಥರು ಹಾಗೂ ಸ್ಥಳೀಯರು ಅಟ್ಟಾಡಿಸಿ ಹೊಡೆದಿದ್ದಾರೆ.

ಬಳಿಕ ಪೊಲೀಸರು ಆತನನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಕಾರಿಯಾಗದೆ ಆತ ಸಾವನ್ನಪ್ಪಿದ್ದಾನೆ. ಉಸ್ಮಾನ್ ಕಳೆದ 5 ವರ್ಷಗಳ ಹಿಂದೆ ಜಬೀನ್ ಎಂಬಾಕೆಯನ್ನು ಪ್ರೀತಿಸಿ ಮದುವೆಯಾಗಿದ್ದ.

ಆಕೆಗೆ ಕಿಡ್ನಿ ವಿಫಲವಾಗಿ ಅನಾರೋಗ್ಯದಿಂದ ಬಳಲುತ್ತಿದ್ದು, ಈ ವೇಳೆ ಆರೋಗ್ಯ ವಿಚಾರಿಸಲು ಬಂದಿದ್ದ ಜಬೀನಾ ಸಂಬಂಧಿ ಯುವತಿಯೊಂದಿಗೆ ಉಸ್ಮಾನ್‌ಗೆ ಪ್ರೀತಿಯಾಗಿದೆ. ಈ ವಿಷಯ ತಿಳಿದು ಆತನ ಪತ್ನಿ ಮಹಿಳಾ ಠಾಣೆಗೆ ದೂರು ನೀಡಿದ್ದಳು. ಬಳಿಕ ತನ್ನ ಪತಿಯಿಂದ ದೂರಾಗಿ ತವರು ಮನೆ ಸೇರಿದ್ದಳು ಎಂದು ತಿಳಿದು ಬಂದಿದೆ.

ಕೊಲೆಯಾದ ಉಸ್ಮಾನ್ ಕಳೆದ ರಾತ್ರಿ ತನ್ನ ಪ್ರೇಯಸಿಯ ಮನೆಗೆ ತೆರಳಿದ್ದ. ಅಲ್ಲದೇ ಆಕೆಯನ್ನು ಮದುವೆ ಮಾಡಿಕೊಡುವಂತೆ ಹೇಳಿದ್ದ. ಇದರಿಂದ ಆತ ವಾಪಸ್ ತೆರಳುತ್ತಿದ್ದಾಗ ಯುವತಿಯ ಕುಟುಂಬಸ್ಥರು ಹಾಗೂ ಸ್ಥಳೀಯರು, ಉಸ್ಮಾನ್‌ನನ್ನು ಏರಿಯಾದಲ್ಲಿ ಅಟ್ಟಾಡಿಸಿ ಹಲ್ಲೆ ನಡೆಸಿದ್ದರು.ಗಲ್ ಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

# ಮೇಲುಕೋಟೆಯಲ್ಲಿ ಆರಂಭವಾಗದ ಅನ್ನದಾನ

• **ಉದಯವಾಹಿನಿ, ಮೇಲುಕೋಟೆ**

ಇಲ್ಲಿನ ದೇವಸ್ಥಾನಗಳಿಗೆ ದಾನಿಗಳಿಂದ ಬರುವ ಆದಾಯ- ಹಾಗೂ ಸರ್ಕಾರದ ಅನುದಾನಕ್ಕೇನೂ ಕೊರತೆ ಇಲ್ಲ. ಆದರೆ, ಇಲ್ಲಿಗೆ ಬರುವ ಭಕ್ತರಿಗೆ ಉಚಿತವಾಗಿ ಸಿಗುವುದು ತೀರ್ಥವಷ್ಟೇ, ಬಹು ಕೋಟಿ ವೆಚ್ಚದಲ್ಲಿ ನಿರ್ಮಿಸಿದ ಭವನದಲ್ಲಿ ಉಚಿತ ಅನ್ನದಾನ ಆರಂಭಕ್ಕೆ ಗ್ರಹಣ ಹಿಡಿದಿದೆ. ಚೆಲುವ ನಾರಾಯಣ ಸ್ವಾಮಿ ದೇವಸ್ಥಾನ ಕೇಂದ್ರ ಪುರಾತತ್ವ ಇಲಾಖೆ, ಯೋಗಾನರಸಿಂಹ ಸ್ವಾಮಿ ದೇಗುಲ ರಾಜ್ಯ ಪುರಾತತ್ವ ಇಲಾಖೆಗೆ ಒಳಪಟ್ಟ ಪ್ರವರ್ಗ ಎ' ಅಧಿಸೂಚಿತ ದೇವಾಲಯಗಳಾಗಿದೆ.

ಇಲ್ಲಿನ ಪ್ರವಾಸಿ ತಾಣಗಳು ಪ್ರವಾಸೋದ್ಯಮ ಇಲಾಖೆ ಅಧೀನಕ್ಕೆ ಒಳಪಟ್ಟಿವೆ. ವರ್ಷಕ್ಕೆ ಕೋಟಿ ಕೋಟಿ ಅದಾಯ, ಸರ್ಕಾರಿ ಅನುದಾನ ಬಿಡುಗಡೆಯಾದರೂ ಕ್ಷೇತ್ರದ ಅಭಿವೃದ್ಧಿ ನಿರೀಕ್ಷೆಯಂತೆ ಆಗಿಲ್ಲ. ಪಂಚಕಲ್ಯಾಣಿ ಸಮೀಪದಲ್ಲಿ 2 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡ ಅನ್ನದಾನ ಭವನವನ್ನು ಅಂದು ಮುಂಖ್ಯಮಂತ್ರಿಯಾಗಿದ್ದ ಬಸವರಾಜ ಬೊಮ್ಮಾಯಿ ಉದ್ಘಾಟಿಸಿದ್ದರು. ಒಂದುವಾರ ಭಕ್ತರಿಗೆ ಅನ್ನದಾನ ನಡೆದಿತ್ತು. ಜಾತ್ರೆ ಬಳಿಕ ಸ್ಥಗಿತಗೊಂಡ ಅನ್ನಪ್ರಸಾದ ವ್ಯವಸ್ಥೆ ಇದುವರೆಗೂ


ಉದಯವಾಹಿನಿ ಚಿತ್ರ

ಆರಂಭವಾಗಿಲ್ಲ.

ಅನ್ನದಾಸೋಹ ಆರಂಭಕ್ಕೆ ಗ್ರಹಣ ಹೊರ ರಾಜ್ಯ - ಜಿಲ್ಲೆಗಳಿಂದ ದೇವರ ದರ್ಶನಕ್ಕೆ ಆಗಮಿಸುವ ಸಾವಿರಾರು ಸಂಖ್ಯೆಯ ಭಕ್ತರಿಗೆ ಕನಿಷ್ಠ ಒಂದು ಹೊತ್ತು ಅನ್ನ ಪ್ರಸಾದ ವ್ಯವಸ್ಥೆ ಕಲ್ಪಿಸಲು, ಇಲ್ಲಿನ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೂ ಯೋಗ್ಯತೆಯಿಲ್ಲವೇ ಎಂದು ಭಕ್ತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕಳೆದ ವರ್ಷ ಮುಜರಾಯಿ ಸಚಿವ ರಾಮಲಿಂಗಾರೆಡ್ಡಿ, ಅನ್ಯಕಾರಣಗಳಿಂದ ದಾಸೋಹ ಆರಂಭವಾಗಿಲ್ಲ. ಡಿಸೆಂಬರ್ ತಿಂಗಳಲ್ಲಿ ಭಕ್ತರಿಗೆ ಉಚಿತ ಅನ್ನದಾನಕ್ಕೆ ಚಾಲನೆ ನೀಡಲಾಗುವುದು ಎಂದು ತಿಳಿಸಿದ್ದರು. ಇನ್ನೂ ಯಾವುದೇ ಕ್ರಮ ಕೈಗೊಂಡಿಲ್ಲ.

# ನಿರ್ಬಂಧವಿದ್ದರೂ ಹೊರ ರಾಜ್ಯಗಳಿಗೆ ಭತ್ತದ ಹುಲ್ಲು ಮಾರಾಟ

• **ಉದಯವಾಹಿನಿ, ಚಾಮರಾಜನಗರ**

ಜಿಲ್ಲೆಯಿಂದ ಹೊರ ರಾಜ್ಯಗಳಿಗೆ ಮೇವು ಸಾಗಣೆ ಮಾಡಬಾರದು ಎಂದು ರಾಜ್ಯ ಸರಕಾರದಿಂದ ಆದೇಶ ವಿದ್ದರೂ ನೆರೆಯ ತಮಿಳುನಾಡು ಹಾಗೂ ಕೇರಳಕ್ಕೆ ಎಗ್ಗಿಲ್ಲದೇ ಸಾಗಿಸಲಾಗುತ್ತಿದೆ.

ಜಿಲ್ಲೆಯಲ್ಲಿ ಕಳೆದ ಬಾರಿ ಬೇಸಿಗೆಯಲ್ಲಿ ಹನೂರು, ಕೊಳ್ಳೇಗಾಲ ಹಾಗೂ ಚಾಮರಾಜನಗರ ತಾಲ್ಲೂಕಿನಲ್ಲಿ ಅತಿಯಾದ ಬರದಿಂದ ಮೇವಿನ ಅಭಾವ ಸೃಷ್ಟಿಯಾಗಿತ್ತು. ಆ ಸಂದರ್ಭದಲ್ಲಿ ರಾಜ್ಯ ಸರಕಾರದ ನಿರ್ದೇಶನದಂತೆ ಜಿಲ್ಲಾಡಳಿತದಿಂದ ಹೊರ ರಾಜ್ಯಗಳಿಗೆ ಮೇವು ಸಾಗಣೆ ಮಾಡುವುದನ್ನು ನಿರ್ಬಂಧಿಸಿ ಆದೇಶ ಹೊರಡಿಸಲಾಗಿತ್ತು. ಇದನ್ನು ಲೆಕ್ಕಿಸದೆ ಭಾರಿ ವಾಹನಗಳಲ್ಲೇ ಮೇವು ಸಾಗಿಸಲಾಗುತ್ತಿದೆ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈಗ ಸುಗ್ಗಿ ಕಾಲ. ಜಿಲ್ಲೆಯ ಯಳಂದೂರು, ಸಂತೇಮರಹಳ್ಳಿ ಹಾಗೂ ಕೊಳ್ಳೇಗಾಲ ತಾಲ್ಲೂಕಿನಲ್ಲಿ ಹೆಚ್ಚಾಗಿ ಬೆಳೆದಿದ್ದ ಭತ್ತದ ಫಸಲಿನ ಕಟಾವು ಮುಗಿದಿದೆ. ಅಲ್ಲಿನ ರೈತರು ಹೊರ ರಾಜ್ಯದವರಿಗೆ ಭತ್ತದ ಹುಲ್ಲನ್ನು ಮಾರಾಟ ಮಾಡಿದರೆ ಹೆಚ್ಚು ಹಣ ಸಿಗುತ್ತದೆ ಎಂಬ ಆಸೆಯಿಂದ ಹುಲ್ಲನ್ನು ಹೊರ ರಾಜ್ಯಕ್ಕೆ ಮಾರಾಟ


**ತ.ನಾಡು-ಕೇರಳಕ್ಕೆ ಮೇವು ಸಾಗಣೆ**

ಉದಯವಾಹಿನಿ ಚಿತ್ರ

ಮಾಡುತ್ತಿದ್ದಾರೆ.

ಜಿಲ್ಲೆಯಿಂದ ಹೊರ ರಾಜ್ಯಕ್ಕೆ ಮೇವು ಸಾಗಣೆ ಮಾಡಬಾರದು ಎಂಬ ಆದೇಶ ಜಿಲ್ಲೆಯಲ್ಲಿ ಕಟ್ಟುನಿಟ್ಟಾಗಿ ಪಾಲನೆಯಾಗಬೇಕಿದೆ. ಈ ನಿಟ್ಟಿನಲ್ಲಿ ಜಿಲ್ಲೆಯಿಂದ ಹೊರ ರಾಜ್ಯಕ್ಕೆ ಸಂಪರ್ಕ ಕಲ್ಪಿಸುವ ಚೆಕ್‌ಪೋಸ್ಟ್‌ಗಳಲ್ಲಿ ಬಿಗಿ ಭದ್ರತೆ ಹೆಚ್ಚಿಸಬೇಕಾಗಿದೆ.

ಜಿಲ್ಲೆಯ ಹನೂರು ತಾಲ್ಲೂಕಿನಲ್ಲಿರುವ ಪಾಲಾರ್, ಅರ್ಧನಾರಿಪುರ ಹಾಗೂ ಗರಿಕೆಕಂಡಿ (ನಾಲ್‌ರೋಡ್), ಚಾಮರಾಜನಗರ ತಾಲ್ಲೂಕಿನ ಪುಣಜನೂರು ಚೆಕ್‌ಪೋಸ್ಟ್ ಹಾಗೂ ಗುಂಡ್ಲುಪೇಟೆಯ ಮದ್ದೂರು ಚೆಕ್‌ಪೋಸ್ಟ್‌ನಿಂದ ಹೆಚ್ಚಾಗಿ ಹೊರ ರಾಜ್ಯಕ್ಕೆ ಮೇವು ತುಂಬಿದ ವಾಹನಗಳು ಹೋಗುವುದರಿಂದ ಅಲ್ಲಿ ಇದಕ್ಕೆ ಕಡಿವಾಣ ಹಾಕಬೇಕು.ಜಿಲ್ಲೆಯಿಂದ

> **ಜಿಲ್ಲಾಡಳಿತದಿಂದ ಮೇವು ಸಂಗ್ರಹಣೆ ಮಾಡಲು ಈಗಾಗಲೇ ಮನವಿ ಮಾಡಲಾಗಿದೆ. ಅಲ್ಲದೇ ಜಿಲ್ಲೆಯಿಂದ ಹೊರ ರಾಜ್ಯಕ್ಕೆ ಮೇವು ಹೋಗುತ್ತಿದ್ದು, ಈ ಬಗ್ಗೆ ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸುವ ಮೂಲಕ ಜಿಲ್ಲೆಯ ಜಾನುವಾರುಗಳಿಗೆ ಮೇವು ಸಂಗ್ರಹ ಮಾಡಬೇಕು -ಹೊನ್ನೂರು ಬಸವಣ್ಣ, ಜಿಲ್ಲಾಧ್ಯಕ್ಷ, ರೈತಸಂಘ**

ಹೊರ ರಾಜ್ಯಕ್ಕೆ ಮೇವು ಸಾಗಣೆ ಮಾಡುವುದನ್ನು ನಿರ್ಬಂಧಿಸಿ ಜಿಲ್ಲಾಡಳಿತದಿಂದ ಆದೇಶ ಹೊರಡಿಸಲಾಗಿದೆ. ಜಿಲ್ಲೆಯ ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಕಟ್ಟುನಿಟ್ಟಾಗಿ ಪಾಲನೆ ಮಾಡಲು ಸೂಚನೆ ನೀಡಲಾಗಿದೆ ಎಂದು ಗೀತಾ ಹುಡೇದ, ಹೆಚ್ಚುವರಿ ಜಿಲ್ಲಾಧಿಕಾರಿ.

ಹೊರ ರಾಜ್ಯಗಳಿಗೆ ಮೇವು ಸಾಗಧಿಣೆ ನಿರ್ಬಂಧ ವಿದ್ದರೂ ಪುಣಜನೂರು ಚೆಕ್‌ಪೋಸ್ಟ್ ಮೂಲಕ ತಮಿಳುನಾಡಿಗೆ ಮೇವು ಸಾಗಿಸುತ್ತಿದ್ದ ಎರಡು ವಾಹನಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಹನುಮೇಗೌಡ, ಉಪನಿರ್ದೇಶಕ, ಪಶು ಸಂಗೋಪನೆ ಇಲಾಖೆ ಹೇಳಿದ್ದಾರೆ.

# ಯೋಜನೆ ಅನುಷ್ಠಾನ ವೇಗ ತೃಪ್ತಿಕರವಾಗಿಲ್ಲ: ಸಂಸದ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ವಿವಿಧ ಯೋಜನೆಗಳಲ್ಲಿ ಹೆಚ್ಚಿನ ಗುರಿ ಸಾಧಿಸಲು ಸಂಸದ ಡಾ.ಕೆ. ಸುಧಾಕರ್ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ ಅಧ್ಯಕ್ಷತೆ ವಹಿಸಿ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲಿಸಿ ಮಾತನಾಡಿದರು. ಜಲಜೀವನ್ ಮಿಷನ್ ಯೋಜನೆಯು ಜಿಲ್ಲೆಯ ಗ್ರಾಮೀಣ ಭಾಗದ ಪ್ರತಿ ಮನೆಗೂ ನಳ ಸಂಪರ್ಕದ ಮೂಲಕ ಶುದ್ಧ ಕುಡಿಯುವ ನೀರು ಪೂರೈಸುವಂತಹುದು. ಇದಕ್ಕೆ ಜಿಲ್ಲೆಯ 1640 ಗ್ರಾಮಗಳಿಗೆ ಕೇಂದ್ರ ಸರ್ಕಾರ 993 ಕೋಟಿ ರೂ. ಬಿಡುಗಡೆಗೊಳಿಸಿದೆ. ದೂರದೃಷ್ಟಿಯ ಮತ್ತು ಮಹತ್ವದ ಯೋಜನೆಗಳ ಅನುಷ್ಠಾನದ ವೇಗ ತೃಪ್ತಿಕರವಾಗಿಲ್ಲ. ಈಗಲಾದರೂ ಸುಧಾರಣೆ ಕಾಣಬೇಕು. ನರೇಗಾ ಯೋಜನೆಯಡಿ ಜಿಲ್ಲೆಯಲ್ಲಿ ಮಾನವ ದಿನಗಳ ಸೃಜನೆಯನ್ನು ಹೆಚ್ಚಿಸಬೇಕು ಎಂದರು. ಮೊದಲಿನಿಂದಲೂ


ಉದಯವಾಹಿನಿ ಚಿತ್ರ

ಸರ್ಕಾರವು ಶಿಕ್ಷಣ, ಆರೋಗ್ಯ ಸೇರಿ ವಿವಿಧ ಕ್ಷೇತ್ರಗಳಿಗೆ ಅಗತ್ಯ ಮೂಲಸೌಕರ್ಯಕ್ಕೆ ಒತ್ತು ನೀಡುತ್ತಿದೆ. ರೈತರ ಆದಾಯ ದ್ವಿಗುಣಗೊಳ್ಳುವ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಕೆಲಸವಾಗುತ್ತಿದೆ ಎಂದರು. ಈ ಭಾಗದಲ್ಲಿ ಕೈಗಾರಿಕೆಗಳ ಸ್ಥಾಪನೆ, ಶಾಶ್ವತ ನೀರಾವರಿ ಯೋಜನೆಗಳ ಅನುಷ್ಠಾನ, ದೇಶದಲ್ಲಿಯೇ ಚಿಕ್ಕಬಳ್ಳಾಪುರವನ್ನು ಮಾದರಿಯ ಜಿಲ್ಲೆಯಾಗಿಸುವ ಬಗ್ಗೆ ಸಂಸದರು ಭರವಸೆ ನೀಡಿದರು.

ರಸ್ತೆ ವಿಸ್ತರಣೆ ಚರ್ಚೆ ಚಿಕ್ಕಬಳ್ಳಾಪುರ ನಗರಸಭೆ ವಾರ್ಡ್ ನಂ.30ರ ಬಳಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ ರಸ್ತೆ ವಿಸ್ತರಣೆಯ ಅಭಿವೃದ್ಧಿ ಕಾಮಗಾರಿಗೆ ಇರುವ ತೊಡಕುಗಳನ್ನು ಚರ್ಚಿಸಲು ಜ.13ರಂದು ರೈಲ್ವೆ ಇಲಾಖೆ ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಮತ್ತು ಜಿಲ್ಲಾಡಳಿತದ ಅಧಿಕಾರಿಗಳನ್ನೊಳಗೊಂಡ ಸಭೆ ಆಯೋಜನೆಗೆ ತೀರ್ಮಾನಿಸಲಾಗಿದೆ ಎಂದು ಸಂಸದರು ಮಾಹಿತಿ ನೀಡಿದರು.

> **ಕಿಸಾನ್ ಸನ್ಮಾನ್ ಯೋಜನೆಯಡಿ ಜಿಲ್ಲೆಗೆ 17 ಕಂತುಗಳಲ್ಲಿ 361 ಕೋಟಿ ರೂ. ರೈತರ ಖಾತೆಗೆ ನೇರವಾಗಿ ವರ್ಗಾವಣೆಯಾಗಿದೆ. ರೈತರ ಸಂಖ್ಯೆಗೆ ಹೋಲಿಸಿದರೆ ಫಸಲ್‌ಬಿಮಾ ಯೋಜನೆಗೆ ನೋಂದಾಯಿಸಿಕೊಂಡ ರೈತರ ಸಂಖ್ಯೆ ಕಡಿಮೆ ಇದೆ. ಇದರಿಂದ ಕೃಷಿ, ತೋಟಗಾರಿಕಾ ಇಲಾಖೆ ಹೆಚ್ಚಿನ ನೋಂದಣಿಗೆ ಜಾಗೃತಿ ಮೂಡಿಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.**

# ಎ ಎಸ್ ಐ ಮೇಲೆ ಹಲ್ಲೆ: ಆರೋಪಿ ಅಂದರ್

• **ಉದಯವಾಹಿನಿ, ಮಂಡ್ಯ**

ಠಾಣೆಗೆ ಕರೆದೊಯ್ಯಲು ಯತ್ನಿಸಿದಾಗ ಎಎಸ್‌ಐ ಅಧಿಕಾರಿಯೊಬ್ಬ ಮೇಲೆ ಆರೋಪಿಯೊಬ್ಬ ನಡು ರಸ್ತೆಯಲ್ಲಿಯೇ ಹಲ್ಲೆ ನಡೆಸಿದ್ದು ಆತನನ್ನು ಅರೆಸ್ಟ್ ಮಾಡಿರುವ ಘಟನೆ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲ್ಲೂಕಿನಲ್ಲಿ ನಡೆದಿದೆ. ನಾಗಮಂಗಲ ಗ್ರಾಮಾಂತರ ಎಎಸ್‌ಐ ರಾಜು ಮೇಲೆ ಮಜ್ಜನಕೊಪ್ಪಲು ಪೂಜಾರಿ ಕೃಷ್ಣ ಎಂಬಾತ ಹಲ್ಲೆ ಮಾಡಿದ್ದಾನೆ.

ಆರೋಪಿ ಕೃಷ್ಣನ ವಿರುದ್ಧ ಆತನ ತಾಯಿ ಠಾಣೆಗೆ ದೂರು ನೀಡಿದ್ದರು. ಹಣಕ್ಕೆ ಬೇಡಿಕೆ ಇಟ್ಟು ಪ್ರತಿ ದಿನ ಕಿರುಕುಳ ನೀಡುತ್ತಿದ್ದ ಎನ್ನಲಾಗಿದೆ. ದೂರಿನ ಹಿನ್ನೆಲೆಯಲ್ಲಿ ಕೃಷ್ಣನನ್ನು ಠಾಣೆಗೆ ಕರೆತರಲು ಎಎಸ್‌ಐ ರಾಜು ತೆರಳಿದ್ದರು.


ಉದಯವಾಹಿನಿ ಚಿತ್ರ

ನಾಗಮಂಗಲದ ಕೋರ್ಟ್ ಹತ್ತಿರ ನಿಂತಿದ್ದ ಕೃಷ್ಣನನ್ನು ಎಎಸ್‌ಐ ರಾಜು ಠಾಣೆಗೆ ಕರೆದಿದ್ದರು. ಠಾಣೆಗೆ ಬರಲು ಒಪ್ಪದಿದ್ದಾಗ ಕೃಷ್ಣನ ಕಾಲರ್ ಹಿಡಿದು ಬಲವಂತವಾಗಿ ಆಟೋಗೆ ಹತ್ತಿಸಲು ಎಎಸ್‌ಐ ಮುಂದಾಗಿದ್ದರು. ಈ ವೇಳೆ ಎಎಸ್‌ಐ ರಾಜುವನ್ನು ಕೃಷ್ಣ ತಳ್ಳಿದ್ದಾನೆ. ಆಗ ಅವರು ಕೆಳಗೆ ಬಿದ್ದಿದ್ದಾನೆ. ನಂತರ ಕೃಷ್ಣನನ್ನು ಬಂಧಿಸಿ ನ್ಯಾಯಾಲಯಕ್ಕೆ ಹಾಜರುಪಡಿಸಿದ್ದಾರೆ.

# 1,133 ಮಂದಿ ನಿರುದ್ಯೋಗಿ ಪದವೀಧರರ ಖಾತೆಗೆ ಹಣ ಜಮೆ

## ಯುವನಿಧಿ ಯೋಜನೆ ಜಾರಿಯಾಗಿ 1 ವರ್ಷ ವಾಗಿರುವ ಹಿನ್ನೆಲೆ 2ನೇ ವರ್ಷದ ನೋಂದಣಿಗೆ ಸರಕಾರದಿಂದ ಕ್ರಮ

• **ಉದಯವಾಹಿನಿ, ಮಡಿಕೇರಿ**

ಸರಕಾರದ ಪಂಚ ಗ್ಯಾರಂಟಿ ಯೋಜನೆಗಳಲ್ಲಿ ಒಂದಾದ ಯುವ ನಿಧಿಗೆ ನೋಂದಣಿ ಹೆಚ್ಚಿಸುವ ಸಲುವಾಗಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯಿಂದ ಅಭಿಯಾನ ಹಮ್ಮಿಕೊಳ್ಳಲಾಗಿದೆ.

ಯುವನಿಧಿ ಯೋಜನೆ ಜಾರಿಯಾಗಿ 1 ವರ್ಷವಾಗಿರುವ ಹಿನ್ನೆಲೆ 2ನೇ ವರ್ಷದ ನೋಂದಣಿಗೆ ಸರಕಾರದಿಂದ ಕ್ರಮ ವಹಿಸಲಾಗುತ್ತಿದ್ದು, ಎಲ್ಲಾ ಜಿಲ್ಲೆಗಳಲ್ಲಿ ನೋಂದಣಿ ಪ್ರಕ್ರಿಯೆ ಚುರುಕುಗೊಳಿಸಲಾಗುತ್ತಿದೆ. ಅದರಂತೆ ಕೊಡಗಿನಲ್ಲಿಯೂ ನೋಂದಣಿ ಅಭಿಯಾನ ಆರಂಭಿಸಲಾಗಿದ್ದು, ನಾನಾ ಕಾಲೇಜುಗಳಿಗೆ ತೆರಳಿ ಯೋಜನೆಯ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಕುಶಾಲನಗರದ ಕೊಡಗು ವಿಶ್ವವಿದ್ಯಾನಿಲಯ, ಸರಕಾರ ಪಾಲಿಟೆಕ್ನಿಕ್ ಮತ್ತು ಸರಕಾರಿ ಇಂಜಿನಿಯರಿಂಗ್ ಕಾಲೇಜಿಗೆ ಭೇಟಿ ನೀಡಿ ಜಾಗೃತಿ ಮೂಡಿಸಲಾಗಿದೆ.

ಇತರೆ ಜಿಲ್ಲೆಗಳಿಗೆ ಹೋಲಿಸಿದರೆ ಕೊಡಗಿನಲ್ಲಿ ಯುವನಿಧಿಗೆ ನೋಂದಣಿಯಾಗಿರುವವರ ಸಂಖ್ಯೆ ಕಡಿಮೆಯಿದೆ. ಕಳೆದ 1 ವರ್ಷದಲ್ಲಿ ಹೋಲಿಸಿದರೆ, ಕೊಡಗಿನಲ್ಲಿ ಯುವನಿಗೆ ನೋಂದಣಿಯಾಗಿರುವವರ ಸಂಖ್ಯೆ ಕಡಿಮೆಯಿದೆ. ಕಳೆದ 1 ವರ್ಷದಲ್ಲಿ ಜಿಲ್ಲೆಯಲ್ಲಿ 1262 ಮಂದಿ ಹೆಸರು ನೋಂದಾಯಿಸಿಕೊಂಡಿದ್ದು,

> **ಕೊಡಗು ಜಿಲ್ಲೆಯಲ್ಲಿ ಯುವನಿಧಿ ಯೋಜನೆಯಡಿ 1262 ಮಂದಿ ಹೆಸರು ನೋಂದಾಯಿಸಿದ್ದಾರೆ. ಅರ್ಜಿ ಸಲ್ಲಿಸಲು ಇನ್ನೂ ಅವಕಾಶವಿದ್ದು, ಸೇವಾ ಸಿಂಧು ಪೋರ್ಟಲ್ ಸೇರಿದಂತೆ ಕರ್ನಾಟಕ ಒನ್, ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳ ಮುಖಾಂತರ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಸಹಾಯವಾಣಿ ಸಂಖ್ಯೆ 18005999918 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದಾಗಿದೆ -ಸಿ.ಬಿ. ಮಂಜುನಾಥ್, ಜಿಲ್ಲಾಉದ್ಯೋಗ ವಿನಿಮಯ ಅಧಿಕಾರಿ, ಕೊಡಗು**



ಉದಯವಾಹಿನಿ ಚಿತ್ರ

1133 ಮಂದಿಗೆ ಡಿಬಿಟಿ ಮೂಲಕ ಪ್ರತಿ ತಿಂಗಳು ಹಣ ಪಾವತಿಯಾಗುತ್ತಿದೆ. ಪ್ರತಿ ತಿಂಗಳು ನಿರುದ್ಯೋಗಿ ಪದವೀದರರಿಗೆ 3 ಸಾವಿರ ರೂ. ಮತ್ತು ಡಿಪ್ಲೊಮಾ ತೇರ್ಗಡೆಯಾದವರಿಗೆ 1500 ರೂ. ಎರಡು ವರ್ಷಗಳವರೆಗೆ ಭರಿಸಲಾಗುತ್ತಿದೆ.

ಮಡಿಕೇರಿ 325, ಕುಶಾಲನಗರ 201, ಪೊನ್ನಂಪೇಟೆ 145, ಸೋಮವಾರಪೇಟೆ 363 ಮತ್ತು ವಿರಾಜಪೇಟೆ ತಾಲೂಕಿನಲ್ಲಿ 222 ಮಂದಿ ಯುವನಿಧಿ ಯೋಜನೆಯಡಿ ಹೆಸರು ನೋಂದಾಯಿಸಿದ್ದಾರೆ.

ಯುವನಿಧಿಯ 1133 ಮಂದಿಯಲ್ಲಿ ಸಾಮಾನ್ಯ ವರ್ಗದಲ್ಲಿ 947 ಮಂದಿ ಸೌಲಭ್ಯ ಪಡೆಯುತ್ತಿದ್ದು, 418 ಮಂದಿ ಪುರುಷ ಮತ್ತು 529 ಮಂದಿ ಮಹಿಳೆಯರು ಸೌಲಭ್ಯ ಪಡೆಯುತ್ತಿದ್ದಾರೆ. 128 ಪರಿಶಿಷ್ಟ ಅಭ್ಯರ್ಥಿಗಳಲ್ಲಿ 44 ಪುರುಷರು, 84 ಮಹಿಳೆಯರು, ಪರಿಶಿಷ್ಟ ಪಂಗಡದಲ್ಲಿ 41 ಮಂದಿ ಇದ್ದು, 15 ಪುರುಷ, 26 ಮಹಿಳೆಯರು ಇದ್ದಾರೆ. ಒಟ್ಟಾರೆ ಪದವಿ ವಿಭಾಗದಲ್ಲಿ 1116 ಮಂದಿ ಯುವನಿಧಿ ಸೌಲಭ್ಯ ಪಡೆಯುತ್ತಿದ್ದಾರೆ.

ಹಾಗೆಯೇ ಡಿಪ್ಲೊಮಾ ವಿಭಾಗದಲ್ಲಿ ಸಾಮಾನ್ಯ ವರ್ಗದಲ್ಲಿ 15 ಮಂದಿ ಇದ್ದು, 13 ಪುರುಷ, ಇಬ್ಬರು ಮಹಿಳೆ, ಹಾಗೆಯೇ ಪರಿಶಿಷ್ಟ ಜಾತಿಯಲ್ಲಿ ಒಬ್ಬ ಮಹಿಳೆ, ಪರಿಶಿಷ್ಟ ಪಂಗಡದಲ್ಲಿ ಒಬ್ಬ ಪುರುಷ ಒಟ್ಟು ಡಿಪ್ಲೊಮಾ ವಿಭಾಗದಲ್ಲಿ 17 ಮಂದಿ ಯುವ ನಿಧಿ ಸೌಲಭ್ಯ ಪಡೆಯುತ್ತಿದ್ದಾರೆ. ಒಟ್ಟಾರೆ 1133 ಮಂದಿ ಯುವನಿಧಿ ಸೌಲಭ್ಯ ಪಡೆಯುತ್ತಿದ್ದಾರೆ.

**ಯುವನಿಧಿಗೆ ಗ್ಯಾರಂಟಿ ಚುರುಕು**

### ನೋಂದಾಯಿಸಿಕೊಳ್ಳಲು ಸೇವಾ ಸಿಂಧು ಪೋರ್ಟಲ್

**ಯಾವುದೇ ಪದವಿ, ಡಿಪ್ಲೋಮಾ, ಸ್ನಾತಕೋತ್ತರ ಪದವಿ ಉತ್ತೀರ್ಣರಾಗಿ ಸರಕಾರಿ, ಖಾಸಗಿ, ಸ್ವಯಂ ಉದ್ಯೋಗ ಹೊಂದಿಲ್ಲದವರು ಮತ್ತು ಉನ್ನತ ವಿದ್ಯಾಭ್ಯಾಸ ಮುಂದುವರಿಸದೆ ಇರುವ ವಿದ್ಯಾರ್ಥಿಗಳು ಹೆಸರು ನೋಂದಾಯಿಸಿಕೊಳ್ಳಲು ಸೇವಾ ಸಿಂಧು ಪೋರ್ಟಲ್‌ಗೆ ಅನ್ನು ಭೇಟಿ ನೀಡಬಹುದಾಗಿದೆ. ಉಚಿತವಾಗಿ ಕರ್ನಾಟಕ ಒನ್, ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳ ಮುಖಾಂತರ ಅರ್ಜಿ ಸಲ್ಲಿಸಬಹುದ ಎಂದು ಉದ್ಯೋಗ ವಿನಿಮಯ ಅಕಾರಿ ತಿಳಿಸಿದ್ದಾರೆ.**



## ಮಿನಿ ನ್ಯೂಸ್

### ಜೆಡಿಎಸ್ ಮುಖಂಡ ಹತ್ಯೆ ಪ್ರಕರಣ ಇಬ್ಬರು ಆರೋಪಿಗಳು ಅರೆಸ್ಟ್

• **ಉದಯವಾಹಿನಿ ಚಿಕ್ಕಬಳ್ಳಾಪುರ**

ಜಿಲ್ಲೆಯ ತಮ್ಮನಾಯಕನಹಳ್ಳಿ ಗೇಟ್ ಬಳಿ ನಿನ್ನೆ ಲಾಂಗ್ ನಿಂದ ಕೊಚ್ಚಿ ಜೆಡಿಎಸ್ ಮುಖಂಡ ವೆಂಕಟೇಶ್ ನನ್ನು ಬರ್ಬರವಾಗಿ ಕೊಲೆ ಮಾಡಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ, ಇದೀಗ ಇಬ್ಬರು ಆರೋಪಿಗಳನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ.

ಬಂಧಿತ ಆರೋಪಿಗಳನ್ನು ಧನು ಅಲಿಯಾಸ್ ಧನರಾಜ್ ಹಾಗೂ ಆತನ ಸಹಚರ ಸತೀಶ್ ಎಂದು ಗುರುತಿಸಲಾಗಿದೆ. ಹಳೆಯ ದ್ವೇಷ ಹಿನ್ನಲೆ ಹತ್ಯೆ ಮಾಡಿದ್ದಾಗಿ ಆರೋಪಿಗಳು ಒಪ್ಪಿಕೊಂಡಿದ್ದಾರೆ ಎಂದು ಚಿಕ್ಕಬಳ್ಳಾಪುರ ಎಸ್ಪಿ ಕುಶಾಲ್ ಚೌಕ್ಸ್ ಮಾಹಿತಿ ನೀಡಿದ್ದಾರೆ.

ವೆಂಕಟೇಶ್ ತೆರಳುತ್ತಿದ್ದ ಸ್ಕೂಟಿಯನ್ನು ಅಡ್ಡಗಟ್ಟಿದ್ದ ಧನರಾಜ್ ಹಾಗೂ ಸತೀಶ್ ಮೊದಲು ಹಂದಿ ಕೊಯ್ಯುವ ಚಾಕುವಿನಿಂದ ಬೆನ್ನಿಗೆ ಇರಿದಿದ್ದರು. ನಂತರ ಹೊಟ್ಟೆ, ಮುಖಕ್ಕೆ ಮೂರು ಬಾರಿ ಹೊಡೆದಿದ್ದರು. ಅಲ್ಲದೇ ಕೈ ಕಟ್ ಮಾಡಿ ಸ್ಥಳದಿಂದ ಪರಾರಿಯಾಗಿದ್ದರು. ಇದೀಗ ಬಳಿಕ ಆರೋಪಿಗಳು ಬೆಂಗಳೂರಿನಲ್ಲಿ ರೂಮ್ ಮಾಡಿಕೊಂಡಿದ್ದರು. ಆರೋಪಿಗಳನ್ನು ಬಂಧಿಸಿ ಪೊಲೀಸರು ಹೆಚ್ಚಿನ ವಿಚಾರಣೆ ನಡೆಸುತ್ತಿದ್ದಾರೆ.

ಮೂರು ದಿನಗಳ ಹಿಂದೆ ತಮ್ಮನಾಯ್ಕನಹಳ್ಳಿ ಗೇಟ್ ಬಳಿ ಇರುವ ಬಾರ್ ಹತ್ತಿರ ಕೆಲವರು ಕುಡಿದು ಗಲಾಟೆ ಮಾಡುತ್ತಿದ್ದರಂತೆ. ಆಗ ವೆಂಕಟೇಶ್ ಅವರಿಗೆ ಬೈಯು ಬುದ್ದಿವಾದ ಹೇಳಿದ್ದರು. ಆಗ ಪುಂಡರು ವೆಂಕಟೇಶ್‌ರ ಜೊತೆ ಗಲಾಟೆ ತೆಗೆಯಲು ಮುಂದಾಗಿದ್ದರಂತೆ. ಇದನ್ನು ಬಿಟ್ಟರೆ ವೆಂಕಟೇಶ್ ಅವರಿಗೆ ಯಾರು ವೈರಿಗಳು ಇರಲಿಲ್ಲ.

### ಗರ್ಭಿಣಿ ಪ್ರಿಯತಮೆಯನ್ನು ಕೊಂದ ಪ್ರಿಯಕರ: ಆರೋಪಿ ಅರೆಸ್ಟ್

• **ಉದಯವಾಹಿನಿ ಚಿಕ್ಕಬಳ್ಳಾಪುರ**

ಪ್ರಿಯಕರನ ಜೊತೆಗೆ ಇದ್ದಾಗಲೇ ವಿವಾಹಿತ ಪ್ರಿಯತಮೆಯು ಅನುಮಾನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಗುಂತಪನಹಳ್ಳಿ ಬಳಿ ನೇಣು ಬಿಗಿದ ಸ್ಥಿತಿಯಲ್ಲಿ ಮಹಿಳೆಯ ಶವ ಪತ್ತೆಯಾಗಿದೆ. ಚಿಕ್ಕಬಳ್ಳಾಪುರದ ಬಾಪೂಜಿ ನಗರದ ನಿವಾಸಿ ಅನುಷಾ ಅನುಮಾನಾಸ್ಪದವಾಗಿ ಸಾವನ್ನಪ್ಪಿದ್ದಾರೆ.

ಪ್ರಿಯತಮೆಯನ್ನು ಪ್ರಿಯಕರನೆ ಕೊಂದಿದ್ದಾನೆ ಎಂದು ಶಂಕಿಸಿ ಇದೀಗ ಆತನನ್ನು ಪೊಲೀಸರು ಅರೆಸ್ಟ್ ಮಾಡಿದ್ದಾರೆ. ಹೌದು ಗುಂತಪ್ಪನಹಳ್ಳಿ ಬಳಿ ನೇಣು ಬಿಗಿದ ಸ್ಥಿತಿಯಲ್ಲಿ ಗರ್ಭಿಣಿ ಮಹಿಳೆಯ ಶವ ಪತ್ತೆಯಾಗಿದೆ. ಚಿಕ್ಕಬಳ್ಳಾಪುರದ ಬಾಪೂಜಿನಗರ ನಿವಾಸಿ ಅನುಷಾ ಅನುಮಾನಾಸ್ಪದ ಸಾವಾಗಿದೆ ವಿವಾಹಿತ ಪ್ರಿಯತಮೆ ಅನುಷಾ ಕೊಲ್ಲಲು ಪ್ರಿಯಕರ ಪವನ್ ಕಸರತ್ತು ನಡೆಸಿದ್ದ ಎನ್ನಲಾಗಿದೆ. ಗರ್ಭಿಣಿ ಅನುಷಾಗೆ ಮೊದಲು ಪವನ್ ವಿಷ ಕುಡಿಸಿ ಕೊಲ್ಲಲು ಯತ್ನಿಸಿದ್ದಾನೆ. ವಿಷ ಕುಡಿದರು ಬದುಕಿದ್ದ ಅನುಷಾ ಇದೀಗ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾಳೆ, ಹೊಂಗೆ ಮರದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಗರ್ಭಿಣಿ ಅನುಷಾ ಶವ ಪತ್ತೆಯಾಗಿದೆ. ಗುಂತಪ್ಪನಹಳ್ಳಿಯ ಪವನ್‌ನನ್ನು ಪೊಲೀಸರು ವಶಕ್ಕೆ ಪಡೆದುಕೊಂಡು ವಿಚಾರಣೆ ನಡೆಸುತ್ತಿದ್ದಾರೆ. ಘಟನೆ ಸ್ಥಳಕ್ಕೆ ಚಿಕ್ಕಬಳ್ಳಾಪುರ ಗ್ರಾಮಾಂತರ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆ.

### ನಾಡಿಗೆ ಬಂದು ಕಾಡಾನೆ ಒದ್ದಾಟ, ಕಾಂಕ್ರೀಟ್ ಪಿಲ್ಲರ್‌ಗಳ ಮಧ್ಯೆ ಸಿಲುಕಿ ನರಳಾಟ

• **ಉದಯವಾಹಿನಿ ಹುಣಸೂರು**

ಕಾಡು ಕಾಡುಗಳನ್ನು ದಾಟಿ ನಾಡಿಗೆ ಬಂದು ಕಂಬಗಳ ನಡುವೆ ಸಿಲುಕಿ ಒದ್ದಾಡಿ ಹೋಯಿತು ಒಂಟಿ ಸಲಗ. ಬಲಿಷ್ಠವಾದ ದಂತಗಳು, ಬೆಳೆದಿರುವ ದೇಹ, ದೂರದವರೆಗೂ ಕೇಳಿಸುವಷ್ಟು ಹೂಂಕಾರ,... ಆದ್ರೆ, ಎಷ್ಟೇ ಪ್ರಯತ್ನ ಪಟ್ಟರೂ ಕಾಂಕ್ರೀಟ್ ಪಿಲ್ಲರ್‌ಗಳ ಮಧ್ಯೆ ಸಿಲುಕಿಕೊಂಡ ದೇಹ ಮುಂದಕ್ಕೂ ಬರ್ತಿಲ್ಲಾ, ಮತ್ತೆ ಹಿಂದಕ್ಕೂ ಹೋಗೋಕೆ ಆಗ್ತಿಲ್ಲ. ಇಂಥ ಅತಂತ್ರ ಸ್ಥಿತಿಯಲ್ಲಿ ಚೀರಾಡುತ್ತಿದ್ದ ಆನೆಗೆ ಸ್ಥಿತಿಯನ್ನು ನೀವೂ ಒಮ್ಮೆ ನೋಡಿ.

ಇದು ಮೈಸೂರು ಜಿಲ್ಲೆಯ ಹುಣಸೂರು ತಾಲ್ಲೂಕಿನ ಮುದುಗನೂರು ಹೊಸಕೆರೆಯ ಸಮೀಪದಲ್ಲಿ ನಡೆದಿರುವ ಘಟನೆ. ನಾಗರಹೊಳೆ ಅಭಯಾರಣ್ಯದಿಂದ ನಾಡಿಗೆ ಬಂದಿದ್ದ ಒಂಟಿ ಆನೆಯು ವಾಪಸ್ಸು ಹೋಗುವಾಗ ಕೆರೆಯ ಬಳಿ ಕಾಂಕ್ರಿಟ್ ಪಿಲ್ಲರ್‌ಗೆ ಸಿಲುಕಿಕೊಂಡಿತ್ತು. ಆನೆ ಓಡಾಟವನ್ನು ತಡೆಯೋದಕ್ಕಾಗಿಯೇ ಹಾಕಿದ್ದ ಕಾಂಕ್ರಿಟ್ ಪಿಲ್ಲರ್‌ಗೆ ಸಿಲುಕಿಕೊಂಡಿತ್ತು. ಪದೇ ಪದೇ ಕಾಡಿನಿಂದ ನಾಡಿಗೆ ಬಂದು ಬೆಳೆ ನಾಶ ಮಾಡುತ್ತಿರುವ ಬಗ್ಗೆ ಸ್ಥಳೀಯರು ಅರಣ್ಯ ಇಲಾಖೆಗೆ ದೂರು ಕೊಟ್ಟಿದ್ದರು. ಒಂಟಿ ಸಲಗ ಈ ಹಿಂದೆಯೋ ನಾಡಿಗೆ ಬಂದು ಮತ್ತೆ ಕಾಡಿನತ್ತ ಮರೆಯಾಗಿತ್ತು ಎಂದು ತಿಳಿದು ಬಂದಿದೆ.

### ಬಾಗೇಪಲ್ಲಿಯಲ್ಲೂ ಉ.ಕರ್ನಾಟಕದ ಖಡಕ್ ಜೋಳದ ರೊಟ್ಟಿ

• **ಉದಯವಾಹಿನಿ ಬಾಗೇಪಲ್ಲಿ**

ಪಟ್ಟಣದ ಬ್ರಾಹ್ಮಣರ ಬೀದಿಯ ರಸ್ತೆಯಲ್ಲಿ ಬಸವೇಶ್ವರ ಖಾನಾವಳಿಯಲ್ಲಿ ಉತ್ತರ ಕರ್ನಾಟಕದ ಖಡಕ್ ಜೋಳದ ರೊಟ್ಟಿ ಊಟ ಸಿಗುತ್ತದೆ. ಮೂಲತಃ ರಾಯಚೂರು ಜಿಲ್ಲೆಯ ಲಿಂಗಸೂಗೂರು ತಾಲ್ಲೂಕಿನ ಮುದಗಲ್ ಗ್ರಾಮದ ಪಾಂಡುರಂಗಸುಗಂಧಿ, ಅಮರೇಶ್, ಉದಯ ಶಂಕರ್, ರಾಜೇಶ್ವರಿ ಕುಟುಂಬದವರು ಕಳೆದ 40 ವರ್ಷಗಳ ಹಿಂದೆ ಬಾಗೇಪಲ್ಲಿ ಪಟ್ಟಣಕ್ಕೆ ಬಂದಿದ್ದಾರೆ. ಪಟ್ಟಣದ ಬ್ರಾಹ್ಮಣರ ಬೀದಿಯ ರಸ್ತೆಯಲ್ಲಿ ಈ ಒಂದೇ ಕುಟುಂಬದವರು ಅಂಗಡಿಗೆ ಬಾಡಿಗೆಗೆ ಪಡೆದು ಬಸವೇಶ್ವರ ಖಾನಾವಳಿ ಪ್ರಾರಂಭಿಸಿದ್ದಾರೆ.

ಮೂಲತಃ ಉತ್ತರ ಕರ್ನಾಟಕದವರು ಆಗಿರುವುದರಿಂದ ಖಾನಾವಳಿಯಲ್ಲಿ ಬೆಳಗ್ಗೆ ಬೆಣ್ಣೆ ಮಸಾಲದೋಸೆ, ಸಾದಾದೋಸೆ, ಈರುಳ್ಳಿ ದೋಸೆ, ಇಡ್ಲಿ, ತಟ್ಟೆ ಇಡ್ಲಿ, ಚಿತ್ರಾನ್ನ, ರೈಸ್‌ಬಾತ್, ಪಲಾವ್ ಮಾಡುತ್ತಾರೆ. ಮಧ್ಯಾಹ್ನ ಮಾತ್ರ ಉತ್ತರ ಕರ್ನಾಟಕದ ಖಡಕ್ ಜೋಳದ ರೊಟ್ಟಿಗಳನ್ನು ಯಂತ್ರದ ಮೂಲಕ ತಯಾರು ಮಾಡುತ್ತಾರೆ. ಖಾನಾವಳಿಯ ಊಟಕ್ಕೆ ಮತ್ತು ಮಾರಾಟಕ್ಕೆ ತಯಾರು ಮಾಡುತ್ತಾರೆ.

ಜೋಳದ ರೊಟ್ಟಿಯ ಜೊತೆಗೆ ಬಿಸಿ ರೊಟ್ಟಿ, ಪಲ್ಯ, 3 ತರಹದ ಚಟ್ನಿ ಪುಡಿ, ಅನ್ನ, ಸಾರು, ರಸ, ಮೊಸರು ಜೊತೆಗೆ ಶ್ಯಾವಿಗೆ ಅಥವಾ ಹೆಸರುಬೇಳೆ ಪಾಯಸದ ಊಟ ಸಿಗುತ್ತದೆ. ಪ್ರತಿದಿನ 50 ಮಂದಿ ಜೋಳದ ರೊಟ್ಟಿ ಊಟ ಮಾಡುವವರಿದ್ದಾರೆ. ಒಂದು ಜೋಳದ ರೊಟ್ಟಿ ಬೆಲೆ 10 ಆಗಿದೆ. 5 ಜೋಳದ ರೊಟ್ಟಿ ಪೊಟ್ಟಣ ಮಾಡಿ ಮಾರಾಟ ಮಾಡುತ್ತಾರೆ ಖಾನಾವಳಿಯಲ್ಲಿ ಖಡಕ್ ಜೋಳದ ರೊಟ್ಟಿ ಊಟ 60ಕ್ಕೆ ಸಿಗುತ್ತದೆ. ಉಳಿದಂತೆ ಜನರು ತಟ್ಟೆ ಇಡ್ಲಿ. ದೋಸೆ ಸೇವಿಸುವ ಜೊತೆಗೆ ಮನೆಗೆ ಪಾರ್ಸಲ್ ಮಾಡಿಸುತ್ತಾರೆ. ಕೃಷಿ, ಕೂಲಿಕಾರ್ಮಿಕರು ಮಧ್ಯಾಹ್ನದ ಊಟ ಸೇವಿಸುತ್ತಾರೆ. ಬಹುತೇಕವಾಗಿ ಬಯಲು ಸೀಮೆಯ ಭಾಗದಲ್ಲಿ ರಾಗಿ, ಅಕ್ಕಿ, ಸಜ್ಜೆ ರೊಟ್ಟಿ ಸೇವಿಸುತ್ತಾರೆ.

ಅಂತರಾಳದಿಂದ.. EDITORIAL

# ಬಿರೇನ್ ಸಿಂಗ್ ಕ್ಷಮೆಯಾಚನೆ: ಹೊಣೆಗಾರಿಕೆ ಇಲ್ಲದ ಟೊಳ್ಳು ಮಾತು

ಮಣಿಪುರ ರಾಜ್ಯದಲ್ಲಿ ನಡೆದಿರುವ ವಿದ್ಯಮಾನಗಳ ವಿಚಾರವಾಗಿ ಅಲ್ಲಿನ ಮುಖ್ಯಮಂತ್ರಿ ಎನ್. ಬಿರೇನ್ ಸಿಂಗ್ ಅವರು ಕ್ಷಮೆ ಯಾಚಿಸಿರುವುದಕ್ಕೆ ಕಾರಣ ಏನು ಎಂಬುದು ಸ್ಪಷ್ಟವಾಗಿಲ್ಲ. 'ನಮ್ಮ ಹಿಂದಿನ ತಪ್ಪುಗಳನ್ನು ಮರೆಯುವಂತೆ, ಕ್ಷಮಿಸುವಂತೆ ಹಾಗೂ ಶಾಂತಿಯುತವಾದ ಮತ್ತು ಸಮೃದ್ಧವಾದ ಮಣಿಪುರದಲ್ಲಿ ಒಟ್ಟಾಗಿ ಹೊಸ ಜೀವನ ಆರಂಭಿಸುವಂತೆ ಎಲ್ಲ ಸಮುದಾಯಗಳಲ್ಲಿಯೂ ಮನವಿ ಮಾಡಿಕೊಳ್ಳಲು ಬಯಸುವೆ' ಎಂದು ಸಿಂಗ್ ಅವರು ಹೇಳಿದ್ದಾರೆ. ಇದು ಅವರು ನೀಡಿರುವ ಹೊಸ ವರ್ಷದ ಸಂದೇಶವಾಗಿರಬಹುದು. ಇದಕ್ಕೆ ಹೆಚ್ಚಿನ ಅರ್ಥ ಇಲ್ಲದಿರಬಹುದು. ಅಲ್ಲದೆ, ಬಹಳ ತಡವಾಗಿ ಬಂದಿರುವ ತೀರಾ ಚಿಕ್ಕ ಮಾತು ಇದು ಎಂದೂ ಭಾವಿಸಬಹುದು. ಸರಿಸುಮಾರು ಈ ಎರಡು ವರ್ಷಗಳ ಅವಧಿಯಲ್ಲಿ ರಾಜ್ಯದಲ್ಲಿ ನಡೆದ ಹಿಂಸಾಚಾರಕ್ಕೆ ಸಿಂಗ್ ಅವರು ಹೊಣೆ ಹೊತ್ತುಕೊಂಡಿದ್ದಾರೆ ಎನ್ನುವ ಸೂಚನೆಗಳು ಅವರ ಮಾತುಗಳಲ್ಲಿ ಇಲ್ಲ. ವಿಷಾದ ವ್ಯಕ್ತಪಡಿಸುವುದಾಗಿ ಸಿಂಗ್ ಹೇಳಿದ್ದಾರೆ. ಆದರೆ ವಿಷಾದ ವ್ಯಕ್ತಪಡಿಸುವುದಕ್ಕೂ ಪಶ್ಚಾತ್ತಾಪಪಡುವುದಕ್ಕೂ ವ್ಯತ್ಯಾಸ ಇದೆ. ಸಾರ್ವಜನಿಕರಿಗೆ ಉತ್ತರದಾಯಿ ಆಗಬೇಕಿರುವ ಹುದ್ದೆಗಳಲ್ಲಿ ಇರುವವರು ಪಶ್ಚಾತ್ತಾಪ ಇಲ್ಲದ ಕ್ಷಮೆ ಯಾಚನೆಯ ಮಾತನಾಡಿದಾಗ ಅದು ಟೊಳ್ಳಾಗಿ ಕಾಣಿಸುತ್ತದೆ. ಇಂತಹ ಹುದ್ದೆಗಳಲ್ಲಿ ಇರುವವರು ತಿಳಿದೋ ತಿಳಿಯದೆಯೋ ಆಗುವ ಲೋಪಗಳಿಗೆ ಹೊಣೆಗಾರರಾಗುತ್ತಾರೆ. ಮಣಿಪುರದಲ್ಲಿ ಆಗಿರುವುದು ಇಬ್ಬರು ವ್ಯಕ್ತಿಗಳ ನಡುವಿನ ಸಂಗತಿಯಲ್ಲ. ಕ್ರಮಿಸು ಮರೆತುಬಿಡು ಎಂದು ಹೇಳಬಹುದಾದ ಸಂಗತಿಯೂ ಅಲ್ಲ. ಸರ್ಕಾರದ ನೇತೃತ್ವ ವಹಿಸಿದವರಾಗಿ ಸಿಂಗ್ ಅವರು ತಮ್ಮದೇ ಪಕ್ಷದ ಶಾಸಕರ ಮತ್ತು ಮಿತ್ರಪಕ್ಷಗಳ ಶಾಸಕರ ವಿಶ್ವಾಸವನ್ನು ಕಳೆದುಕೊಂಡಿದ್ದಾರೆ. ಇಂತಹ ಪರಿಸ್ಥಿತಿಯಲ್ಲಿ ಅವರು ಕ್ಷಮೆ ಯಾಚನೆಯ ಮಾತು ಆಡುವುದು ವಿಶ್ವಾಸಾರ್ಹ ಆಗುವುದಿಲ್ಲ. ಕೇಂದ್ರ ಗೃಹ ಸಚಿವಾಲಯವು ಈಚೆಗೆ ಬಿಡುಗಡೆ ಮಾಡಿರುವ ವಾರ್ಷಿಕ ವರದಿಯು ಮಣಿಪುರದ ಈಗಿನ ಸ್ಥಿತಿಯನ್ನು ಸರಿಯಾಗಿ ಗ್ರಹಿಸುವ ಕೆಲಸ ಮಾಡಿಲ್ಲ, ಪಡೆಗಳನ್ನು ರವಾನಿಸಿದ್ದುದು. ಹಣಕಾಸಿನ ನೆರವು ಒದಗಿಸಿದ್ದುದು. ರಾಜ್ಯದ ಅಧಿಕಾರಿಗಳ ಜೊತೆ ಸಮಾಲೋಚನೆ ಮತ್ತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಮಣಿಪುರಕ್ಕೆ ಭೇಟಿ ನೀಡಿದ್ದುದು ಅಲ್ಲಿನ ಸಂಘರ್ಷವನ್ನು ಕೊನೆಗೊಳಿಸಲು ಕೈಗೊಂಡ ಕ್ರಮಗಳು ಎಂದು ವರದಿ ಹೇಳುತ್ತದೆ. ಈ ಕ್ರಮಗಳಿಂದ ಪ್ರಯೋಜನ ಆಗಿಲ್ಲ. ಹದಗೆಟ್ಟಿದ್ದ ಅಲ್ಲಿನ ಪರಿಸ್ಥಿತಿಯು ಇನ್ನಷ್ಟು ಮತ್ತಷ್ಟು ಹದಗೆಟ್ಟಿದೆ. ಪ್ರಧಾನಿ ನರೇಂದ್ರ ಮೋದಿ ಅವರು ಅಲ್ಲಿಗೆ ಭೇಟಿ ನೀಡದೇ ಇದ್ದುದು ಅಲ್ಲಿನ ಸ್ಥಿತಿಯ ಬಗ್ಗೆ ಕಾಳಜಿ ಇಲ್ಲವಾಗಿದ್ದುದನ್ನು ತೋರಿಸುತ್ತದೆ. ಮಣಿಪುರದಲ್ಲಿ ರಾಜ್ಯ ಸರ್ಕಾರವು ಕೇಂದ್ರದ ನೆರವಿನೊಂದಿಗೆ ಪರಿಸ್ಥಿತಿಯನ್ನು ಸಹಜವಾಗಿಸುವ ಕೆಲಸ ಮಾಡುತ್ತಿದೆ ಎಂದು ಹೇಳಿರುವುದು. ವಾಸ್ತವವನ್ನು ತಪ್ಪಾಗಿ ತೋರಿಸಿದ್ದಕ್ಕೆ ಸಾಕ್ಷ್ಯವಾಗಿ ನಿಲ್ಲುತ್ತದೆ. ಮಣಿಪುರದಲ್ಲಿ ಆಗಿರುವ ಹಾನಿಯನ್ನು ಕ್ಷಮೆ ಯಾಚನೆಯು ಸರಿಪಡಿಸುವುದಿಲ್ಲ. ಕ್ಷಮೆ ಕೇಳಿದ ನಂತರವೂ ಬಿರೇನ್ ಸಿಂಗ್ ಅವರು ಮಣಿಪುರದ ಇಂದಿನ ಸಮಸ್ಯೆಗಳಿಗೆ ಕಾಂಗ್ರೆಸ್ ನೇತೃತ್ವದ ಈ ಹಿಂದಿನ ಸರ್ಕಾರಗಳೇ ಹೊಣೆ ಎಂದು ದೂರಿದ್ದಾರೆ. ಅವರು ಕ್ಷಮೆ ಕೇಳಿದ ನಂತರ ಪಶ್ಚಿಮ ಇಂಫಾಲ್‌ನಲ್ಲಿ ಉಗ್ರರಿಂದ ದಾಳಿ ನಡೆದಿದೆ. ಮಣಿಪುರವು ಈಗ ಭೌಗೋಳಿಕವಾಗಿ, ರಾಜಕೀಯವಾಗಿ ಮತ್ತು ಮಾನಸಿಕವಾಗಿ ಎರಡು ಹೋಳಾಗಿದೆ. ಎರಡು ಗುಂಪುಗಳ ನಡುವೆ ಅರ್ಥಪೂರ್ಣವಾದ ಸಂವಾದ ಸಾಧ್ಯವಾಗುತ್ತಿಲ್ಲ. ರಾಜ್ಯ ಸರ್ಕಾರದ ಮೇಲೆ, ಮುಖ್ಯಮಂತ್ರಿಯ ಮೇಲೆ ವಿಶ್ವಾಸ ಉಳಿದಿಲ್ಲ. ಕ್ಷಮೆ ಯಾಚನೆಗೆ ಅರ್ಥ ಬರಬೇಕು ಎಂದಾದರೆ, ಆಗಿರುವುದಕ್ಕೆ ಹೊಣೆ ಹೊತ್ತುಕೊಳ್ಳುವ ಕೆಲಸವೂ ಅದರ ಜೊತೆಯಲ್ಲೇ ಆಗಬೇಕು. ಹೊಣೆಗೆ ಅನುಗುಣವಾಗಿ ಕೆಲಸಗಳೂ ಆಗಬೇಕು. ಪ್ರಜಾತಂತ್ರದಲ್ಲಿ ಉತ್ತರದಾಯಿತ್ವಕ್ಕೆ ಬಹಳ ಬೆಲೆ ಇದೆ.

> **ಮಣಿಪುರದಲ್ಲಿನ ಸಮಸ್ಯೆಗಳಿಗೆ ಬಿರೇನ್ ಸಿಂಗ್ ಅವರೂ ಕಾರಣ. ಏಕೆಂದರೆ, ಅವರು ತಮ್ಮನ್ನು ಮೃತೇಯಿ ಸಮುದಾಯದ ಜೊತೆ ಗುರುತಿಸಿಕೊಂಡರು. ಮೃತೇಯಿ ಸಮುದಾಯವು ಕುಕಿ ಸಮುದಾಯದ ಜೊತೆ ಹೊಂದಿರುವ ಸಂಘರ್ಷವೇ ಅಲ್ಲಿನ ಸಮಸ್ಯೆಗೆ ಮೂಲ ಕಾರಣ. ಮಣಿಪುರದ ಸಂಘರ್ಷದ ವಿಚಾರವಾಗಿ ಸಿಂಗ್ ಅವರು ತೃಪ್ತಿಕರ ಅಲ್ಲವೇ ಅಲ್ಲದ ಬಗೆಯಲ್ಲಿ ವಿವರಣೆಗಳನ್ನು ನೀಡಿದ್ದಾರೆ.**


## ಹೆಚ್.ಎಸ್.ಪ್ರತಿಮಾ ಹಾಸನ್‌ಗೆ ನಿತೋತ್ಸವ ಕನ್ನಡ ಸಿರಿ ಪ್ರಶಸ್ತಿ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಇತ್ತೀಚಿಗೆ ನಡೆದ ನಿತೋತ್ಸವ ಸಾಮಾಜಿಕ ಮತ್ತು ಸಾಂಸ್ಕೃತಿಕ ಸಂಘ (ರಿ ) ವತಿಯಿಂದ ಕಲಾಗ್ರಾಮ ಬೆಂಗಳೂರಿನಲ್ಲಿ ಕಾರ್ಯಕ್ರಮದಲ್ಲಿ ಸಾಧಕರಿಗೆ ಸನ್ಮಾನ ಮಾಡಲಾಗಿತು. ಹಾಸನದ ' ಪ್ರತಿಮಾ ಸಾಮಾಜಿಕ ಸಂಸ್ಕೃತಿಕ ಅಭಿವೃದ್ಧಿ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷರಾದಂತಹ ಹೆಚ್.ಎಸ್.ಪ್ರತಿಮಾ ಹಾಸನ್ ರವರಿಗೆ ಸಾಹಿತ್ಯ, ಶಿಕ್ಷಣ,ಸಾಮಾಜಿಕ ಸೇವೆ, ಸಾಂಸ್ಕೃತಿಕ ಸೇವೆ ಹಾಗೂ ಅಂತರಾಷ್ಟ್ರ ಮಟ್ಟದಲ್ಲಿ ಗುರುತಿಸಿಕೊಂಡಿರುವ ಇವರನ್ನು ನಿತ್ಯೋತ್ಸವ ಕನ್ನಡ ಸಿರಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದಂತಹ ನಿತ್ಯ ರವರು, ಶ್ರೀ ಪುರುಷೋತ್ತಮಾನಂದ ಪುರಿ ಮಹಾಸ್ವಾಮಿ, ಶ್ರೀಮತಿ ದೀಪಾ ಪ್ರಭಾಕರ್ ಮೈಶಾಳೆರವರು (ಕೆ.ಎ.ಎಸ್) ಇನ್ನೂ ಹಲವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ರಾಮಾಯಣ



### ಜನಕ ರಾಜನು ದಶರಥ ರಾಯನನ್ನು

• ಹಿಂದಿನ ಸಂಚಿಕೆಯಿಂದ 65 ನೆಯ ಅಧ್ಯಾಯ

ಈಗ ಅದೃಷ್ಟವಶ ದಿಂದ ವಿಶ್ವಾಮಿತ್ರಮುನೀಶ್ವರನು ನಿನ್ನ ಕುಮಾರರಾದ ರಾಮಲಕ್ಷ್ಮಣರನ್ನು ಕರೆದುಕೊಂಡು ಬರಲು, ಜನಕರಾಜನು ತನ್ನ ಮನೆಯಲ್ಲಿದ್ದ ಧನುಸ್ಸನ್ನು ಸಭೆಯಲ್ಲಿರಿಸಿ ರಾಮಲಕ್ಷ್ಮಣರಿಗೆ ತೋರಿಸಿದನು. ಶ್ರೀರಾಮನು ಆ ಬಿಲ್ಲನ್ನು ನೋಡಿ ಕೈಯಲ್ಲಿ ತೆಗೆದುಕೊಂಡು ಸಭಾಮಧ್ಯದಲ್ಲಿ ಸಮಸ್ಯ ಜನರೂ ನೋಡುತ್ತಿರಲು ಅದಕ್ಕೆ ಹೆದೆಯನ್ನೇರಿಸಿ ತನ್ನ ಕರ್ಣಪರ್ಯಂತ ಸೆಳೆಯಲು ಆ ಬಿಲ್ಲು ಭಗ್ನವಾಯಿತು ಪೂರ್ವದಲ್ಲಿ ದೇವದಾನವರೂ ಕದಲಿಸಲಾರದೇ ಇದ್ದ ಆ ಬಿಲ್ಲನ್ನು ಶ್ರೀರಾಮನು ಹೆದೆಯನ್ನೇರಿಸಿ ಟಂಕಾರಧ್ವನಿಮಾಡಿ ಮುರಿದದ್ದನ್ನು ನೋಡಿ ನಮ್ಮ ರಾಜನು ಅಂಥ ಪರಾಕ್ರಮವು ಜಗತ್ತಿನಲ್ಲೆಲ್ಲೂ ಕಂಡದ್ದಿಲ್ಲವೆಂದು ಶ್ರೀರಾಮನಿಗೆ ತನ್ನ ಮಗಳಾದ ಸೀತಾದೇವಿಯನ್ನು ಕೊಡಲು ನಿಶ್ಚಯಿಸಿ ನಿನ್ನನ್ನು ಕರೆತರಲು ನಮ್ಮನ್ನು ಕಳುಹಿಸಿದನು. ನೀನು ನಿನ್ನ ಪುರೋಹಿತ ಪುರಜನ ಪರಿವಾರಸಹಿತನಾಗಿ ಬಂದು ಶ್ರೀರಾಮನಿಗೆ ವಿವಾಹವನ್ನು ಮಾಡಿಸು'' ಎಂದು ಹೇಳಿದರು. ಆ ಮಾತನ್ನು ಕೇಳಿ ದಶರಥರಾಜನು ಆನಂದದಲ್ಲಿ ಮುಳುಗಿದನು. ಅವನು ತನ್ನ ಮಂತ್ರಿ ಗಳನ್ನೂ ಪುರೋಹಿತರನ್ನೂ ಕೂಡಿಕೊಂಡು ಆಲೋಚನೆಮಾಡುತ್ತ ಅವರನ್ನು ಕುರಿತು ಮಂತ್ರಿಗಳಿರಾ, ವಿಶ್ವಾಮಿತ್ರಮುನೀಶ್ವರನು ತನ್ನ ಯಜ್ಞಾರ್ಥವಾಗಿ ಕರೆದುಕೊಂಡು ಹೋಗಲು, ಆ ಯಾಗಸಂರಕ್ಷಣೆಯನ್ನು ಮಾಡಿ ಈಗ ಶ್ರೀರಾಮನು ಮಿಥಿಲಾಪಟ್ಟಣದಲ್ಲಿದ್ದಾನೆ. ಮಿಥಿಲಾ ಪಟ್ಟಣದ ದೊರೆಯಾದ ಜನಕರಾಜನು ಶ್ರೀರಾಮನ ಪರಾಕ್ರಮವನ್ನು ಕಂಡು ಕುಲಶೀಲವನ್ನು ವಿಚಾರಿಸಿ ತನ್ನ ಮಗಳಾದ ಸೀತಾದೇವಿಯನ್ನು ಶ್ರೀರಾಮನಿಗೆ ವಿವಾಹಮಾಡಿ ಕೊಡಲು ನಿಶ್ಚಯಿಸಿ ನಮ್ಮನ್ನು ವಿವಾಹಕ್ಕೆ ಕರೆಕಳುಹಿಸಿದ್ದಾನೆ ನಿಮ್ಮ ಮನಸ್ಸಿಗೆ ಸಮ್ಮತವಾದರೆ ಕಾಲವಿಳಂಬ ಮಾಡದೆ ಶೀಘ್ರದಲ್ಲಿ ಮಿಥಿಲಾಪಟ್ಟಣಕ್ಕೆ ಹೋಗೋಣ'' ಎಂದು ಹೇಳಿದನು ಆ ಮಂತ್ರಿಗಳು ಹರ್ಷದಿಂದ ಅವಕ್ಕೆ ಸಮ್ಮತಿಸಿದರು. ವಶರಥರಾಜನು ಮಾರನೆಯ ದಿವಸ ಪಯಣವೆಂದು ಸಾರಿಸಲು ಕಟ್ಟುಮಾಡಿದನು ಮಂತ್ರಿಗಳು ಆ ರಾತ್ರಿಯೇ ವಯಣಕ್ಕೆ ಸನ್ನಾದವನ್ನು ಮಾಡಿ ದಶರಥರಾಜನಿಗೆ ಬಿನ್ನಹಮಾಡಿದರು.

### ದಶರಥ ರಾಜನು ಮಿಥಿಲಾ ಪುರಿಗೆ ಬಂದದ್ದು

ಆ ಬಳಿಕ ರಾತ್ರಿಯು ಕಳೆದು ಪ್ರಾತಃಕಾಲವಾಗಲು ದಶರಥರಾಜನು ತನ್ನ ಮಂತ್ರಿ ಪುರೋಹಿತ ಬಂಧುಗಳನ್ನು ಕೂಡಿಕೊಂಡು ಅತ್ಯಂತ ಸಂತೋಷದಿಂದ ಸುಮಂತ್ರನೆಂಬ ಪ್ರಧಾನಿ ಯನ್ನು ಕರೆದು ಸುಮಂತ್ರ, ಎಲ್ಲಾ ಕೋಶಾಧಿಕಾರಿಗಳೂ ಪುಷ್ಕಳವಾದ ಧನರಾಶಿಯನ್ನೂ ನಾನು ರತ್ನಗಳನ್ನೂ ತೆಗೆದುಕೊಂಡು ಪ್ರಯಾಣಮಾಡತಕ್ಕದ್ದು ಚತುರಂಗಬಲಗಳು ಅವರ ಹಿಂದೆ ಹೊರಡಲಿ. ವಸಿಷ್ಟ, ವಾಮದೇವ, ಡಾಬಾಲಿ, ಕಾಶ್ಯಪ, ಮಾರ್ಕಂಡೇಯ ಕಾತ್ಯಾಯನರೇ ಮೊದಲಾದವರು ಅವರ ಹಿಂದೆ ತೆರಳಲಿ, ನನ್ನ ರಥವನ್ನು ಸಜ್ಜುಗೊಳಿಸು, ಕಾಲವಿಳಂಬವಿಲ್ಲದೆ ಶೀಘ್ರದಲ್ಲಿ ಎಲ್ಲರನ್ನೂ ಕಳುಹಿಸು ಎಂದು ಹೇಳಿದನು ಮುಂದುವರಿಯುವುದು...

## ಮಾನಸಪ್ರವೀಣ್ ಭಟ್



• ಉದಯವಾಹಿನಿ, ವಿಶೇಷ

# ಮಕ್ಕಳ ಸರ್ವತೋಮುಖ ಬೆಳವಣಿಗೆ ಪೋಷಕರ ಪಾತ್ರ ಮುಖ್ಯ



ಹೌದು ಸ್ನೇಹಿತರೆ ಪ್ರತಿಯೊಂದು ಮಗುವಿನ ವ್ಯಕ್ತಿತ್ವದಲ್ಲಿ ಆ ಮಗುವಿನ ತಂದೆ ತಾಯಿಯ ಪಾತ್ರ ಅತ್ಯಂತ ಮುಖ್ಯವಾಗಿದೆ.

ಒಂದು ಮಗು ನಿಮ್ಮ ಮುಂದೆ ನಿಂತು ಧೈರ್ಯವಾಗಿ ಉತ್ತಮ ನುಡಿಗಳನಾಡುತ್ತೆ ಎಂದರೆ ಅದಕ್ಕೆ ಕಾರಣ ಆ ಮಗುವಿನ ತಂದೆ ತಾಯಿ. ಉತ್ತಮ ಸಂಸ್ಕಾರ ಉಳ್ಳತಂದೆ ತಾಯಿಯನ್ನು ಪಡೆದಿರುವುದರಿಂದ ಆ ಮಗುವಿನಲ್ಲಿ ಉತ್ತಮ ಸಂಸ್ಕಾರಗಳು ಬಂದಿರುತ್ತದೆ. ಏಕೆಂದರೆ ಹಿರಿಯರು ಹೇಳಿದಂತೆ ಮನೆಯೇ ಮೊದಲ ಪಾಠ ಶಾಲೆ ತಾಯಿಯೇ ಮೊದಲ ಗುರು.

ಅಂದರೆ ಮನೆಯಲ್ಲಿನ ವಾತಾವರಣ ಹೇಗಿರುತ್ತದೆಯೋ ಹಾಗೆ ಮಕ್ಕಳು ಬೆಳೆಯುತ್ತಾರೆ. ಬೆಳಿಗ್ಗೆ ಎದ್ದಾಗಲಿಂದ ರಾತ್ರಿ ಮಲಗುವವರರೆಗೂ ಮಕ್ಕಳ ದಿನಚರಿಯಲ್ಲಿ ಪೋಷಕರ ಪಾತ್ರ ಅತೀ ಮುಖ್ಯವಾಗಿರುತ್ತದೆ. ತಮ್ಮ ಮಕ್ಕಳು ಇಂದು ಏನೆಲ್ಲ ಮಾಡಿದರು ಎಂದು ಗಮನಿಸಿ ಅದರಲ್ಲಿ ಉತ್ತಮ ಕಾರ್ಯ ನಿರ್ವಹಿಸಿದ್ದರೆ ಅವರನ್ನು ಪ್ರಶಂಸಿಸಿ,ಅವರೂ ತಮ್ಮ ಕಾರ್ಯದಲ್ಲಿ ಏನಾದರೂ ಕೊಂಚ ಎಡವಿದ್ದರೆ ಆ ಮುಗಿವಿನ ವಯಸ್ಸಿಗೆ ತಕ್ಕಂತೆ ತಿದ್ದಿತೀಡಿ ಬುದ್ದಿಯನ್ನು ಹೇಳುವುದರಲ್ಲಿ ತಂದೆತಾಯಿ ಹೆಚ್ಚಿನ ಪಾತ್ರ ವಹಿಸುತ್ತಾರೆ.ಇಂದಿನ ದಿನದಲ್ಲಿ ಕೆಲವು ತಂದೆ ತಾಯಿ ಈ ಪಾತ್ರ ನಿರ್ವಹಿಸುವಲ್ಲಿ ಕೊಂಚ ಎಡವುತ್ತಿದ್ದಾರೆ ಎನ್ನುವುದು ನನ್ನ ಅಭಿಪ್ರಾಯ ಏಕೆಂದರೆ ವಾಸ್ತವದಲ್ಲಿ ಅವರ ನಿರಂತರ ಕೆಲಸದ ಒತ್ತಡಗಳ ನಡುವೆ ತಮ್ಮ ತಾಳ್ಮೆ ಕಳೆದುಕೊಂಡು ಮಕ್ಕಳು ಮಾಡಿದ ಸಣ್ಣ ತಪ್ಪುಗಳನ್ನು ತಿದ್ದಿ ಬುದ್ದಿ ಹೇಳುವ ಬದಲು ದಂಡಂ ದಶಗುಣಂ ಎಂಬಂತೆ ತಮ್ಮ ಕೋಪ ತೋರಿಸಿಕೊಳ್ಳಲು ಪೆಟ್ಟು ಕೊಡುತ್ತಾರೆ. ಯಾವುದೇ ವಯಸ್ಸಿನ ಮಗುವಾದರೂ ಇದ್ದನ್ನು ಅಪೇಕ್ಷಿಸುದಿಲ್ಲ ಏಕೆಂದರೆ ಮಕ್ಕಳಿಗೂ ಕೂಡ ನೋವು, ಮನಸ್ಸಿಗೆ ಘಾಸಿ ಆಗುವುದುಂಟು.ಹಾಗಾಗಿ ಈ ಒಂದು ಸಂದರ್ಭದಲ್ಲಿ ಕೂಡ ಪೋಷಕರ ಪಾತ್ರ ಅತ್ಯಂತ ಮುಖ್ಯ. ಇನ್ನೂ ಕೆಲವು ಪೋಷಕರು ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ತಮ್ಮ ಮಕ್ಕಳಿಗೆ ಅಂಕಗಳಲ್ಲಿ ಆಗಿರಬಹುದು ಅಥವಾ ಯಾವುದೇ ಸ್ಪರ್ಧೆಯಲ್ಲಿ ಆಗಿರಬಹುದು ತಮ್ಮ ಮಗುವಿಗೆ ಪ್ರಥಮ ಸ್ಥಾನ ದೊರಕಬೇಕೆಂದು ಪಣತೊಟ್ಟಿರುತ್ತಾರೆ. ಅದಲ್ಲದೆ ಕೆಲವರಂತು ಬೇರೆಯವರ ಮಕ್ಕಳೊಂದಿಗೆ ತಮ್ಮ ಮಕ್ಕಳನ್ನು ಹೋಲಿಕೆ ಮಾಡಿ ನಿಂಧಿಸಿ ಮಕ್ಕಳ ಮನಸ್ಸನ್ನು ಘಾಸಿ ಗೊಳಿಸಿಬಿಡುತ್ತಾರೆ. ಕುಗ್ಗಿದ ಮಕ್ಕಳನ್ನು ಹುರಿದುಂಬಿಸುವ ಪ್ರಯತ್ನ ಮಾಡುವುದೇ ಇಲ್ಲ. ಇನ್ನೂ ಕೆಲವರು ತಮಗೆ ಇಷ್ಟ ಇರುವ ವಿಷಯ ಮಕ್ಕಳು ಓದಬೇಕು. ಅಂತದ್ದೇ ಉದ್ಯೋಗ ಪಡೆದುಕೊಳ್ಳಬೇಕು ಎಂಬ ಹಠ ಸಾಧಿಸುತ್ತಾರೆ. ಇದೆಲ್ಲ ಮಕ್ಕಳ ಮನಸನ್ನು ಒತ್ತಡಕ್ಕೆ ಒಳಪಡಿಸುತ್ತದೆ.ಹೀಗೆಲ್ಲ ಮಾಡುವುದರಿಂದ ಕೆಲವೊಮ್ಮೆ ಮಕ್ಕಳು ಮಾನಸಿಕ ಸ್ಥಿರತೆಯನ್ನು ಕಳೆದುಕೊಳ್ಳುತ್ತಾರೆ.ಇಂತಹ ಹತ್ತು ಹಲವು ಸಂದರ್ಭಗಳಲ್ಲಿ ಪೋಷಕರ ಪಾತ್ರ ಅತೀ ಮುಖ್ಯ. ಹಾಗೆಯೇ ಒಂದು ಮಗು ಜನಿಸಿದಾಗಿನಿಂದ ಆ ಮಗು ಒಂದು ಉತ್ತಮ ಹಂತಕ್ಕೆ ಹೋಗುವವರೆಗೂ ತಂದೆ ತಾಯಿಗಳ ಪಾತ್ರ ಅತೀ ಮುಖ್ಯ ಎಂದು ಹೇಳುತ್ತೇನೆ. ಮಗುವಿನ ತಂದೆ ತಾಯಿ ಆ ಮಗುವಿನೊಂದಿಗೆ ಸ್ನೇಹಿತರ ಹಾಗೆ ಬೆರೆತು ಅದರ ಎಲ್ಲ ತಪ್ಪುಗಳನ್ನು ತಿದ್ದುತ್ತ. ಉತ್ತಮ ಕೆಲಸ ಮಾಡಲು ಪ್ರೇರೇಪಿಸುತ್ತ. ಆ ಮಗುವಿನ ಸಾಧನೆಗಳಿಗಾಗಿ ಮೆಟ್ಟಿಲು ಹಾಕಬೇಕು. ಹೀಗೆ ಮಾಡಿದರೆ ಪ್ರತಿ ಮಗುವು ಅವರ ತಂದೆ ತಾಯಿ ಕಂಡ ಕನಸಿನನಂತೆ ಉತ್ತಮ ಸ್ಥಾನಕ್ಕೆರಲು ಸಾಧ್ಯವಾಗುತ್ತದೆ. ಜೊತೆಗೆ ನಿಮ್ಮ ಮಕ್ಕಳ ಕೈಗೆ ಜಂಗಮವಾಣಿ(ಮೊಬೈಲ್ ) ಕೊಡುವ ಬದಲು ಒಂದೊಳ್ಳೆ ಪುಸ್ತಕ ಕೊಡಿ ಜೊತೆಗೆ ಕೊಂಚ ನಿಮ್ಮ ಸಮಯವನ್ನು ಕೊಡಿ ನಿಮ್ಮ ಮಗು ಖಂಡಿತ ಉತ್ತಮ ಸ್ಥಾನಕ್ಕೆರಲು ಸಹಾಯವಾಗುತ್ತದೆ.

# ಅನಿಲ ಬರೆದ ಕತೆಗಳು ವಿವಿಗಳಿಗೆ ಪಠ್ಯವಾಗಿವೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಪುಸ್ತಕ ಬಿಡುಗಡೆ ಸಮಾರಂಭ**

ಅನಿಲ್ ಗುನ್ನಾಪೂರ ಅವರು ಬರೆದ ಸರ್ವೇ ನಂಬರ್-97 ಎಂಬ ಕಥಾಸಂಕಲನವನ್ನು ಹೊಂಗಿರಣ ಪ್ರಕಾಶನ, ಬುಕ್ ಬ್ರಹ್ಮ ಹಾಗೂ ನ್ಯಾಯ ಸ್ಪಂದನ ಬೆಂಗಳೂರು, ಓದು ಗೆಳೆಯರ ಬಳಗ, ಬಾಗಲಕೋಟೆ ಇವರ ಸಹಯೋಗದಲ್ಲಿ ಭಾನುವಾರ ಬೆಳಗ್ಗೆ 10.30ಕ್ಕೆ ಕನ್ನಡ ಸಾಹಿತ್ಯ ಪರಿಷತ್ ನ ಶ್ರೀ ಕೃಷ್ಣರಾಜ ಪರಿಷತ್ತು ಮಂದಿರದಲ್ಲಿ ಪುಸ್ತಕ ಬಿಡುಗಡೆ ಸಮಾರಂಭ ನಡೆಯಿತು.

'ಸರ್ವೆ ನಂಬರ್-97' ಕಥಾಸಂಕಲನವನ್ನು ಹಿರಿಯ ಕವಿ ಹಾಗೂ ಚಿಂತಕ ಡಾ. ಮೂಡ್ನಾಕೂಡು ಚಿನ್ನಸ್ವಾಮಿ, ರಘುನಾಥ ಚ.ಹ ಹಾಗೂ ಬಿಬಿಎಂಪಿ ವಲಯ ಆಯುಕ್ತರು ಮತ್ತು ಯಲಹಂಕ ವಲಯದ ಕರೀಗೌಡ (ಐಎಎಸ್), ಕವಯಿತ್ರಿ ಜ.ನಾ.ವೇಜಶ್ರೀ ಮತ್ತಿತರರು ಗಣ್ಯರು ಬಿಡುಗಡೆಗೊಳಿಸಿದರು.

ಡಾ. ಮೂಡ್ನಾಕೂಡು ಚಿನ್ನಸ್ವಾಮಿ ಮಾತನಾಡಿ ದ ಅವರು ನಮ್ಮ ಭೂಮಾಪನ ಇಲಾಖೆಯ ಇತಿಹಾಸವು ಕನ್ನಡ ಸಾಹಿತ್ಯದಲ್ಲಿ ಹೆಚ್ಚೆಚ್ಚು ಬರಲೆಂದು ಆಶಿಸುತ್ತ, ಅನಿಲ ಅವರು ಬರೆದ ಕತೆಗಳು ಹಲವು ವಿಶ್ವವಿದ್ಯಾಲಯಗಳಿಗೆ ಪಠ್ಯವಾಗಿವೆ ಹಾಗೂ ಪ್ರತಿ ಷ್ಠಿತ ಬಹುಮಾನವನ್ನು ಪಡೆದಿರುವ ಅನಿಲ ಗುನ್ನಾಪೂರ ಅವರಂತಹ ಲೇಖಕರನ್ನು ಮತ್ತು ಸಾಹಿತ್ಯಾಸಕ್ತರನ್ನು ಪ್ರೋತ್ಸಾಹಿಸುವುದು ನಮ್ಮೆಲ್ಲರ ಜವಾಬ್ದಾರಿ ಎಂದರು.

> **ಇಂಡಿ ತಾಲ್ಲೂಕಿನ ಲೇಖಕರು, ಪ್ರಸ್ತುತ ಬಾಗಲಕೋಟೆಯಲ್ಲಿ ಭೂಮಾಪಕರಾಗಿ ಸೇವೆ ಸಲ್ಲಿಸುತ್ತಿರುವ ಅನಿಲ್ ಗುನ್ನಾಪೂರ ಅವರ ಎರಡನೇ ಪುಸ್ತಕದಲ್ಲಿ ತಮ್ಮ ಅನುಭವಕ್ಕೆ ನಿಲುಕಿದ ಜೊತೆಯ ಜೀವಗಳ ಜೀವನವನ್ನು ಬೇರೆ ಜೀವಗಳಿಗೆ ಮುಟ್ಟಿಸುವಲ್ಲಿ ಯಶಸ್ವಿಯಾಗಿರುವುದು ಇದೊಂದು ವಿಶಿಷ್ಟವಾದದ್ದು, ಹಾಗೆ ಇನ್ನುಳಿದ ಕಥೆಗಳಲ್ಲೂ ಮನುಷ್ಯನ ಬದುಕಿನ ಸಂಕಟಗಳಿಗೆ ಕನ್ನಡಿ ಹಿಡಿದಿರುವರು ವಿಶೇಷವಾಗಿದೆ ಎಂದರು.**
> ರಘುನಾಥ ಚ.ಹ

ಇದೇ ಕಾರ್ಯಕ್ರಮದಲ್ಲಿ ಶೋಭಾ ಗುನ್ನಾಪುರ, ಹೈಕೋರ್ಟ್ ನ್ಯಾಯವಾದಿ ಸುನಿಲ್ ಗುನ್ನಾಪುರ, ವಿಶ್ವವಿದ್ಯಾಲಯದ ಪ್ರಾಧ್ಯಾಪಕರು, ಸಾಹಿತ್ಯ ಆಸಕ್ತರು, ಮತ್ತಿತರು ಭಾಗವಹಿಸಿದ್ದರು.

## ಮಂತ್ರಾಲಯ ಶ್ರೀಗಳಿಂದ ರಾಮಚಂದ್ರ ದೇವರ ಸಂಸ್ಥಾನ ಪೂಜೆ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬೆಂಗಳೂರಿನ ಜಯನಗರದ ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ 1008 ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರು ತಮ್ಮ ಅಮೃತ ಹಸ್ತದಿಂದ ಅಮೃತ ಹಸ್ತ ಪೂಜೆಯನ್ನು ನಡೆವೆರೆಸಿ ಭಕ್ತರಿಗೆ ಫಲಮಂತ್ರಾಂಶತೆ ಕೊಟ್ಟು ಅನುಗ್ರಹಿಸಿದರು ಈ ಸಂದರ್ಭದಲ್ಲಿ ವಿಶೇಷವಾಗಿ ಜಯನಗರ ಶಾಸಕರಾದ ಸಿ.ಕೆ. ರಾಮಮೂರ್ತಿ, ಬಸವನಗುಡಿ ಶಾಸಕರಾದ ರವಿ ಸುಬ್ರಮಣ್ಯ ಹಾಗೂ ಹಿಂದೂ ನಾಯಕರು ಮತ್ತು ಹೋರಾಟಗಾರರಾದ ಶ್ರೀ ತೇಜಸ್ ಗೌಡರವರು ಭೇಟಿಯಾಗಿ, ಗುರುಗಳ ಆಶೀರ್ವಾದವನ್ನು ಪಡೆದಿದ್ದಾರೆ. ಹಾಗೂ ಶ್ರೀ ಲಕ್ಷ್ಮೀನಾರಾಯಣ ರವರು ಶ್ರೀಗಳಿಂದ ಫಲಮಂತ್ರಾಂಶತೆ ಸ್ವೀಕರಿಸಿ ಗುರುಗಳ ಅನುಗ್ರಹಕ್ಕೆ ಪಾತ್ರರಾದರು ಈ ಸಂದರ್ಭದಲ್ಲಿ ಶ್ರೀಮಠದ ವ್ಯವಸ್ಥಾಪಕರಾದ ಆರ್ ಕೆ ವಾದಿಂದ್ರ ಆಚಾರ್ಯರು ಮತ್ತು ಶ್ರೀ ನಂದಕಿಶೋರ್ ಆಚಾರ್ಯರು ಉಪಸ್ಥಿತರಿದ್ದರು

## ವಾಸವಿ ಕನ್ವೆನ್ಷನ್ ಸೆಂಟರ್‌ನಲ್ಲಿ ಆದಿಶೇಷ ಧಾರ್ಮಿಕ ಮಹೋತ್ಸವ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

ಬಸವನಗುಡಿಯ ವಾಸವಿ ಕನ್ವೆನ್ಷನ್ ಸೆಂಟರ್ ನಲ್ಲಿ ಶ್ರೀ ಲಕ್ಷ್ಮೀ ಆದಿನಾರಾಯಣ ಸ್ವಾಮಿ ಚಾರಿಟೇಬಲ್ ಟ್ರಸ್ಟ್ ನಿಂದ ವಿಶ್ವಶಾಂತಿ ಮತ್ತು ಮನುಕುಲದ ಒಳಿತಿಗಾಗಿ ''ಭಗವಾನ್ ವಿಷ್ಣುವಿನ ದಶಾವತಾರ, ಏಳೂರ್ಡು ಅಧಿನಾರಾಯಣ, ಲಕ್ಷ್ಮೀ ನಾರಾಯಣ, ವೆಂಕಟೇಶ್ವರ, ಶ್ರೀ ದೇವಿ, ಭೂದೇವಿ, ಹನುಮಂತ, ಗರುಡ, ಹೂವಿನ ಅಲಂಕಾರ ಮತ್ತು ಸುತ್ತಲೂ ಹೂವುಗಳ ಮೇಲೆ ಆದಿಶೇಷನನ್ನು ರಚಿಸಿ ಪೂಜಿಸಲಾಯಿತು.

ಶನಿವಾರ ಮತ್ತು ಭಾನುವಾರ ನಡೆದ ಈ ಧಾರ್ಮಿಕ ಮಹೋತ್ಸವದಲ್ಲಿ ಶ್ರೀ ಸತ್ಯನಾರಾಯಣ ಸ್ವಾಮಿ ವ್ರತ, ಸೀತಾ ರಾಮ ಕಲ್ಯಾಣ ಮತ್ತು ಆದಿ ನಾರಾಯಣ ಕಲ್ಯಾಣವನ್ನು ವಿಜೃಂಭಣೆಯಿಂದ ನೆರವೇರಿಸಲಾಯಿತು.

ಶ್ರೀ ಲಕ್ಷ್ಮೀ ಆದಿನಾರಾಯಣ ಸ್ವಾಮಿ ಚಾರಿಟೇಬಲ್ ಟ್ರಸ್ಟ್ ಕಾರ್ಯದರ್ಶಿ ಡಾ.ವಿಷ್ಣು ಭರತ್ ಆಲಂಪಲ್ಲಿ ಮಾತನಾಡಿ, 10 ವರ್ಷಗಳಲ್ಲಿ ಇದು ನಾಲ್ಕನೇ ವೈಭವದ ಧಾರ್ಮಿಕ ಮಹೋತ್ಸವವಾಗಿದೆ.

ಶ್ರೀ ಚಿಕ್ಕಬಳ್ಳಾಪುರ ಜಿಲ್ಲೆಯ ಗುಡಿಬಂಡೆಯ ಎಳೂರ್ಡು ಎಂಬ ಸ್ಥಳದಲ್ಲಿ ಅಧಿನಾರಾಯಣ ದೇವರು ಉದ್ಭವ ಮೂರ್ತಿಯಾಗಿದ್ದು, ತಿರುಪತಿಗೆ ತೆರಳುವ ಮೊದಲು ವೆಂಕಟೇಶ್ವರನು ಈ ಸ್ಥಳಕ್ಕೆ ಬಂದಿದ್ದನೆಂದು ನಂಬಲಾಗಿದೆ. ಹಾಗಾಗಿ ಈ ದೇವರನ್ನು ಆದಿ ನಾರಾಯಣ ಎಂದು ಕರೆಯುತ್ತಾರೆ.

ಭಾರತದಲ್ಲಿ ಒಟ್ಟು 107 ದಿವ್ಯ ದರ್ಶನಗಳಿದ್ದು, ಇದು 108ನೇ ವೈಕುಂಠ ದರ್ಶನವಾಗಿದೆ ಎಂದರು. ಟ್ರಸ್ಟ್ ಅಧ್ಯಕ್ಷ ಎನ್ ಎಸ್ ನಾಗರಾಜ್, ಉಪಾಧ್ಯಕ್ಷ ಕೆ.ಆರ್. ಚಂದ್ರಶೇಖರ್ ಖಜಾಂಚಿ ರಾಘವೇಂದ್ರ, ಯುವ ಮುಖಂಡರಾದ ಅನಿಲ್ ಕುಮಾರ್, ಅಭಿಲಾಷ್, ಸಿಎ ಕಿರಣ್, ಅರ್ಜುನ್, ಪ್ರಸನ್ನ ಮತ್ತಿತರರು ಮಹೋತ್ಸವದ ಉಸ್ತುವಾರಿ ವಹಿಸಿದ್ದರು.

# ಕರ್ನಾಟಕ ರಾಜ್ಯ ದ್ವಿತೀಯ ಮಂದಿರ ಅಧಿವೇಶನದಲ್ಲಿ 800ಕ್ಕೂ ಹೆಚ್ಚು ವಿಶ್ವಸ್ಥರ ನಿರ್ಧಾರ

• ಉದಯವಾಹಿನಿ, ಬೆಂಗಳೂರು


ಉದಯವಾಹಿನಿ ಚಿತ್ರ

**ಪೂಜ್ಯ ಸಿದ್ಧಲಿಂಗ ಸ್ವಾಮಿಜಿ ಸಲಹೆ**

ಸಾಮಾಜಿಕ, ನ್ಯಾಯ , ಕುಟುಂಬ, ಶಿಕ್ಷಣ ವ್ಯವಸ್ಥೆಯನ್ನು ಒಂದೊಂದಾಗಿ ನಾವೇ ಸರ್ಕಾರಕ್ಕೆ ಒಪ್ಪಿಸಿದ್ದೇವೆ. ಸಮಾಜ ಸರಕಾರದ ಅಧೀನವಾಗುವುದು ದೈನ್ಯ ಪರಿಸ್ಥಿತಿಯಾಗಿದೆ.

ಪ್ರತಿಯೊಂದು ವ್ಯವಸ್ಥೆಯಲ್ಲಿ ಸಮಾಜದ ಜನರು ಧರ್ಮದ ಆಧಾರವನ್ನು ಇಟ್ಟುಕೊಂಡು ಜೀವನ ನಡೆಸಿದರೆ ನಮ್ಮ ಸರ್ವಾಂಗೀಣ ಉನ್ನತಿಯಾಗುತ್ತದೆ. ಸರಕಾರದ ಹಸ್ತಕ್ಷೇಪದಿಂದ ದೇವಸ್ಥಾನಗಳನ್ನು ಹಿಂಪಡೆದರೆ ಮಾತ್ರ ಪುನಃ ಸಮಾಜದ ಅಭಿವೃದ್ಧಿಯನ್ನು ಮಾಡಲು ಸಾಧ್ಯವಾಗಬಹುದು ಎಂದು ಉಪಸ್ಥಿತರಿಗೆ ಶ್ರೀ ಅಭಿನವ ಶಂಕರ ಭಾರತೀ ಮಹಾಸ್ವಾಮೀಜಿ ಮಾರ್ಗದರ್ಶನವನ್ನು ಮಾಡಿದರು.

ದೇವಸ್ಥಾನಗಳ ಸಂಸ್ಕೃತಿಯ ರಕ್ಷಣೆಗಾಗಿ ಕರ್ನಾಟಕ ಮಂದಿರ ಮಹಾಸಂಘ ಮತ್ತು ಹಿಂದೂ ಜನಜಾಗೃತಿ ಸಮಿತಿಯ ಆಯೋಜಿತ 'ಕರ್ನಾಟಕ ರಾಜ್ಯ ದ್ವಿತೀಯ ಮಂದಿರ ಅಧಿವೇಶನ' ವು ಗಂಗಮ್ಮ ತಿಮ್ಮಯ್ಯ ಕನ್ವೆಂಷನ್ ಹಾಲ್, ಬಸವೇಶ್ವರ ನಗರ, ಬೆಂಗಳೂರಿನಲ್ಲಿ ಎರಡನೆಯ ದಿನವು ಯಶಸ್ವಿಯಾಗಿ ನಡೆಯುತ್ತಿದೆ. ಈ ಸಮಯದಲ್ಲಿ ಸನಾತನ ಪಂಚಾಂಗ ಆಯಂಡ್ರಾಯ್ಡ್ ಆ್ಯಪ್ 2025 ಇದರ ಲೋಕಾರ್ಪಣೆ ಮಾಡಲಾಯಿತು. (ಸನಾತನ ಪಂಚಾಂಗ ಆಯಪ್‌ನಲ್ಲಿ ಆಯಾದಿನದ ಮಾಹಿತಿ, ಪಂಚಾಂಗ, ಮುಹೂರ್ತ ಮಾತ್ರವಲ್ಲದೇ ಹಬ್ಬ- ಉತ್ಸವಗಳು, ಆಧ್ಯಾತ್ಮ, ಆಯುರ್ವೇದ ಮತ್ತು ಧರ್ಮಶಿಕ್ಷಣಕ್ಕೆ ಸಂಬಂಧಿಸಿದ ಲೇಖನಗಳು ಲಭ್ಯವಿರುವುದು ) . ನಂತರ ಸನಾತನದ ಗ್ರಂಥವಾದ 'ಆಯುರ್ವೇದವನ್ನು ಪಾಲಿಸಿ ಔಷಧಿಗಳಿಲ್ಲದೇ ಆರೋಗ್ಯವಂತರಾಗಿ' ಇದರ ಈ-ಪುಸ್ತಕವನ್ನು ಬಿಡುಗಡೆ ಮಾಡಲಾಯಿತು.

ಧರ್ಮ ಪಾಲನೆಯಿಂದಲೇ ವಿಶ್ವದ ಶಾಂತಿ ಸಾಧ್ಯ - ಪೂಜ್ಯ ಸಿದ್ಧಲಿಂಗ ಸ್ವಾಮಿಜಿ

ಸಂಸ್ಕೃತಿಯನ್ನು ಬೆಳೆಸುವ ಕಾರ್ಯ ದೇವಸ್ಥಾನ ಮಾಡ ಬಲ್ಲದು. ವೇದ ಪಾರಾಯಣ , ಸಾಮೂಹಿಕ ಪೂಜೆ, ಯಜ್ಞ ಇತ್ಯಾದಿಗಳ ಮೂಲಕ ದೇವಸ್ಥಾನ ಮತ್ತು ಮಠಗಳಲ್ಲಿ ಜಾಗೃತಿ ಮೂಡಿಸಬೇಕು. ಧರ್ಮದಿಂದಲೇ ವಿಶ್ವದಶಾಂತಿ, ಮಾನವ ಧರ್ಮದ ಮೌಲ್ಯವನ್ನು ಎತ್ತಿಹಿಡಿದಾಗ ವಿಶ್ವಕಲ್ಯಾಣ ಸಾಧ್ಯ. ವಿಶ್ವವೇ ನಮ್ಮ ಮನೆ, ಲೋಕಾ ಸಮಸ್ತಾ ಸುಖಿನೋ ಭವಂತು ಎಂಬ ಧ್ಯೇಯವನ್ನಿಟ್ಟು ಧರ್ಮದ ರಕ್ಷಣೆ ಮಾಡಲು ಸ್ಕಂದೇಶ್ವರ ಸ್ವಾಮಿ ದೇವಸ್ಥಾನದ ಪೂಜ್ಯ ಸಿದ್ಧಲಿಂಗ ಸ್ವಾಮಿಜಿ ಮಾರ್ಗದರ್ಶನ ಮಾಡಿದರು.

ಹಿಂದೂ ಸಂಸ್ಕೃತಿಯ ಉಳಿವಿಗಾಗಿ ಜಾಗೃತಿ ಅಗತ್ಯ - ವೇದಬ್ರಹ್ಮ ಶ್ರೀ ಇಂದ್ರಾಚಾರ್ಯ

ಹಿಂದೂ ಧರ್ಮ ಮತ್ತು ಸಂಸ್ಕೃತಿ ಉಳಿಸಿ ಬೆಳೆಸುವ ಮತ್ತು ಹಿಂದೂ ಧರ್ಮ ಜಾಗೃತಿ ಕಾರ್ಯ ಪ್ರತಿಯೊಂದು ದೇವಸ್ಥಾನದಲ್ಲಿ ಆಗಬೇಕೆಂಬುದರ ಮಹತ್ವವನ್ನು ವೇದಬ್ರಹ್ಮ ಶ್ರೀ ಇಂದ್ರಾಚಾರ್ಯ ಇವರು ಉಪಸ್ಥಿತರಿಗೆ ತಿಳಿಸಿದರು.

ಪಾಕಿಸ್ತಾನದಲ್ಲಿ ಸನಾತನ ಬೋರ್ಡ್ ಇಲ್ಲ, ಬಾಂಗ್ಲಾದೇಶದಲ್ಲಿ ಸನಾತನ ಬೋರ್ಡ್ ಇಲ್ಲ, ಹಾಗಿದ್ದರೆ ಭಾರತದಲ್ಲಿ ವಕ್ಫ್ ಬೋರ್ಡ್ ಯಾಕೆ - ಶ್ರೀ.ಸುನಿಲ್ ಘನವಟ್ ದೇವಸ್ಥಾನಗಳ ಪವಿತ್ರ ಭೂಮಿ ಒಂದು ರಾಕ್ಷಸಿ ಕಾನೂನಿನ ಮೂಲಕ ವಕ್ಫ್ ಬೋರ್ಡ್‌ನ ವಶವಾಗುತ್ತಿದೆ.

ವಕ್ಫ್ ಬೋರ್ಡ್‌ನ ಮೂಲಕ ಯಾರ ಭೂಮಿಯೇ ಇರಲಿ, ಅದಕ್ಕೆ ಒಂದು ನೋಟಿಸ್ ಕೊಟ್ಟು ಭೂಮಿಯನ್ನು ವಕ್ ವಶಪಡಿಸಿಕೊಳ್ಳಬಹುದು. ಕೇವಲ ನಾಗರಿಕರದ್ದಲ್ಲ, ಕರ್ನಾಟಕ ರಾಜ್ಯದ ಸುಮಾರು 25000 ಎಕ್ರೆ ಭೂಮಿಯ ಮೇಲೆ ವಕ್ಫ್ ದಾವೆ ಹೂಡಿದೆ. ಭಾರತದಲ್ಲಿ ಇಂತಹ ಅನೇಕ ಕ್ಷೇತ್ರಗಳನ್ನು ವಕ್ಫ್ ಬೋರ್ಡ್ ಅನಧಿಕೃತವಾಗಿ ವಶಪಡಿಕೊಂಡಿದೆ. ಭಾರತದಲ್ಲಿ 9 ಲಕ್ಷ 50 ಸಾವಿರ ಎಕರೆ ಜಾಮೀನು ವಕ್ಫ್ ಬೋರ್ಡ್‌ದ್ದಾಗಿದೆ. ದೇವಸ್ಥಾನಕ್ಕೆ ಸಂಬಂಧಿಸಿದ ಕಾಗದಪತ್ರಗಳನ್ನು, ದಾಖಲೆಗಳನ್ನು ನವೀಕರಿಸಿ ವಕ್ಫ್ ಬೋರ್ಡ್‌ನ ಸಂಕಟದಿಂದ ದೇವಸ್ಥಾನಗಳನ್ನು ರಕ್ಷಿಸಿ ಎಂದು ಶ್ರೀ.ಸುನಿಲ್ ಘನವಟ್ ಇವರು ಕರೆ ನೀಡಿದರು.

ಈ ಅಧಿವೇಶನದಲ್ಲಿ ಶ್ರೀ ಆದಿ ಶಂಕರಾಚಾರ್ಯ ಶಾರದಾ ಲಕ್ಷ್ಮೀನರಸಿಂಹ ಪೀಠಮ್, ದಿವ್ಯಕ್ಷೇತ್ರ ಹರಿಹರಪುರದ ಶ್ರೀ ಸ್ವಯಂಪ್ರಕಾಶ ಸಚ್ಚಿದಾನಂದ ಸರಸ್ವತಿ ಮಹಾಸ್ವಾಮೀಜಿ ಇವರ ದಿವ್ಯ ಉಪಸ್ಥಿತಿಯಿಂದ ವಾತಾವರಣ ತೇಜೋಮಯವಾಯಿತು.

ಈ ಅಧಿವೇಶನದ ನಂತರ ಮಹತ್ವಪೂರ್ಣ ಠಾರವುಗಳನ್ನು ಮಾನ್ಯ ರಾಜ್ಯ ಮುಜರಾಯಿ ಸಚಿವರಿಗೆ ಕಳಿಸಲಾಗುವುದು, ಇದರ ಪ್ರತಿಯನ್ನು ಈ ಪತ್ರಿಕಾ ಪ್ರಕಟಣೆಯೊಂದಿಗೆ ಕಳಿಸುತ್ತಿದ್ದೇವೆ.

## ದಿನಕ್ಕೊಂದು ಮುಕ್ತಕ -67




ಸಾಮಾಜಿಕ ಕಳಕಳಿ
ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

● ಉದಯವಾಹಿನಿ, ವಿಶೇಷ


ದಯೆಯನ್ನು ತೋರುವುದು ಬಡತನಕೆ ಸಹಿಯಿಹುದು
ಪಯಣದಲಿ ಗಮನವಿರೆ ಚಂದವದುವೆ
ಗಮನಿಸುತ ನಡೆಯದಿರು ನಂಬಿಕೆಯು ಇರಬೇಕು
ಸಹಿಸುತಲೆ ಬಾಳುತಿರು ಲಕ್ಷ್ಮಿ ದೇವಿ...

**ಭಾವಾರ್ಥ :** ಸಿರಿವಂತಿಕೆ ಬಡತನ ಎಂಬುದು ಪ್ರತಿಯೊಬ್ಬರ ಜೀವನದಲ್ಲಿ ಸಹಜ. ಒಬ್ಬ ಶ್ರೀಮಂತ ಆದರೆ ಮತ್ತೊಬ್ಬ ಕಡು ಬಡವನಾದರೆ ಅದು ವಿಧಿ ಲಿಖಿತವಾಗಿರುತ್ತದೆ. ಭಗವಂತನ ಮುಂದೆ ಯಾರೂ ಮೇಲು ಅಲ್ಲ ಕೀಳು ಅಲ್ಲ. ಆತ ಬರೆದದ್ದು ಹೇಗೆ ಇರುತ್ತದೆ ಹಾಗೆ ನಡೆಯಬೇಕು. ಹಾಗೆಯೇ ಜೀವನವನ್ನು ನಡೆಸಬೇಕು. ಏರುಪೇರಿನ ಜೀವನದಲ್ಲಿ ಸಮಾನತೆಯನ್ನು ಕಂಡುಕೊಂಡು ಹೋಗಬೇಕು.



ಪ್ರತಿಯೊಂದಕ್ಕೂ ನಂಬಿಕೆಯು ಬಹಳ ಮುಖ್ಯ. ಅಂತಹ ಮುಖ್ಯವಾದ ನಂಬಿಕೆಯನ್ನು ಗಮನಿಸಿ ನಡೆಯಬೇಕು. ಎಂತಹ ನೋವುಗಳು ಬಂದರೂ ಸಹಿಸಿಕೊಂಡು ಜೀವಿಸಬೇಕು. ಆಗಲೇ ಜೀವನದಲ್ಲಿ ಯಶಸ್ಸನ್ನು ಕಾಣುತ್ತೇವೆ. ಯಾವುದೇ ಪರಿಸ್ಥಿತಿ ಬಂದರೂ ಅದರಲ್ಲಿ ಎದುರಿಸುವ ಶಕ್ತಿಯನ್ನು ಹೊಂದಿ ಮುಂದುವರಿಯಬೇಕು. ಆಗಲೇ ಎಲ್ಲದರಲ್ಲೂ ಸಫಲತೆಯನ್ನು ಕಾಣುತ್ತೇವೆ.

# ಉತ್ತಮ ದೃಷ್ಟಿ ಕಾಪಾಡಿಕೊಳ್ಳಲು ಸಮೃದ್ಧವಾಗಿರುವ ಆಹಾರದ ಅಗತ್ಯ



• ಉದಯವಾಹಿನಿ, ಬೆಂಗಳೂರು

ಹೆಚ್ಚುತ್ತಿರುವ ತಂತ್ರಜ್ಞಾನವು ವಯಸ್ಕರು ಮಕ್ಕಳ ಕಣ್ಣುಗಳ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ. ಆದ್ದರಿಂದ ಜನರು ತಮ್ಮ ಕಣ್ಣುಗಳನ್ನು ಆರೋಗ್ಯವಾಗಿಡಲು ಹಲವಾರು ಕ್ರಮಗಳನ್ನು ಪ್ರಾರಂಭಿಸಿದ್ದಾರೆ. ಉತ್ತಮ ದೃಷ್ಟಿಯನ್ನು ಕಾಪಾಡಿಕೊಳ್ಳಲು ಪೋಷಕಾಂಶಗಳಲ್ಲಿ ಸಮೃದ್ಧವಾಗಿರುವ ಆಹಾರದ ಅಗತ್ಯವಿದೆ. ಆದರೆ ಸಾಮಾಜಿಕ ಜಾಲತಾಣಲದಲ್ಲಿ ಕಣ್ಣುಗಳನ್ನು ಆರೋಗ್ಯಕರವಾಗಿಡಲು ಸುಲಭವಾದ ಪರಿಹಾರಗಳನ್ನು ಹೇಳಲಾಗುತ್ತದೆ. ಅನೇಕರು ಕೆಲವೊಂದು ಸಲಹೆಗಳನ್ನು ಅನುಸರಿಸುತ್ತಾರೆ.

ಆದರೆ ಅಲ್ಲಿ ನೀಡಿರುವ ಸಲಹೆಗಳು ಎಷ್ಟರ ಮಟ್ಟಿಗೆ ಸತ್ಯವಾಗಿದೆ ಎಂಬುದು ತಿಳಿದಿರುವುದಿಲ್ಲ. ಇಂತಹದ್ದೇ ಒಂದು ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದೆ. ಅದರ ಕುರಿತು ವೈದ್ಯರು ಹೇಳಿದ್ದೇನು ಎಂಬುದನ್ನು ಇಲ್ಲಿ ತಿಳಿಸಲಾಗಿದೆ. ವಿಡಿಯೋದಲ್ಲಿ ಬೆಳಿಗ್ಗೆ ಎದ್ದ ನಂತರ ಬಾಯಲ್ಲಿ ನೀರು ತುಂಬಿಕೊಂಡು ಕಣ್ಣಿಗೆ ಚಿಮುಕಿಸುವುದರಿಂದ ದೃಷ್ಟಿ ಸುಧಾರಿಸುತ್ತದೆ. ದಣಿದ ಕಣ್ಣುಗಳಿಗೆ ವಿಶ್ರಾಂತಿ ನೀಡಲು ಇದು ಉತ್ತಮ ಮಾರ್ಗವಾಗಿದೆ ಎಂದು ಹೇಳಲಾಗಿದೆ. ತಜ್ಞರು ಕೂಡ ಈ ಬೆಳಗಿನ ಆಚರಣೆಯನ್ನು ಅಳವಡಿಸಿಕೊಳ್ಳುವುದು ಕಣ್ಣುಗಳಿಗೆ ತುಂಬಾ ಪ್ರಯೋಜನಕಾರಿ ಎಂದಿದ್ದಾರೆ.

ಹೇಗೆ ಪ್ರಯೋಜನ? ಬೆಳಗ್ಗೆ ನಿಮ್ಮ ಬಾಯಿಯಲ್ಲಿ ನೀರನ್ನು ತುಂಬಿಸಿ ಮತ್ತು ನಿಮ್ಮ ಕಣ್ಣುಗಳ ಮೇಲೆ ತಣ್ಣನೆಯ ನೀರನ್ನು ಚಿಮುಕಿಸುವುದು ಕಣ್ಣಿನ ಸ್ನಾಯುಗಳನ್ನು ಉತ್ತೇಜಿಸಲು ಮತ್ತು ನಿಮ್ಮ ಚರ್ಮವನ್ನು ಪುನರುಜೀವನಗೊಳಿಸಲು ಸಹಾಯ ಮಾಡುತ್ತದೆ ಎಂದು ತಜ್ಞರು ಹೇಳುತ್ತಾರೆ. ಬಾಯಿಯಲ್ಲಿನ ನೀರಿನ ಒತ್ತಡವು ಕಣ್ಣಿನ ಸ್ನಾಯುಗಳನ್ನು ಸಕ್ರಿಯಗೊಳಿಸುತ್ತದೆ. ಮುಖದ ಮೇಲೆ ತಣ್ಣನೆಯ ನೀರು ಕಣ್ಣಿನಿಂದ ಒಣ ಲೋಳೆ ಮತ್ತು ಕೊಳೆಯನ್ನು ತೆಗೆದುಹಾಕಲು ಸಹಾಯ ಮಾಡುತ್ತದೆ. ಇದಲ್ಲದೆ ಇದು ಕಣ್ಣುಗಳನ್ನು ನಯಗೊಳಿಸುವ ಗ್ರಂಥಿಗಳನ್ನು ಉತ್ತೇಜಿಸುತ್ತದೆ. ವೈದ್ಯರ ಪ್ರಕಾರ, ಟ್ಯಾಪ್ ನೀರು ನೇರವಾಗಿ ಕಣ್ಣಿಗೆ ಹೋಗುವುದು ಹಾನಿಕಾರಕ ಎಂದು ಕೆಲವರು ನಂಬುತ್ತಾರೆ. ವಾಸ್ತವವಾಗಿ, ನೀರು ಕಲ್ಮಶಗಳನ್ನು ಹೊಂದಿರುತ್ತದೆ. ಇದು ಕಣ್ಣಿನ ಕಿರಿಕಿರಿ ಮತ್ತು ಸೋಂಕನ್ನು ಉಂಟುಮಾಡುತ್ತದೆ.

ನೀರಿನ ಒತ್ತಡವು ಕಣ್ಣೀರಿನ ಫಿಲ್ಮ್ ಅನ್ನು ಸಹ ಹಾನಿಗೊಳಿಸುತ್ತದೆ. ಇಂತಹ ಸಂದರ್ಭದಲ್ಲಿ ಬಳಸುವ ನೀರಿನ ವಿಚಾರದಲ್ಲಿ ಎಚ್ಚರಿಕೆ ಅಗತ್ಯ. ಬಾಯಿಯಲ್ಲಿ ನೀರು ತುಂಬಿಕೊಂಡು ಕಣ್ಣಿಗೆ ಚಿಮುಕಿಸುವುದರಿಂದ ದೃಷ್ಟಿ ಸುಧಾರಿಸುತ್ತದೆ ಎಂಬ ಮಾತು ನಿಜವೆಂದು ಸಾಬೀತಾಗಿದೆ. ತಜ್ಞರ ಪ್ರಕಾರ, ಕಣ್ಣುಗಳನ್ನು ಆರೋಗ್ಯವಾಗಿಡಲು ಇದು ಉತ್ತಮ ಮಾರ್ಗವಾಗಿದೆ.

# ‘60% ಕಮೀಷನ್’ ಆರೋಪ ಸಾಬೀತು ಪಡಿಸುವಂತೆ ಹೆಚ್ಡಿಕೆಗೆ ಸಿಎಂ ಸವಾಲ್

## ಬಿ.ನಾಗೇಂದ್ರ, ಅವರ ರಾಜೀನಾಮೆಯಿಂದ ತೆರವಾಗಿರುವ ಸಚಿವ ಸ್ಥಾನಕ್ಕೆ ನೇಮಕ ಮಾಡುವ ಬಗ್ಗೆ ಹೈಕಮಾಂಡ್ ಜೊತೆ ಚರ್ಚೆ

• ಉದಯವಾಹಿನಿ ದಾವಣಗೆರೆ

ರಾಜ್ಯದಲ್ಲಿ ಶೇ.60ರಷ್ಟು ಕಮಿಷನ್ ವ್ಯವಹಾರ ನಡೆಯುತ್ತಿದೆ ಎಂದು ಆರೋಪ ಮಾಡಿರುವ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅದನ್ನು ಸಾಬೀತು ಪಡಿಸಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿರೋಧ ಪಕ್ಷಗಳ ನಾಯಕರು ದಾಖಲೆಗಳು ಇಲ್ಲದೆ ಆರೋಪ ಮಾಡುವುದು ಸರಿಯಲ್ಲ ಎಂದರು.

ಭ್ರಷ್ಟಾಚಾರ ಹಾಗೂ ಶೇ.60ರಷ್ಟು ಕಮಿಷನ್ ವ್ಯವಹಾರ ನಡೆಯುತ್ತಿದೆ ಎಂದಾದರೆ ಅದನ್ನು ದಾಖಲೆಗಳ ಸಹಿತ ಸಾಬೀತು ಪಡಿಸಬೇಕು. ದಾಖಲೆ ಇಲ್ಲದೆ ಬಾಯಿ ಮಾತಿಗೆ ಆರೋಪ ಮಾಡುವುದು ಸರಿಯಲ್ಲ ಎಂದರು. ಮಾರ್ಚ್ ತಿಂಗಳಿನಲ್ಲಿ ತಾವು ರಾಜ್ಯ ಬಜೆಟ್ ಮಂಡಿಸಲಿದ್ದು, ಅದರ ತಯಾರಿಗಾಗಿ ಪೂರ್ವಭಾವಿ ಚರ್ಚೆ ಆರಂಭಿಸಿದ ಬಳಿಕ, ಯಾವ ಕ್ಷೇತ್ರಗಳಿಗೆ ಆದ್ಯತೆ ನೀಡಲಾಗುವುದು ಎಂದು ಮಾಹಿತಿ ನೀಡುವುದಾಗಿ ತಿಳಿಸಿದರು.

> ದಾವಣಗೆರೆಯಲ್ಲಿ ವಿಶ್ವ ಕನ್ನಡ ಸಮೇಳನಕ್ಕೆ ಈ ಮೊದಲು ನಿಗದಿಯಾಗಿದ್ದ ದಿನಾಂಕ ಮುಂದೂಡಿಕೆಯಾಗಿರುವ ಕುರಿತು ಮಾಹಿತಿ ಇಲ್ಲ, ಮರು ದಿನಾಂಕ ನಿಗದಿ ಸಂಬಂಧಿಸಿಂತೆ ಚರ್ಚೆ ನಡೆಸುತ್ತೇನೆ ಎಂದು ಭರವಸೆ ನೀಡಿದರು. ಹರಿಹರದ ಗುತ್ತಿಗೆದಾರರು ದಯಾಮರಣ ಅರ್ಜಿ ಸಲ್ಲಿಸಿರುವ ಬಗ್ಗೆ ತಮಗೆ ಯಾವುದೇ ಮಾಹಿತಿ ಇಲ್ಲ ಎಂದು ಅವರು ಹೇಳಿದರು.

ರಾಜ್ಯ ಸರ್ಕಾರ ದರ ಹೆಚ್ಚಳಕ್ಕೆ ಅನುಮೋದನೆ ನೀಡಿದೆ ಎಂದು ಟೀಕಿಸುವ ಬಿಜೆಪಿ, ಜೆಡಿಎಸ್ ಕಾಲದಲ್ಲಿ ಪ್ರಯಾಣ ದರ ಹೆಚ್ಚಿಸಿರಲಿಲ್ಲವೇ ? ಅಷ್ಟೇ ಏಕೆ ಕೇಂದ್ರ ಸರ್ಕಾರ ರೈಲ್ವೆ ದರವನ್ನು ಹೆಚ್ಚಿಸಿರಲಿಲ್ಲವೇ ಎಂದು ತಿರುಗೇಟು ನೀಡಿದರು.ಕೆಪಿಸಿಸಿ ಅಧ್ಯಕ್ಷರು ಹಾಗೂ ಮುಖ್ಯಮಂತ್ರಿ ಬದಲಾವಣೆಯ ಬಗ್ಗೆ ಹೈಕಮಾಂಡ್ ನಿರ್ಧಾರ ತೆಗೆದುಕೊಳ್ಳಬೇಕು.



ಉದಯವಾಹಿನಿ ಚಿತ್ರ

ಈ ವಿಚಾರದಲ್ಲಿ ರಾಜ್ಯದ ನಾಯಕರ ಹಂತದಲ್ಲಿ ಯಾವುದೇ ನಿರ್ಧಾರವಾಗುವುದಿಲ್ಲ ಎಂದರು.

ಬಿ.ನಾಗೇಂದ್ರ ಅವರ ರಾಜೀನಾಮೆಯಿಂದ ತೆರವಾಗಿರುವ ಸಚಿವ ಸ್ಥಾನಕ್ಕೆ ನೇಮಕ ಮಾಡುವ ಬಗ್ಗೆ ಹೈಕಮಾಂಡ್ ಜೊತೆ ಚರ್ಚೆ ಮಾಡಿ ನಿರ್ಧಾರ ತೆಗೆದುಕೊಳ್ಳುವುದಾಗಿ ತಿಳಿಸಿದರು.

ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್ ಗಳಿಗೆ ಚುನಾವಣೆ ನಡೆಸಲು ರಾಜ್ಯ ಸರ್ಕಾರ ತಯಾರಾಗಿದೆ. ಆದರೆ ಮೀಸಲಾತಿ ಕುರಿತು ನ್ಯಾಯಾಲಯದ ಮುಂದೆ ವಿಚಾರಣೆ ಬಾಕಿ ಇದೆ. ನ್ಯಾಯಾಲಯದ ಆದೇಶ ಹೊರ ಬಿದ್ದ ತಕ್ಷಣವೇ ಚುನಾವಣೆಗೆ ತಯಾರಿ ನಡೆಸಲಾಗುವುದು ಎಂದು ಸ್ಪಷ್ಟ ಪಡಿಸಿದರು. ಚುನಾವಣೆ ನಿಂತಿದ್ದು, ಯಾರ ಕಾಲದಲ್ಲಿ ಎಂದು ಇದೇ ಅವಧಿಯಲ್ಲಿ ಮುಖ್ಯಮಂತ್ರಿ ಪ್ರಶ್ನಿಸಿದರು.

### ಬಹಳ ದಿನಗಳ ಬೇಡಿಕೆ

ಸಾರಿಗೆ ನಿಗಮಗಳ ಪ್ರಯಾಣ ದರ ಹೆಚ್ಚಳ ಎಲ್ಲಾ ಕಾಲಕ್ಕೂ ನಡೆದಿದೆ. ಹಣದುಬ್ಬರ, ಇಂಧನ ಬೆಲೆ, ಬಸ್ ಖರೀದಿ ದರ ಹಾಗೂ ಸಿಬ್ಬಂದಿಗಳ ವೇತನ ಹೆಚ್ಚಳ ಸೇರಿ ವಿವಿಧ ಕಾರಣಗಳಿಗೆ ಪ್ರಯಾಣ ದರವನ್ನು ಹೆಚ್ಚಿಸಲಾಗುತ್ತಿದೆ. 2015ರಲ್ಲಿ ದರ ಪರಿಷ್ಕರಣೆಯಾಗಿತ್ತು. ಸಾರಿಗೆ ನಿಗಮಗಳು ಸಂಕಷ್ಟದಲ್ಲಿವೆ ಎಂಬ ಕಾರಣಕ್ಕೆ ದರ ಪರಿಷ್ಕರಣೆಗೆ ಬಹಳ ದಿನಗಳ ಬೇಡಿಕೆ ಇತ್ತು ಎಂದು ಸಮರ್ಥಿಸಿಕೊಂಡರು.

**ಸಂಕಷ್ಟದಲ್ಲಿ ಸಾರಿಗೆ ನಿಗಮಗಳು**

ಒಳ ಮೀಸಲಾತಿ ಬಗ್ಗೆ ಅಧ್ಯಯನ ನಡೆಸಲು ನಿವೃತ್ತ ನ್ಯಾಯಮೂರ್ತಿ ನಾಗಮೋಹನ್ ದಾಸ್ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದೆ. ಒಳಮೀಸಲಾತಿ ಕಲ್ಪಿಸಲು ಸಮರ್ಥನೀಯ ಅಂಕಿಅಂಶಗಳು ಲಭ್ಯ ಇಲ್ಲ ಎಂಬ ಆಕ್ಷೇಪ ಇರುವ ಹಿನ್ನೆಲೆಯಲ್ಲಿ ಸಮಿತಿ ರಚಿಸಲಾಗಿದೆ. ನಮ ಸರ್ಕಾರ ಒಳ ಮೀಸಲಾತಿ ಜಾರಿಗೆ ತರಲು ಬದ್ಧವಾಗಿದೆ ಎಂದರು.

ಬೆಂಗಳೂರಿನಲ್ಲಿ ಸಚಿವರೊಂದಿಗೆ ಊಟಕ್ಕೆ ಸಭೆ ಸೇರಿದ ಬಗ್ಗೆ ಕುರಿತು ಪ್ರಶ್ನಿಸಿದ ಅವರು, ಊಟಕ್ಕೆ ಸೇರುವುದು ತಪ್ಪಾ, ನಾಲ್ಕೈದು ಮಂದಿ ಊಟಕ್ಕೆ ಸೇರುವುದು ಸಹಜವಲ್ಲವೇ. ರಾಜಕಾರಣಿಗಳು ಜೊತೆಯಾಗಿ ಊಟ ಮಾಡಿದರೆ ಅದನ್ನು ಬೇರೆ ರೀತಿಯಲ್ಲಿ ವ್ಯಾಖ್ಯಾನಿಸುವುದು ಸರಿಯಲ್ಲ ಎಂದರು.ಕೆಲವರು ನಾನ್ ವೆಜ್ ಊಟ ಮಾಡುತ್ತಾರೆ, ಇನ್ನೂ ಕೆಲವರು ವೆಜ್ ಊಟ ಮಾಡುತ್ತಾರೆ. ಅದೇ ರೀತಿ ನಾವು ಸೇರಿದ್ದೇವು. ಅಲ್ಲಿ ಯಾವುದೇ ರಾಜಕೀಯ ಚರ್ಚೆ ನಡೆದಿಲ್ಲ ಎಂದು ಪುನರುಚ್ಚರಿಸಿದರು.

# ಮೇಕೆದಾಟಿಗೆ ಅಣೆಕಟ್ಟು ಕಟ್ಟೇ ಬಿಡ್ತೀವಿ ಅಂತ ಹೋರಾಟ ಮಾಡಿದ್ರು ಅಧಿಕಾರಕ್ಕೆ ಬಂದ್ಮೇಲೆ ಮಾತೇ ನಿಂತೋಯ್ತು: ಪ್ರತಾಪ್ ಸಿಂಹ

• ಉದಯವಾಹಿನಿ ಬಳ್ಳಾರಿ

ರೈತರ ಜಮೀನುಗಳಿಗೆ ವಕ್ಫ್ ಬೋರ್ಡ್ ನೋಟಿಸ್ ನೀಡಿರುವುದನ್ನು ವಿರೋಧಿಸಿ ವಿಜಯಪುರದಲ್ಲಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ನೇತೃತ್ವದಲ್ಲಿ ನಡೆದ ಹೋರಾಟದ ಬಳಿಕ ಇದೀಗ 2ನೇ ಹಂತದ ಹೋರಾಟಕ್ಕೆ ಬಿಜೆಪಿಯ ಯತ್ನಾಳ್ ಅಂಡ್ ಟೀಮ್ ಸಿದ್ದವಾಗಿದೆ. ಈ ಹಿನ್ನೆಲೆಯಲ್ಲಿ ಬಳ್ಳಾರಿಯ ಕಂಪ್ಲಿ ಪಟ್ಟಣದಲ್ಲಿ ವಕ್ಫ್ ಹಠಾವೋ ದೇಶ ಬಚಾವೋ ಕಾರ್ಯಕ್ರಮ ಆಯೋಜನೆ ಮಾಡಲಾಗಿತ್ತು. ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಮಾಜಿ ಸಂಸದ ಪ್ರತಾಪ್ ಸಿಂಹ ರಾಜಕಾರಣಿಗಳ ವಿರುದ್ಧ ಹಾಗೂ ವಕ್ಫ್ ಬೋರ್ಡ್ ವಿರುದ್ಧ ಆಕ್ರೋಶ ಹೊರಹಾಕಿದರು.



ರಾಜಕಾರಣಿಗಳು ಲಾಭ ನಷ್ಟದ ಲೆಕ್ಕಾಚಾರದಲ್ಲಿ ಮಾತನಾಡೋದು ಸಹಜ . 2023ರಲ್ಲಿ ನಮ್ಮ ನೀರು ನಮ್ಮ ಹಕ್ಕು ಎಂದು ಪಾದಯಾತ್ರೆ ಮಾಡಿದ್ರು ಈ ಬಗ್ಗೆ ಚಕಾರ ಎತ್ತುತ್ತಿಲ್ಲ. ಅಧಿಕಾರಕ್ಕೆ ಬರುವ ಮುಂಚೆ 40 ಪರ್ಸೆಂಟ್ ಎಂದ್ರು ಈಗ. ಅಧಿಕಾರಕ್ಕೆ ಬಂದು ಏನು ಮಾಡ್ತಿದ್ದಾರೆ. ಅಡ್ಜಸ್ಟ್‌ಮೆಂಟ್ ರಾಜಕಾರಣಿಗಳು ರಾಜ್ಯದಲ್ಲಿ ತುಂಬಿಕೊಂಡಿದ್ದಾರೆ.

ಅಡ್ಜಸ್ಟ್ ಮೆಂಟ್ ರಾಜಕಾರಣಿಗಳು ವಕ್ಫ್ ಹೋರಾಟ ಹಳ್ಳ ಹಿಡಿಸುತ್ತಾರೆಂದು ನಾವು ಹೋರಾಟ ಮಾಡ್ತಿದ್ದೇವೆ. ಮೊದಲ ಹಂತದ ಹೋರಾಟದ ಬಳಿಕ ಜೆಪಿಸಿ ಜೊತೆಗೆ ಕೇಂದ್ರ ಸಚಿವರ ಜೊತೆಗೆ ಮಾತನಾಡಿ ಬಂದಿದ್ದೇವೆ ಎಂದರು.

ಇದೆ ವೇಳೆ,ಭಾಷಣ ಕೊಡುವ ಹೋರಾಟ ನಮ್ಮದಲ್ಲ ಬಡವರಿಗೆ ನ್ಯಾಯ ಕೊಡಿಸುವ ಉದ್ದೇಶ. ಚುನಾವಣಾ ಹಿನ್ನೆಲೆ ಮಾಡ್ತಿರೋ ಹೋರಾಟ ನಮ್ಮದಲ್ಲ. ಚುನಾವಣಾ ಇನ್ನೂ ಮೂರುವರೆ ವರ್ಷ ಇದೆ. ಅದಕ್ಕೆ ನಾವು ಹೋರಾಟ ಮಾಡುತ್ತಿಲ್ಲ. ಡೋಂಗಿ ರಾಜಕಾರಣಿಗಳು ನಾವಲ್ಲ, ಕೃಷಿಭೂಮಿ, ಮಠಗಳ ಭೂಮಿ ಕಬಳಿಸುವ ಯತ್ನದಲ್ಲಿ ನೋಟಿಸ್ ಕೊಡ್ತಿದ್ದಾರೆ. ಪಿತ್ರಾರ್ಜಿತ ಆಸ್ತಿ ಮಕ್ಕಳಿಗೆ ಮೊಮ್ಮಕ್ಕಳಿಗೆ ಬರುತ್ತದೆ. ಆದ್ರೇ, ಹಿಂದೂಗಳಿಗೆ ಈ ಮುಸ್ಲಿಂರು ಯಾವಾಗ ಹುಟ್ಟಿದ್ರೋ ಗೊತ್ತಗಲಿಲ್ಲ ಅವರು ಬಂದು ವಕ್ಫ್ ಅಸ್ತಿ ನಮ್ಮದು ಎನ್ನುತ್ತಿದ್ದಾರೆ. ಇದೊಂದು ತಾಲಿಭಾನ್ ಸರ್ಕಾರ ಎಂದು ಸರ್ಕಾರದ ವಿರುದ್ಧ ಗುಡುಗಿದರು.

> ಮುಸ್ಲಿಂ ಬಾಹುಗಳು ಅಲ್ಲಲ್ಲಿ ಇದಾವೋ ಆ ದೇಶಗಳು ಮುಳುಗಿ ಹೋಗ್ತಿವೆ. ಮುಸ್ಲಿಂರು 15 ಪರ್ಸೆಂಟ್ ಆದ ಕೂಡಲೇ ಭೂಮಿ ಕಬಳಿಸುತ್ತಿದ್ದಾರೆ. 20 ಪರ್ಸೆಂಟ್ ಆದ್ರೇ ಉಳಿಗಾಲವಿಲ್ಲ. ಹಿಂದೂಗಳೆಲ್ಲ ಒಂದಾಗಿ, ಮುಸ್ಲಿಂ ಕ್ರಿಶ್ಚಿಯನ್ ಒಂದಾದಂತೆ ನೀವು ಒಂದಾಗಿ. ನಿಮಗೇನು ರೋಗ ಎಂದರು. ನಾಳೆ ಮುಸ್ಲಿಂಮರು ಕಲ್ಲು ತಗೊಂಡು ಹೊಡೆಯೋಕೆ ಶುರು ಮಾಡಿದ್ರೆ, ನೀನು ಗೌಡಾನಾ, ಲಿಂಗಾಯತ, ಕುರುಬನಾ, ಎಸ್ಸಿ, ಎಸ್ಟಿನಾ ಅಂತ ನೋಡಲ್ಲ. ತೀಲಕ ಇದ್ರೆ ಸಾಕು ನಮ್ಮ ಮೇಲೆ ಕಲ್ಲು ಹೊಡೆಯುತ್ತಾರೆ -ಪ್ರತಾಪ್ ಸಿಂಹ

# ಅಮಿತ್ ಶಾ ಅವರನ್ನು ಸಂಪುಟದಿಂದ ವಜಾಗೊಳಿಸಿ

• ಉದಯವಾಹಿನಿ, ಚಿಂಚೋಳಿ

ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರಿಗೆ ಕೇಂದ್ರ ಸರ್ಕಾರದ ಗೃಹ ಸಚಿವ ಅಮಿತ್ ಶಾ ಅವರು ಸಂಸತ್ತಿನಲ್ಲಿ ಅವಹೇಳನಕಾರಿ ಹೇಳಿಕೆ ನೀಡಿದ್ದು ಖಂಡನೀಯ ತಕ್ಷಣವೇ ಇವರನ್ನು ಸಂಪುಟ ಸಚಿವದಿಂದ ವಜಾಗೊಳಿಸಬೇಕೆಂದು ಕಾಂಗ್ರೆಸ್ ಪಕ್ಷದ ಎಸ್ಸಿ, ಎಸ್ಟಿ ಘಟಕದ ಅಧ್ಯಕ್ಷ ಸಂತೋಷ ಗುತ್ತೇದಾರ ಆಗ್ರಹಿಸಿದರು.



ಕೇಂದ್ರದ ಗೃಹ ಸಚಿವರಾಗಿ ಜವಾಬ್ದಾರಿ ಸ್ಥಾನದಲ್ಲಿದ್ದ ಅಮೀತ್ ಶಾ ಅಂಬೇಡ್ಕರ್ ಬಗ್ಗೆ ಅತ್ಯಂತ ಹಗುರವಾಗಿ ಮಾತನಾಡಿದ್ದು ಅತ್ಯಂತ ಖಂಡನೀಯವಾಗಿದೆ.

ಸಂವಿಧಾನ ಅಡಿಯಲ್ಲಿ ಸಚಿವರಾದ ಅವರು ಸಂವಿಧಾನ ಶಿಲ್ಪಿ ಅಂಬೇಡ್ಕರ್ ಬಗ್ಗೆ ನಾಲಿಗೆ ಹರಿಬಿಟ್ಟು ಅವಹೇಳನಕಾರಿ ಹೇಳಿಕೆ ನೀಡಿ ದೇಶಕ್ಕೆ ತಲೆಬಾಗಿಸುವ ರೀತಿಯಲ್ಲಿ ಅವಮಾನಿಸಿದ್ದು ಸಚಿವರು ತಕ್ಷಣವೇ ದೇಶದ ಜನತೆಗೆ ಕ್ಷಮೆಯಾಚಿಸಬೇಕು.

ಇಲ್ಲಾದಿದ್ದರೆ ಬರುವ ದಿನಗಳಲ್ಲಿ ಮತದಾರರು ಅವರಿಗೆ ತಕ್ಕಪಾಠ ಕಲಿಸಲಿದ್ದು ಈಡಿ ದೇಶದಾದ್ಯಂತ ಪ್ರತಿಭಟನೆ ನಡೆಯುತ್ತಿವೆ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸಿ ದೇಶದ್ರೋಹಿ ಪ್ರಕರಣ ದಾಖಲಿಸಿ ಕ್ರಮಕೈಗೊಳ್ಳಬೇಕು.

ಅಂಬೇಡ್ಕರ್ ದೇಶದ ಸಂವಿಧಾನ ಬರೆದು ಸರ್ವ ಜಾತಿಧರ್ಮದವರಿಗೆ ಜನಾಂಗದವರಿಗೆ ಸಮಾನವಾದ ಹಕ್ಕು ನೀಡಿದ್ದಾರೆ, ನಮ್ಮೆಲ್ಲರಿಗೂ ಅಂಬೇಡ್ಕರ್ ಒಬ್ಬರೆ ದೇವರು,ಅಂಬೇಡ್ಕರ್ ಹೆಸರು ಉಸಿರಿರುವವರೆಗೂ ನೆನೆಸುತ್ತೇವೆ,ಈಗಿನ ದಿನಗಳಲ್ಲಿ ಅಂಬೇಡ್ಕರ್ ಅವರನ್ನು ವಿಶ್ವವೇ ನಂಬಿಕೊಂಡು ವಿಶ್ವಸಂಸ್ಥೆಯಿಂದ ಅಂಬೇಡ್ಕರ್ ಜನ್ಮದಿನದಂದು ವಿಶ್ವಜ್ಞಾನ ದಿನವೆಂದು ಘೋಷಿಸಿದೆ ಅದಕಾರಣ ಅಂಬೇಡ್ಕರ್ ಅಂದರೆ ಜ್ಞಾನದ ಸಂಕೇತ,ನಿಮ್ಮಂತಹ ಕೆಲ ಸಚಿವರು ಅಂಬೇಡ್ಕರ್ ಅವರನ್ನು ಅರಗಿಸಿಕೊಳ್ಳಲು ಆಗುತ್ತಿಲ್ಲ ನಿಮ್ಮಲ್ಲಿರುವ ದಲಿತರ ಮೇಲೆಯಿರುವ ದ್ವೇಷ ಹೊಟ್ಟೆಕಿಚ್ಚು ತೋರಿಸಿಕೊಡುತ್ತದೆ.

ತಾವೊಬ್ಬರು ಗೃಹಮಂತ್ರಿಯಾಗಲು ಅಂಬೇಡ್ಕರ್ ಬರೆದ ಸಂವಿಧಾನದಿಂದಲ್ಲೇ,ತಾವು ಪ್ರಮಾಣವಚನ ಸ್ವೀಕರಿಸಿದ್ದು ಅಂಬೇಡ್ಕರ್ ಸಂವಿಧಾನ ಎಂಬುವುದು ತಾವು ಮರೆಯಬಾರದು ಎಂದು ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಮಿನಿ ನ್ಯೂಸ್

## ತಾಲ್ಲೂಕು ಕಚೇರಿ ಎದುರು ಪ್ರತಿಭಟನೆ

• ಉದಯವಾಹಿನಿ ಸುಳ್ಯ

ನ್ಯಾಯ ಒದಗಿಸುವಂತೆ ಆಗ್ರಹಿಸಿ ಇಡೀ ಕುಟುಂಬವೇ ತಾಲ್ಲೂಕು ಕಚೇರಿ ಮುಂಭಾಗ ಅಹೋರಾತ್ರಿ ನಿದ್ರಿಸಿ ಪ್ರತಿಭಟನೆ ನಡೆಸಿದರು. ಪಂಬೆತ್ತಾಡಿ ಗ್ರಾಮದ ಚಂರ್ಬ ಮೇರ ಎಂಬುವರ ಜಮೀನನ್ನು ಸ್ಥಳೀಯ ನಿವಾಸಿ ಮೋನಪ್ಪ ಗೌಡ ಮತ್ತು ಇತರರು ಅಕ್ರಮವಾಗಿ ಮಂಜೂರುಗೊಳಿಸಿಕೊಂಡಿದ್ದಾರೆ ಎಂಬ ಆರೋಪದಡಿ ಎರಡು ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ಪ್ರತಿಭಟನೆಯಲ್ಲಿ ಆರು ಮಂದಿ ಇದ್ದು, ಅದರಲ್ಲಿ 70ವರ್ಷದ ವೃದ್ದೆಯೂ ಇದ್ದಾರೆ.

ಅವರ ಜಮೀನನ್ನು ಅಕ್ರಮ ಮಂಜೂರು ಮಾಡಿ ದಲಿತ ಕುಟುಂಬಕ್ಕೆ ಅನ್ಯಾಯ ಮಾಡಿದ್ದಾರೆ ಎಂದು ಆರೋಪಿಸಿ ಕುಟುಂಬವು 3 ದಿನಗಳಿಂದ ಪ್ರತಿಭಟನೆ ನಡೆಸುತ್ತಿದ್ದು, ಅಧಿಕಾರಿಗಳು ಅಥವಾ ಜನಪ್ರತಿನಿಧಿಗಳು ಸಮಸ್ಯೆ ವಿಚಾರಿಸಿಲ್ಲ ಎಂಬ ಆರೋಪ ಕೇಳಿಬಂದಿದೆ.

## ಮಕ್ಕಳ ಶಾರೀರಿಕ ಮತ್ತು ಮಾನಸಿಕ ಸದೃಢತೆಗೆ ಯೋಗ ಅವಶ್ಯಕ: ರವಿ ಕೆ ಆಂಬೇಕರ್



ಉದಯವಾಹಿನಿ ಚಿತ್ರ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ಆಯುಷ್ ಇಲಾಖೆ ಚಿತ್ರದುರ್ಗ, ಸರ್ಕಾರಿ ಆಯುಷ್ ಆರೋಗ್ಯ ಮಂದಿರ ಜೆ. ಏನ್. ಕೋಟೆ ವತಿಯಿಂದ ವ್ಯಾಪ್ತಿಯ ನರೆನ ಹಾಳ್ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗಾಗಿ ಯೋಗ ತರಬೇತಿ ಕಾರ್ಯಕ್ರಮ ಶನಿವಾರ ಹಮ್ಮಿಕೊಳ್ಳಲಾಗಿತ್ತು.

ಜಿ ಎನ್ ಕೋಟೆ ಆಯುಷ್ ಆರೋಗ್ಯ ಮಂದಿರದ ಯೋಗ ತರಬೇತುದಾರ ರವಿ ಕೆ.ಅಂಬೇಕರ್ ಮಕ್ಕಳಿಗೆ ಯೋಗ ತರಬೇತಿ ನೀಡಿ ಮಾತನಾಡಿ ಯೋಗ ಕೇವಲ ವಯಸ್ಕರಿಗೆ ಮಾತ್ರ ಸೀಮಿತವಲ್ಲ, ಇದು ಮಕ್ಕಳಿಗೂ ಅತ್ಯಂತ ಪ್ರಯೋಜನಕಾರಿ. ಇಂದಿನ ಜೀವನಶೈಲಿಯಲ್ಲಿ ಮಕ್ಕಳು ಸಾಕಷ್ಟು ಒತ್ತಡಕ್ಕೆ ಒಳಗಾಗುತ್ತಾರೆ.

ಯೋಗ ಇದನ್ನು ನಿವಾರಿಸುವಲ್ಲಿ ಬಹಳ ಸಹಕಾರಿಯಾಗಿದೆ. ಯೋಗವು ಮಕ್ಕಳ ದೈಹಿಕ, ಮಾನಸಿಕ ಮತ್ತು ಭಾವನಾತ್ಮಕ ಬೆಳವಣಿಗೆಗೆ ಅತ್ಯಂತ ಪ್ರಯೋಜನಕಾರಿ. ಮಕ್ಕಳನ್ನು ಚಿಕ್ಕ ವಯಸ್ಸಿನಿಂದಲೇ ಯೋಗಕ್ಕೆ ಪರಿಚಯಿಸುವುದು ಅವರ ಒಟ್ಟಾರೆ ಸುಖ ಮತ್ತು ಸಂತೋಷಕ್ಕೆ ಕಾರಣವಾಗುತ್ತದೆ ಎಂದು ತಿಳಿಸಿದರು. 120ಕ್ಕೂ ಹೆಚ್ಚು ಮಕ್ಕಳು ಭಾಗವಹಿಸಿದ್ದ ಈ ತರಬೇತಿ ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯಶಿಕ್ಷಕ ಸುಭಾನ್ ಹೆಚ್, ನರಸಿಂಹಪ್ಪ ಪಿ ವಿ, ನೀಲಮ್ಮ, ಮತ್ತು ಗೀತಾ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಕೆಂಭಾವಿ: ಪುರಸಭೆಯ ಆಶ್ರಯ ಕಮಿಟಿಯ ಅಧ್ಯಕ್ಷರಾಗಿ ಆಯ್ಕೆಯಾದ ಶರಣಬಸವ ಕಾಕಾ ಡಿಗ್ಗಾವಿ ಹಾಗೂ ಆಶ್ರಯ ಕಮಿಟಿ ಸದಸ್ಯರಾಗಿ ಆಯ್ಕೆಯಾದ ಮಕ್ತುಮ್ ಪಟೇಲ್ ಇವರನ್ನು ಕರವೇ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ವಾಯ್ ಟಿ ಪಾಟೀಲ, ಶ್ರೀಶೈಲ್ ಕಾಚಾಪುರ್, ಕುಮಾರ್ ಮೋಪಗಾರ್, ಬಾವಾಸಾಬ್ ನದಾಫ, ಶಿವು ಮಲ್ಲಿಭಾವ, ಅಂಬಣ್ಣ, ಸಾಯಬಣ್ಣ ಎಂಟಮಾನ, ವಿಠ್ಠಲ್ ಹಾಗೂ ಇತರರು ಇದ್ದರು.**

## ಆಟೋ ನಿಲ್ದಾಣ ಉದ್ಘಾಟನೆ

• ಉದಯವಾಹಿನಿ ಲಕ್ಷ್ಮೇಶ್ವರ

ಪಟ್ಟಣದ ಶಿಗ್ಲಿನಾಕಾದಲ್ಲಿ ಕ್ರಾಂತಿವೀರ ಸಂಗೊಳ್ಳಿರಾಯಣ್ಣ ಆಟೋ ಚಾಲಕರ ಮತ್ತು ಮಾಲಕರ ರೀಕ್ಷಾ ನಿಲ್ದಾಣದ ಉದ್ಘಾಟನೆ ಪತ್ರಕರ್ತ ರಮೇಶ ನಾಡಗೇರ ರಿಬ್ಬನ್ ಕತ್ತರಿಸುವ ಮೂಲಕ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು ಲಕ್ಷ್ಮೇಶ್ವರ ಐತಿಹಾಸಿಕ ನಗರವಾಗಿದ್ದು ಇಲ್ಲಿ ರಾಜ್ಯ ಮತ್ತು ಬೇರೆ ರಾಜ್ಯಗಳಿಂದ ಶ್ರೀ ಸೋಮೇಶ್ವರ ದೇವಸ್ಥಾನ ಮತ್ತು ದೂದಪೀರಾಂ ದರ್ಗಾಕ್ಕೆ ಪ್ರವಾಸಿಗರು ಬರುತ್ತಿದ್ದು ಪ್ರವಾಸಿಗರಿಗೆ ಹೊರೆ ಆಗದಂತೆ ಸೂಕ್ತ ದರದಲ್ಲಿ ಅವರನ್ನು ಕೊಂಡೊಯ್ಯಬೇಕು ಅದೇ ರೀತಿ ಬಡ ಮತ್ತು ಮಧ್ಯಮ ವರ್ಗದ ಜನರು ಗರ್ಭಿಣಿ ಸ್ತ್ರೀಯರು ಹಿರಿಯ ನಾಗರಿಕರು ಅವರನ್ನು ಸಹ ಸೂಕ್ತ ದರದೊಂದಿಗೆ ಪಡೆದುಕೊಂಡು ಸುರಕ್ಷಿತವಾಗಿ ತಲುಪಿಸಿ.

ಈ ರಿಕ್ಷಾ ನಿಲ್ದಾಣದ ಬಗ್ಗೆ ಸದಾ ಅಭಿಪ್ರಾಯ ಪಡೆದುಕೊಳ್ಳುವಂತೆ ಕಾರ್ಯನಿರ್ಹಿಸಬೇಕು ಎಂದು ಹೇಳಿದರು.

# ಕಾಡಾನೆ ದಾಳಿ ತೆಂಗು, ಜೋಳದ ಬೆಳೆ ನಷ್ಟ

• ಉದಯವಾಹಿನಿ ಬೇಲೂರು

ತಾಲ್ಲೂಕಿನ ಚಂದನಹಳ್ಳಿಯಲ್ಲಿ ಶನಿವಾರ ರಾತ್ರಿ ಕಾಡಾನೆಗಳು ತೆಂಗು, ಜೋಳದ ಬೆಳೆಗಳನ್ನು ನಾಶಪಡಿಸಿವೆ. 20 ಕಾಡಾನೆ ಹಿಂಡು ಮೂರು ದಿನಗಳಿಂದ ಚಂದನಹಳ್ಳಿಯಲ್ಲಿ ರಾತ್ರಿ ದಾಳಿ ಇಟ್ಟು ಬೆಳ ತಿಂದು, ನಾಶಪಡಿಸಿವೆ. ಯೋಗೇಶ ಅವರಿಗೆ ಸೇರಿದ 25 ತೆಂಗಿನ ಗಿಡ, ಒಂದುವರೆ ಎಕರೆ ಜೋಳದ ಬೆಳೆ ತುಳಿದು ನಷ್ಟ ಉಂಟು ಮಾಡಿವೆ.

ಡಿ.ಎಸ್.ಗೌಡ ಎಂಬುವರ ನಾಲ್ಕು ಎಕರೆ ಪ್ರದೇಶಲ್ಲಿ ಬೆಳೆದಿದ್ದ ಜೋಳದ ಬೆಳೆ ತುಳಿದು ತಿಂದು ನಾಶಪಡಿಸಿವೆ. ರೈತ ಯೋಗೇಶ್, ಮಾತನಾಡಿ ಕಾಡಾನೆಯಿಂದ ನಾಶವಾದ ಬೆಳೆಗೆ ಸರ್ಕಾರ ಪರಿಹಾರ ಕೊಡುವುದು ಬೇಡ, ಆನೆಗಳನ್ನು ಸ್ಥಳಾಂತರ ಮಾಡಲಿ. ಆಗ ನಾವೇ ಸರ್ಕಾರಕ್ಕೆ ಪರಿಹಾರ ನೀಡುತ್ತೇವೆ. ತೆಂಗಿನ ಗಿಡ ಬೆಳೆಸುವುದು ಎಷ್ಟು ಕಷ್ಟ ಎಂಬುದು ಎಲ್ಲರಿಗೆ ಗೊತ್ತಿದೆ. ಆನೆಗಳು ಈ ರೀತಿ ಬೆಳೆ ಹಾನಿ ಮಾಡುತ್ತಿವೆ. ನಾವು ಎನನ್ನು ತಿನ್ನಬೇಕು.



ಉದಯವಾಹಿನಿ ಚಿತ್ರ

ಅರಣ್ಯ ಇಲಾಖೆಯವರು ಬಂದು ಅರ್ಧಗಂಟೆ ಇದ್ದು ಹೋಗುತ್ತಾರೆ.

ನಾವು ಆನೆಗಳನ್ನು ಹೇಗೆ ಓಡಿಸೋದು ನಮಗೆ ಜೀವ ಭಯವಿಲ್ಲವೆ? ನಮ್ಮ ಬಳಿ ಏನಾದರೂ ಆಯುಧಗಳು ಇವೆಯಾ ಸರ್ಕಾರ ಈ ಬಗ್ಗೆ ಗಮನಹರಿಸಿ ಸಮಸ್ಯೆಯನ್ನು ಬಗೆಹರಿಸಲು ಮುಂದಾಗಬೇಕು’ ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ರೈತರಾದ ಡಿ.ಎಸ್.ಗೌಡ, ಕಾಂತರಾಜು, ಸೋಮಶೇಖರ್ ನೀಲಕಂಠೇ ಗೌಡ, ಜಗದೀಶ್, ಮುದ್ದೋಜಿರಾವ್ ಇದ್ದರು.

# ಕೆರೆ ತೂಬಿನಲ್ಲಿ ಅಪಾರ ನೀರು ಪೋಲು

• ಉದಯವಾಹಿನಿ ನಾಯಕನಹಟ್ಟಿ

ಗುರುತಿಪ್ಪೇರುದ್ರಸ್ವಾಮಿ ಚಿಕ್ಕಕೆರೆಯ ತೂಬಿನ ದುರವಸ್ಥೆಯಿಂದ ಅಪಾರ ಪ್ರಮಾಣದ ನೀರು ವ್ಯರ್ಥವಾಗಿ ಹರಿದು ಹಳ್ಳ ಸೇರುತ್ತಿದೆ. ಇದು ಗ್ರಾಮಸ್ಥರಲ್ಲಿ ಬೇಸರ ಉಂಟು ಮಾಡಿದೆ. ಪಟ್ಟಣಕ್ಕೆ ಹೊಂದಿಕೊಂಡಿರುವ ಗುರುತಿಪ್ಪೇರುದ್ರಸ್ವಾಮಿ ಚಿಕ್ಕಕೆರೆ ಯು 389 ಎಕರೆ ವಿಸ್ತೀರ್ಣ ಹೊಂದಿದೆ.

ಒಮ್ಮೆ ತುಂಬಿದರೆ ನಾಯಕನಹಟ್ಟಿ ಪಟ್ಟಣ ಸೇರಿ ಜಾಗನೂರಹಟ್ಟಿ, ಮಾದಯ್ಯನಹಟ್ಟಿ, ಮನುಮೈನಹಟ್ಟಿ, ಎನ್.ಮಹದೇವಪುರ, ಎನ್.ಗೌರಿಪುರ, ಓಬಯ್ಯನಹಟ್ಟಿ, ರೇಖಲಗೆರೆ, ಗುಂತಕೋಲಮ್ಮನಹಳ್ಳಿ ಸೇರಿ ಹತ್ತಾರು ಗ್ರಾಮಗಳಲ್ಲಿರುವ ಕೊಳವೆಬಾವಿಗಳ ಅಂತರ್ಜಲ ವೃದ್ಧಿಯಾಗುತ್ತದೆ. ಈ ಕೆರೆ ನಾಯಕನಹಟ್ಟಿ ಪಟ್ಟಣದ 10 ವಾರ್ಡ್‌ಳಿಗೆ ಕುಡಿಯುವ ನೀರಿನ ಪ್ರಮುಖ ಜಲಮೂಲವಾಗಿದೆ. ಹಲವು ವರ್ಷಗಳಿಂದ ರೈತರು ತಮ್ಮ ಜಮೀನುಗಳಿಗೆ ಮತ್ತು ಕೆಲವರು ಇಟ್ಟಿಗೆ ತಯಾರಿಸಲು ಜೆಸಿಬಿ, ಟ್ರ್ಯಾಕ್ಟರ್ ಮತ್ತು ಟಿಪ್ಪರ್‌ಗಳ ಮೂಲಕ ಹೂಳನ್ನು ಖಾಲಿ ಮಾಡಿದ್ದರು. ರಾತ್ರೋ ರಾತ್ರಿ ಕೆರೆಯಲ್ಲಿ 15ರಿಂದ 20ಅಡಿ ಆಳದಷ್ಟು ಗುಂಡಿ ತೆಗೆದು ಮರಳು ತೋಡಿದ್ದರು. ಕೆರೆಯಲ್ಲಿ ನೀರಿಲ್ಲದ್ದರಿಂದ ಅಕ್ರಮ ಚಟುವಟಿಕೆಗಳು ನಡೆಯುತ್ತಿದ್ದವು. ಈ ಕೆರೆ



ಉದಯವಾಹಿನಿ ಚಿತ್ರ

ಬತ್ತಿದ ಪರಿಣಾಮ ನಾಯಕನಹಟ್ಟಿ ಹೋಬಳಿಯ ಹತ್ತಾರು ಗ್ರಾಮಗಳಲ್ಲಿ ಅಂತರ್ಜಲಮಟ್ಟ ಕುಸಿದು ಕೊಳವೆಬಾವಿಗಳಲ್ಲಿ ನೀರಿಲ್ಲದ ಪರಿಸ್ಥಿತಿ ಉಂಟಾಗಿತ್ತು. ಪಟ್ಟಣ ಸೇರಿ ಹೋಬಳಿಯ ಬಹುತೇಕ ಗ್ರಾಮಗಳಲ್ಲಿ ಹಲವು ವರ್ಷಗಳವರೆಗೆ ಕುಡಿಯುವ ನೀರಿಗೆ ಹಾಹಾಕಾರ ಎದುರಾಗಿತ್ತು. ಎರಡು ತಿಂಗಳ ಹಿಂದೆ ಸುರಿದ ಭಾರಿ ಮಳೆಗೆ ಚಿಕ್ಕಕೆರೆಯು ತುಂಬಿ ಕೋಡಿಬಿದ್ದಿತು. ಕೆರೆ ಮೈದುಂಬಿರುವುದರಿಂದ ಅಂತರ್ಜಲ ವೃದ್ಧಿಯಾಗುತ್ತದೆ ಎಂಬ ಆಶಯ ರೈತರಲ್ಲಿದೆ.

ಎರಡು ತಿಂಗಳಿಂದ ಇಲ್ಲಿಯವರೆಗೆ 2 ರಿಂದ 3 ಅಡಿಯಷ್ಟು ನೀರು ಖಾಲಿಯಾದರೂ ಸಣ್ಣ ನೀರಾವರಿ ಇಲಾಖೆ ಈವರೆಗೂ ತೂಬು ದುರಸ್ತಿ ಮಾಡಲು ಯಾವುದೇ ಕ್ರಮ ಕೈಗೊಂಡಿಲ್ಲ. ಇದೇ ರೀತಿ ನೀರು ಹರಿದರೆ ಬೇಸಿಗೆ ಆರಂಭವಾಗುವ ಮುನ್ನವೇ ಕೆರೆಯಲ್ಲಿರುವ ನೀರು ಖಾಲಿಯಾಗಬಹುದು ಎಂಬ ಭೀತಿ ಎದುರಾಗಿದೆ. ಮುಂದಿನ ದಿನಗಳಲ್ಲಿ ಬೇಸಿಗೆಯ ಬಿಸಿಲಿಗೆ ಕೆರೆಯಲ್ಲಿರುವ ನೀರು ಆವಿಯಾಗುತ್ತದೆ.

ಅಂತರ್ಜಲ ಮಟ್ಟ ಕುಸಿಯುತ್ತದೆ. ಹಾಗಾಗಿ ತೂಬಿನ ಮೂಲಕ ಸೋರಿಕೆಯಾಗುತ್ತಿರುವ ಅಪಾರ ಪ್ರಮಾಣದ ನೀರನ್ನು ನಿಲ್ಲಿಸಲು ಸಣ್ಣ ನೀರಾವರಿ ಇಲಾಖೆ ಮುಂದಾಗಬೇಕು ಎಂದು ಹೋಬಳಿಯ ರೈತರು ಆಗ್ರಹಿಸಿದ್ದಾರೆ.

### ರೈತರು ಆತಂಕ

**ಆದರೆ ತೂಬಿನಲ್ಲಿರುವ ತಾಂತ್ರಿಕ ದೋಷದಿಂದಾಗಿ ಅಪಾರ ಪ್ರಮಾಣದ ನೀರು ವ್ಯರ್ಥವಾಗಿ ಹಳ್ಳ ಸೇರುತ್ತಿದೆ. ತೂಬು ಬಂದ್ ಮಾಡಿದ್ದರೂ ನೀರು ಹೊರಗೆ ಹರಿದು ಹೋಗುತ್ತಿದೆ. ಇದೇ ರೀತಿ ಆದರೆ ಕೆರೆಯಲ್ಲಿ ನೀರು ಉಳಿಯುವುದೇ ಎಂದು ರೈತರು ಆತಂಕ ವ್ಯಕ್ತಪಡಿಸಿದ್ದಾರೆ.**

# ಸ್ಮಾರ್ಟ್ ಆ್ಯಪ್‌ಗಳ ಮೂಲಕ ಕಾಫಿ ವಿಸ್ತರಿಸಿ: ಡಾ.ಕೆ.ಜಿ. ಜಗದೀಶ್

• ಉದಯವಾಹಿನಿ ಸಕಲೇಶಪುರ

’ಅಂತರ ರಾಷ್ಟ್ರೀಯ ಮಾರುಕಟ್ಟೆಯಲ್ಲಿ ಭಾರತದ ಕಾಫಿಯನ್ನು ಹೆಚ್ಚು ಮಾರಾಟ ಮಾಡಲು, ಕಾಫಿ ಬೆಳೆಗಾರರು ತಾವು ಬೆಳೆದ ಕಾಫಿಯ ಗುಣಮಟ್ಟ ಕಾಯ್ದುಕೊಂಡು, ಹೊಸ ಬ್ರಾಂಡ್ ಗಳ ಮೂಲಕ ಮಾರುಕಟ್ಟೆ ಪ್ರವೇಶ ಮಾಡುವ ಅಗತ್ಯವಿದೆ’ ಎಂದು ಕಾಫಿ ಮಂಡಳಿ ಕಾರ್ಯದರ್ಶಿ ಡಾ.ಕೆ.ಜಿ. ಜಗದೀಶ್ ಹೇಳಿದರು. 7 ಬೀನ್ ಟೀಮ್ ವತಿಯಿಂದ ಪಟ್ಟಣದ ಒಕ್ಕಲಿಗರ ಸಮುದಾಯ ಭವನದಲ್ಲಿ ಹಮ್ಮಿಕೊಂಡಿದ್ದ ’ಕಾಫಿ ಸಂಸ್ಕೃತಿ– 2025’ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

’ಭಾರತದ ಕಾಫಿಗೆ ಅಂತರ ರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಿಸಲು ಭಾರತೀಯ ಕಾಫಿ ಮಂಡಳಿ ಉತ್ಸುಕವಾಗಿದೆ. ಪ್ರಸಕ್ತ ದೇಶದಲ್ಲಿ 3,500 ಟನ್ ಕಾಫಿ ಉತ್ಪಾದನೆ ಆಗುತ್ತಿದ್ದು ಮುಂದಿನ ವರ್ಷಗಳಲ್ಲಿ 6,500 ಟನ್ ಉತ್ಪಾದನೆ ಗುರಿ ತಲುಪಬೇಕು. ಇದಕ್ಕೆ ’ಭಾರತದ ಕಾಫಿಗೆ ಅಂತರ ರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೇಡಿಕೆ ಹೆಚ್ಚಿಸಲು ಭಾರತೀಯ ಕಾಫಿ




ಉದಯವಾಹಿನಿ ಚಿತ್ರ

**ಕಾಫಿ ಸಂಸ್ಕೃತಿ- 2025**

ಮಂಡಳಿ ಉತ್ಸುಕವಾಗಿದೆ. ಪ್ರಸಕ್ತ ದೇಶದಲ್ಲಿ 3,500 ಟನ್ ಕಾಫಿ ಉತ್ಪಾದನೆ ಆಗುತ್ತಿದ್ದು, ಮುಂದಿನ ವರ್ಷಗಳಲ್ಲಿ 6,500 ಟನ್ ಉತ್ಪಾದನೆ ಗುರಿ ತಲುಪಬೇಕು.

ಇದಕ್ಕೆ ಪೂರಕವಾಗಿ ಭಾರತ ಮತ್ತು ವಿದೇಶಗಳಲ್ಲಿ ಕಾಫಿಯ ಮಾರಾಟ ಮತ್ತು ಸೇವನೆ ಹೆಚ್ಚು ಮಾಡಲು ಪ್ರಚಾರ ನಡೆಸುವುದು, ಕಾಫಿ ಸಂಶೋಧನೆ, ಬೆಳೆಗಾರರಿಗೆ ಹೊಸ ತೋಟಗಳ ವಿಸ್ತರಣೆ, ಕಣಗಳ, ಗೋದಾಮುಗಳ ನಿರ್ಮಾಣ, ಯಂತ್ರೋಪಕರಣಗಳ ಖರೀದಿ, ಸಂಸ್ಕರಣಾ ಘಟಕ ಸ್ಥಾಪನೆಗಳಿಗೆ ಕಾಫಿ ಮಂಡಳಿಯಿಂದ ಸಬ್ಸಿಡಿ ಒದಗಿಸಲಾಗುತ್ತಿದೆ. ಇದರ ಉಪಯೋಗಗಳನ್ನು ಪಡೆದುಕೊಂಡು ಬೆಳೆಗಾರರು ಉತ್ಪಾದನೆ ಹಾಗೂ ಗುಣಮಟ್ಟ ಹೆಚ್ಚು ಮಾಡಬೇಕು’ ಎಂದು ಸಲಹೆ ನೀಡಿದರು.

ಪೂರಕವಾಗಿ ಭಾರತ ಮತ್ತು ವಿದೇಶಗಳಲ್ಲಿ ಕಾಫಿಯ ಮಾರಾಟ ಮತ್ತು ಸೇವನೆ ಹೆಚ್ಚು ಮಾಡಲು ಪ್ರಚಾರ ನಡೆಸುವುದು, ಕಾಫಿ ಸಂಶೋಧನೆ, ಬೆಳೆಗಾರರಿಗೆ ಹೊಸ ತೋಟಗಳ ವಿಸ್ತರಣೆ, ಕಣಗಳ, ಗೋದಾಮುಗಳ ನಿರ್ಮಾಣ, ಯಂತ್ರೋಪಕರಣಗಳ ಖರೀದಿ, ಸಂಸ್ಕರಣಾ ಘಟಕ ಸ್ಥಾಪನೆಗಳಿಗೆ ಕಾಫಿ ಮಂಡಳಿಯಿಂದ ಸಬ್ಸಿಡಿ ಒದಗಿಸಲಾಗುತ್ತಿದೆ. ಇದರ ಉಪಯೋಗಗಳನ್ನು ಪಡೆದುಕೊಂಡು ಬೆಳೆಗಾರರು ಉತ್ಪಾದನೆ ಹಾಗೂ ಗುಣಮಟ್ಟ ಹೆಚ್ಚು ಮಾಡಬೇಕು’ ಎಂದು ಸಲಹೆ ನೀಡಿದರು.

# ಅಂಬೇಡ್ಕರ್ ಪುತ್ಥಳಿ ತೆರವು: ಉದ್ವಿಗ್ನ

• ಉದಯವಾಹಿನಿ, ಮೂಡಿಗೆರೆ

ಪಟ್ಟಣದ ಲಯನ್ಸ್ ವೃತ್ತದಲ್ಲಿ ಭೀಮಾ ಕೋರೆಂಗಾವ್ ವಿಜಯೋತ್ಸವಕ್ಕಾಗಿ ತಂದಿದ್ದ ಅಂಬೇಡ್ಕರ್ ಪುತ್ತಳಿ ತೆರವು ವಿಚಾರಕ್ಕೆ ಸಂಬಂಧಿಸಿದಂತೆ ಗೊಂದಲ ನಿರ್ಮಾಣವಾಗಿದ್ದು ಉದ್ವಿಗ್ನ ಸ್ಥಿತಿ ಏರ್ಪಟ್ಟಿತ್ತು. ಭೀಮಾ ಕೋರೆಂಗಾವ್ ವಿಜಯೋತ್ಸವಕ್ಕಾಗಿ ಬೆಂಗಳೂರಿನಿಂದ ಅಂಬೇಡ್ಕರ್ ಪುತ್ಥಳಿಯನ್ನು ತರಲಾಗಿತ್ತು. ಅದನ್ನು ಕಾರ್ಯಕ್ರಮದ ಬಲಭಾಗದಲ್ಲಿ ಇಟ್ಟು ಪುಷ್ಪಾರ್ಚನೆ ಮಾಡಲಾಗಿತ್ತು. ಆದರೆ, ಕಾರ್ಯಕ್ರಮ ಮುಗಿದರೂ ಅದನ್ನು ತೆರವು ಮಾಡದೇ ಉಳಿಸಿದ್ದರಿಂದ ಪಟ್ಟಣ ಪಂಚಾಯಿತಿಯಿಂದ ತೆರವಿಗೆ ಸೂಚಿಸಲಾಗಿತ್ತು. ಈ ವೇಳೆ ಆಚರಣಾ ಸಮಿತಿಯ ಕೆಲವರು ತೆರವಿಗೆ ಒಪ್ಪಿಗೆ ಸೂಚಿಸಿದರೆ, ಮತ್ತೆ ಕೆಲವರು ವಿರೋಧ ವ್ಯಕ್ತಪಡಿಸಿದರು.

ಇದರಿಂದ ಕೆಲಕಾಲ ಗೊಂದಲ ನಿರ್ಮಾಣವಾಗಿತ್ತು. ಸ್ಥಳದಲ್ಲಿ ಇದ್ದ ಪೊಲೀಸರು ಗೊಂದಲವನ್ನು ತಿಳಿಗೊಳಿಸಿದ್ದು, ಆಚರಣಾ ಸಮಿತಿಯ ಪದಾಧಿಕಾರಿಗಳೇ ಪ್ರತಿಮೆಯನ್ನು ತೆರವು ಮಾಡಿದ್ದು ಪ್ರಕರಣದ ಗೊಂದಲಕ್ಕೆ ತೆರೆ ಎಳೆಯಲಾಯಿತು. ಮುನ್ನೆಚ್ಚರಿಕೆ ಕ್ರಮವಾಗಿ ಪ್ರತಿಮೆ ಇಟ್ಟಿದ್ದ ಪ್ರದೇಶದಲ್ಲಿ ಪೊಲೀಸ್ ಕಾವಲು ಹಾಕಲಾಗಿದೆ.

# ಪ್ರತಿಭಟನೆಯಲ್ಲಿ ವಿಜಯೇಂದ್ರ ಗೈರು: ಕಾಲೆಳೆದ ಯತ್ನಾಳ್

## ಭಾರಿ ಪ್ರತಿಭಟನೆ ಅಂತಾ ಹೇಳಿದ್ದರು, ಪಾಪ ವಿಜಯೇಂದ್ರ ಅವರಿಗೆ ಏನು ಕೆಲಸ ಇತ್ತು ಗೊತ್ತಿಲ್ಲ ಬಂದಿಲ್ಲ

• ಉದಯವಾಹಿನಿ, ವಿಜಯಪುರ

ಗುತ್ತಿಗೆದಾರ ಸಚಿನ್ ಪಾಂಚಾಳ ಆತ್ಮಹತ್ಯೆ ಪ್ರಕರಣ ವಿಚಾರವಾಗಿ, ಪ್ರಕರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಹೆಸರಿದ್ದು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಶಾಸಕ ಬಸನಗೌಡ ಪಾಟೀಲ್ ಆಗ್ರಹಿಸಿದ್ದಾರೆ.

**ಸಚಿನ್ ಆತ್ಮಹತ್ಯೆ ಪ್ರಕರಣ**

ಸಚಿವ ಪ್ರಿಯಾಂಕ್ ಖರ್ಗೆ ವಿರುದ್ದ ಕಲಬುರಗಿಯಲ್ಲಿ ಬಿಜೆಪಿ ಮುಖಂಡರಿಂದ ನಡೆದ ಪ್ರತಿಭಟನೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಗೈರು ವಿಚಾರವಾಗಿ ಪ್ರತಿಕ್ರಿಯಿಸಿದರು.

ವಿಜಯೇಂದ್ರ ಅವರ ನೇತೃತ್ವದಲ್ಲಿ ಹೋರಾಟವೆಂದು ಎಲ್ಲಾ ಕಡೆ ಬೋರ್ಡ್ ಹಾಕಿದ್ದರು. ಭಾರಿ ಪ್ರತಿಭಟನೆ ಅಂತಾ ಹೇಳಿದ್ದರು. ಪಾಪ ವಿಜಯೇಂದ್ರ ಅವರಿಗೆ ಏನು ಕೆಲಸ ಇತ್ತು ಗೊತ್ತಿಲ್ಲ ಬಂದಿಲ್ಲ ಎಂದು ಯತ್ನಾಳ್ ಹೇಳಿದರು.

ನಿನ್ನೆ ಬಿಜೆಪಿಯವರಿಂದ ಮೂರು ಕಡೆ ಹೋರಾಟ ಆಗಿದೆ. ಒಂದು ವಕ್ಫ್ ವಿರುದ್ಧ, ಇನ್ನೊಂದು ಪ್ರಿಯಾಂಕ್ ಖರ್ಗೆ ವಿರುದ್ಧ ಹೋರಾಟ,ಇನ್ನೊಂದು ಬಾಣಂತಿಯರ ಸಾವು ಹೋರಾಟ. ವಿಜಯೇಂದ್ರ ಅವರು ಬಾಣಂತಿಯರ ಸಾವಿನ ವಿರುದ್ಧದ ಶಿವಮೊಗ್ಗದ ಹೋರಾಟದಲ್ಲಿ ಭಾಗಿ ಆಗಿದ್ದರು. ಇದರಿಂದ ಗೊತ್ತಾಗುತ್ತೆ ನಮ್ಮಲ್ಲಿ ಸಾಮೂಹಿಕ ನಾಯಕತ್ವ ಇದೆ ಎಂದು. ಅವರಲ್ಲಿ ಹೋರಾಟ ಮಾಡಿದ್ದಾರೆ. ನಾವು ಇಲ್ಲಿ ಮಾಡಿದ್ದೇವೆ ಅಷ್ಟೆ ಎಂದು ವಿಜಯೇಂದ್ರ ಕಾಲೆಳೆದರು.

ವಿಜಯಪುರದಲ್ಲಿ ಸ್ಥಳಿಯ ಶಾಸಕ ಬಸನಗೌಡಾ ಪಾಟೀಲ ಯತ್ನಾಳ್ ಹೇಳಿಕೆ ಚುನಾವಣಾ ಪ್ರಕ್ರಿಯೆ ಇದ್ದೇ ಇರುತ್ತದೆ. ಈ ವಿಚಾರದಲ್ಲಿ ಪ್ರಹ್ಲಾದ್ ಜೋಶಿ ಅವರು ಹೇಳಿದ್ದು ಸರಿಯಿದೆ.

ಈಗಿರೋದು ಅಟ್ಯಾಕ್ ಸಮಿತಿ. ಮುಂದೆ ರೆಗ್ಯೂಲರ್ ಸಮಿತಿ ಬರಲಿದೆ. ಮುಂದೆ ಚುನಾಯಿತ ಆಧ್ಯಕ್ಷರು ಬರುತ್ತಾರೆ. ಅಧ್ಯಕ್ಷ ಯಾರಾಗ್ತಾರೆಂಬುದನ್ನು ರಾಜ್ಯ ಘಟಕ



ಉದಯವಾಹಿನಿ ಚಿತ್ರ

ಕೇಂದ್ರಕ್ಕೆ ಬಿಡುತ್ತದೆ. ರಾಷ್ಟ್ರಾಧ್ಯಕ್ಷರು ಯಾರು ಆಧ್ಯಕ್ಷರೆಂದು ಘೋಷಣೆ ಮಾಡುತ್ತಾರೆ. ಇದರಲ್ಲಿ ವಿವಾದವಿಲ್ಲ.

ಈಗ ಹಂಗಾಮಿ ಅಧ್ಯಕ್ಷರು, ಪ್ರಹ್ಲಾದ್ ಜೋಶಿ ಅವರು ಹೇಳಿದ್ದರಲ್ಲಿ ಯಾವುದೇ ವಿವಾದವಿಲ್ಲ. ಜೋಶಿ ಅವರು ನಮ್ಮ ಪಕ್ಷದ ನಿಯಮಗಳ ಬಗ್ಗೆ ಹೇಳಿದ್ದಾರೆ. ಅದನ್ನು ವಿವಾದ ಮಾಡಿದರೆ ಹೇಗೆ ಎಂದರು.

ಚುನಾವಣೆ ಆಗಲ್ಲ, ಸಹಮತ ಮಾಡಿಕೊಂಡು ರಾಜ್ಯಾಧ್ಯಕ್ಷರ ಆಯ್ಕೆ ಮಾಡುವ ಪದ್ಧತಿಯಿದೆ. ಚುನಾವಣಾ ಆಯೋಗದ ನಿಬಂಧನೆಗಳು ಇವೆ. ಈ ನಿಬಂಧನೆಗಳನ್ನು ಪಾಲನೆ ಮಾಡಿ ರಾಷ್ಟ್ರೀಯ ಆಧ್ಯಕ್ಷರ ಸೂಚನೆ ಮೇರೆಗೆ ಘೋಷಣೆ ಆಗುತ್ತದೆ ಜಿಲ್ಲಾ ಘಟಕದ ಆಧ್ಯಕ್ಷರ ಬದಲಾವಣೆಯೂ ಆಗಲಿದೆ ಎಂದರು.

### ಅಶೋಕ ಬಗ್ಗೆ ಆರೋಪಗಳಿಲ್ಲ

**ಈ ಕುರಿತು ನನಗೆ ಗೊತ್ತಿಲ್ಲ. ಆರ್ ಅಶೋಕ್ ಎಲ್ಲರನ್ನೂ ವಿಶ್ವಾಸಕ್ಕೆ ತೆಗೆದುಕೊಂಡು ಹೋಗುತ್ತಾರೆ. ಬೆಳಗಾವಿ ಅಧಿವೇಶನದಲ್ಲಿ ಹಿರಿಯ ಶಾಸಕರ ಸಲಹೆ ಸೂಚನೆ ತೆಗೆದುಕೊಂಡರು. ಎಲ್ಲರೂ ಹೇಳಿದ ವಿಚಾರಗಳನ್ನು ಪಾಲನೆ ಮಾಡಿದರು. ಯಾವ ರೀತಿ ಸದನ ನಡೆಸಬೇಕು ಎಂದು ಅವರಿಗೆ ಗೊತ್ತಿದೆ. ಬರೀ ಧರಣಿ ಮಾಡದೇ ಚರ್ಚೆ ಮಾಡಬೇಕೆಂಬ ಸಲಹೆಯಂತೆ ನಡೆದುಕೊಂಡರು. ಆರ್ ಅಶೋಕ ಬಗ್ಗೆ ನಮ್ಮ ಯಾವುದೇ ಆರೋಪಗಳಿಲ್ಲ ಎಂದರು.**

# ನಿರ್ವಹಣೆ ಕೊರತೆ, ಕಿಂಡಿ ಅಣೆಕಟ್ಟೆ ವ್ಯರ್ಥ

## 3 ವರ್ಷ ಕಳೆದರೂ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಪ್ರಯೋಜನ ಆಗಿಲ್ಲ

• ಉದಯವಾಹಿನಿ, ಉಪ್ಪಿನಂಗಡಿ

ಕಡಬ ತಾಲ್ಲೂಕಿನ ಆಲಂಕಾರು ಸಮೀಪದ ಶಾಂತಿಮೊಗೇರು ಎಂಬಲ್ಲಿ ಕುಮಾರಧಾರ ನದಿಗೆ ಕಿಂಡಿ ಅಣೆಕಟ್ಟೆ ನಿರ್ಮಾಣವಾಗಿ 3 ವರ್ಷ ಕಳೆದರೂ ರೈತರಿಗೆ ಪೂರ್ಣ ಪ್ರಮಾಣದಲ್ಲಿ ಪ್ರಯೋಜನ ಆಗಿಲ್ಲ. ಕಿಂಡಿ ಅಣೆಕಟ್ಟೆಗೆ ಸೂಕ್ತ ಸಮಯದಲ್ಲಿ ಹಲಗೆ ಜೋಡಿಸದೆ ಇರುವುದು, ನಿರ್ವಹಣೆಯ ಕೊರತೆಯಿಂದ ರೈತರಿಗೆ ಸಮರ್ಪಕವಾಗಿ ನೀರು ಸಿಗುತ್ತಿಲ್ಲ ಎಂದು ರೈತರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ರಾಜ್ಯ ಸರ್ಕಾರದ ಪಶ್ಚಿಮವಾಹಿನಿ ಯೋಜನೆಯಡಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ಮೂಲಕ ಈ ಕಿಂಡಿ ಅಣೆಕಟ್ಟೆ ನಿರ್ಮಾಣವಾಗಿದೆ. ಸಚಿವರಾಗಿದ್ದ ಎಸ್.ಅಂಗಾರ ಅವರ ಶಿಫಾರಸಿನಂತೆ 7.5 ಕೋಟಿ ಅನುದಾನದಲ್ಲಿ, ನದಿಯ ತಳಮಟ್ಟದಿಂದ 4 ಮೀಟರ್ ಎತ್ತರದಲ್ಲಿ ಕಿಂಡಿ ಅಣೆಕಟ್ಟೆ ನಿರ್ಮಾಣವಾಗಿದೆ. ಇದು 221.4 ಮೀಟರ್ ಉದ್ದ ಹಾಗೂ 3.75 ಮೀಟರ್ ಅಗಲವಿದೆ. 56 ಕಿಂಡಿಗಳಿದ್ದು, 56 ಪಿಲ್ಲರ್‌ಗಳಲ್ಲಿ ಸ್ಕ್ಯಾಬ್ ಜೋಡಣೆ ಮಾಡಲಾಗಿದೆ. ಹಲಗೆ ಜೋಡಿಸಿದರೆ



ಉದಯವಾಹಿನಿ ಚಿತ್ರ

> ಕೃಷಿಕರ ಕೊಳವೆಬಾವಿ, ಕುಡಿಯುವ ನೀರಿನ ಬಾವಿ ಹಾಗೂ ಕೆರೆಗಳಲ್ಲಿ ಬೇಸಿಗೆಯಲ್ಲೂ ನೀರು ತುಂಬಿಸುವ, ಕೃಷಿ ನೀರಾವರಿಗಾಗಿ ನಿರ್ಮಾಣ ಮಾಡಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗೆ ಬಳಸಿಕೊಳ್ಳುವ ಉದ್ದೇಶದಿಮದ ಈ ಕಿಂಡಿ ಅಣೆಕಟ್ಟೆ ನಿರ್ಮಾಣವಾಗಿದೆ.

ಸುಮಾರು 18.56 ಎಮ್‌ಎಫ್‌ಟಿ ನೀರು ಶೇಖರಣೆಯಾಗುತ್ತದೆ. ಡಿಸೆಂಬರ್ ಆರಂಭದಿಂದ ನದಿಯ ನೀರಿನ ಮಟ್ಟವನ್ನು ನೋಡಿಕೊಂಡು ಕಿಂಡಿಗಳಿಗೆ ಹಲಗೆ ಜೋಡಿಸಬೇಕು. ಮಳೆಗಾಲದಲ್ಲಿ ನದಿ ನೀರಿನ ಮಟ್ಟ ಜಾಸ್ತಿಯಾಗುತ್ತಿದ್ದಂತೆ ಹಲಗೆಗಳನ್ನು ತೆಗೆದು ಬಿಡಬೇಕು ಎಂಬುದು ನಿಯಮ, ಹಲಗೆ ಜೋಡಿಸಿದರೆ ನದಿಯ ಇಕ್ಕೆಲಗಳಲ್ಲಿ ಸುಮಾರು 4 ಕಿ.ಮೀ ಸುತ್ತಳತೆಯಲ್ಲಿ ಅಂತರ್ಜಲ ವೃದ್ಧಿಯಾಗುತ್ತದೆ.

ಆದರೆ, ಇದುವರೆಗೆ ಸಮರ್ಪಕವಾಗಿ ಹಲಗೆ ಜೋಡಿಸದೆ ಇರುವುದರಿಂದ ರೈತರ ಪ್ರಯೋಜನಕ್ಕೆ ಬಂದಿರಲಿಲ್ಲ. ಈ ಬಾರಿಯೂ ಹಲಗೆ ಅಳವಡಿಸಿಲ್ಲ.

**ಆರಂಭದಲ್ಲಷ್ಟೇ ಜೋಡಣೆ:** ಆರಂಭದ ವರ್ಷದಲ್ಲಿ ಬೇಸಿಗೆಯ ಕೊನೆಯಲ್ಲಿ ಹಲಗೆ ಅಳವಡಿಸಲಾಗಿತ್ತು, ಅದಾಗಲೇ ಮಳ ಪ್ರಾರಂಭವಾಗಿತ್ತು, ಬಳಿಕ ಕಳೆದ ವರ್ಷ ಹಲಗೆ ಅಳವಡಿಸಿದ್ದರೂ ಅಕ್ರಮ ಮರಳುಗಾರಿಕೆ ನಡೆಸುವವರು ಹಲಗೆ ಕಿತ್ತು ಹಾಕಿದ್ದರು.ಇದನ್ನು ಖಂಡಿಸಿ ರೈತರು ಪ್ರತಿಭಟನೆ ನಡೆಸಿ ದ್ದರು. ಅದಾಗಲೇ ನೀರು ಬರಿದಾಗಿದ್ದರಿಂದ ಮತ್ತೆ ಹಲಗೆಗಳನ್ನು ಸಮರ್ಪಕವಾಗಿ ಅಳವಡಿಸಿಲ್ಲ ಎಂದು ರೈತರು ದೂರಿದ್ದಾರೆ.

# ಜಾರ್ಜ್ ಸೊರೊಸ್‌ಗೆ ಅತ್ಯುನ್ನತ ನಾಗರಿಕ ಪ್ರಶಸ್ತಿ ನೀಡಿದ ಜೋ ಬಿಡನ್

## ಭಾರತೀಯ ಚುನಾವಣೆಗಳಲ್ಲಿ ಹಸ್ತಕ್ಷೇಪ ಮಾಡಿದ್ದಾರೆ, ಇದೊಂದು ದುರಂತ ಎಂದಿದ್ದೇಕೆ ಎಲಾನ್ ಮಸ್ಕ್?

**ವಾಷಿಂಗ್ಟನ್:** ಅಮೆರಿಕ ಅಧ್ಯಕ್ಷ ಜೋ ಬಿಡನ್ ಜಾರ್ಜ್ ಸೊರೊಸ್‌ಗೆ ಅಮೆರಿಕದ ಅತ್ಯುನ್ನತ ನಾಗರಿಕ ಪ್ರಶಸ್ತಿಯನ್ನು ನೀಡಿ ಗೌರವಿಸಿದ್ದಾರೆ. ಇದೊಂದು ದುರಂತ ಎಂದು ಬಿಲಿಯನೇರ್ ಎಲಾನ್ ಮಸ್ಕ್ ತೀಕ್ಷ್ಣವಾಗಿ ಪ್ರತಿಕ್ರಿಯಿಸಿದ್ದಾರೆ. ಸೊರೊಸ್ ಮೂಲಭೂತವಾಗಿ ಮಾನವೀಯತೆಯನ್ನು ದ್ವೇಷಿಸುತ್ತಾರೆ ಎಂದು ಮಸ್ಕ್ ಹೇಳಿದ್ದಾರೆ.



ಸಂಸತ್ತಿನಲ್ಲಿ ಹಲವು ಬಾರಿ ಕೋಲಾಹಲ

ಅಧ್ಯಕ್ಷ ಜೋಬಿಡನ್ ಸೊರೊಸ್‌ಗೆ ಪ್ರಶಸ್ತಿ ಪ್ರದಾನ ಮಾಡುತ್ತಿರುವ ಫೋಟೋವನ್ನು ಎಲಾನ್ ಮಸ್ಕ್ ತಮ್ಮ ಸಾಮಾಜಿಕ ಜಾಲತಾಣದ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಫೋಟೋದಲ್ಲಿ ಬಿಡೆನ್ ಕಪ್ಪು ಬಟ್ಟೆ ಧರಿಸಿದ ವ್ಯಕ್ತಿಗೆ ಪ್ರಶಸ್ತಿ ನೀಡುತ್ತಿರುವುದು ಕಂಡು ಬಂದಿದೆ. ಈ ಫೋಟೋ ನೋಡಿ ಎಲಾನ್ ಮಸ್ಕ್ ಬಹುಶಃ ಬೆಳಕಿನಿಂದಾಗಿ ಸೊರೊಸ್ ತುಂಬಾ ಚೆನ್ನಾಗಿ ಕಾಣುತ್ತಿದ್ದಾರೆ ಎಂದು ತಮಾಷೆಯಾಗಿ ಹೇಳಿದ್ದಾರೆ.

**ಜಾರ್ಜ್ ಸೊರೊಸ್ ಯಾರು**

ಶ್ವೇತ ಭವನದ ಪ್ರಕಾರ, ಜಾರ್ಜ್ ಸೊರೊಸ್ ಒಬ್ಬ ಬಿಲಿಯನೇರ್ ಹೂಡಿಕೆದಾರ ಮತ್ತು ಓಪನ್ ಸೊಸೈಟಿ ಫೌಂಡೇಶನ್ಸ್ ಸಂಸ್ಥಾಪಕ. ಅವರು 120ಕ್ಕೂ ಹೆಚ್ಚು ದೇಶಗಳಲ್ಲಿ ಪ್ರಜಾಪ್ರಭುತ್ವ, ಮಾನವ ಹಕ್ಕುಗಳು, ಶಿಕ್ಷಣ ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಅನೇಕ ಉಪಕ್ರಮಗಳನ್ನು ಮುನ್ನಡೆಸಿದ್ದಾರೆ.

> **ಈ ಮಧ್ಯೆ ಕಳೆದ ವರ್ಷ ನವೆಂಬರ್‌ನಲ್ಲಿ ಎಲಾನ್ ಮಸ್ಕ್ ನೀಡಿರುವ ಸಂದರ್ಶನವೊಂದರ ಕ್ಲಿಪ್ ವೊಂದು ವೈರಲ್ ಆಗುತ್ತಿದೆ. ಇದರಲ್ಲಿ ಅವರು ಸೊರೊಸ್ ಸಮಾಜದ ರಚನೆಯನ್ನು ನಾಶಪಡಿಸುವ ಕೆಲಸಗಳನ್ನು ಮಾಡುತ್ತಿದ್ದಾರೆ ಎಂದು ಆರೋಪಿಸಿದ್ದಾರೆ. ಜಾರ್ಜ್ ಸೊರೊಸ್ ಮೂಲಭೂತವಾಗಿ ಮಾನವೀಯತೆಯನ್ನು ದ್ವೇಷಿಸುತ್ತಾರೆ. ಅವರು ನಾಗರಿಕತೆಯ ರಚನೆಯನ್ನು ನಾಶಪಡಿಸುವ ಕೆಲವು ಕೆಲಸಗಳನ್ನು ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.**

**ವಿರೋಧ ಪಕ್ಷಗಳಿಗೆ ಹಣ ನೀಡಿದ ಆರೋಪವೂ ಇದೆ**

**ಜಾರ್ಜ್ ಸೊರೊಸ್ ಅವರು ಭಾರತ ಸರ್ಕಾರ ವನ್ನು ಅಸ್ಥಿರಗೊಳಿಸಲು ಪ್ರತಿಪಕ್ಷಗಳೊಂದಿಗೆ ಪಿತೂರಿ ನಡೆಸಿದ್ದಾರೆ ಎಂದು ಆರೋಪಿಸಿರುವುದು ಗಮನಿಸಬೇಕಾದ ಸಂಗತಿಯಾಗಿದೆ. ಈ ಬಗ್ಗೆ ಭಾರತದ ಸಂಸತ್ತಿನಲ್ಲಿ ಹಲವು ಬಾರಿ ಕೋಲಾಹಲ ಎದ್ದಿದೆ. ಇಷ್ಟೇ ಅಲ್ಲ, ಸೊರೊಸ್ ಭಾರತ ಸರ್ಕಾರವನ್ನು ಅಸ್ಥಿರಗೊಳಿಸಲು ವಿರೋಧ ಪಕ್ಷಗಳಿಗೆ ಹಣ ನೀಡಿದ ಆರೋಪವೂ ಇದೆ. ಆದರೆ ಇದೀಗ ಜೋ ಬಿಡನ್ ಅವರಿಗೆ ಅಮೆರಿಕದ ಅತ್ಯುನ್ನತ ನಾಗರಿಕ ಪ್ರಶಸ್ತಿಯನ್ನು ನೀಡಿದ್ದಾರೆ.**

ಆದರೆ, ಸೊರೊಸ್ ಇತ್ತೀಚಿನ ವರ್ಷಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರನ್ನು ಟೀಕಿಸುತ್ತಿದ್ದಾರೆ. ಅವರು ಭಾರತೀಯ ಚುನಾವಣೆಗಳಲ್ಲಿ ಹಸ್ತಕ್ಷೇಪ ಮಾಡಿದ್ದಾರೆ ಎಂದು ಆರೋಪಿಸಲಾಗಿದೆ.

ಸೊರೊಸ್ ಜತೆಗೆ ಅಮೆರಿಕ ಅಧ್ಯಕ್ಷ ಬಿಡೆನ್ ಮಾಜಿ ವಿದೇಶಾಂಗ ಕಾರ್ಯದರ್ಶಿ ಹಿಲರಿ ಕ್ಲಿಂಟನ್, ಫ್ಯಾಷನ್ ಡಿಸೈನರ್ ರಾಲ್ಫ್ ಲಾರೆನ್, ಫುಟ್ಬಾಲ್ ಸೂಪರ್‌ಸ್ಟಾರ್ ಲಿಯೋನೆಲ್ ಮೆಸ್ಸಿ ಮತ್ತು ಮಾಜಿ ರಕ್ಷಣಾ ಸಚಿವ ದಿವಂಗತ ಆಗ್ಸ್ಟನ್ ಕಾರ್ಟರ್ ಅವರನ್ನು ಈ ಪ್ರಶಸ್ತಿಯೊಂದಿಗೆ ಗೌರವಿಸಿದರು.

# ಮೈನಸ್ 8.1 ಡಿಗ್ರಿ ಸೆಲ್ಸಿಯಸ್ ತಲುಪಿದ ತಾಪಮಾನ

**ಶ್ರೀನಗರ:** ಜಮು-ಕಾಶೀರ ಕಣಿವೆಯಲ್ಲಿ ರಾತ್ರಿ ತಾಪಮಾನ ತೀವ್ರವಾಗಿ ಕುಸಿದಿದ್ದು, ದಕ್ಷಿಣ ಕಾಶ್ಮೀರದ ಕೋಕರ್‌ನಾಗ್ ಪಟ್ಟಣವು ಮೈನಸ್ 8.1 ಡಿಗ್ರಿ ಸೆಲ್ಸಿಯಸ್‌ನಲ್ಲಿ ಹೆಪ್ಪುಗಟ್ಟುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಶ್ರೀನಗರದಲ್ಲಿ, ಕನಿಷ್ಠ ಮೈನಸ್ 2.5 ಡಿಗ್ರಿ ಸೆಲ್ಸಿಯಸ್‌ನಲ್ಲಿ ನೆಲೆಸಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಉತ್ತರ ಕಾಶೀರದಲ್ಲಿ ಸ್ಕೀಯಿಂಗ್ ಚಟುವಟಿಕೆಗಳಿಗೆ ಹೆಸರುವಾಸಿಯಾದ ಪ್ರವಾಸಿ ರೆಸಾರ್ಟ್ ಪಟ್ಟಣವಾದ ಗುಲಾರ್ಗ್‌ನಲ್ಲಿ ಕನಿಷ್ಠ ಮೈನಸ್ 4 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ದಕ್ಷಿಣ ಕಾಶೀರದ ವಾರ್ಷಿಕ ಅಮರನಾಥ ಯಾತ್ರೆಯ ಮೂಲ ಶಿಬಿರಗಳಲ್ಲಿ ಒಂದಾದ ಪಹಲ್ಗಾಮ್ ಕನಿಷ್ಠ ಮೈನಸ್ 3.2 ಡಿಗ್ರಿ ಸೆಲ್ಸಿಯಸ್ ತಾಪಮಾನವನ್ನು ದಾಖಲಿಸಿದೆ. ಕಾಶೀರದ ಗೇಟ್‌ವೇ ಪಟ್ಟಣವಾದ ಖಾಜಿಗುಂಡ್‌ನಲ್ಲಿ ಕನಿಷ್ಠ ತಾಪಮಾನ ಮೈನಸ್ 3.6 ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದರೆ, ಪಾಂಪೋರ್ ಪಟ್ಟಣದ ಕೋನಿಬಾಲ್ ಕನಿಷ್ಠ ಮೈನಸ್ 3.5 ಡಿಗ್ರಿ ಗಳನ್ನು ದಾಖಲಿಸಿದೆ.



ಉತ್ತರ ಕಾಶೀರದ ಕುಪ್ವಾರ ರಾತ್ರಿಯ ತಾಪಮಾನ ಮೈನಸ್ 2.8 ಡಿಗ್ರಿ ಸೆಲ್ಸಿಯಸ್ ಅನ್ನು ದಾಖಲಿಸಿದರೆ, ದಕ್ಷಿಣ ಕಾಶೀರದ ಕೊಕರ್ನಾಗ್ ಕಡಿಮೆ ಮೈನಸ್ 8.1 ಡಿಗ್ರಿಗಳನ್ನು ದಾಖಲಿಸಿದೆ ಮತ್ತು ಕಣಿವೆಯಲ್ಲಿ ದಾಖಲೆಯ ಅತ್ಯಂತ ಶೀತ ಸ್ಥಳವಾಗಿದೆ.

ಕಾಶೀರವು ಪ್ರಸ್ತುತ ಚಿಲ್ಲೈ-ಕಲನ್ ಹಿಡಿತದಲ್ಲಿದೆ. ಚಳಿಗಾಲದ ಕಠಿಣ ಅವಧಿ ಇದು ಡಿಸೆಂಬರ್ 21 ರಂದು ಪ್ರಾರಂಭವಾಯಿತು. ಚಿಲ್ಲೈ-ಕಲನ್‌ನ 40 ದಿನಗಳಲ್ಲಿ, ಹಿಮಪಾತದ ಸಾಧ್ಯತೆಗಳು ಅತ್ಯಧಿಕವಾಗಿರುತ್ತವೆ ಮತ್ತು ತಾಪಮಾನವು ಗಣನೀಯವಾಗಿ ಇಳಿಯುತ್ತದೆ. ಚಿಲ್ಲೈ-ಕಲನ್ ಜನವರಿ 30 ರಂದು ಕೊನೆಗೊಳ್ಳುತ್ತದೆ. ಅದರ ನಂತರ 20 ದಿನಗಳ ಚಿಲ್ಲೈ-ಖುದ್‌ರ್ (ಸಣ್ಣ ಶೀತ) ಮತ್ತು 10 ದಿನಗಳ ಚಿಲ್ಲೈ-ಬಚ್ಚಾ (ಬೇಬಿ ಶೀತ) ಆರಂಭವಾಗುತ್ತದೆ.

# ಕಾರಿಗೆ ಟ್ರಕ್ ಡಿಕ್ಕಿ, ಇಬ್ಬರು ಬಿಜೆಪಿ ನಾಯಕರು ಮೃತ

**ಭುವನೇಶ್ವರ್:** ಇಬ್ಬರು ಬಿಜೆಪಿ ನಾಯಕರು ಸೇರಿದಂತೆ ಒಟ್ಟು 6 ಮಂದಿ ಸಂಚರಿಸುತ್ತಿದ್ದ ಕಾರಿಗೆ ಹಿಂದಿನಿಂದ ಟ್ರಕ್ ಡಿಕ್ಕಿಯಾಗಿ ಭೀಕರ ಅಪಘಾತ ಸಂಭವಿಸಿದೆ. ಈ ಅಪಘಾತದಲ್ಲಿ ಇಬ್ಬರು ಬಿಜೆಪಿ ನಾಯಕರು ಮೃತಪಟ್ಟಿದ್ದಾರೆ. ಇನ್ನುಳಿದ ನಾಲ್ವರು ಗಂಭೀರವಾಗಿ ಗಾಯಗೊಂಡ ಘಟನೆ ಒಡಿಶಾದಲ್ಲಿ ನಡೆದಿದೆ. - ಆಟೋಜೋನ್ ಮನೋರಂಜನೆ ಅಪರಾಧ ಒಡಿಶಾ ಬಿಜೆಪಿಯ ನಾಯಕರಾದ ದೇಬೇಂದ್ರ ನಾಯಕ್ ಹಾಗೂ ಮುರಳೀಧರ್ ಚುರಿಯಾ ಮೃತಪಟ್ಟಿದ್ದಾರೆ. ಭಾನುವಾರ ಮುಂಜಾನೆ ಈ ಘಟನೆ ನಡೆದಿದೆ.


ಈ ಘಟನೆ ಕುರಿತು ತನಿಖೆ ನಡೆಸುತ್ತಿರುವ ಪೊಲೀಸರಿಗೆ ಕೆಲ ಅಚ್ಚರಿ ಎದುರಾಗಿದೆ. ಇದು ಸಾಮಾನ್ಯವಾಗಿ ನಡೆದ ಅಪಘಾತವಲ್ಲ, ಕೊನೆಯ ಶಂಕೆಗಳು ವ್ಯಕ್ತವಾಗಿದೆ. ಪ್ರಯಾಣ ಬಿಜೆಪಿ ಗೋಶಾಲ ಮಂಡಲ ಅಧ್ಯಕ್ಷರಾಗಿದ್ದ ದೇಬೇಂದ್ರ ನಾಯಕ್, ಪಂಚಾಯತ್ ಬಿಜೆಪಿ ಮಾಜಿ ಅಧ್ಯಕ್ಷ ಮುರಳೀಧರ್ ಚುರಿಯಾ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಇಬ್ಬರು ನಾಯಕರು ಒಡಿಶಾ ಬಿಜೆಪಿಯ ಪ್ರಭಾವಿ ಹಾಗೂ ಪ್ರಮುಖ ನಾಯಕ ನೌರಿ ನಾಯಕ್ ಆಪ್ತರಾಗಿದ್ದರು. ಇಬ್ಬರು ಬಿಜೆಪಿ ನಾಯಕರು, ಇತರ ನಾಲ್ವರು ಭುವೇಶ್ವರ್‌ಗೆ ಪ್ರವಾಸ ಕೈಗೊಂಡಿದ್ದರು. ಪಕ್ಷದ ಕೆಲ ಕಾರ್ಯಕ್ರಮ ಸೇರಿದಂತೆ ತಮ್ಮ ವೈಯುಕ್ತಿಕ ಕೆಲಸ ಕಾರ್ಯಗಳಿಗೆ ಒಟ್ಟು 6 ಮಂದಿ ಪ್ರಯಾಣ ಬೆಳಸಿದ್ದರು. ಕಾರ್ಯಕ್ರಮ ಮುಗಿಸಿ ಕರ್ಡೋಲಾದಲ್ಲಿರುವ ಮನೆಗೆ ಮರಳಲು ಭುವನೇಶ್ವರದಿಂದ ಹೊರಟಿದ್ದಾರೆ. ಸಂಭಲಪುರ ಜಿಲ್ಲೆಯ ಬಳಿ ಸರಿಸುಮಾರು ರಾತ್ರಿ 1.30ಕ್ಕೆ ಭೀಕರ ಅಪಘಾತ ಸಂಭವಿಸಿದೆ. ಹಿಂದಿನಿಂದ ವೇಗವಾಗಿ ಬಂದ ಟ್ರಕ್, ನಾಯಕರು ಪ್ರಯಾಣಿಸುತ್ತಿದ್ದ ಕಾರಿಗೆ ಡಿಕ್ಕಿಯಾಗಿದೆ. ಇದರಿಂದ ನಿಯಂತ್ರಣ ಕಳೆದುಕೊಂಡು ಕಾರು ಅಫಘಾತವಾಗಿದೆ. ಈ ಅಪಘಾತದಲ್ಲಿ ಕಾರು ನಜ್ಜು ಗುಜ್ಜಾಗಿದೆ. ಘಟನೆ ಬೆನ್ನಲ್ಲೇ ಹೆದ್ದಾರಿಯಲ್ಲಿ ಸಾಗುತ್ತಿದ್ದ ವಾಹನ ಸವಾರರು ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಸ್ಥಳಕ್ಕೆ ಆಗಮಿಸಿದ ಪೊಲೀಸರು ಹರಸಾಹಸ ಮಾಡಿ ಕಾರಿನಲ್ಲಿದ್ದ ಪ್ರಯಾಣಿಕರ ಹೊರತೆಗೆದು ಸ್ಥಳೀಯ ಆಸ್ಪತ್ರೆ ದಾಖಲಿಸಿದ್ದಾರೆ.

> **ಕಾರು ವೇಗವಾಗಿ ಸಾಗುತ್ತಿತ್ತು. ಆದರೆ ಟ್ರಕ್ ಒಂದು ನಮ್ಮನ್ನು ಹಿಂಬಾಲಿಸುತ್ತಿತ್ತು. ಹೀಗಾಗಿ ಚಾಲಕ ಕಂತಪಲ್ಲಿ ಕ್ರಾಸ್ ಬಳಿ ತಕ್ಷಣ ಕಾರನ್ನು ಹೆದ್ದಾರಿಯಿಂದ ಸಣ್ಣ ರಸ್ತೆಗೆ ತಿರುಗಿಸಿದ್ದಾರೆ. ಈ ವೇಳೆ ಟ್ರಕ್ ಇದೇ ರಸ್ತೆಗೆ ತಿರುಗಿ ಬಂದು ವೇಗವಾಗಿ ಡಿಕ್ಕಿಯಾಗಿದೆ. ಟ್ರಕ್ ಡಿಕ್ಕಿಯಾದ ಬೆನ್ನಲ್ಲೇ ಕಾರು ಪಲ್ಟಿಯಾಗಿದೆ. ಎರಡು ಬಾರಿ ಟ್ರಕ್ ಕಾರಿಗೆ ಡಿಕ್ಕಿಯಾಗಿದೆ. ಹೀಗಾಗಿ ಕಾರು ನಜ್ಜುಗುಜ್ಜಾಗಿದೆ. ಜೊತೆಗೆ ಪಲ್ಟಿಯಾಗು ಮೂಲಕ ಅಪಘಾತದ ತೀವ್ರತೆ ಹೆಚ್ಚಾಗಿದೆ ಎಂದು ಸುರೇಶ್ ಚಂದಾ ಹೇಳಿದ್ದಾರೆ.**

ಆದರೆ ಈ ಪೈಕಿ ಇಬ್ಬರು ಬಿಜೆಪಿ ನಾಯಕರಾದ ದೇಬೇಂದ್ರ ನಾಯಕ್, ಮರುಳೀಧರ್ ಚುರಿಯಾ ಮೃತಪಟ್ಟಿದ್ದಾರೆ ಎಂದು ವೈದ್ಯರು ಖಚಿತಪಡಿಸಿದ್ದಾರೆ. ಇನ್ನುಳಿದ ನಾಲ್ವರಿಗೆ ಚಿಕಿತ್ಸೆ ಮುಂದುವರಿದಿದೆ. ಘಟನೆಯಲ್ಲಿ ಗಾಯಗೊಂಡು ಸುರೇಶ್ ಚಂದಾ ಈ ಅಪಘಾತದ ಕುರಿತು ಹೇಳಿಕೆ ನೀಡಿದ್ದಾರೆ. ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಸುರೇಶ್ ಚಂದಾ ಘಟನೆಯನ್ನು ವಿವರಿಸಿದ್ದಾರೆ.

# ರಸ್ತೆಗಳನ್ನು ಪ್ರಿಯಾಂಕ ಗಾಂಧಿ ಕೆನ್ನೆ ತರ ಮಾಡ್ತೀನಿ ಬಿಜೆಪಿ ಅಭ್ಯರ್ಥಿ ವಿವಾದಿತ ಹೇಳಿಕೆ

**ನವದೆಹಲಿ:** ಬರಲಿರುವ ವಿಧಾನಸಭಾ ಚುನಾವಣೆ ಯಲ್ಲಿ ಅರವಿಂದ್ ಕೇಜ್ರಿವಾಲ್ ವಿರುದ್ಧ ತಾವು ಗೆದ್ದರೆ ಕಲ್ಕಾಜೀ ವಿಧಾನಸಭಾ ಕ್ಷೇತ್ರದ ರಸ್ತೆಗಳನ್ನು ಕಾಂಗ್ರೆಸ್ ನಾಯಕಿ, ಸಂಸದೆ ಪ್ರಿಯಾಂಕ ಗಾಂಧಿ ಅವರ ಕೆನ್ನೆಯಂತೆ ಮಾಡುತ್ತೇನೆಂದು ಬಿಜೆಪಿ ಅಭ್ಯರ್ಥಿ ರಮೇಶ್ ಬಿಂಧೂರಿ ಹೇಳಿಕೆ ಭಾರೀ ವಿವಾದ ಸೃಷ್ಟಿಸಿದೆ.



ರಮೇಶ್ ಬಿಂಧೂರಿ ಅವರ ಈ ಹೇಳಿಕೆಗೆ ಕಾಂಗ್ರೆಸ್ ತಿರುಗೇಟು ನೀಡಿದ್ದು, ಬಿಜೆಪಿಯು ಮಹಿಳಾ ವಿರೋಧಿ ಪಕ್ಷ ಎಂಬುದಕ್ಕೆ ಇದಕ್ಕಿಂತ ಬೇರೆ ಏನು ಸಾಕ್ಷಿ ಬೇಕು ಎಂದು ಪ್ರಶ್ನೆ ಮಾಡಿದೆ. ಒಬ್ಬ ಮಾಜಿ ಸಂಸದರ ಈ ಹೇಳಿಕೆ ನಾಚಿಗೇಡಿತನ. ಅಲ್ಲದೆ ಇದು ಮಹಿಳೆಯರ ವಿಷಯದಲ್ಲಿ ಅವರ ಕೊಳಕು ಮನಸ್ಥಿತಿಯನ್ನು ಬಿಂಬಿಸಿದೆ. ಇದು ರಮೇಶ್ ಬಿಂಧೂರಿಯವರ ಹೇಳಿಕೆ ಮಾತ್ರವಲ್ಲದೆ ಬಿಜೆ ಪಿಯ ಮುಖವಾಡವೂ ಬಯಲಾಗಿದೆ ಎಂದು ಕಾಂಗ್ರೆಸ್ ಟೀಕಾಪ್ರಹಾರ ನಡೆಸಿದೆ.

ಆದರೆ ಇಷ್ಟೆಲ್ಲ ವಿವಾದವಾದರೂ ರಮೇಶ್ ಬಿಂಧೂರಿ ತಮ ಹೇಳಿಕೆಯನ್ನು ಬಲವಾಗಿ ಸಮರ್ಥಿ ಸಿಕೊಂಡಿದ್ದಾರೆ. ಹಿಂದೆ ಲಾಲೂ ಪ್ರಸಾದ್ ಯಾದವ್ ಅವರು ಬಿಹಾರದ ರಸ್ತೆಗಳನ್ನು ಬಾಲಿವುಡ್ ನಟಿ ಹೇಮಾಮಾಲಿನಿ ಕೆನ್ನೆ ತರ ಮಾಡುತ್ತೇನೆ ಎಂದಿ ದ್ದರು. ಆಗಿಲ್ಲದ ವಿವಾದ ಈಗೇಕೆ ಎಂದು ಪ್ರಶ್ನಿಸಿ ದರು. ಅಂದು ಲಾಲೂ ಹೇಳಿಕೆಯನ್ನು ಕಾಂಗ್ರೆಸ್ ವಿರೋಧ ಮಾಡಿತ್ತೇ ನನ್ನ ಹೇಳಿಕೆ ಮಹಿಳಾ ವಿರೋಧಿ ಎನ್ನುವುದಾದರೆ ಲಾಲೂ ಜೊತೆ ಇವರು ಮೈತ್ರಿ ಮಾಡಿಕೊಂಡಿಲ್ಲವೇ ಆರ್ಜೆಡಿ ಮಹಿಳಾ ವಿರೋಧ ಪಕ್ಷವೇ ಎಂದು ಪ್ರಶ್ನಿಸಿದ್ದಾರೆ.

# ಬಿಜೆಪಿಯದ್ದು ರಾಮನ ಸಿದ್ಧಾಂತವಾದರೆ ಎಸ್‌ಪಿಯದ್ದು ಬಾಬರ್ ತತ್ವ; ಯೋಗಿ

**ಲಕ್ನೋ:** ಬಿಜೆಪಿ ರಾಮನ ಸಿದ್ಧಾಂತವನ್ನು ಎತ್ತಿ ಹಿಡಿದರೆ ಸಮಾಜವಾದಿ ಪಕ್ಷ ಮೊಘಲ್ ಚಕ್ರವರ್ತಿ ಬಾಬರ್ ತತ್ವಗಳನ್ನು ಅಳವಡಿಸಿಕೊಂಡಿದೆ ಎಂದು ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ತಿಳಿಸಿದ್ದಾರೆ. ಅಯೋಧ್ಯೆ ಜಿಲ್ಲೆಯ ಮಿಲ್ಕಿಪುರದಲ್ಲಿ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಆದಿತ್ಯನಾಥ್, ನಾವು ಸನಾತನ ಮೌಲ್ಯಗಳ ಪ್ರತಿರೂಪವಾದ ಭಗವಾನ್ ರಾಮನನ್ನು ನಂಬುತ್ತೇವೆ, ಆದರೆ ಸಮಾಜವಾದಿ ಪಕ್ಷವು ವಿನಾಶದ ಸಂಕೇತವಾದ ಬಾಬರ್‌ನೊಂದಿಗೆ ತನ್ನನ್ನು ಹೊಂದಿಕೊಂಡಿದೆ ಎಂದು ಹೇಳಿದರು.

ಅಭಿವದ್ಧಿಗೆ ಬಿಜೆಪಿಯ ಬದ್ಧತೆಯನ್ನು ಒತ್ತಿ ಹೇಳಿದ ಮುಖ್ಯಮಂತ್ರಿ, ಪಕ್ಷವು ಅಯೋಧ್ಯೆಯನ್ನು ಪ್ರಗತಿಯ ಸಂಕೇತ ವಾಗಿ ಪರಿವರ್ತಿಸಿದೆ ಎಂದು ಪ್ರತಿಪಾದಿಸಿದರು. ದೇಶ ಮತ್ತು ರಾಜ್ಯವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲು ಬಿಜೆಪಿ ನಿರಂತರವಾಗಿ ಕೆಲಸ ಮಾಡುತ್ತಿದ್ದರೆ, ಸಮಾಜವಾದಿ ಪಕ್ಷವು ಭಯೋತ್ಪಾದಕರು ಮತ್ತು ಕ್ರಿಮಿನಲ್‌ಗಳೊಂದಿಗೆ ತನ್ನನ್ನು ತಾನು ಹೊಂದಿಕೊಂಡಿದೆ ಎಂದು ಅವರು ಹೇಳಿದರು.



ಮುಂಬರುವ ಮಿಲ್ಕಿಪುರ ವಿಧಾನಸಭಾ ಉಪಚುನಾವಣೆಯಲ್ಲಿ ಗರಿಷ್ಠ ಮತಗಳನ್ನು ಗಳಿಸುವಂತೆ ಬಿಜೆಪಿ ಕಾರ್ಯಕರ್ತರನ್ನು ಒತ್ತಾಯಿಸಿದ ಆದಿತ್ಯನಾಥ್ ಅವರು ಮತದಾರರೊಂದಿಗೆ ನೇರವಾಗಿ ತೊಡಗಿಸಿಕೊಳ್ಳಲು ಮತ್ತು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಜಾರಿಗೊಳಿಸಿರುವ ಕಲ್ಯಾಣ ಯೋಜನೆಗಳನ್ನು ಎತ್ತಿ ತೋರಿಸಲು ಪ್ರೋತ್ಸಾಹಿಸಿದರು. ಅಭಿವದ್ಧಿಯ ಆಧಾರದ ಮೇಲೆ ಮತ ಕೇಳಿ ಎಂದು ಅವರು ಹೇಳಿದರು.

ಆದಿತ್ಯನಾಥ್ ಅವರು ಕುಂದರ್ಕಿ ವಿಧಾನಸಭಾ ಉಪಚುನಾವಣೆಯಲ್ಲಿ ಬಿಜೆಪಿಯ ಇತ್ತೀಚಿನ ಯಶಸ್ಸಿನ ಬಗ್ಗೆ ಗಮನ ಸೆಳೆದರು, ಅಲ್ಲಿ ರಾಮ್‌ವೀರ್ ಸಿಂಗ್ ಅವರು ಅಭಿವದ್ಧಿ ಕೇಂದ್ರಿತ ಅಜೆಂಡಾದಲ್ಲಿ ಪ್ರಚಾರ ಮಾಡುವ ಮೂಲಕ 65 ಪ್ರತಿಶತ ಮುಸ್ಲಿಂ ಜನಸಂಖ್ಯೆ ಹೊಂದಿರುವ ಕ್ಷೇತ್ರದಲ್ಲಿ ದಾಖಲೆಯ ಗೆಲುವು ಸಾಧಿಸಿದ್ದಾರೆ.

# ಕಳ್ಳಸಾಗಣೆಯ 75 ಲಕ್ಷ ಮೌಲ್ಯದ ಮಾತ್ರೆ, ಸಿಗರೇಟ್ ವಶ

**ಮುಂಬೈ:** ಇಲ್ಲಿನ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ ಮಾದಕ ವಸ್ತು ಹೊಂದಿದ್ದ 74,000 ಮಾತ್ರೆಗಳು ಮತ್ತು 2.44 ಲಕ್ಷ ನಕಲಿ ಬ್ರಾಂಡ್‌ಗಳ ಸಿಗರೇಟ್‌ಗಳನ್ನು ಮಾದಕವಸ್ತು ನಿಯಂತ್ರಣ ದಳ (ಎನ್‌ಸಿಬಿ) ವಶಪಡಿಸಿಕೊಂಡಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಖಚಿತ ಸುಳಿವಿನ ಮೇರೆಗೆ ಎನ್‌ಸಿಬಿ ಮುಂಬೈ ವಲಯ ಘಟಕವು ಶೋಧ ಕಾರ್ಯಾಚರಣೆ ನಡೆಸಿತು. ಈ ವೇಳೆ ಲಾಜಿಸ್ಟಿಕ್ಸ್ ಕಂಪನಿಗಳಿಗೆ ಸೇರಿದ ಎರಡು ಕಂಟೈನರ್‌ಗಳನ್ನು ಛತ್ರಪತಿ ಶಿವಾಜಿ ಮಹಾರಾಜ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಏರ್ ಕಾರ್ಗೋ ಟರ್ಮಿನಲ್‌ನಲ್ಲಿ ತಪಾಸಣೆ ನಡೆಸಲಾಯಿತು ಎಂದು ಅವರು ಹೇಳಿದ್ದಾರೆ.



ಶುಕ್ರವಾರ ಮತ್ತು ಶನಿವಾರದಂದು ನಡೆಸಿ ಕಾರ್ಯಾಚರಣೆಯಲ್ಲಿ ಅಕ್ರಮವಾಗಿ ಸಾಗಿಸುತ್ತಿದ್ದ 75 ಲಕ್ಷ ಮೌಲ್ಯದ ಮಾದಕ ವಸ್ತುಗಳನ್ನು ಒಳಗೊಂಡ 74,000 ಮಾತ್ರೆಗಳು ಮತ್ತು 2.44 ಲಕ್ಷ ನಕಲಿ ಬ್ರಾಂಡ್‌ಗಳ ಸಿಗರೇಟ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಾದಕ ವಸ್ತುಗಳನ್ನು ಆಹಾರ ಪದಾರ್ಥಗಳೆಂದು ತಪ್ಪಾಗಿ ದಾಖಲಿಸಿ ಲಂಡನ್ ಗೆ ಸಾಗಿಸಲು ಯೋಜಿಸಲಾಗಿತ್ತು. ಪ್ರಕರಣ ಕುರಿತು ಹೆಚ್ಚಿನ ತನಿಖೆ ನಡೆಸಲಾಗುತ್ತಿದೆ ಎಂದು ಅವರು ಹೇಳಿದ್ದಾರೆ.

# ಪುರಿ ಜಗನ್ನಾಥ ದೇವಾಲಯದ ಮೇಲೆ ಡ್ರೋನ್ ಹಾರಾಟ

**ಭುವನೇಶ್ವರ:** ಒಡಿಶಾದ ಪುರಿ ಜಗನ್ನಾಥ ದೇವಾಲಯದ ಮೇಲೆ ಭಾನುವಾರ ಡ್ರೋನ್ ಹಾರಾಟ ನಡೆಸಿದೆ. ಈ ಹಿನ್ನೆಲೆಯಲ್ಲಿ ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶದಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಭಾನುವಾರ ಮುಂಜಾನೆ 4.10ರ ವೇಳೆಗೆ ಜಗನ್ನಾಥನ ದೇವಸ್ಥಾನದ ಮೇಲೆ ಸುಮಾರು ಅರ್ಧ ಗಂಟೆಗಳ ಕಾಲ ಡ್ರೋನ್ ಹಾರಾಟ ನಡೆಸಿದೆ.




ಇದರಿಂದ ಕೆಲ ಕಾಲ ಆತಂಕದ ಪರಿಸ್ಥಿತಿ ಎದುರಾಗಿತ್ತು. ಈ ಬಗ್ಗೆ ಎಚ್ಚೆತ್ತ ಪೊಲೀಸರು ದೇವಸ್ಥಾನದ ಸುತ್ತಮುತ್ತಲಿನ ಪ್ರದೇಶವನ್ನು ಪರಿಶೀಲನೆ ನಡೆಸಿ, ಬಿಗಿ ಬಂದೋಬಸ್ತ್ ಒದಗಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ. ದೇವಸ್ಥಾನದ ಮೇಲೆ ಪ್ರೋನ್ ಹಾರಾಟ ನಡೆಸುವುದು ಕಾನೂನುಬಾಹಿರ ಹಾಗೂ ಸ್ವೀಕಾರಾರ್ಹವಲ್ಲ. ಭದ್ರತೆಯನ್ನು ಉಲ್ಲಂಘಿಸಿದ ವ್ಯಕ್ತಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಕಾನೂನು ಸಚಿವ ಪೃಥ್ವಿರಾಜ್ ಹರಿಚಂದನ್ ಎಂದು ಹೇಳಿದ್ದಾರೆ. ಭವಿಷ್ಯದಲ್ಲಿ ಇಂತಹ ಘಟನೆ ನಡೆಯದಂತೆ ನೋಡಿಕೊಳ್ಳಲಾಗುವುದು. ದೇವಸ್ಥಾನದ ಸುತ್ತಲಿನ ನಾಲ್ಕು ಕಾವಲು ಗೋಪುರಗಳ ಬಳಿ ಭದ್ರತೆಯನ್ನು ಹೆಚ್ಚಿಸಲಾಗವುದು' ಎಂದು ಹರಿಚಂದನ್ ತಿಳಿಸಿದ್ದಾರೆ.

ಈ ಘಟನೆ ಸಂಬಂಧ ಸಂಪೂರ್ಣ ಮಾಹಿತಿ ತಿಳಿದುಕೊಳ್ಳಲು ವಿಶೇಷ ತನಿಖಾ ತಂಡ ರಚಿಸಲಾಗಿದೆ.

ಯಾರೋ ಬ್ಲಾಗರ್ ಡ್ರೋನ್ ಅನ್ನು ದೇವಸ್ಥಾನದ ಮೇಲೆ ಹಾರಿಸಿರಬಹುದು ಎಂದು ಶಂಕಿಸಲಾಗಿದೆ. ಆದರೆ ಇದರ ಹಿಂದಿನ ಉದ್ದೇಶವನ್ನು ತಳ್ಳಿಹಾಕುವಂತಿಲ್ಲ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಹೇಳಿದ್ದಾರೆ.

# ಒಂದೇ ವರ್ಷದಲ್ಲಿ 55,143 ಸರ್ಕಾರಿ ನೌಕರರ ನೇಮಕ

**ಹೈದರಾಬಾದ್:** ಒಂದೇ ವರ್ಷದಲ್ಲಿ 55,143 ಸರ್ಕಾರಿ ನೌಕರರನ್ನು ನೇಮಕ ಮಾಡುವ ಮೂಲಕ ತಮ್ಮ ಸರ್ಕಾರ ದೇಶದಲ್ಲಿಯೇ ಅಭೂತಪೂರ್ವ ಸಾಧನೆ ಮಾಡಿದೆ ಎಂದು ತೆಲಂಗಾಣ ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಹೇಳಿದ್ದಾರೆ. ರಾಜೀವ್ ಗಾಂಧಿ ನಾಗರಿಕ ಸೇವಾ ಅಭಯ ಹಸ್ತಂ ಯೋಜನೆಯಡಿ ನಾಗರಿಕ ಸೇವಾ ಆಕಾಂಕ್ಷಿಗಳಿಗೆ 1 ಲಕ್ಷ ಚೆಕ್ ವಿತರಿಸುವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಉದ್ಯೋಗ ನೇಮಕಾತಿಗೆ ಅಗತ್ಯವಿರುವ ಎಲ್ಲಾ ಕ್ರಮಗಳನ್ನು ಸರ್ಕಾರ ತೆಗೆದುಕೊಳ್ಳುತ್ತಿದೆ ಎಂದು ತಿಳಿಸಿದ್ದಾರೆ. ಕಳೆದ 14 ವರ್ಷಗಳಿಂದ ಗ್ರೂಪ್ 1 ಹುದ್ದೆಗಳ ನೇಮಕಾತಿಗೆ ಪರೀಕ್ಷೆ ನಡೆಸಲಾಗಿಲ್ಲ, ಖಾಲಿ ಇರುವ 563 ಹುದ್ದೆಗಳನ್ನು ಭರ್ತಿ ಮಾಡಲು ಪರೀಕ್ಷೆಗಳನ್ನು ನಡೆಸಲು ಸರ್ಕಾರ ನಿರ್ಧರಿಸಿದೆ. ಮಾರ್ಚ್ 31ರೊಳಗೆ ಗ್ರೂಪ್ 1 ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ರೆಡ್ಡಿ ತಿಳಿಸಿದ್ದಾರೆ. ನಾಗರಿಕ ಸೇವಾ ಆಕಾಂಕ್ಷಿಗಳಿಗೆ ಸಾಧ್ಯವಿರುವ ಎಲ್ಲ ರೀತಿಯಲ್ಲಿ ಬೆಂಬಲ ನೀಡಲು ರಾಜ್ಯ ಸರ್ಕಾರ ಸಿದ್ಧವಿದೆ. ಪ್ರಸ್ತುತ ಬಿಹಾರದ ವಿದ್ಯಾರ್ಥಿಗಳು ನಾಗರಿಕ ಸೇವೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಾಧನೆ ಮಾಡುತ್ತಿದ್ದಾರೆ.



> **ಸರ್ಕಾರ ಅಧಿಕಾರಕ್ಕೆ ಬಂದ ಮೊದಲ ವರ್ಷದಲ್ಲಿಯೇ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇದ್ದ 55,143 ಹುದ್ದೆಗಳನ್ನು ಭರ್ತಿ ಮಾಡಲಾಗಿದ್ದು, ಇದು ದೇಶದಲ್ಲಿಯೇ ಅಭೂತ ಪೂರ್ವ ಸಾಧನೆಯಾಗಿದೆ. ತೆಲಂಗಾಣ ರಾಷ್ಟ್ರಕ್ಕೆ ಮಾದರಿಯಾಗಿದೆ ಎಂದರು**

ತೆಲಂಗಾಣದಿಂದ ಹೆಚ್ಚಿನ ಅಭ್ಯರ್ಥಿಗಳು ನಾಗರಿಕ ಸೇವಾ ಪರೀಕ್ಷೆಗಳಿಗೆ ಆಯ್ಕೆಯಾಗಬೇಕೆಂಬುದು ತಮ್ಮ ಸರ್ಕಾರದ ಮುಖ್ಯ ಉದ್ದೇಶವಾಗಿದೆ ಎಂದು ಸಿಎಂ ರೇವಂತ್ ರೆಡ್ಡಿ ಹೇಳಿದ್ದಾರೆ. ತೆಲಂಗಾಣದ ನಾಗರಿಕ ಸೇವಾ ಆಕಾಂಕ್ಷಿಗಳು ಹೆಚ್ಚಿನ ಸಂಖ್ಯೆಯಲ್ಲಿ ಯಶಸ್ವಿಯಾಗಲು ರಾಜೀವ್ ಗಾಂಧಿ ನಾಗರಿಕ ಸೇವೆಗಳ ಅಭಯ ಹಸ್ತಂ ಕಾರ್ಯಕ್ರಮದ ಮೂಲಕ ಸರ್ಕಾರವು 1 ಲಕ್ಷ ಆರ್ಥಿಕ ನೆರವು ನೀಡುತ್ತಿದೆ. ಆಕಾಂಕ್ಷಿಗಳು ಈ ಆರ್ಥಿಕ ಸಹಾಯವನ್ನು ಸರ್ಕಾರದ ಪ್ರೋತ್ಸಾಹವೆಂದು ಪರಿಗಣಿಸಬೇಕು ಎಂದು ಅವರು ತಿಳಿಸಿದ್ದಾರೆ.

# ಕೊಹೆನ್ ಇಸ್ರೇಲ್‌ನಲ್ಲಿ ಹುಟ್ಟಿಲ್ಲ ಎಂಬುದು ಇನ್ನೂ ಕುತೂಹಲ

## ಸಿರಿಯಾದಲ್ಲಿ ಗಲ್ಲಿಗೇರಿಸಲಾದ ಗೂಢಚಾರಿ; 60 ವರ್ಷಗಳ ನಂತರ ಇಸ್ರೇಲ್ ಆತನ ಮೃತದೇಹ ಪಡೆಯಲು ಪ್ರಯತ್ನಿಸುತ್ತಿರುವುದು ಏಕೆ?

**ಜೆರುಸಲೆಂ:** ಇಸ್ರೇಲ್ ಗುಪ್ತಚರ ಸಂಸ್ಥೆ ಮೊಸಾದ್ ವಿಶ್ವದ ಅಗ್ರ ಗೂಢಚಾರಿಕೆ ಸಂಸ್ಥೆಗಳಲ್ಲಿ ಒಂದಾಗಿದೆ. ಮೊಸಾದ್ ಗೂಢಚಾರರು ಅಂತಹ ಸಾಹಸಗಳನ್ನು ಮಾಡಿದ್ದಾರೆ. ಅವರ ಬಗ್ಗೆ ತಿಳಿದ ಜನರು ಇಂದಿಗೂ ಬೆಚ್ಚಿಬೀಳುತ್ತಾರೆ. ಮೊಸಾದ್ ಈ ಬೇಹುಗಾರಿಕೆ ಜಗತ್ತಿನಲ್ಲಿ ಹಾಗೂ ಇಸ್ರೇಲ್‌ನ ಇತಿಹಾಸದಲ್ಲಿ ಅತ್ಯಂತ ಪ್ರಸಿದ್ಧ ಗುಪ್ತಚರ ಏಜೆಂಟ್ ಎಂದು ಕರೆಯಲ್ಪಡುವ ಎಲಿ ಕೊಹೆನ್ ಎಂಬ ಹೆಸರು ಇತ್ತು. ಪ್ರಯಾಣ ಎಲಿ ಕೊಹೆನ್ 1960ರ ದಶಕದಲ್ಲಿ ಸಿರಿಯಾದ ಉನ್ನತ ನಾಯಕತ್ವದ ವಲಯಕ್ಕೆ ನುಸುಳಿದರು, ಇಸ್ರೇಲ್‌ಗೆ ಗುಪ್ತಚರ ಮತ್ತು ಪ್ರಮುಖ ಮಾಹಿತಿಯನ್ನು ತಲುಪಿಸಿದರು. ಡಮಾಸ್ಕಸ್‌ನಲ್ಲಿ ಹಲವು ವರ್ಷಗಳ ಕಾಲ ವಾಸಿಸಿದ ನಂತರ ಒಂದು ದಿನ ಅವರನ್ನು ಸಿರಿಯನ್ ಗುಪ್ತಚರರು ಹಿಡಿದು ಗಲ್ಲಿಗೇರಿಸಿದರು. ಅಂದಿನಿಂದ ಅವರ ದೇಹವು ಸಿರಿಯಾದ ಯಾವುದೋ ರಹಸ್ಯ ಸ್ಥಳದಲ್ಲಿದೆ ಎನ್ನಲಾಗಿದೆ. ಇದೀಗ ಬಶರ್ ಅಲ್-ಅಸ್ಸಾದ್ ಪತನದ ನಂತರ ಇಸ್ರೇಲ್ ಮತ್ತೊಮ್ಮೆ ಆತನ ಮೃತದೇಹಕ್ಕಾಗಿ ಹುಡುಕಾಟ ಆರಂಭಿಸಿದೆ.



ಮೊಸಾದ್ ಒತ್ತಡ ಹೇರಿದ್ದು ಅಪಾಯ

**ಎಲಿ ಕೊಹೆನ್ ಯಾರು?:** ಎಲಿ ಕೊಹೆನ್ ಯಾರು, ಅವರು ಸಿರಿಯಾದಲ್ಲಿ ಗೂಢಚರ್ಯೆ ನಡೆಸಿದ್ದು ಹೇಗೆ, ಸಿಕ್ಕಿಬಿದ್ದಿದ್ದು ಹೇಗೆ ಎಂಬ ಕಥೆ ಬಹಳ ಕುತೂಹಲಕಾರಿಯಾಗಿದೆ. ಆದರೆ ಇಸ್ರೇಲ್‌ನ ಅತ್ಯಂತ ಅಪಾಯಕಾರಿ ಬೇಹುಗಾರಿಕೆ ಕಾರ್ಯಾಚರಣೆಯನ್ನು ನಡೆಸಿದ ಕೊಹೆನ್ ಇಸ್ರೇಲ್‌ನಲ್ಲಿ ಹುಟ್ಟಿಲ್ಲ ಎಂಬುದು ಇನ್ನೂ ಕುತೂಹಲಕಾರಿಯಾಗಿದೆ. ಕೊಹೆನ್ ಈಜಿಪ್ಟ್‌ನಲ್ಲಿ ಜನಿಸಿದರು. ಅಲ್ಲಿ ಅವರು ಯಹೂದಿ ಕಾರ್ಯಕರ್ತನಾಗಿ ಹಲವು ವರ್ಷಗಳನ್ನು ಕಳೆದರು. 1957ರಲ್ಲಿ ಇಸ್ರೇಲ್‌ಗೆ ಬಂದ ನಂತರ ಅವರು ಇಸ್ರೇಲಿ ಸೇನೆಯ ಗುಪ್ತಚರ ವಿಭಾಗದಲ್ಲಿ ಕೆಲಸ ಮಾಡಿದರು. ಆದರೆ ಅವರು ಹಲವು ವರ್ಷಗಳವರೆಗೆ ಮೊಸಾದ್‌ಗೆ ಸೇರಲು ಆಯ್ಕೆಯಾಗಿರಲಿಲ್ಲ.

**ಕೊಹೆನ್ ದೇಹಕ್ಕೆ ಏನಾಯಿತು?**

**ಎಲಿ ಕೊಹೆನ್‌ನನ್ನು ಗಲ್ಲಿಗೇರಿಸಿದ ನಂತರ ಸಿರಿಯಾ ದೇಹವನ್ನು ಇಸ್ರೇಲ್‌ಗೆ ಹಸ್ತಾಂತರಿಸಲಿಲ್ಲ. ಮೃತದೇಹವನ್ನು ಪಡೆಯಲು ಇಸ್ರೇಲ್ ಬಹಳ ದಿನಗಳಿಂದ ಪ್ರಯತ್ನಿಸುತ್ತಿದೆ. ದೇಹವು ಸಿರಿಯಾದಲ್ಲಿ ಎಲ್ಲೋ ಇದೆ ಎಂದು ನಂಬಲಾಗಿದೆ. ಶವವನ್ನು ಇಸ್ರೇಲ್ ತೆಗೆದುಕೊಳ್ಳದಂತೆ ತಡೆಯಲು ಕೊಹೆನ್ ಅವರ ದೇಹವನ್ನು ವಿವಿಧ ಸ್ಥಳಗಳಲ್ಲಿ ಹಲವಾರು ಬಾರಿ ಸಮಾಧಿ ಮಾಡಲಾಗಿದೆ ಎಂದು ಸಿರಿಯನ್ ಅಧಿಕಾರಿಗಳು ಹೇಳಿದ್ದಾರೆ ಎಂದು ಇಸ್ರೇಲಿ ಮಾಧ್ಯಮ ವರದಿಗಳು ತಿಳಿಸಿವೆ. ಇಸ್ರೇಲ್ ಈಗ ಮತ್ತೊಮ್ಮೆ ಮೃತದೇಹ ವಾಪಸಾತಿಗೆ ಪ್ರಯತ್ನ ಆರಂಭಿಸಿದೆ.**

**ಸಿರಿಯಾದಲ್ಲಿ ಮಿಷನ್‌ಗಾಗಿ ಆಯ್ಕೆ:** ಕೊಹೆನ್‌ಗೆ ಸಿರಿಯಾದಲ್ಲಿ ಮಿಷನ್‌ಗಾಗಿ ನಕಲಿ ಗುರುತನ್ನು ಮತ್ತು ನಕಲಿ ಹೆಸರನ್ನು ನೀಡಲಾಯಿತು. ಅವರು ಅರ್ಜೆಂಟೀನಾದ ಬ್ಯೂನಸ್ ಐರಿಸ್‌ನಲ್ಲಿ ವಾಸಿಸುವ ಸಿರಿಯನ್ ಉದ್ಯಮಿ ಕಮಲ್ ಅಮೀನ್ ಥಾಬೆಟ್ ಎಂದು ಗುರುತಿಸಿಕೊಂಡರು. ಅವರ ಗುರುತಿನ ಬಗ್ಗೆ ಅನುಮಾನವನ್ನು ತಪ್ಪಿಸಲು, ಕೊಹೆನ್ ಅವರನ್ನು ಬ್ಯೂನಸ್ ಐರಿಸ್‌ಗೆ ಕಳುಹಿಸಲಾಯಿತು.

> **ಸಿರಿಯಾ ಅದೇ ಸಮಯದಲ್ಲಿ ಸೋವಿಯತ್ ಒಕ್ಕೂಟದಿಂದ ಹೊಸ ತಂತ್ರಜ್ಞಾನವನ್ನು ಪಡೆದುಕೊಂಡಿತು. ಇದು ಕೋಡ್ ಮಾಡಲಾದ ಸಂದೇಶಗಳನ್ನು ಕಳುಹಿಸುವಾಗ ಸಂಕೇತಗಳನ್ನು ಗುರುತಿಸಬಲ್ಲದು. ಇದರೊಂದಿಗೆ 1963ರಲ್ಲಿ ಸಿರಿಯಾದಲ್ಲಿ ನಡೆದ ದಂಗೆಯ ನಂತರ ಹೊಸ ನಾಯಕತ್ವದ ಆಂತರಿಕ ಅಂಶಗಳು ಕೊಹೆನ್ ಬಗ್ಗೆ ಅನುಮಾನಾಸ್ಪದವಾಗಿವೆ ಎಂದು ಹೇಳಲಾಗುತ್ತದೆ. ಜೆರುಸಲೆಂ ಪೋಸ್ಟ್ ವರದಿಯ ಪ್ರಕಾರ, ಸಿರಿಯನ್ ಗುಪ್ತಚರವು ರೇಡಿಯೊ ಸಿಗ್ನಲ್ ಅನ್ನು ನಿಜವಾಗಿಯೂ ಮೇಲ್ವಿಚಾರಣೆ ಮಾಡಿದೆ ಎಂದು ತಜ್ಞರು ಹೇಳಿದ್ದಾರೆ.**

ಅಲ್ಲಿ ಅವರು ಸಿರಿಯನ್ ಬಾತ್ ಪಕ್ಷದ ಬೆಂಬಲಿಗರಾಗಿ ತಮ್ಮ ಖ್ಯಾತಿಯನ್ನು ಸ್ಥಾಪಿಸಿದರು.

**ಕೊಹೆನ್ ಸಿಕ್ಕಿಬಿದ್ದಿದ್ದು ಹೇಗೆ?:** ಕೊಹೆನ್ ಅನ್ನು ಹೇಗೆ ಸೆರೆಹಿಡಿಯಲಾಯಿತು ಎಂಬ ಬಗ್ಗೆ ದಶಕಗಳಿಂದ ಚರ್ಚೆ ನಡೆಯುತ್ತಿದೆ. ಮಾಹಿತಿ ಕಳುಹಿಸುವಂತೆ ಮೊಸಾದ್ ಒತ್ತಡ ಹೇರಿದ್ದು ಅಪಾಯ ತಂದೊಡ್ಡಿದೆ ಎಂದು ಹಲವರು ಹೇಳುತ್ತಾರೆ. ಸಿರಿಯಾ ಪಡೆದ ಹೊಸ ತಂತ್ರಜ್ಞಾನವು ಇಸ್ರೇಲ್‌ಗೆ ಸಂದೇಶಗಳನ್ನು ಕಳುಹಿಸಲು ಬಳಸುತ್ತಿರುವ ಟ್ರಾನ್ಸ್‌ಮಿಟರ್ ಅನ್ನು ಟ್ರ್ಯಾಕ್ ಮಾಡಲು ಸಾಧ್ಯವಾಯಿತು.

2022 ರಲ್ಲಿ ಮೊಸಾದ್ ನಿರ್ದೇಶಕ ಡೇವಿಡ್ ಬಾರ್ನಿಯಾ ಅವರು ಜನವರಿ 19 ರಂದು ಕೊಹೆನ್ ಅವರು ಸೆರೆಹಿಡಿಯುವ ಕೇವಲ ಐದು ದಿನಗಳ ಮೊದಲು ಕಳುಹಿಸಿದ ಕೇಬಲ್ ಅನ್ನು ಸಿರಿಯನ್ ಗುಪ್ತಚರ ತಡೆಹಿಡಿದಿದೆ ಎಂದು ಹೇಳಿದರು.

ಸಂದೇಶ ಕಳುಹಿಸುವಾಗ ಬಂಧಿಸಲಾಗಿದೆ 1965 ಜನವರಿ 24ರಂದು, ಎಲಿ ಕೊಹೆನ್ ಇಸ್ರೇಲ್‌ಗೆ ಸಂದೇಶಗಳನ್ನು ಕಳುಹಿಸುತ್ತಿದ್ದಾಗ ಸಿರಿಯನ್ ಪಡೆಗಳು ಬಾಗಿಲನ್ನು ಮುರಿದು ಪ್ರವೇಶಿಸಿತು. ಕೊಹೆನ್ ಸಾಧನಗಳೊಂದಿಗೆ ಸಿಕ್ಕಿಬಿದ್ದರು. ಅವರನ್ನು 18 ಮೇ 1965 ರಂದು ಡಮಾಸ್ಕಸ್‌ನಲ್ಲಿ ರಸ್ತೆಬದಿಯಲ್ಲಿ ವಿಚಾರಣೆ ನಡೆಸಿ ಬಹಿರಂಗವಾಗಿ ಗಲ್ಲಿಗೇರಿಸಲಾಯಿತು.


ಉದಯ ವಾಹಿನಿ

ದೇಶ/ವಿದೇಶ

ಸೋಮವಾರ 06 ಜನವರಿ 2025




## ಮಿನಿ ನ್ಯೂಸ್

### ನದಿಗೆ ವಾಹನ ಉರುಳಿ ಬಿದ್ದು ನಾಲ್ವರ ದುರ್ಮರಣ, ಇಬ್ಬರು ನಾಪತ್ತೆ

**ಜಮ್ಮು:** ಜಮ್ಮು ಮತ್ತು ಕಾಶೀರದ ಕಿಶ್ತ್ವಾರ್ ಜಿಲ್ಲೆಯಲ್ಲಿ ವಾಹನವೊಂದು ರಸ್ತೆಯಿಂದ ಸ್ಕಿಡ್ ಆಗಿ ಗುಡ್ಡದಿಂದ ಉರುಳಿ ನದಿಗೆ ಬಿದ್ದ ಪರಿಣಾಮ ನಾಲ್ವರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಚಾಲಕ ಸೇರಿದಂತೆ ಇಬ್ಬರು ನಾಪತ್ತೆಯಾಗಿದ್ದು, ರಕ್ಷಣಾ ಕಾರ್ಯಾಚರಣೆ ನಡೆಯುತ್ತಿದೆ. ಪದ್ದಾರ್ ಪ್ರದೇಶದಲ್ಲಿ ಈ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಪೊಲೀಸರು ತಕ್ಷಣ ವಾಹನವನ್ನು ಗುರುತಿಸಲಿಲ್ಲ.ಉಧಮ್‌ಪುರ ಸಂಸದ ಮತ್ತು ಕೇಂದ್ರ ಸಚಿವ ಜಿತೇಂದ್ರ ಸಿಂಗ್ ಅವರು ಅಪಘಾತದಲ್ಲಿ ಜೀವಹಾನಿಯ ಬಗ್ಗೆ ಸಂತಾಪ ವ್ಯಕ್ತಪಡಿಸಿದ್ದಾರೆ. ವಾಹನದಲ್ಲಿ ಪ್ರಯಾಣಿಸುತ್ತಿದ್ದ ನಾಲ್ವರು ಪ್ರಯಾಣಿಕರು ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ ಎಂದು ಇದೀಗ ತಿಳಿದು ದುಃಖವಾಗಿದೆ.

ಚಾಲಕ ಸೇರಿದಂತೆ ಇನ್ನೂ ಇಬ್ಬರು ವ್ಯಕ್ತಿಗಳು ಇನ್ನೂ ಪತ್ತೆಯಾಗಿಲ್ಲ. ಮತ ಕುಟುಂಬಗಳಿಗೆ ನನ್ನ ಪ್ರಾಮಾಣಿಕ ಸಂತಾಪ ಎಂದು ಅವರು ಎಕ್ಸ್‌ನಲ್ಲಿನ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ. ಅಪಘಾತದ ವರದಿಯನ್ನು ಸ್ವೀಕರಿಸಿದ ತಕ್ಷಣ ಕಿಶ್ತ್ವಾರ್‌ನ ಡೆಪ್ಯೂಟಿ ಕಮಿಷನರ್ ರಾಜೇಶ್ ಕುಮಾರ್ ಶವನ್ ಅವರನ್ನು ಸಂಪರ್ಕಿಸಿರುವುದಾಗಿ ಸಚಿವರು ಹೇಳಿದರು.ಪಾರುಗಾಣಿಕಾ ತಂಡಗಳನ್ನು ಕಾರ್ಯರೂಪಕ್ಕೆ ತರಲಾಗಿದೆ. ನಾನು ನಿಯಮಿತವಾಗಿ ನವೀಕರಣಗಳನ್ನು ಸ್ವೀಕರಿಸುತ್ತಿದ್ದೇನೆ ಎಂದು ಅವರು ಹೇಳಿದರು.

### ಎನ್‌ಕೌಂಟರ್‌ನಲ್ಲಿ ನಾಲ್ವರು ನಕ್ಸಲೀಯರ ಹತ್ಯೆ, ಪೊಲೀಸ್ ಹುತಾತ್ಮ

**ದಾಂತೇವಾಡ:** ಛತ್ತೀಸ್‌ಗಢದ ಬಸ್ತಾರ್ ಪ್ರದೇಶದಲ್ಲಿ ಭದ್ರತಾ ಪಡೆಗಳು ನಡೆಸಿದ ಎನ್‌ಕೌಂಟರ್‌ನಲ್ಲಿ ನಾಲ್ವರು ನಕ್ಸಲೀಯರು ಹತರಾಗಿದ್ದಾರೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈ ಮುಖಾ ಮುಖಿಯಲ್ಲಿ ಜಿಲ್ಲಾ ರಿಸರ್ವ್ ಗಾರ್ಡ್‌ನ (ಡಿಆರ್‌ಜಿ) ಹೆಡ್ ಕಾನ್‌ಸ್ಟೇಬಲ್ ಕೂಡ ಸಾವನ್ನಪ್ಪಿದ್ದಾರೆ ಎಂದು ಅವರು ಹೇಳಿದರು. ನಾರಾಯಣಪುರ ಮತ್ತು ದಾಂತೇವಾಡ ಜಿಲ್ಲೆಗಳ ಗಡಿಯಲ್ಲಿರುವ ದಕ್ಷಿಣ ಅಬುಜ್‌ಮದ್‌ನ ಅರಣ್ಯದಲ್ಲಿ ನಿನ್ನೆ ಸಂಜೆ ಭದ್ರತಾ ಸಿಬ್ಬಂದಿಯ ಜಂಟಿ ತಂಡವು ನಕ್ಸಲೀಯ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿದ್ದಾಗ ಗುಂಡಿನ ಚಕಮಕಿ ನಡೆಯಿತು ಎಂದು ಅವರು ತಿಳಿಸಿದರು.

ತಡರಾತ್ರಿ ಗುಂಡಿನ ಚಕಮಕಿ ನಿಂತ ನಂತರ, ನಾಲ್ವರು ನಕ್ಸಲೀಯರ ಶವಗಳು ಮತ್ತು ಎಕೆ-47 ರೈಫಲ್ ಮತ್ತು ಸ್ವಯಂ ಲೋಡಿಂಗ್ ರೈಫಲ್ (ಎಸ್‌ಎಲ್‌ಆರ್) ಸೇರಿದಂತೆ ಸ್ವಯಂಚಾಲಿತ ಶಸಾ?ತ್ರಸ್ತ್ರಗಳನ್ನು ಸ್ಥಳದಿಂದ ವಶಪಡಿಸಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಗುಂಡಿನ ಚಕಮಕಿಯಲ್ಲಿ ಡಿಆರ್‌ಜಿ ಹೆಡ್ ಕಾನ್‌ಸ್ಟೇಬಲ್ ಸನ್ನು ಕರಮ್ ಕೂಡ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಈ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆ ಇನ್ನೂ ನಡೆಯುತ್ತಿದೆ ಎಂದು ಅವರು ಹೇಳಿದರು.

### ತರಬೇತಿ ನಿರತ ಕರಾವಳಿ ಪಡೆ ಹೆಲಿಕಾಪ್ಟರ್ ಪತನ: ಮೂವರ ಸಾವು

**ಅಹ್ಮದಾಬಾದ್:** ಗುಜರಾತ್ ಕರಾವಳಿಯಲ್ಲಿ ಭಾರತೀಯ ಕರಾವಳಿ ಪಡೆಯ ತರಬೇತಿ ನಿರತ ಹೆಲಿಕಾಪ್ಟರ್ ಪತನಕ್ಕೀಡಾಗಿದ್ದು, ಹೆಲಿಕಾಪ್ಟರ್‌ನಲ್ಲಿದ್ದ ಮೂವರು ದುರ್ಮರಣಕ್ಕೀಡಾಗಿದ್ದಾರೆ. ಹೌದು..ಗುಜರಾತ್‌ನ ಪೋರ್‌ಬಂದರ್‌ನಲ್ಲಿ ಎಎಲ್‌ಎಚ್ ಧ್ರುವ್ ಹೆಸರಿನ ಭಾರತೀಯ ಕರಾವಳಿ ಪಡೆ ಹೆಲಿಕಾಪ್ಟರ್ ಪತನಗೊಂಡಿದ್ದು ಈ ದುರ್ಘಟನೆಯಲ್ಲಿ ಮೂವರು ಮೃತಪಟ್ಟಿದ್ದಾರೆ. ಮೂಲಗಳ ಪ್ರಕಾರ ಪೈಲಟ್‌ಗಳಿಗೆ ತರಬೇತಿ ನೀಡುವ ಸಮಯದಲ್ಲಿ ಈ ದುರ್ಘಟನೆ ನಡೆದಿದೆ.

ಹೆಲಿಕಾಪ್ಟರ್‌ನಲ್ಲಿ ಇಬ್ಬರು ಪೈಲಟ್‌ಗಳು ಸೇರಿದಂತೆ ಮೂವರು ಸಿಬ್ಬಂದಿ ಇದ್ದರು. ಈ ಘಟನೆಯಲ್ಲಿ ಮೂವರೂ ಪ್ರಾಣ ಕಳೆದುಕೊಂಡಿದ್ದಾರೆ ಎಂದು ಐಸಿಜಿ ಅಧಿಕಾರಿಗಳು ತಿಳಿಸಿದ್ದಾರೆ. ಈ ಘಟನೆ ಮಧ್ಯಾಹ್ನ 12:10 ರ ಸುಮಾರಿಗೆ ನಡೆದಿದೆ ಎಂದು ಪೋರಬಂದರ್ ಪೊಲೀಸ್ ವರಿಷ್ಠಾಧಿಕಾರಿ ಭಾಗೀರಥ್‌ಸಿನ್ಹ ಜಡೇಜಾ ತಿಳಿಸಿದ್ದಾರೆ.

ಮೂವರು ಸಿಬ್ಬಂದಿ ಇದ್ದ ಐಸಿಜಿಯ ಅಡ್ವಾನ್ಸ್ಡ್ ಲೈಟ್ ಹೆಲಿಕಾಪ್ಟರ್ (ಎಎಲ್‌ಎಚ್) ಪೋರಬಂದರ್ ವಿಮಾನ ನಿಲ್ದಾಣದಲ್ಲಿ ಇಳಿಯುವಾಗ ಅಪಘಾತಕ್ಕೀಡಾಗಿದೆ ಎಂದು ಅವರು ಹೇಳಿದರು. ಮೂವರು ಸಿಬ್ಬಂದಿಯನ್ನು ಹೆಲಿಕಾಪ್ಟರ್‌ನಿಂದ ಹೊರಕ್ಕೆ ಕರೆತಂದು ಪೋರಬಂದರ್‌ನ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ತೀವ್ರವಾಗಿ ಸುಟ್ಟ ಸ್ಥಿತಿಯಲ್ಲಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ ಎಂದು ಕಮಲಾ ಬಾಗ್ ಪೊಲೀಸ್ ಠಾಣೆಯ ಇನ್‌ಸ್ಪೆಕ್ಟರ್ ರಾಜೇಶ್ ಕಾನ್ಮಿಯಾ ತಿಳಿಸಿದ್ದಾರೆ.

### ಲಕ್ಷಾಂತರ ರೂ. ದೇಣಿಗೆ ಹಣದೊಂದಿಗೆ ಇಸ್ಕಾನ್ ನೌಕರ ಎಸ್ಕೇಪ್



**ಮಥುರಾ:** ಭಕ್ತರು ನೀಡಿದ ದೇಣಿಗೆಯ ಹಣವನ್ನು ಸಂಗ್ರಹಿಸಲು ನಿಯೋಜಿಸಲಾದ ಇಸ್ಕಾನ್ ದೇವಾಲಯದ ನೌಕರನೊಬ್ಬ ರಶೀದಿ ಪುಸ್ತಕ ಹಾಗೂ ಲಕ್ಷಾಂತರ ರೂಪಾಯಿಗಳೊಂದಿಗೆ ಪರಾರಿಯಾಗಿದ್ದಾನೆ ಎಂದು ವರದಿಯಾಗಿದೆ. ಆರೋಪಿ ವಿರುದ್ಧ ದೇವಸ್ಥಾನದ ಮುಖ್ಯ ಹಣಕಾಸು ಅಧಿಕಾರಿ ವಿಶ್ವನಾಮ ದಾಸ್ ಅವರು ಎಫ್‌ಐಆರ್ ದಾಖಲಿಸಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ನಗರ) ಅರವಿಂದ್ ಕುಮಾರ್ ತಿಳಿಸಿದ್ದಾರೆ.

ದಾಸ್ ಅವರು ಡಿಸೆಂಬರ್ 27 ರಂದು ಎಸ್‌ಎಸ್‌ಪಿ ಶೈಲೇಶ್ ಕುಮಾರ್ ಪಾಂಡೆ ಅವರಿಗೆ ಕಳ್ಳತನದ ಬಗ್ಗೆ ಮಾಹಿತಿ ನೀಡಿ ಅರ್ಜಿ ಸಲ್ಲಿಸಿದ್ದಾರೆ ಎಂದು ಅವರು ಹೇಳಿದರು. ಪ್ರಾಥಮಿಕ ತನಿಖೆ ನಡೆಸಿ ಎಫ್‌ಐಆರ್ ದಾಖಲಿಸಲಾಗಿದೆ. ದೇವಸ್ಥಾನದ ಪಿಆರ್ ಒ ರವಿ ಲೋಚನ್ ದಾಸ್ ಮಾತನಾಡಿ, ದೇಣಿಗೆ ನೀಡಿದ ಹಣವನ್ನು ಸಂಗ್ರಹಿಸಿ ಕಾಲಕಾಲಕ್ಕೆ ದೇವಸ್ಥಾನದ ಅಧಿಕಾರಿಗಳಿಗೆ ಜಮಾ ಮಾಡುವುದು ಮುರಳೀಧರ ದಾಸ್ ಅವರ ಕೆಲಸವಾಗಿತ್ತು. ಪರಿಶೀಲನೆಯ ನಂತರ ಅವರು ದೇವಸ್ಥಾನದಲ್ಲಿ ಎಷ್ಟು ಹಣ ಇಟ್ಟಿದ್ದಾರೆ ಎಂಬುದು ನಿಖರವಾಗಿ ತಿಳಿಯಲಿದೆ ಎಂದರು. ಎಫ್‌ಐಆರ್ ಪ್ರಕಾರ, ನಿಮಾಯ್ ಚಂದ್ ಯಾದವ್ ಅವರ ಪುತ್ರ ಮುರಳೀಧರ್ ದಾಸ್ ಅವರು ಸಂಸದ ಇಂದೋರ್‌ನ ರೌಗಂಜ್ ವಾಸಾದ ಶ್ರೀರಾಮ್ ಕಾಲೋನಿ ನಿವಾಸಿಯಾಗಿದ್ದಾರೆ. ಹಣದ ಜತೆಗೆ 32 ಹಾಳೆಗಳಿದ್ದ ರಸೀದಿ ಪುಸ್ತಕದೊಂದಿಗೆ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಈ ಹಿಂದೆಯೂ ಸೌರವ್ ಎಂಬ ವ್ಯಕ್ತಿ ದೇಣಿಗೆ ಹಣ ಹಾಗೂ ರಸೀದಿ ಪುಸ್ತಕದೊಂದಿಗೆ ಪರಾರಿಯಾಗಿದ್ದ ಎಂದು ಪಿಆರ್‌ಒ ತಿಳಿಸಿದ್ದಾರೆ.

# ಕನ್ನಡದಲ್ಲಿ ಪ್ರಪೋಸ್ ಮಾಡಿದ ವಿಡಿಯೋ ನೋಡಿದ್ರಾ



ದೀಪಿಕಾ ಪಡುಕೋಣೆ ಮತ್ತು ರಣವೀರ್ ಸಿಂಗ್ ಅವರ ಪ್ರೇಮಕಥೆ, ವಿವಾಹ ಮತ್ತು ಮಗುವಿನ ಬಗ್ಗೆ ಈ ಸ್ಟೋರಿಯಲ್ಲಿ ಚರ್ಚೆ ಆಗುತ್ತಿದೆ. ರಣವೀರ್ ಅವರು ದೀಪಿಕಾಗೆ ಕನ್ನಡದಲ್ಲಿ ಪ್ರಪೋಸ್ ಮಾಡಿದ ವಿಡಿಯೋ ವೈರಲ್ ಆಗಿದೆ. ಅವರ ಪ್ರೀತಿಯ ಆರಂಭ, ಮದುವೆ ಮತ್ತು ಈಗ ಮಗುವಿನ ಜನ್ಮದ ಸಂತೋಷದ ಕುರಿತು ವಿವರಗಳಿವೆ. ದೀಪಿಕಾ ಅವರ ಜನ್ಮದಿನದ ಸಂದರ್ಭದಲ್ಲಿ ಈ ವಿಡಿಯೋಗಳು ಮತ್ತೆ ವೈರಲ್ ಆಗಿವೆ. ದೀಪಿಕಾ ಹಾಗೂ ರಣವೀರ್ ಪ್ರೀತಿಸಿ ವಿವಾಹ ಆದವರು. ಒಂದೇ ಸಿನಿಮಾದಲ್ಲಿ ನಟಿಸಿದ ಇವರಿಗೆ ಸೆಟ್‌ನಲ್ಲೇ ಪ್ರೀತಿ ಮೂಡಿತು.

ರಣವೀರ್ ಸಿಂಗ್ ಹಾಗೂ ದೀಪಿಕಾ ಈಗ ಪಾಲಕರೂ ಹೌದು. ಮುಂಬೈನ ಖಾಸಗಿ ಆಸ್ಪತ್ರೆಯಲ್ಲಿ ದೀಪಿಕಾ ಕಳೆದ ವರ್ಷ ಹೆಣ್ಣು ಮಗುವಿಗೆ ಜನ್ಮ ನೀಡಿದ್ದಾರೆ. ರಣವೀರ್ ಹಾಗೂ ದೀಪಿಕಾ ಪ್ರೀತಿ ಶುರುವಾಗಿದ್ದು ದಶಕಗಳ ಹಿಂದೆ. ಈಗ ಇಬ್ಬರೂ ಹಾಯಾಗಿ ಸಂಸಾರ ನಡೆಸುತ್ತಿದ್ದಾರೆ.

ದೀಪಿಕಾ ಪಡುಕೋಣೆ ಅವರಿಗೆ ಇಂದು ಜನ್ಮದಿನದ ಸಂಭ್ರಮ. ಈ ವೇಳೆ ಅವರ ಹಳೆಯ ವಿಡಿಯೋಗಳು ವೈರಲ್ ಆಗುತ್ತಿವೆ. ದೀಪಿಕಾ ಪಡುಕೋಣೆ ಅವರು ಕರ್ನಾಟಕದವರು. ಅವರಿಗೆ ಕನ್ನಡ ಬರುತ್ತದೆ. ಬೆಂಗಳೂರಲ್ಲಿ ದೀಪಿಕಾ ಶಿಕ್ಷಣ ಪಡೆದಿದ್ದರು. ಅವರು ನಟಿಸಿದ ಮೊದಲ ಸಿನಿಮಾ 'ಐಶ್ವರ್ಯಾ' ಕನ್ನಡದ್ದು. ಅವರಿಗೆ ಕನ್ನಡದ ಬಗ್ಗೆ ವಿಶೇಷ ಪ್ರೀತಿ ಇದೆ. ರಣವೀರ್ ಸಿಂಗ್ ಅವರದ್ದು ಪಂಜಾಬಿ ಕುಟುಂಬ. ಅವರು ಕೆಲವೊಮ್ಮೆ ಬೆಂಗಳೂರಿಗೆ ಬಂದ ಉದಾಹರಣೆ ಇದೆ. ಅವರಿಗೆ ಕನ್ನಡದ ಬರುವುದಿಲ್ಲ. ಅವರು ಈ ಮೊದಲು ಕನ್ನಡದಲ್ಲಿ ದೀಪಿಕಾಗೆ ಪ್ರಪೋಸ್ ಮಾಡಿದ್ದರು ಅನ್ನೋದು ವಿಶೇಷ. ಆ ಸಂದರ್ಭದ ವಿಡಿಯೋ ಬರ್ತ್‌ಡೇ ಸಮಯದಲ್ಲಿ ವೈರಲ್ ಮಾಡಲಾಗಿದೆ. ರಣವೀರ್ ಸಿಂಗ್ ಅವರು ಅವಾರ್ಡ್ ಕಾರ್ಯಕ್ರಮದಲ್ಲಿ ಭಾಗಿ ಆಗುತ್ತಾ ಇರುತ್ತಾರೆ. ಅದೇ ರೀತಿ ಅವರು ಅವಾರ್ಡ್ ಕಾರ್ಯಕ್ರಮಕ್ಕೆ ತೆರಳಿದ್ದರು. ಅಲ್ಲಿ ಯಶ್ ಸೇರಿದಂತೆ ಅನೇಕರು ಇದ್ದರು. ಈ ವೇಳೆ ಅವರ ಜೊತೆ ಇದ್ದಿದ್ದು, ಕನ್ನಡದ ಅಕುಲ್ ಬಾಲಾಜಿ. ಅವರು ಕನ್ನಡದ ಹಲವು ಶೋಗಳನ್ನು ನಡೆಸಿಕೊಟ್ಟಿದ್ದಾರೆ. ಆ ಶೋನ ಅಕುಲ್ ನಡೆಸಿಕೊಡುತ್ತಾ ಇದ್ದರು.

# ಇನ್ನಷ್ಟು ಜಾಸ್ತಿ ಆಯ್ತು ಬಾಲಯ್ಯ ಮಾಸ್ ಅವತಾರ



ಜ.12ರಂದು ಬಿಡುಗಡೆ ಆಗಲಿರುವ 'ಡಾಕು ಮಹಾರಾಜ್' ಸಿನಿಮಾದಲ್ಲಿ ನಂದಮೂರಿ ಬಾಲಕೃಷ್ಣ, ಶ್ರದ್ಧಾ ಶ್ರೀನಾಥ್, ಪ್ರಗ್ಯಾ ಜೈಸ್ವಾಲ್ ಮುಂತಾದವರು ನಟಿಸಿದ್ದಾರೆ. ಟ್ರೇಲರ್ ಬಿಡುಗಡೆ ಆಗಿದ್ದು, ಅಭಿಮಾನಿಗಳು ಈ ಚಿತ್ರದ ಮೇಲೆ ಇಟ್ಟಿರುವ ನಿರೀಕ್ಷೆ ಡಬಲ್ ಆಗಿದೆ. ತುಂಬ ಮಾಸ್ ಆಗಿ ಈ ಸಿನಿಮಾ ಮೂಡಿಬಂದಿದೆ ಎಂಬುದಕ್ಕೆ ಈ ಟ್ರೇಲರ್ ಸಾಕ್ಷಿ. ಮಾಸ್ ಸಿನಿಮಾಗಳನ್ನು ಮಾಡಿ ಫೇಮಸ್ ಆಗಿರುವ ನಂದಮೂರಿ ಬಾಲಕೃಷ್ಣ ಅವರು ವರ್ಷ ಸಂಕ್ರಾಂತಿ ಸಮಯಕ್ಕೆ ಅಭಿಮಾನಿಗಳಿಗೆ ಭರ್ಜರಿ ಮನರಂಜನೆ ನೀಡುತ್ತಾರೆ. ಈ ವರ್ಷ ಅವರು ನಟಿಸಿರುವ 'ಡಾಕು ಮಹಾರಾಜ್' ಸಿನಿಮಾ ಬಿಡುಗಡೆ ಆಗುತ್ತಿದೆ. ಈ ಸಿನಿಮಾದಲ್ಲಿ ಬಾಲಯ್ಯ ಅವರ ಅವತಾರ ಸಖತ್ ಮಾಸ್ ಆಗಿದೆ. ಇಂದು (ಜನವರಿ 5) 'ಡಾಕು ಮಹಾರಾಜ್' ಸಿನಿಮಾದ ಟ್ರೇಲರ್ ಬಿಡುಗಡೆ ಆಗಿದೆ. ಸಿನಿಮಾ ಬಗ್ಗೆ ಅಭಿಮಾನಿಗಳಿಗೆ ಇರುವ ನಿರೀಕ್ಷೆಯನ್ನು ಡಬಲ್ ಆಗಿಸುವ ರೀತಿಯಲ್ಲಿ ಈ ಟ್ರೇಲರ್ ಮೂಡಿ ಬಂದಿದೆ. ಜನವರಿ 12ರಂದು 'ಡಾಕು ಮಹಾರಾಜ್' ಸಿನಿಮಾ ರಿಲೀಸ್ ಆಗಲಿದೆ. ಬಾಬಿ ಕೊಲ್ಲಿ ಅವರು 'ಡಾಕು ಮಹಾರಾಜ್' ಸಿನಿಮಾಗೆ ನಿರ್ದೇಶನ ಮಾಡಿದ್ದಾರೆ. ಈ ಸಿನಿಮಾದಲ್ಲಿ ಬಾಲಯ್ಯ ಎದುರು ವಿಲನ್ ಆಗಿ ಬಾಲಿವುಡ್ ನಟ ಬಾಬಿ ಡಿಯೋಲ್ ಅವರು ನಟಿಸಿದ್ದಾರೆ. ಇದು ಅವರ ಮೊದಲ ತೆಲುಗು ಸಿನಿಮಾ. ಈಗಾಗಲೇ ತಮಿಳಿನಲ್ಲಿ ಸೂರ್ಯ ಎದುರು ವಿಲನ್ ಆಗಿ ಆರ್ಭಟಿಸಿದ ಬಾಬಿ ಡಿಯೋಲ್ ಅವರು ಈಗ ಟಾಲಿವುಡ್‌ನಲ್ಲಿ ಖಾತೆ ತೆರೆಯುತ್ತಿದ್ದಾರೆ. ಟ್ರೇಲರ್‌ನಲ್ಲಿ ಅವರ ಪಾತ್ರ ಹೈಲೈಟ್ ಆಗಿದೆ. **ಡಾಕು ಮಹಾರಾಜ್' ಟ್ರೇಲರ್:** ಅಭಿಮಾನಿಗಳ ನಿರೀಕ್ಷೆಗೆ ತಕ್ಕಂತೆಯೇ 'ಡಾಕು ಮಹಾರಾಜ್' ಸಿನಿಮಾದ ಟ್ರೇಲರ್ ಮೂಡಿಬಂದಿದೆ. ಈ ಸಿನಿಮಾಗೆ ನಾಗ ವಂಶಿ ಅವರು ಬಂಡವಾಳ ಹೂಡಿದ್ದಾರೆ. ಸಖತ್ ಅದ್ದೂರಿಯಾಗಿ ಸಿನಿಮಾ ಮೂಡಿಬಂದಿದೆ ಎಂಬುದಕ್ಕೆ ಟ್ರೇಲರ್ ಸಾಕ್ಷಿಯಾಗಿದೆ. ಬಾಲಯ್ಯ ಫ್ಯಾನ್ಸ್ ಬಯಸುವ ಭರ್ಜರಿ ಆಯಕ್ಷನ್ ಸನ್ನಿವೇಶಗಳು ಕೂಡ ಈ ಸಿನಿಮಾದಲ್ಲಿ ಇವೆ. ಸಂಕ್ರಾಂತಿ ಪ್ರಯುಕ್ತ ರಿಲೀಸ್ ಆಗಲಿರುವ ಈ ಸಿನಿಮಾ ಬಾಕ್ಸ್ ಆಫೀಸ್‌ನಲ್ಲಿ ಎಷ್ಟು ಕಲೆಕ್ಷನ್ ಮಾಡಲಿದೆ ಎಂಬುದನ್ನು ಕಾದು ನೋಡಬೇಕು. ಡಾಕು ಮಹಾರಾಜ್' ಸಿನಿಮಾದಲ್ಲಿ ನಂದಮೂರಿ ಬಾಲಕೃಷ್ಣ ಅವರು ಎರಡು ಗೆಟಪ್‌ನ ಪಾತ್ರ ಮಾಡಿದ್ದಾರೆ. ಅದರ ಹಿಂದಿರುವ ಕಥೆ ಏನು ಎಂಬುದನ್ನು ತಿಳಿಯಲು ಫ್ಯಾನ್ಸ್ ಕಾದಿದ್ದಾರೆ. ಥಮನ್ ಅವರ ಸಂಗೀತಕ್ಕೂ ಟ್ರೇಲರ್‌ನಲ್ಲಿ ಮೆಚ್ಚುಗೆ ಸಿಗುತ್ತಿದೆ. ಈ ಸಿನಿಮಾದಲ್ಲಿ ಬಾಲಯ್ಯ ಜೊತೆ ಪ್ರಗ್ಯಾ ಜೈಸ್ವಾಲ್, ಚಾಂದಿನಿ ಚೌದರಿ, ಕನ್ನಡದ ನಟಿ ಶ್ರದ್ಧಾ ಶ್ರೀನಾಥ್ ಕೂಡ ನಟಿಸಿದ್ದಾರೆ. 'ಡಾಕು ಮಹಾರಾಜ್' ಟ್ರೇಲರ್‌ಗೆ ಜನರಿಂದ ಪಾಸಿಟಿವ್ ಪ್ರತಿಕ್ರಿಯೆ ಸಿಗುತ್ತಿದೆ. ಕೆಲವೇ ಗಂಟೆಗಳಲ್ಲಿ ಮಿಲಿಯನ್‌ಗಟ್ಟಲೆ ವೀಕ್ಷಣೆ ಕಂಡಿದೆ.


# ತ್ರಿವಿಕ್ರಮ್ ವಿರುದ್ಧ ಸಿಡಿದೆದ್ದ ಪೂನಂ ಕೌರ್



ಟಾಲಿವುಡ್ ನಟಿ ಪೂನಂ ಕೌರ್ ಮತ್ತೆ ನಿರ್ದೇಶಕ ತ್ರಿವಿಕ್ರಮ್ ಶ್ರೀನಿವಾಸ್ ವಿರುದ್ಧ ಗರಂ ಆಗಿದ್ದಾರೆ. ನಿರ್ದೇಶಕ ತ್ರಿವಿಕ್ರಮ್ ಮೇಲೆ ದೂರು ನೀಡಿದ್ದರೂ ಸಂಸ್ಥೆ ಯಾವುದೇ ರೀತಿಯ ಕ್ರಮ ಕೈಗೊಳ್ಳುತ್ತಿಲ್ಲ ಎಂದು ನಟಿ ರಾಂಗ್ ಆಗಿದ್ದಾರೆ. ಈ ಕುರಿತು ಎಕ್ಸ್ ಖಾತೆಯಲ್ಲಿ ನಟಿ ಬರೆದುಕೊಂಡಿದ್ದಾರೆ. ಡೈರೆಕ್ಟರ್ ತ್ರಿವಿಕ್ರಮ್ ಅವರು ತಮ್ಮ ಮೇಲೆ ಲೈಂಗಿಕ ಕಿರುಕುಳ ನೀಡಿರೋದಾಗಿ ಈ ಹಿಂದೆ ಪೂನಂ ಆರೋಪ ಮಾಡಿದ್ದರು. ಈ ಬಗ್ಗೆ ಇದೀಗ ಮತ್ತೆ ನಟಿ ಧ್ವನಿಯೆತ್ತಿದ್ದಾರೆ. ತೆಲುಗಿನ ಕಲಾವಿದರ ಸಂಘ 'ಮಾ' ಕುರಿತು ಎಕ್ಸ್‌ನಲ್ಲಿ ರಿಯಾಕ್ಟ್ ಮಾಡಿ, ತ್ರಿವಿಕ್ರಮ್ ಶ್ರೀನಿವಾಸ್ ಮೇಲಿನ ದೂರನ್ನು 'ಮಾ' ಸಂಸ್ಥೆ ಸ್ವೀಕರಿಸಲಿಲ್ಲ. ಯಾವುದೇ ವಿಚಾರಣೆ ಮಾಡಿಲ್ಲ. ಸೂಕ್ತ ಕ್ರಮ ಕೈಗೊಂಡಿಲ್ಲ. ಆತ ನನ್ನ ಜೀವನವನ್ನೇ ನಾಶ ಮಾಡಿ ಬಿಟ್ಟ ಎಂದು ಬರೆದುಕೊಂಡಿದ್ದಾರೆ. ಹಾಗಾದ್ರೆ, 'ಮಾ' ಸಂಸ್ಥೆ ಯಾರ ಪರ ನಿಂತಿದೆ ಎಂದು ನಟಿ ಬೇಸರ ವ್ಯಕ್ತಪಡಿಸಿದ್ದಾರೆ. ಇದಕ್ಕೆ 'ಮಾ' ಸಂಸ್ಥೆ ಸ್ಪಂದಿಸಿ, ಎಕ್ಸ್‌ನಲ್ಲಿ ಆರೋಪ ಮಾಡಿದ್ರೆ ಪ್ರಯೋಜನವಿಲ್ಲ. ತ್ರಿವಿಕ್ರಮ್ ವಿರುದ್ಧ ದೂರು ಕೊಟ್ಟರೆ ಕ್ರಮ ಕೈಗೊಳ್ಳುತ್ತೇವೆ. ಇದುವರೆಗೂ ಯಾವುದೇ ಲಿಖಿತ ದೂರು ಬಂದಿಲ್ಲ ಎಂದು 'ಮಾ' ಚಲನಚಿತ್ರ ಕಲಾವಿದರ ಸಂಘ ಪೂನಂ ಆರೋಪಕ್ಕೆ ಉತ್ತರ ಕೊಟ್ಟಿದೆ.

# ಮಗಳ ಜೊತೆಗಿನ ಮುದ್ದಾದ ವಿಡಿಯೋ ಹಂಚಿಕೊಂಡ ಮಿಲನಾ ನಾಗರಾಜ್

ಕನ್ನಡದ ನಟಿ ಮಿಲನಾ ನಾಗರಾಜ್ ಅವರು ಮಗಳ ಆರೈಕೆಯಲ್ಲಿ ಬ್ಯುಸಿಯಾಗಿದ್ದಾರೆ. ಹಾಗಂತ ಸಿನಿಮಾದಿಂದ ಅವರು ಅಂತರ ಕಾಯ್ದುಕೊಂಡಿಲ್ಲ. ಬದಲಾಗಿ ಎರಡನ್ನು ನಿಭಾಯಿಸುತ್ತಿದ್ದಾರೆ. ಇದೀಗ ಮಗಳ ಜೊತೆಗಿನ ಮುದ್ದಾದ ವಿಡಿಯೋವೊಂದನ್ನು ನಟಿ ಶೇರ್ ಮಾಡಿದ್ದಾರೆ. ಮಿಲನಾ ಮಗಳ ತುಂಟಾಟ ನೋಡಿ ಫ್ಯಾನ್ಸ್ ಕ್ಯೂಟ್ ಎಂದಿದ್ದಾರೆ. ಇಂದಿಗೆ ಮಿಲನಾ ಪುತ್ರಿ ಜನಿಸಿ 4 ತಿಂಗಳು ಕಳೆದಿದೆ. ಇದೇ ಖುಷಿಯಲ್ಲಿ ಮಗಳ ಕ್ಯೂಟ್ ವಿಡಿಯೋವನ್ನು ಹಂಚಿಕೊಂಡು ನಟಿ ಸಂಭ್ರಮಿಸಿದ್ದಾರೆ. ನಿನ್ನ ನಗುವಿನಿಂದ ನಮ್ಮ ಜಗತ್ತು ಬೆಳಗುತ್ತಿದೆ ಎಂದು ನಟಿ ಅಡಿಬರಹ ನೀಡಿದ್ದಾರೆ.ಅಂದಹಾಗೆ, ಕಳೆದ ಸೆ.5ರಂದು ನಟಿ ಹೆಣ್ಣು ಮಗುವಿಗೆ ಜನ್ಮ ನೀಡಿದ್ದರು. ಮಗಳಿಗೆ ಡಾರ್ಲಿಂಗ್ ಕೃಷ್ಣ ಗ್ರ್ಯಾಂಡ್ ಆಗಿ ಸ್ವಾಗತಿಸಿದ್ದರು. ಮಗಳಿಗೆ ಪರಿ ಎಂದು ಮಿಲನಾ ದಂಪತಿ ಹೆಸರಿಟ್ಟಿದ್ದಾರೆ.




# ಸಲ್ಮಾನ್ ಖಾನ್ ಸಿನಿಮಾ ನೋಡಲು ಕಾಯುತ್ತಿದ್ದೇವೆ



ಕನ್ನಡದ 'ಬಿಗ್ ಬಾಸ್ ಸೀಸನ್ 11'ರ ಕಾರ್ಯಕ್ರಮ ಅಂತ್ಯವಾಗಲು ಕೆಲವೇ ದಿನಗಳು ಬಾಕಿಯಿವೆ. ಇತ್ತ ಹಿಂದಿ 'ಬಿಗ್ ಬಾಸ್' ಸೀಸನ್ 18 ಕೂಡ ಸದ್ದು ಮಾಡುತ್ತಿದೆ. ಸಲ್ಮಾನ್ ಖಾನ್ ನಿರೂಪಣೆಯ ಈ ಕಾರ್ಯಕ್ರಮಕ್ಕೆ ರಾಮ್ ಚರಣ್ ಮತ್ತು ಕಿಯಾರಾ ಅತಿಥಿಯಾಗಿ ಭಾಗವಹಿಸಿದ್ದಾರೆ. ಈ ವೇಳೆ, ನಿಮ್ಮ ಸಿನಿಮಾ ನೋಡಲು ಕಾಯುತ್ತೀದ್ದೇವೆ ಎಂದು ಸಲ್ಮಾನ್‌ರನ್ನು ರಾಮ್ ಚರಣ್ ಹಾಡಿ ಹೊಗಳಿದ್ದಾರೆ.

ರಾಮ್ ಚರಣ್ ಮತ್ತು ಕಿಯಾರಾ ಅಡ್ವಾಣಿ 'ಗೇಮ್ ಚೇಂಜರ್' ಪ್ರಚಾರ ಕಾರ್ಯದಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಿಮಿತ್ತ ಹಿಂದಿ ಬಿಗ್ ಬಾಸ್‌ಗೂ ಅತಿಥಿಗಳಾಗಿ ಆಗಮಿಸಿದ್ದಾರೆ. ಈ ವೇಳೆ ರಾಮ್ ಚರಣ್ ಮಾತನಾಡಿ, ಸಲ್ಮಾನ್ ಭಾಯ್ ನಿಮ್ಮ ಸಿನಿಮಾ ನೋಡಿ ಬಹಳ ಸಮಯ ಆಯಿತು. ನಿಮ್ಮಲಿರುವ ಸಿಖಂದರ್ ಅನ್ನು ನೋಡಲು ಕಾಯುತ್ತಿದ್ದೇವೆ ಎಂದರು. ಆಗ ಕಿಯಾರಾ ಕೂಡ 'ಸಿಖಂದರ್' ಚಿತ್ರದ ಟೀಸರ್ ಚೆನ್ನಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಅಂದಹಾಗೆ, 'ಸಿಖಂದರ್' ಸಿನಿಮಾದಲ್ಲಿ ಸಲ್ಮಾನ್ ಮತ್ತು ರಶ್ಮಿಕಾ ಮಂದಣ್ಣ ಜೋಡಿಯಾಗಿ ಕಾಣಿಸಿಕೊಳ್ತಿದ್ದಾರೆ. ಈ ಚಿತ್ರದಲ್ಲಿ ಸಲ್ಮಾನ್ ಯೋಧನ ಪಾತ್ರದಲ್ಲಿ ಕಾಣಿಸಿಕೊಳ್ತಿದ್ದಾರೆ. ಎ.ಆರ್ ಮುರುಗದಾಸ್ ನಿರ್ದೇಶನ ಮಾಡುತ್ತಿದ್ದಾರೆ. ಮುಂದಿನ ವರ್ಷ ಈದ್ ಹಬ್ಬದಂದು ಸಿನಿಮಾ ರಿಲೀಸ್ ಆಗಲಿದೆ.

# ಬ್ಯಾಟಿಂಗ್‌ನಲ್ಲಿ ಧಮ್ ಇಲ್ಲ ಕೋಚ್‌ಗಳು ಏನ್ ಮಾಡ್ತಿದ್ದಾರೆ..



ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್-ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿ ಮುಕ್ತಾಯಗೊಂಡಿದ್ದು, ಭಾರತ ಹೀನಾಯ ಸೋಲಿನೊಂದಿಗೆ ಸರಣಿ ಸೋಲುಕಂಡಿದೆ. ಇದರೊಂದಿಗೆ ಟಿ20 ವಿಶ್ವಕಪ್ ಗೆದ್ದ ಬಳಿಕ ಏಕದಿನ ಮತ್ತು ಟೆಸ್ಟ್ ನಲ್ಲಿ ಸತತ 3ನೇ ಸರಣಿಯಲ್ಲಿ ಭಾರತ ಸೋಲು ಕಂಡಿದೆ. ಟೀಂ ಇಂಡಿಯಾದ ಕಳಪೆ ಬ್ಯಾಟಿಂಗ್ ಪ್ರದರ್ಶನಕ್ಕೆ ಮಾಜಿ ಕ್ರಿಕೆಟಿಗ ಸುನೀಲ್ ಗವಾಸ್ಕರ್ ತೀವ್ರ ಅಸಮಾಧಾನ ಹೊರಹಾಕಿದ್ದಾರೆ. ಬ್ಯಾಟಿಂಗ್ ಕೋಚ್‌ಗಳನ್ನು ತರಾಟೆಗೆ ತೆಗೆದುಕೊಂಡಿದ್ದಾರೆ. ಪಂದ್ಯದ ಬಳಿಕ ಸ್ಟಾರ್‌ಸ್ಪೋರ್ಟ್ಸ್ ಜೊತೆಗೆ ಮಾತನಾಡಿದ ಸುನೀಲ್ ಗವಾಸ್ಕರ್, ನಾನು ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಬಗ್ಗೆ ಮಾತನಾಡುತ್ತಿಲ್ಲ. ಆದ್ರೆ ಟೀಂ ಇಂಡಿಯಾ ಬ್ಯಾಟಿಂಗ್ ಕೋಚ್‌ಗಳು ಏನ್ ಮಾಡ್ತಿದ್ದಾರೆ ಎಂದು ಪ್ರಶ್ನೆ ಮಾಡಿದ್ದಾರೆ. ನ್ಯೂಜಿಲೆಂಡ್ ವಿರುದ್ಧ ಟೆಸ್ಟ್ ಪಂದ್ಯದಲ್ಲಿ ಭಾರತ 46 ರನ್‌ಗಳಿಗೆ ಆಲೌಟ್ ಆಗಿದ್ದನ್ನು ನೋಡಿದ್ದೇವೆ. ಅಲ್ಲದೇ ಆ ಸರಣಿಯಲ್ಲೂ ಭಾರತ ಸೋಲು ಅನುಭವಿಸಿತು. ಬೌಲಿಂಗ್ ಪ್ರದರ್ಶನ ಉತ್ತಮವಾಗಿದೆ. ಆದ್ರೆ ಬ್ಯಾಟಿಂಗ್‌ನಲ್ಲಿ ಧಮ್ ಇಲ್ಲ. ನಾನೊಬ್ಬ ಟೆಸ್ಟ್ ಪ್ಲೇಯರ್ ಆಗಿ ಇದನ್ನ ಮಾತನಾಡ್ತಿದ್ದೇನೆ.

ಇಂಗ್ಲೆಂಡ್ ವಿರುದ್ಧ 5 ಪಂದ್ಯಗಳ ಟೆಸ್ಟ್ ಸರಣಿಗೂ ಮುನ್ನ 2 ತಿಂಗಳ ಅಭ್ಯಾಸ ಇತ್ತು. ಈಗ ಕೋಚ್‌ಗಳು ಬ್ಯಾಟಿಂಗ್‌ನಲ್ಲಿ ಏನ್ ಇಂಪ್ರೂವ್ಮೆಂಟ್ ಆಗಿದೆ ಅಂತ ಹೇಳಲಿ ಎಂದು ಕಿಡಿಕಾರಿದ್ದಾರೆ. ಸಿಡ್ನಿಯಲ್ಲಿ ಸುನೀಲ್ ಗವಾಸ್ಕರ್‌ಗೆ ಅಪಮಾನ ಇನ್ನೂ ಸರಣಿ ಅಂತ್ಯದಲ್ಲಿ ಭಾರತದ ಕ್ರಿಕೆಟ್ ದಂತಕಥೆ ಸುನಿಲ್ ಗವಾಸ್ಕರ್‌ಗೆ ಆಯೋಜಕರು ಅಪಮಾನ ಮಾಡಿದ್ದಾರೆ ಎನ್ನಲಾಗಿದೆ. ಸಿಡ್ನಿ ಕ್ರಿಕೆಟ್ ಮೈದಾನದಲ್ಲಿ ನಡೆದ ಪ್ರಶಸ್ತಿ ಸಮಾರಂಭದ ವೇಳೆ ಸುನಿಲ್ ಗವಾಸ್ಕರ್ ಅವರಿಗೆ ಆಯೋಜಕರು ಅಪಮಾನ ಮಾಡಿದ್ದು, ಅವರ ಗೈರಿನಲ್ಲೇ ಪ್ರಶಸ್ತಿ ಪ್ರದಾನ ಮಾಡಿರುವ ಘಟನೆ ನಡೆದಿದೆ.

# ಟೀಂ ಇಂಡಿಯಾವನ್ನು ಟೆಸ್ಟ್ ಜರ್ಸಿಯಲ್ಲಿ ನೋಡಲು ಇನ್ನೂ 6 ತಿಂಗಳು ಕಾಯಬೇಕು



ಆಸ್ಟ್ರೇಲಿಯಾ ವಿರುದ್ಧ ಟೆಸ್ಟ್ ಸರಣಿ ಸೋತಿರುವ ಟೀಂ ಇಂಡಿಯಾ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ನಿಂದ ಹೊರಗುಳಿದಿದೆ. ಇದೀಗ ಟೀಂ ಇಂಡಿಯಾ 2025-27ರ ಡಬ್ಲ್ಯುಟಿಸಿ ಅಭಿಯಾನವನ್ನು ಇಂಗ್ಲೆಂಡ್ ವಿರುದ್ಧದ 5 ಪಂದ್ಯಗಳ ಟೆಸ್ಟ್ ಸರಣಿಯೊಂದಿಗೆ ಪ್ರಾರಂಭಿಸಲಿದೆ. ಉಭಯ ತಂಡಗಳ ನಡುವೆ ಐದು ಪಂದ್ಯಗಳ ಟೆಸ್ಟ್ ಸರಣಿ ಜೂನ್ ತಿಂಗಳಲ್ಲಿ ಆರಂಭವಾಗಲಿದೆ.

ಆಸ್ಟ್ರೇಲಿಯಾ ವಿರುದ್ಧದ ಐದು ಪಂದ್ಯಗಳ ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿಯನ್ನು ಗೆದ್ದು ಸತತ ಮೂರನೇ ಬಾರಿಗೆ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ಗೇರಬೇಕೆಂಬ ಇರಾದೆಯೊಂದಿಗೆ ಆಸ್ಟ್ರೇಲಿಯಾ ಪ್ರವಾಸ ಕೈಗೊಂಡಿದ್ದ ಟೀಂ ಇಂಡಿಯಾ ಖಾಲಿ ಕೈಯಲ್ಲಿ ತವರಿಗೆ ವಾಪಸ್ಸಾಗುತ್ತಿದೆ. ಉಭಯ ತಂಡಗಳ ನಡುವೆ ನಡೆದ ಐದು ಪಂದ್ಯಗಳ ಟೆಸ್ಟ್ ಸರಣಿಯನ್ನು 3-1 ಅಂತರದಿಂದ ಗೆದ್ದುಕೊಂಡ ಆಸ್ಟ್ರೇಲಿಯಾ ತಂಡ ಎರಡನೇ ಬಾರಿಗೆ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್‌ಗೇರಿದರೆ, ಇತ್ತ ಟೀಂ ಇಂಡಿಯಾ ಸರಣಿ ಸೋತಿದಲ್ಲದೆ, ಡಬ್ಲ್ಯುಟಿಸಿ ಫೈನಲ್ ರೇಸ್‌ನಿಂದಲೂ ಹೊರಬಿದ್ದಿದೆ. ಇದೀಗ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನ ನಾಲ್ಕನೇ ಆವೃತ್ತಿಯಲ್ಲಾದರೂ ಮತ್ತೆ ಫೈನಲ್‌ಗೇರುವ ಗುರಿ ಇಟ್ಟುಕೊಂಡಿರುವ ಟೀಂ ಇಂಡಿಯಾ ಅದಕ್ಕಾಗಿ ಇನ್ನು ಆರು ತಿಂಗಳು ಕಾಯಬೇಕಿದೆ. ವಾಸ್ತವವಾಗಿ ಡಬ್ಲ್ಯುಟಿಸಿ ಮೂರನೇ ಆವೃತ್ತಿಯ ಫೈನಲ್ ಪಂದ್ಯ ಜೂನ್ 11 ರಂದು ಆಸ್ಟ್ರೇಲಿಯಾ, ದಕ್ಷಿಣ ಆಫ್ರಿಕಾ ನಡುವೆ ನಡೆಯಲಿದೆ. ಆ ಬಳಿಕವಷ್ಟೇ ನಾಲ್ಕನೇ ಆವೃತ್ತಿಯ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ಗೆ ಚಾಲ್ತಿ ಸಿಗಲಿದೆ. ಇದರ ಭಾಗವಾಗಿ ಟೀಂ ಇಂಡಿಯಾ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ 2025-2027 ಅಭಿಯಾನ ವನ್ನು ಇಂಗ್ಲೆಂಡ್ ವಿರುದ್ಧದ ಸರಣಿಯೊಂದಿಗೆ ಪ್ರಾರಂಭಿಸಲಿದೆ. ಟೀಂ ಇಂಡಿಯಾ ಮತ್ತು ಇಂಗ್ಲೆಂಡ್ ನಡುವೆ ಒಟ್ಟು 5 ಪಂದ್ಯಗಳ ಟೆಸ್ಟ್ ಸರಣಿ ನಡೆಯಲಿದೆ. ಈ ಸರಣಿಗಾಗಿ ಭಾರತ ತಂಡ ಇಂಗ್ಲೆಂಡ್ ಪ್ರವಾಸ ಕೈಗೊಳ್ಳಲಿದೆ. ಆ ಸರಣಿಯ ವೇಳಾಪಟ್ಟಿ ಈ ಕೆಳಗಿನಂತಿದೆ.


**ಭಾರತಕ್ಕೆ ಇಂಗ್ಲೆಂಡ್ ಪ್ರವಾಸ:** ಆದರೆ ಇದಕ್ಕೂ ಮುನ್ನ ಇಂಗ್ಲೆಂಡ್ ತಂಡ ಮೊದಲು ಭಾರತಕ್ಕೆ ಬರಲಿದೆ. ಉಭಯ ತಂಡಗಳ ನಡುವೆ ಐದು ಪಂದ್ಯಗಳ ಟಿ20 ಹಾಗೂ 3 ಪಂದ್ಯಗಳ ಏಕದಿನ ಸರಣಿ ನಡೆಯಲ್ಲಿದೆ. ಈಗಾಗಲೇ ಈ ಸರಣಿಗೆ ಇಂಗ್ಲೆಂಡ್ ತಂಡವನ್ನು ಪ್ರಕಟಿಸಲಾಗಿದ್ದು, ತಂಡದ ನಾಯಕತ್ವವನ್ನು ಜೋಸ್ ಬಟ್ಲರ್ ಮತ್ತೆ ವಹಿಸಿಕೊಂಡಿದ್ದಾರೆ. ಇವರಲ್ಲದೆ ಟೆಸ್ಟ್ ಸ್ಪೆಷಲಿಸ್ಟ್ ಜೋ ರೂಟ್ ಕೂಡ ನಿಯಮಿತ ಓವರ್‌ಗಳ ಮಾದರಿಗೆ ಮತ್ತೊಮ್ಮೆ ಮರಳಿದ್ದಾರೆ.

## ಭಾರತ-ಇಂಗ್ಲೆಂಡ್ ಟೆಸ್ಟ್ ಸರಣಿ ವೇಳಾಪಟ್ಟಿ

- **ಮೊದಲ ಪಂದ್ಯ: ಜೂನ್ 20 ರಿಂದ ಜೂನ್ 24, ಹೆಡಿಂಗ್ಲಿ ಲೀಡ್ಸ್**
- **ಎರಡನೇ ಪಂದ್ಯ: ಜುಲೈ 2 ರಿಂದ ಜುಲೈ 6, ಎಡ್ಜ್‌ಬಾಸ್ಟನ್, ಬರ್ಮಿಂಗ್ಹ್ಯಾಮ್**
- **ಮೂರನೇ ಪಂದ್ಯ: ಜುಲೈ 10 ರಿಂದ ಜುಲೈ 14, ಲಾರ್ಡ್ಸ್, ಲಂಡನ್**
- **ನಾಲ್ಕನೇ ಪಂದ್ಯ: ಜುಲೈ 23 ರಿಂದ 27 ಜುಲೈ, ಎಮಿರೇಟ್ಸ್ ಓಲ್ಡ್ ಟ್ರಾಫರ್ಡ್, ಮ್ಯಾಂಚೆಸ್ಟರ್**
- **ಐದನೇ ಪಂದ್ಯ: ಜುಲೈ 31 ರಿಂದ ಆಗಸ್ಟ್ 4, ಕೆನ್ನಿಂಗ್ಟನ್ ಓವಲ್, ಲಂಡನ್**

# ಭಾರತಕ್ಕೆ ಮತ್ತೆ ಹೀನಾಯ ಸೋಲು

## ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್‌ಗೆ ಆಸೀಸ್ ಲಗ್ಗೆ



ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಸರಣಿ ಮುಕ್ತಾಯಗೊಂಡಿದ್ದು, ಅತಿಥೇಯ ಆಸ್ಟ್ರೇಲಿಯಾ ತಂಡ 3-1 ಅಂತರದಲ್ಲಿ ಸರಣಿ ಕೈವಶ ಮಾಡಿಕೊಂಡಿದೆ. ಈ ಮೂಲಕ 10 ವರ್ಷಗಳ ಬಳಿಕ ಬಾರ್ಡರ್ ಗವಾಸ್ಕರ್ ಟ್ರೋಫಿ ಸರಣಿ ಗೆದ್ದ ವಿಶೇಷ ಸಾಧನೆಯನ್ನೂ ಕಾಂಗರೂ ಪಡೆ ಮಾಡಿದೆ. ಈ ಮೂಲಕ ಸತತ 2ನೇ ಬಾರಿಗೆ ಆಸ್ಟ್ರೇಲಿಯಾ ವಿಶ್ವ ಟೆಸ್ಟ್ ಚಾಂಪಿಯನ್ ಶಿಪ್ ಫೈನಲ್ ತಲುಪಿದೆ. ಪ್ರಸಕ್ತ ವರ್ಷ ಇಂಗ್ಲೆಂಡ್‌ನ ಪ್ರತಿಷ್ಠಿತ ಲಾರ್ಡ್ಸ್ ಮೈದಾನದಲ್ಲಿ ನಡೆಯುವ ಫೈನಲ್ ಪಂದ್ಯದಲ್ಲಿ ದಕ್ಷಿಣ ಆಫ್ರಿಕಾ ವಿರುದ್ಧ ಕಾದಾಟಕ್ಕಿಳಿಯಲಿದೆ. 2021-23ರ ಆವೃತ್ತಿಯಲ್ಲಿ ಮೊದಲ ಬಾರಿಗೆ ಫೈನಲ್ ತಲುಪಿದ್ದ ಆಸ್ಟ್ರೇಲಿಯಾ ಟೀಂ ಇಂಡಿಯಾ ವಿರುದ್ಧ ಗೆದ್ದು ಚಾಂಪಿಯನ್ ಪಟ್ಟಕ್ಕೇರಿತ್ತು. ಸೂಪರ್ ಸಂಡೇ ಸಿಡ್ನಿಯಲ್ಲಿ ಪವಾಡವೇ ನಡೆಯಬಹುದು ಎಂದು ಭಾರತೀಯ ಕ್ರಿಕೆಟ್ ಅಭಿಮಾನಿಗಳು ಕಾದುಕುಳಿತಿದ್ದರು. ಒಂದಂತದಲ್ಲಿ ಕನ್ನಡಿಗ ಪ್ರಸಿದ್ಧ್ ಕೃಷ್ಣ ಆ ರೀತಿಯ ಆಸೆಯನ್ನೂ ಹುಟ್ಟಿಸಿದ್ದರು. ಆದ್ರೆ ಭಾರತದ ವಿರುದ್ಧ ಮತ್ತೆ ಸಿಡಿದ ಟ್ರಾವಿಸ್ ಹೆಡ್ ಮತ್ತು ಮೊದಲನೇ ಪಂದ್ಯದಲ್ಲೇ ತನ್ನ ಸಾಮರ್ಥ್ಯ ಸಾಬೀತು ಪಡಿಸಿದ ಬ್ಯೂ ವೆಬ್‌ಸ್ಟರ್ ಅದಕ್ಕೆ ಅವಕಾಶ ನೀಡದಂತೆ ಮಾಡಿದರು.

ಗೆಲುವಿಗೆ ಕೇವಲ 162 ರನ್‌ಗಳ ಗುರಿ ಪಡೆದಿದ್ದ ಆಸ್ಟ್ರೇಲಿಯಾ ತಂಡ ಆರಂಭದಿಂದಲೇ ಏಕದಿನ ಶೈಲಿಯಲ್ಲಿ ಆಕ್ರಮಣಕಾರಿ ಆಟಕ್ಕೆ ಇಳಿಯಿತು. ಮತ್ತೊಂದೆಡೆ ಗಾಯದ ಸಮಸ್ಯೆಯಿಂದ ವೇಗಿ ಜಸ್ಪ್ರೀತ್ ಬುಮ್ರಾ, ಅವರ ಅನುಪಸ್ಥಿತಿ ಆಸ್ಟ್ರೇಲಿಯಾ ತಂಡಕ್ಕೆ ಅನುಕೂಲವೇ ಆಯಿತು. **ಲಯ ತಪ್ಪಿದ ಸಿರಾಜ್:** ಬುಮ್ರಾ ಅನುಪಸ್ಥಿತಿಯಲ್ಲಿ ಆರಂಭಿಕ ಬೌಲರ್ ಆಗಿ ಕಣಕ್ಕಿಳಿದ ಸಿರಾಜ್ ಮೊದಲ ಓವರ್‌ನಲ್ಲೇ 13 ರನ್ ಚಚ್ಚಿಸಿಕೊಂಡರು. ಅತ್ತ ಆಸ್ಟ್ರೇಲಿಯಾ ಪಾಳಯದಲ್ಲಿ ಆತ್ಮವಿಶ್ವಾಸ ತುಂಬಿ ತುಳುಕುತ್ತಿತ್ತು. ಇದು ಸಾಲದೆಂಬಂತೆ ಪ್ರಸಿದ್ಧ್ ಕೃಷ್ಣ ಅವರು ಮುಂದಿನ ಓವರ್ ನಲ್ಲಿ ಮತ್ತೆ 13 ರನ್ ಗಳನ್ನು ನೀಡಿ ಆಸೀಸ್ ಹಾದಿಯನ್ನು ಮತ್ತಷ್ಟು ಸುಗಮಗೊಳಿಸಿದರು. ಈ ಹಂತದಲ್ಲಿ ಇಬ್ಬರು ಬೌಲರ್‌ಗಳು ಅಡ್ಡಾದಿಡ್ಡಿ ಬೌಲಿಂಗ್ ಮಾಡುವುದನ್ನ ನೋಡಿಗಾದ ಪಂದ್ಯ ಬಹಳ ಬೇಗ ಮುಗಿಯುವ ಲಕ್ಷಣಗಳು ಕಂಡು ಬಂದಿತ್ತು.

# ಸೋಲಿನ ನಡುವೆ ಮೊಹಮ್ಮದ್ ಸಿರಾಜ್ ಸೆಂಚುರಿ



ಆಸ್ಟ್ರೇಲಿಯಾ ವಿರುದ್ಧದ 5ನೇ ಟೆಸ್ಟ್ ಪಂದ್ಯದ ಮೂಲಕ ಟೀಮ್ ಇಂಡಿಯಾ ವೇಗಿ ಮೊಹಮ್ಮದ್ ಸಿರಾಜ್ ವಿಶೇಷ ಮೈಲುಗಲ್ಲು ಮುಟ್ಟಿದ್ದಾರೆ. ಅದು ಕೂಡ ಕೇವಲ 4 ವರ್ಷಗಳಲ್ಲಿ ನೂರು ವಿಕೆಟ್‌ಗಳನ್ನು ಕಬಳಿಸುವ ಮೂಲಕ ಎಂಬುದು ವಿಶೇಷ. ಈ ಮೂಲಕ ಈ ಸಾಧನೆ ಮಾಡಿದ ಭಾರತದ 24ನೇ ಬೌಲರ್ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಸಿಡ್ನಿಯಲ್ಲಿ ನಡೆದ ಆಸ್ಟ್ರೇಲಿಯಾ ವಿರುದ್ಧದ 5ನೇ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ವೇಗಿ ಮೊಹಮ್ಮದ್ ಸಿರಾಜ್ 4 ವಿಕೆಟ್ ಕಬಳಿಸಿ ಮಿಂಚಿದ್ದಾರೆ. ಈ ನಾಲ್ಕು ವಿಕೆಟ್‌ಗಳೊಂದಿಗೆ ಸಿರಾಜ್ ಟೆಸ್ಟ್ ಕ್ರಿಕೆಟ್‌ನಲ್ಲಿ 100 ವಿಕೆಟ್‌ಗಳ ಸಾಧನೆ ಮಾಡಿದ್ದಾರೆ. ಅಲ್ಲದೆ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಸರಣಿಯಲ್ಲಿ ನೂರು ವಿಕೆಟ್ ಕಬಳಿಸಿ ಭಾರತದ 4ನೇ ಬೌಲರ್ ಎಂಬ ಹೆಗ್ಗಳಿಕೆಗೂ ಪಾತ್ರರಾಗಿದ್ದಾರೆ. ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಸರಣಿಯಲ್ಲಿ ಅತ್ಯಧಿಕ ವಿಕೆಟ್ ಕಬಳಿಸಿದ ಭಾರತೀಯ ಬೌಲರ್‌ಗಳ ಪಟ್ಟಿಯಲ್ಲಿ ರವಿಚಂದ್ರನ್ ಅಶ್ವಿನ್ (195) ಅಗ್ರಸ್ಥಾನದಲ್ಲಿದ್ದರೆ, ಜಸ್‌ಪ್ರೀತ್ ಬುಮ್ರಾ (156) ಹಾಗೂ ರವೀಂದ್ರ ಜಡೇಜಾ (131) ನಂತರದ ಸ್ಥಾನಗಳಲಿದ್ದಾರೆ. ಇದೀಗ ಈ ಪಟ್ಟಿಗೆ ಮೊಹಮ್ಮದ್ ಸಿರಾಜ್ ಕೂಡ ಎಂಟ್ರಿ ಕೊಟ್ಟಿದ್ದಾರೆ. ಟೀಮ್ ಇಂಡಿಯಾ ಪರ ಈವರೆಗೆ 36 ಟೆಸ್ಟ್ ಪಂದ್ಯಗಳನ್ನಾಡಿರುವ ಮೊಹಮ್ಮದ್ ಸಿರಾಜ್ 67 ಇನಿಂಗ್ಸ್‌ಗಳಲ್ಲಿ 5306 ಎಸೆತಗಳನ್ನು ಎಸೆದಿದ್ದಾರೆ. ಈ ವೇಳೆ 3.48 ಎಕಾನಮಿ ರೇಟ್‌ನಲ್ಲಿ ಒಟ್ಟು 100 ವಿಕೆಟ್‌ಗಳನ್ನು ಕಬಳಿಸಿದ್ದಾರೆ.

ಈ ನೂರು ವಿಕೆಟ್‌ಗಳೊಂದಿಗೆ ಟೆಸ್ಟ್ ಕ್ರಿಕೆಟ್‌ನಲ್ಲಿ ಭಾರತ ಪರ ಟೆಸ್ಟ್‌ನಲ್ಲಿ ಶತಕ ಪೂರೈಸಿದ 24ನೇ ಬೌಲರ್ ಎನಿಸಿಕೊಂಡಿದ್ದಾರೆ. ಸದ್ಯ ಇರ್ಫಾನ್ ಪಠಾಣ್ (100 ವಿಕೆಟ್ಸ್) ದಾಖಲೆ ಸರಿಗಟ್ಟಿರುವ ಮೊಹಮ್ಮದ್ ಸಿರಾಜ್ ಮುಂಬರುವ ಸರಣಿಗಳ ಮೂಲಕ 15 ವಿಕೆಟ್ ಕಬಳಿಸಿದರೆ ಈ ಪಟ್ಟಿಯಲ್ಲಿ 19ನೇ ಸ್ಥಾನಕ್ಕೇರಬಹುದು. ಇನ್ನು ಮೊಹಮ್ಮದ್ ಸಿರಾಜ್ ಅವರ ಈ ಸಾಧನೆಯ ಹೊರತಾಗಿಯೂ ಸಿಡ್ನಿ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಮುಗ್ಗರಿಸಿದೆ. ಈ ಪಂದ್ಯದಲ್ಲಿ ಮೊದಲ ಇನಿಂಗ್ಸ್‌ನಲ್ಲಿ ಟೀಮ್ ಇಂಡಿಯಾ 185 ರನ್ ಬಾರಿಸಿದರೆ, ಆಸ್ಟ್ರೇಲಿಯಾ 181 ರನ್‌ಗಳಿಗೆ ಆಲೌಟ್ ಆಗಿತ್ತು. ಇನ್ನು ದ್ವಿತೀಯ ಇನಿಂಗ್ಸ್‌ನಲ್ಲಿ ಭಾರತ ತಂಡವು ಕೇವಲ 157 ರನ್‌ಗಳಿಗೆ ಆಲೌಟ್ ಆಯಿತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966